

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಮೇ 17 ಬುಧವಾರ 2023

ಸಂಪುಟ: 44 | ಸಂಚಿಕೆ: 31 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಇಂದು ರಾಜ್ಯದ ನೂತನ ಮುಖ್ಯಮಂತ್ರಿ ಘೋಷಣೆ

ಬೆಳಗ್ಗೆ 11 ಗಂಟೆಗೆ ಅಂತಿಮ ಸುತ್ತಿನ ಮಹತ್ವದ ಸಭೆಯಲ್ಲಿ ತೀರ್ಮಾನ



ನವದೆಹಲಿ: ಪ್ರತಿಪಕ್ಷದ ನಾಯಕ ಸಿದ್ದ ರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಇಬ್ಬರೂ ಮುಖ್ಯಮಂತ್ರಿ ಸ್ಥಾನಕ್ಕಾಗಿ ಪಟ್ಟು ಹಿಡಿದಿದ್ದು ಕರ್ನಾಟಕದ ಮುಂದಿನ ಮುಖ್ಯಮಂತ್ರಿ ಆಯ್ಕೆ ಕುರಿತು ಕಾಂಗ್ರೆಸ್ ಹೈಕಮಾಂಡ್ ಇನ್ನೂ ಚರ್ಚೆ ನಡೆಸುತ್ತಿದೆ.

ಈಗಾಗಲೇ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಅವರ ಜೊತೆ ಒನ್ ಟು ಒನ್ ಸಭೆ ನಡೆಸಿ, ಇಬ್ಬರು ನಾಯಕರ ವಾದವನ್ನು ಆಲಿಸಿದ್ದಾರೆ. ಬುಧವಾರ ಬೆಳಗ್ಗೆ 11 ಗಂಟೆಗೆ ಅಂತಿಮ ಸುತ್ತಿನ ಸಭೆ ನಡೆಯಲಿದ್ದು, ಇದರಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಭಾಗಿಯಾಗಲಿದ್ದಾರೆ. ಮೂಲಗಳ ಪ್ರಕಾರ, ಯುಪಿಎ ಅಧ್ಯಕ್ಷೆ ಸೋನಿಯಾ ಗಾಂಧಿ ಮತ್ತು ಪಕ್ಷದ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರೊಂದಿಗೆ ಸಮಾಲೋಚಿಸಿದ ನಂತರ ಖರ್ಗೆ ಅವರು ಅಂತಿಮ ನಿರ್ಧಾರ ತೆಗೆದುಕೊಳ್ಳಲಿದ್ದಾರೆ. ಸದ್ಯ ಕರ್ನಾಟಕ ಸಿಎಂ ಸ್ಥಾನದ ಬಗ್ಗೆ ಇನ್ನೂ ಅಂತಿಮ ನಿರ್ಧಾರ ಕೈಗೊಂಡಿಲ್ಲ. ಕಾಂಗ್ರೆಸ್ ಅಧ್ಯಕ್ಷರು ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾರೆ. ಸಾಕಷ್ಟು ವಿಚಾರ ಚರ್ಚಿಸಿದ್ದಾರೆ. ▸ 8ನೇ ಪುಟಕ್ಕೆ

ಹೆಚ್ಚಿನ ಶಾಸಕರ ಬಲ ನನಗಿದೆ; ನಾನೇ ನಾಯಕನಾಗಬೇಕು: ಸಿದ್ದರಾಮಯ್ಯ ವಾದ

V/S

ಸಿದ್ಧರಾಮಯ್ಯ, ಹೆಚ್ಚಿನ ಶಾಸಕರ ಬಲ ತನಗೆ ಇರುವುದರಿಂದ ಮುಖ್ಯಮಂತ್ರಿ ಹುದ್ದೆಗೆ ನಾನೇ ಸಹಜ ಆಯ್ಕೆ ಎಂದು ವಾದ ಮಂಡನೆ ಮಾಡಿದ್ದಾರೆ. ಶಾಸಕಾಂಗ ಪಕ್ಷದಲ್ಲಿ ಹೆಚ್ಚಿನ ಶಾಸಕರ ಬೆಂಬಲ ಪಡೆಯುವುದೊಂದೇ ಏಕೈಕ ಅರ್ಹತೆ. ಪಕ್ಷದ ಅಧ್ಯಕ್ಷ ಎಂಬ ಕಾರಣಕ್ಕಾಗಿ ಯಾರನ್ನೂ ಶಾಸಕಾಂಗ ನಾಯಕ ಎಂದು ಪರಿಗಣಿಸಲು ಸಾಧ್ಯವೇ ಇಲ್ಲ. ಎಲ್ಲಕ್ಕಿಂತ ಮುಖ್ಯವಾಗಿ ಡಿಕೆಶಿ ಅವರ ವಿರುದ್ಧ ಐಟಿ,ಇಡಿ,ಸಿಬಿಐ ಸೇರಿದಂತೆ ಹಲವು ತನಿಖಾ ಸಂಸ್ಥೆಗಳಲ್ಲಿ ಪ್ರಕರಣಗಳು ಬಾಕಿ ಇವೆ.ನಾಳೆ ಅವರು ಮುಖ್ಯಮಂತ್ರಿಯಾಗಿ ಕೆಲವೇ ದಿನಗಳಲ್ಲಿ ▸ 8ನೇ ಪುಟಕ್ಕೆ

ನನ್ನ ನಾಯಕತ್ವದಲ್ಲೇ ಜನ ಕಾಂಗ್ರೆಸ್‌ಗೆ 135 ಸ್ಥಾನ ಕೊಟ್ಟಿದ್ದಾರೆ: ಡಿಕೆಶಿ ವಾದ

ಶಿವಕುಮಾರ್, ತಮ್ಮನ್ನೇ ಏಕೆ ನಾಯಕನಾಗಿ ಆಯ್ಕೆ ಮಾಡಬೇಕು ಎಂಬ ವಾದದಲ್ಲಿ, ಮುಖ್ಯಮಂತ್ರಿ ಅಧಿಕಾರ ಹಂಚಿಕೆಯಂತೆ ರಾಜಸ್ಥಾನದಲ್ಲಿ ಸಚಿನ್ ಪೈಲಟ್‌ಗೆ ನೀಡಿದ ಭರವಸೆ ಇನ್ನೂ ಈಡೇರಿಲ್ಲ. ಈಗ ಕರ್ನಾಟಕದಲ್ಲಿ ಸಿಎಲ್‌ಪಿ ನಾಯಕನ ಹುದ್ದೆ ವಲಸಿಗ ಕಾಂಗ್ರೆಸ್ಸಿಗರಿಗೆ ಬೇಡ, ಮೂಲ ಕಾಂಗ್ರೆಸ್ಸಿಗರಿಗೆ ದಕ್ಕಬೇಕು ಎಂದಿದ್ದಾರೆ. ನಾನು ಮೂಲ ಕಾಂಗ್ರೆಸ್ಸಿಗ, ಸಿದ್ದರಾಮಯ್ಯ ವಲಸಿಗ ಕಾಂಗ್ರೆಸ್ಸಿಗರು. ಹೀಗಾಗಿ ಸಿದ್ಧರಾಮಯ್ಯ ಅವರನ್ನು ಮುಖ್ಯಮಂತ್ರಿ ಮಾಡಿದರೆ ಮೂಲ ಕಾಂಗ್ರೆಸ್ಸಿಗರಿಗೆ ಅನ್ಯಾಯವಾಗುತ್ತದೆ ಎಂಬುದು ಅವರ ವಾದ. ▸ 8ನೇ ಪುಟಕ್ಕೆ

ಗ್ಯಾರಂಟಿಗಳ ಬಗ್ಗೆ ವರಸೆ ಬದಲಿಸಿದ ಕಾಂಗ್ರೆಸ್



ಬೆಂಗಳೂರು, ಮೇ 16– ಚುನಾವಣೆಯಲ್ಲಿ ಗೆಲ್ಲುವ ಮುನ್ನ 5 ಉಚಿತ ಗ್ಯಾರಂಟಿಗಳನ್ನು ಘೋಷಣೆ ಮಾಡಿರುವ ಕಾಂಗ್ರೆಸ್, ಅಧಿಕಾರಕ್ಕೆ ಬರುತ್ತಿದ್ದಂತೆ ತನ್ನ ವರಸೆ ಬದಲಾಯಿಸಿದೆ. ಗ್ಯಾರಂಟಿಗಳಿಗೆ ಷರತ್ತು ವಿಧಿಸುವುದಾಗಿ ಜಿ.ಪರಮೇಶ್ವರ್ ಹೇಳಿದ್ದಾರೆ. ಈ ಹಿಂದೆ ಎಲ್ಲರಿಗೂ ಉಚಿತ ಎಂದು ಕಾಂಗ್ರೆಸ್ ಹೇಳಿತ್ತು ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಜಿ.ಪರಮೇಶ್ವರ್, ಕಾಂಗ್ರೆಸ್ ಗ್ಯಾರಂಟಿಗಳಿಗೆ ಕಂಡಿಷನ್ಸ್ ಇರುತ್ತದೆ. ಮೊದಲ ಕ್ಯಾಬಿನೆಟ್‌ನಲ್ಲೇ 5 ಗ್ಯಾರಂಟಿ ಈಡೇರಿಸುವ ಭರವಸೆ ಕೊಟ್ಟಿದ್ದೇವೆ. ಅದಕ್ಕೆ ನಾವು ಬದ್ಧರಾಗಿ ಇರುತ್ತೇವೆ. ಆದರೆ ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳಿಗೆ ಷರತ್ತುಗಳು ಇರಲಿವೆ ಎಂದು ಹೇಳಿದ್ದಾರೆ.

ಗ್ರಾಮೀಣ ಭಾಗದ ಜನರು ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದೆ. ನಾವು ವಿದ್ಯುತ್ ಶುಲ್ಕ ಪಾವತಿಸುತ್ತಿಲ್ಲ ಎಂದು ಹೇಳುತ್ತಿದ್ದಾರೆ ಎಂಬ ▸ 8ನೇ ಪುಟಕ್ಕೆ

ನಾಳೆ ಹೊಸ ಸರ್ಕಾರ ರಚನೆ

● ವಿಧಾನಸೌಧದ ಮೆಟ್ಟಿಲ ಮೇಲೆ ನೂತನ ಮುಖ್ಯಮಂತ್ರಿ ಪ್ರಮಾಣವಚನ ಸ್ವೀಕಾರ ಸಮಾರಂಭ ● ಮುಂಬರುವ ಲೋಕಸಭಾ ಚುನಾವಣೆ ದೃಷ್ಟಿಯಿಂದ ಹೊಸ ಸರ್ಕಾರ ರಚನೆ ● ರಾಷ್ಟ್ರ ಮಟ್ಟದಲ್ಲಿ ಶಕ್ತಿ ಪ್ರದರ್ಶನ ಉದ್ದೇಶ; ರಾಜ್ಯ ಉಸ್ತುವಾರಿ ರಣದೀಪ್ ಸುರ್ಜೆವಾಲ ಹೆಗಲಿಗೆ



ಬೆಂಗಳೂರು, ಮೇ 16 (ಕೆಎಂಶಿ)– ಸರ್ಕಾರ ರಚನೆಗೆ ಕಾಂಗ್ರೆಸ್ ಮೇ 18 ಗುರುವಾರ ಮುಹೂರ್ತ ನಿಗದಿಪಡಿಸಿದೆ.

ನಾಯಕತ್ವ ಯಾರು ವಹಿಸಿಕೊಳ್ಳುತ್ತಾರೆ ಎಂಬ ತೀರ್ಮಾನವನ್ನು ಮಧ್ಯಾಹ್ನ ವರಿಷ್ಠರು ಪ್ರಕಟಿಸಲಿದ್ದಾರೆ. ಕಳೆದ ಐದು ದಿನಗಳ ಹಿಂದೆ ಸರ್ಕಾರ ರಚನೆಗೆ ರಾಜ್ಯದ ಜನತೆ ಪಕ್ಷಕ್ಕೆ ಪೂರ್ಣ ಬಹುಮತ ನೀಡಿದ್ದರೂ, ನಾಯಕನ ಆಯ್ಕೆ ವರಿಷ್ಠರಿಗೆ ಕಗ್ಗಂಟಾಗಿದೆ. ಇಷ್ಟರ ನಡುವೆ ಗುರುವಾರ ಸರ್ಕಾರ ರಚನೆ ಮಾಡಲೇಬೇಕೆಂದು ತೀರ್ಮಾನಿಸಿರುವ ಕಾಂಗ್ರೆಸ್ ಇದಕ್ಕೆ ಸಿದ್ಧತೆ ಮಾಡಿಕೊಂಡಿದೆ. ನಾಯಕತ್ವದ ಗೊಂದಲ ಬಗೆಹರಿಸುವ ವಿಶ್ವಾಸದಿಂದ ಸರ್ಕಾರ ರಚನೆಗೆ ಸಮಯ ಮತ್ತು ದಿನಾಂಕವನ್ನು ನಿಗದಿಪಡಿಸಿರುವುದಲ್ಲದೆ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇಲ್ಲವೆ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸುವ ಸಮಾರಂಭವನ್ನು ರಾಷ್ಟ್ರಮಟ್ಟದಲ್ಲಿ ದೊಡ್ಡ ರಾಜಕೀಯ ಶಕ್ತಿಯನ್ನಾಗಿ ಬಿಂಬಿಸಲು ಪಕ್ಷ ಮುಂದಾಗಿದೆ. ಈ ಸಮಾರಂಭಕ್ಕೆ ಕಾಂಗ್ರೆಸ್ ಅಧಿಕಾರದಲ್ಲಿರುವ ಮುಖ್ಯಮಂತ್ರಿಗಳು ಹಾಗೂ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಹಾಗೂ ▸ 8ನೇ ಪುಟಕ್ಕೆ

ಮೈಸೂರಲ್ಲಿ ನಕಲಿ ರಸಗೊಬ್ಬರ ತಯಾರಿಕಾ ಘಟಕದ ಮೇಲೆ ದಾಳಿ

●ಆರೋಪಿಗಳು ಪರಾರಿ, ನಕಲಿ ರಸಗೊಬ್ಬರ ತಯಾರಿಕೆಗೆ ಬಳಸುತ್ತಿದ್ದ ಪರಿಕರ, ಯಂತ್ರೋಪಕರಣಗಳು ವಶಕ್ಕೆ ●ಮೇಟಗಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು







ಮೈಸೂರು,ಮೇ 16(ಜಿಎ)–ಮೈಸೂರಿನಲ್ಲಿ ನಕಲಿ ರಸಗೊಬ್ಬರ ತಯಾರಿಕಾ ಘಟಕದ ಮೇಲೆ ಕೃಷಿ ಇಲಾಖೆ ಅಧಿಕಾರಿಗಳ ತಂಡ ದಾಳಿ ನಡೆಸಿ ನಕಲಿ ರಸಗೊಬ್ಬರ ಹಾಗೂ ತಯಾರಿಕೆಗೆ ಬಳಸುತ್ತಿದ್ದ ಉಪಕರಣಗಳನ್ನು ವಶಪಡಿಸಿಕೊಂಡಿದ್ದು, ಆರೋಪಿಗಳು ತಲೆಮರೆಸಿಕೊಂಡಿದ್ದಾರೆ.

ಮೈಸೂರಿನ ಮೇಟಗಳ್ಳಿಯ ಸ್ಮಶಾನದ ಎದುರಿನ ಕೋಳಿ ಫಾರಂನಲ್ಲಿ ನಕಲಿ ರಸಗೊಬ್ಬರ ತಯಾರಿಸಲಾಗುತ್ತಿದೆ ಎಂಬ ನಿಖರ ಮಾಹಿತಿ ಮೇರೆಗೆ ಜಂಟಿ ಕೃಷಿ ನಿರ್ದೇಶಕ ಚಂದ್ರಶೇಖರ್ ನೇತೃತ್ವದ ತಂಡ ದಾಳಿ ನಡೆಸಿದ್ದು, ಈ ಸಂಬಂಧ ಮೇಟಗಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಕಲಿ ರಸಗೊಬ್ಬರ ತಯಾರಿಕಾ ಘಟಕವನ್ನು ಕೆಎನ್.ಮಹೇಶ್ ಎಂಬಾತ ನಡೆಸುತ್ತಿದ್ದು, ಈತನ ವಿರುದ್ಧ ಈಗಾಗಲೇ ಮೈಸೂರಿನ ವಿವಿಧ ಠಾಣೆಗಳಲ್ಲಿ ನಕಲಿ ರಸಗೊಬ್ಬರ ತಯಾರಿಕೆ ಆರೋಪದ ಮೇಲೆ ಪ್ರಕರಣಗಳು ದಾಖಲಾಗಿವೆ ಎಂದು ಜಂಟಿ ಕೃಷಿ ನಿರ್ದೇಶಕ ಚಂದ್ರಶೇಖರ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಮೇಟಗಳ್ಳಿಯ ಸ್ಮಶಾನದ ಎದುರಿನ ಕೋಳಿ ಫಾರಂನಲ್ಲಿ ಮ್ಯೂರಿಯೇಟ್ ಆಫ್ ಪೊಟಾಷ್ (ಎಂಒಪಿ) ಎಂಬ ರಸಗೊಬ್ಬರವನ್ನು ನಕಲು ಮಾಡುತ್ತಿದ್ದು, ಇದಕ್ಕಾಗಿ ಉಪ್ಪು, ನಾನಾ ಬಣ್ಣಗಳು, ಪ್ರಖ್ಯಾತ ರಸಗೊಬ್ಬರಗಳ ಚೀಲ ಹಾಗೂ ಅವುಗಳನ್ನು ಹೊಲಿಯುವ ಯಂತ್ರವನ್ನು ಬಳಸಿಕೊಳ್ಳುತ್ತಿದ್ದುದು ದಾಳಿ ವೇಳೆ ಬೆಳಕಿಗೆ ಬಂದಿದ್ದು, ಇವುಗಳನ್ನು ಕೃಷಿ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಜೊತೆಗೆ ನಕಲಿ ಗೊಬ್ಬರವನ್ನು ಪರೀಕ್ಷಿಸಲು ಲ್ಯಾಬ್‌ಗೆ ಸ್ಯಾಂಪಲ್ ಕಳುಹಿಸಲಾಗಿದೆ ಎಂದು ಅವರು ವಿವರಿಸಿದರು. ಮೈಸೂರಿನ ಹೊರವಲಯದಲ್ಲಿರುವ ಹಳೆ ▸ 8ನೇ ಪುಟಕ್ಕೆ

ಕೆಬಿಜಿಯವರ
ಭೂಮಂತ್ರ... ಭೂಮಂತ್ರ...



ವಿಜಯಿ ಮತದಾರ ಪ್ರಭು

ಕರ್ನಾಟಕ ವಿಧಾನಸಭಾ ಚುನಾವಣೆ-2023

■ ಪುಟ–4

ಜೂ.4ರಂದು ಕೇರಳಕ್ಕೆ ಅಪ್ಪಳಿಸಲಿದೆ ಮುಂಗಾರು

ನವದೆಹಲಿ, ಮೇ 16–ಈ ಬಾರಿ ನೈಋತ್ಯ ಮಾನ್ಸೂನ್ ಸ್ವಲ್ಪ ವಿಳಂಬವಾಗುವ ನಿರೀಕ್ಷೆ ಇದ್ದು, ಜೂನ್ 4ರಂದು ಕೇರಳ ಪ್ರವೇಶಿಸುವ ಸಾಧ್ಯತೆಯಿದೆ ಎಂದು ಭಾರತೀಯ ಹವಾ ಮಾನ ಇಲಾಖೆ ಮುನ್ಸೂಚನೆ ನೀಡಿದೆ ನೈಋತ್ಯ ಮಾನ್ಸೂನ್ ಸಾಮಾನ್ಯವಾಗಿ ಜೂನ್ 1ರಂದು ಕೇರಳ ಪ್ರವೇಶಿಸುತ್ತದೆ ಮತ್ತು ಸುಮಾರು ಒಂದು ವಾರ ಏರುಪೇರು ಆಗುವ ಸಾಧ್ಯತೆಯೂ ▸ 8ನೇ ಪುಟಕ್ಕೆ



ಬೇಕಾಗಿದ್ದಾರೆ

ಮೈಸೂರಿನ ಖಾಸಗಿ ಕಂಪನಿಗೆ, Fortuner ಮತ್ತು Automatic ಕಾರು ಓಡಿಸುವ ಡ್ರೈವರ್‌ಗಳು ಬೇಕಾಗಿದ್ದಾರೆ.
ಸಂಬಳ: 20,000
ಮತ್ತು ಟೆಲಿಕಾಲಿಂಗ್, ಕಛೇರಿಯ ಕೆಲಸ ಮಾಡಲು ಹುಡುಗಿಯರು ಬೇಕಾಗಿದ್ದಾರೆ.
8884171888

SDJ GOLD

ನೀವು ಗಿರವಿ ಇಟ್ಟು ಬಿಡಿಸಿಕೊಳ್ಳಲಾಗದ ಚಿನ್ನವನ್ನು ನಾವೇ ಹಣಕೊಟ್ಟು ಬಿಡಿಸಿ ಉಳಿದ ಹಣ ತಕ್ಷಣ ಕೊಡುತ್ತೇವೆ.
ಒಂದು ಗ್ರಾಂ ಚಿನ್ನಕ್ಕೆ 6600
8884304444

ಮೈಸೂರಲ್ಲಿ ನೇಮಕಾತಿ ಅಭಿಯಾನ

28 ಮಂದಿಗೆ ಸಾಂಕೇತಿಕವಾಗಿ ನೇಮಕಾತಿ ಆದೇಶ ನೀಡಿದ ಸಚಿವೆ ಶೋಭಾ ಕರಂದ್ಲಾಜೆ

ದೇಶಾದ್ಯಂತ 71,000 ಯುವಜನರಿಗೆ ಏಕಕಾಲದಲ್ಲಿ ನೇಮಕಾತಿ ಆದೇಶ ವಿತರಣೆ



ಮೈಸೂರು, ಮೇ 16(ಆರ್‌ಕೆ)– ನೇಮಕಾತಿ ಅಭಿಯಾನದಡಿ ದೇಶಾದ್ಯಂತ 71,000 ಯುವಜನರಿಗೆ ಏಕಕಾಲದಲ್ಲಿ ಸರ್ಕಾರಿ ನೌಕರಿ ನೇಮಕಾತಿ ಆದೇಶ ಪತ್ರವನ್ನು ವಿತರಿಸಲಾಯಿತು.

ಕೇಂದ್ರ ಸರ್ಕಾರದ ಅಂಚೆ ಇಲಾಖೆ, ಭಾರತೀಯ ರೈಲ್ವೆ ಇಲಾಖೆ, ಗೃಹ ಇಲಾಖೆ, ಕಾರ್ಮಿಕ ಮತ್ತು ಸಬಲೀಕರಣ ಸೇರಿದಂತೆ ಹಲವು ಇಲಾಖೆಗಳಲ್ಲಿ ಖಾಲಿ ಇದ್ದ ವಿವಿಧ ಹುದ್ದೆಗಳಿಗೆ ನಿಯಮಾನುಸಾರ ಪ್ರಕ್ರಿಯೆ ನಡೆಸಿ ಮೆರಿಟ್ ಆಧಾರದಲ್ಲಿ ನೇಮಕಾತಿ ಮಾಡಲಾಗಿದ್ದು, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ನೇಮಕಾತಿ ಆದೇಶ ಪ್ರತಿಗಳನ್ನು ಸಾಂಕೇತಿಕವಾಗಿ ವಿತರಿಸಿದರು.

ನೇಮಕಾತಿ ಅಭಿಯಾನದಡಿ ಮೈಸೂರಿನ ಮಾನಸಗಂಗೋತ್ರಿಯ ನಾಲೆಡ್ಜ್ ಪಾರ್ಕ್ ಸಭಾಂಗಣದಲ್ಲಿ ಅಂಚೆ ಇಲಾಖೆ ಆಯೋಜಿಸಿದ್ದ 5ನೇ ಉದ್ಯೋಗ ಮೇಳದ ರಾಷ್ಟ್ರೀಯ ಸಮಾರಂಭದಲ್ಲಿ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರು ಮೈಸೂರು ಭಾಗದ 28 ಮಂದಿಗೆ ಉದ್ಯೋಗ ನೇಮಕಾತಿ ಪತ್ರಗಳನ್ನು ಸಾಂಕೇತಿಕವಾಗಿ ವಿತರಿಸಿದರು. ಈ ಸಂದರ್ಭ ಮಾತನಾಡಿದ ಸಚಿವರು, ಮುಂದಿನ 25 ವರ್ಷದಲ್ಲಿ ಸ್ವಾತಂತ್ರ್ಯ ಶತಮಾನೋತ್ಸವದ ವೇಳೆಗೆ ಭಾರತವನ್ನು ವಿಶ್ವದ ಪ್ರಥಮ ಸ್ಥಾನಕ್ಕೇರಿಸಬೇಕೆಂಬ ಪ್ರಧಾನಿ ನರೇಂದ್ರ ಮೋದಿ ಅವರ ಕನಸನ್ನು ನಾವೆಲ್ಲರೂ ನನಸು ಮಾಡಬೇಕಿದೆ. ಉದ್ಯೋಗ ಸೃಷ್ಟಿ ಬಗ್ಗೆ ಬೇರೆ ಬೇರೆಯವರು ನಾನಾ ರೀತಿ ಮಾತನಾಡುತ್ತಿದ್ದರಿಂದ ಉದ್ಯೋಗ ಮೇಳದ ಮೂಲಕ ಸೇವಾ ನೇಮಕಾತಿ ಆದೇಶ ಪತ್ರ ವಿತರಸಲು ನಿರ್ಧರಿಸಲಾಗಿದೆ ಎಂದರು. ನರೇಂದ್ರ ಮೋದಿ ಅವರು ಪ್ರಧಾನಮಂತ್ರಿಯಾದ ಬಳಿಕ 9 ವರ್ಷಗಳಲ್ಲಿ ಒಟ್ಟು 3,59,000 ಯುವಕ–ಯುವತಿಯರಿಗೆ ಮೆರಿಟ್ ಆಧಾರದಲ್ಲಿ ನೇಮಕಾತಿ ಆದೇಶ ಪತ್ರ ನೀಡಲಾಗಿದೆ. ಇದೀಗ ದೇಶದಾದ್ಯಂತ 71,000 ಮಂದಿಯನ್ನು ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಿಗೆ ನೇಮಕ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು.

ನೇಮಕಗೊಂಡಿರುವ ಪ್ರತಿಯೊಬ್ಬರೂ ತಮ್ಮ ಇಲಾಖೆಗಳಲ್ಲಿ ಪ್ರಾಮಾಣಿಕತೆಯಿಂದ ಕೆಲಸ ಮಾಡುವ ಮೂಲಕ ದೇಶದ ಅಭಿವೃದ್ಧಿಗೆ ಶ್ರಮಿಸಬೇಕು. ಸರ್ಕಾರದ ಘನತೆ, ಗೌರವವನ್ನು ಹೆಚ್ಚಿಸುವಂತೆ ಕೆಲಸ ಮಾಡಿ ಪ್ರಧಾನಿಗಳ ಪ್ರಗತಿ ಹೆಜ್ಜೆಗೆ ಹೆಜ್ಜೆ ಹಾಕಬೇಕು ಎಂದೂ ಶೋಭ ಕರೆ ನೀಡಿದರು. ಅತಿಥಿಯಾಗಿ ಪಾಲ್ಗೊಂಡು ▸ 8ನೇ ಪುಟಕ್ಕೆ

ದೇವೇಗೌಡ್ರು ಇನ್ನೂ ಏಳೆಂಟು ವರ್ಷ ಬದುಕಿರುತ್ತಾರೆ; ಮತ್ತೆ ಪಾರ್ಲಿಮೆಂಟ್‌ಗೆ ಕರೆದೊಯ್ತೇವೆ



ಹಾಸನ, ಮೇ 16–ಮಾಜಿ ಪ್ರಧಾನಮಂತ್ರಿ ಹೆಚ್.ಡಿ. ದೇವೇಗೌಡರು ಇನ್ನೂ ಏಳೆಂಟು ವರ್ಷ ಬದುಕಿರುತ್ತಾರೆ. ದೇವೇಗೌಡರನ್ನು ಮತ್ತೆ ಪಾರ್ಲಿಮೆಂಟ್‌ಗೆ ಕರೆದುಕೊಂಡು ಹೋಗಿಯೇ ಹೋಗ್ತೀವಿ. ದೇವೇಗೌಡರನ್ನು ಲೋಕಸಭಾ ಚುನಾವಣೆಗೆ ನಿಲ್ಲಿಸುತ್ತೇವೆ ಎಂದು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಹೇಳಿದ್ದಾರೆ. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಸನ ಜಿಲ್ಲೆಯನ್ನು ಮಾದರಿ ಜಿಲ್ಲೆಯನ್ನು ಮಾಡಬೇಕು ಅಂತ ನನ್ನ ಆಸೆ ಇದೆ. ನಾನು ಬದುಕಿರುವುದರೊಳಗೆ ಮಾಡಿ ತೋರಿಸ್ತೀನಿ. ಐದು ವರ್ಷಕ್ಕೆ ಮಾಡ್ತೀನೋ, ಹತ್ತು ವರ್ಷಕ್ಕೆ ಮಾಡ್ತೀನೋ. ಇಡೀ ರಾಜ್ಯದಲ್ಲಿ ಹಾಸನ ಜಿಲ್ಲೆಯನ್ನು ನಂಬರ್ ಒನ್ ಮಾಡಿ ತೋರಿಸ್ತೀನಿ. ಇಲ್ಲವಾದಲ್ಲಿ ಇನ್ನೊಂದು ಸಾರಿ ರಾಜಕೀಯಕ್ಕೆ ಬರಲ್ಲ ಎಂದು ಚಾಲೆಂಜ್ ಹಾಕಿದರು. ಕಾಂಗ್ರೆಸ್‌ನವರು ಮಾಡಿಕೊಟ್ಟರೆ ಸಂತೋಷ. ಇಲ್ಲವಾದರೆ ನಮಗೂ ಟೈಂ ಬರುತ್ತೆ. ನನ್ನ ಗ್ರಹಗತಿಗಳು ಇನ್ನೂ ಚೆನ್ನಾಗಿವೆ. ದೇವೇಗೌಡರು ಇನ್ನೂ ಏಳೆಂಟು ವರ್ಷ ಬದುಕಿರುತ್ತಾರೆ. ದೇವೇಗೌಡರನ್ನು ಮತ್ತೆ ಪಾರ್ಲಿಮೆಂಟ್‌ಗೆ ಕರ್ಕಂಡು ಹೋಗಿಯೇ ಹೋಗ್ತೀವಿ. ದೇವೇಗೌಡರನ್ನು ಲೋಕಸಭೆ ಚುನಾವಣೆಗೆ ನಿಲ್ಲಿಸ್ತೀವಿ. ಯಾವ ಕ್ಷೇತ್ರ ಅಂತ ಮುಂದೆ ನೋಡೋಣ ಎಂದರು.

ದೇವೇಗೌಡರಿಗೆ ಇನ್ನೂ ಹೋರಾಟ ಮಾಡುವ ಶಕ್ತಿ ಇದೆ. ಅವರು ನಿಲ್ಲಲ್ಲ ಅಂದ್ರು ನಾವು ಬಿಡಲ್ಲ. ಲೋಕಸಭೆ ಚುನಾವಣೆಗೆ ನಿಲ್ಲಿಸಿ, ಗೆಲ್ಲಿಸಿ ಲೋಕಸಭೆಗೆ ಕಳುಹಿಸುತ್ತೇವೆ. ಹಾಸನ ಜಿಲ್ಲೆಯಿಂದ ಲೋಕಸಭೆ ಚುನಾವಣೆಗೆ ಪ್ರಜ್ವಲ್ ರೇವಣ್ಣನೇ ಸ್ಪರ್ಧೆ ಮಾಡುತ್ತಾನೆ ಎಂದು ಹೇಳಿದರು.





ಮೂಕ ಪ್ರಾಣಿ ಪಕ್ಷಿಗಳಿಗೆ ನೀರುಣಿಸುವ ಅಭಿಯಾನ



ಮೈಸೂರು, ಮೇ 16– ನಗರದ ನ್ಯಾಯಾಲಯದ ಮುಂಭಾಗ ನೀರಿನ ಸಿಮೆಂಟ್ ತೊಟ್ಟಿಯನ್ನು ಅಳವಡಿಸುವ ಮೂಲಕ ಮೂಕ ಪ್ರಾಣಿ ಪಕ್ಷಿಗಳಿಗೆ ನೀರುಣಿಸುವ ಅಭಿಯಾನವನ್ನು ಮುಂದುವರಿಸಿರುವ ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್ ವಿನಾಶದ ಅಂಚಿನಲ್ಲಿರುವ ಪ್ರಾಣಿ ಪಕ್ಷಿಗಳ ಸಂಕುಲ ಉಳಿಸಲು ಮೈಸೂರು ನಗರದಲ್ಲಿ ಈಗಾಗಲೇ 30 ನೀರಿನ ತೊಟ್ಟಿಗಳನ್ನು ಅಳವಡಿಸುವ ಮೂಲಕ ಪ್ರಾಣಿ–ಪಕ್ಷಿಗಳಿಗೆ ನೀರುಣಿಸುವ ಅಭಿಯಾನವನ್ನು ಮುಂದುವರೆಸಿಕೊಂಡು ಬಂದಿದೆ.

ನಂತರ ಮಾತನಾಡಿದ ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷರಾದ ವಿಕ್ರಂ ಅಯ್ಯಂಗಾರ್, ಸತತ 4 ವರ್ಷದಿಂದ ನೀರುಣಿಸುವ ಅಭಿಯಾನವನ್ನು ಸ್ನೇಹಿತರೊಡನೆ ಸೇರಿ ಮಾಡುತ್ತಾ ಬಂದಿದ್ದೇವೆ, ಈಗಾಗಲೇ ಮೈಸೂರು ನಗರದಲ್ಲಿ ಚಾಮುಂಡಿ ಬೆಟ್ಟದ ತಪ್ಪಲು, ಕೆಲವು ಸರ್ಕಾರಿ ಶಾಲೆಯಲ್ಲಿ, ಜಲಪುರಿ ಕ್ವಾಟ್ರಸ್, ಸಿದ್ದಾರ್ಥ ಲೇಔಟ್ ಸೇರಿದಂತೆ ಇನ್ನಿತರ ಭಾಗದಲ್ಲಿ 30ಕ್ಕೂ ಹೆಚ್ಚು ನೀರಿನ ತೊಟ್ಟಿಗಳನ್ನು ಅಳವಡಿಸಿದ್ದೇವೆ. ಸ್ಥಳೀಯ ಅಂಗಡಿ ಮಾಲೀಕರಿಗೆ ಅದರ ನಿರ್ವಹಣೆ ಮಾಡುವಂತೆ ಮನವಿ ಮಾಡಲಾಯಿತು. ನಮ್ಮ ಈ ಅಭಿಯಾನಕ್ಕೆ ಯುವಕರು ಸ್ವಯಂ ಪ್ರೇರಣೆಯಿಂದ ಬೇಸಿಗೆಯಲ್ಲಿ ಪಕ್ಷಿಗಳು ಹಾಗೂ ಪ್ರಾಣಿಗಳಿಗೆ ನೀರುಣಿಸಲು ಮುಂದೆ ಬಂದಿದ್ದಾರೆ. ಬೇಸಿಗೆ ಆರಂಭವಾಗಿದ್ದು, ಸಾರ್ವಜನಿಕ ಸ್ಥಳಗಳಲ್ಲಿ ಪ್ರಾಣಿ, ಪಕ್ಷಿಗಳಿಗೂ ನೀರು ಸಿಗುವುದು ಕಷ್ಟ, ಹಾಗಾಗಿ ಬೇಸಿಗೆ ಮುಗಿಯುವವರೆಗೂ ಪ್ರಾಣಿ, ಪಕ್ಷಿಗಳಿಗೆ ದಾಹ ನೀಗಿಸಲು ಸಾರ್ವಜನಿಕರು ಸ್ವಯಂ ಪ್ರೇರಿತವಾಗಿ ಅಲ್ಲಲ್ಲಿ ತೆರೆದ ಬಾಟಲ್‌ಗಳಲ್ಲಿ ನೀರು ಇಟ್ಟು ಪ್ರಾಣಿ, ಪಕ್ಷಿಗಳ ದಾಹ ನೀಗಿಸುವ ಕಾರ್ಯ ಮಾಡಬೇಕು ಎಂದು ಮನವಿ ಮಾಡಿದರು ಉದ್ಯಮಿ ರಾಜೇಶ್ ಪಳನಿ, ಅಹಿಂದ ಮುಖಂಡರಾದ ನಟರಾಜ್, ಕೆಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಜಿ.ಎಂ.ಪಂಚಾಕ್ಷರಿ, ಕಡಕೋಳ ಜಗದೀಶ್, ಜಿ ರಾಘವೇಂದ್ರ, ಸೈಯದ್ ಸಾಧಿಕ್, ರವಿಚಂದ್ರ, ನಂದೀಶ್ ನಾಯಕ್, ಮಹೇಶ್, ನವೀನ್ ಕೆಂಪಿ ಇನ್ನಿತರರು ಉಪಸ್ಥಿತರಿದ್ದರು.

ಎಸ್.ಪುಣ್ಯಶ್ರೀಗೆ 585 ಅಂಕ



ಮೈಸೂರು, ಮೇ 16– ಈ ಸಾಲಿನ ಸಿಬಿಎಸ್‌ಇ 10ನೇ ತರಗತಿ ಪರೀಕ್ಷೆಯಲ್ಲಿ ನಗರದ ಗೋಕುಲಂ 3ನೇ ಹಂತದಲ್ಲಿರುವ ಮೈಸೂರು ವೆಸ್ಟ್ ಲಯನ್ಸ್ ಸೇವಾನಿಕೇತನ್ ಸ್ಕೂಲ್‌ನ ವಿದ್ಯಾರ್ಥಿನಿ ಎಸ್. ಪುಣ್ಯಶ್ರೀ 585 (ಶೇ. 97.5) ಅಂಕ ಗಳಿಸಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿ, ಶಾಲೆಗೆ ಟಾಪರ್ ಆಗಿದ್ದಾರೆ. ಈಕೆ ಇಂಗ್ಲಿಷ್‌ನಲ್ಲಿ 96, ಕನ್ನಡದಲ್ಲಿ 99, ಗಣಿತದಲ್ಲಿ 95, ವಿಜ್ಞಾನದಲ್ಲಿ 99, ಸಮಾಜ ವಿಜ್ಞಾನದಲ್ಲಿ–96 ಹಾಗೂ ಇನ್ ಫಾರ್ಮೆಷನ್ ಟೆಕ್ನಾಲಜಿಯಲ್ಲಿ–100 ಅಂಕ ಗಳಿಸಿದ್ದಾರೆ. ಈಕೆ ಯಾವುದೇ ಟ್ಯೂಷನ್‌ಗೆ ಹೋಗದೆ ಹೆಚ್ಚು ಅಂಕ ಗಳಿಸಿ ಸಾಧನೆಗೈದಿದ್ದಾರೆ. ಪುಣ್ಯಶ್ರೀ ಬೋಗಾದಿಯ ಬಸವೇಶ್ವರ ನಗರದ ನಿವಾಸಿ, ಮೈಸೂರು ವೆಸ್ಟ್ ಲಯನ್ಸ್ ಸೇವಾನಿಕೇತನ್ ಸ್ಕೂಲ್‌ನ ಕನ್ನಡ ಶಿಕ್ಷಕ ಎಸ್.ಶಾಂತಕುಮಾರ್ ಮತ್ತು ವಿಶ್ವಪ್ರಜ್ಞಾ ಶಾಲೆಯ ಶಿಕ್ಷಕಿ ಕೆ.ಚಂದ್ರಮ್ಮ ಅವರ ಪುತ್ರಿ. ಮೂಲತಃ ಎಚ್.ಡಿ. ಕೋಟೆ ತಾಲೂಕಿನ ಹಳ್ಳದ ಮನುಗನಹಳ್ಳಿಯ ನಿವಾಸಿ.

ಕರ್ನಾಟಕ ಪಬ್ಲಿಕ್ ಶಾಲೆಗೆ ಉತ್ತಮ ಫಲಿತಾಂಶ



ಮೈಸೂರು, ಮೇ 16–ಈ ಸಾಲಿನ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಕುವೆಂಪುನಗರದ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರೌಢಶಾಲಾ ವಿಭಾಗಕ್ಕೆ ಶೇ. 76.56 ಫಲಿತಾಂಶ ಬಂದಿದೆ. ಎಂ.ವೈ. ರಾಜೀವ್ (ಶೇ. 91.68) ಅಂಕ ಪಡೆದು ಶಾಲೆಗೆ ಪ್ರಥಮರಾಗಿದ್ದಾರೆ. ಶಾಲೆಯ 64 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 49 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಇವರಲ್ಲಿ 5 ಅತ್ಯುತ್ತಮ ಶ್ರೇಣಿ, 29 ಪ್ರಥಮ ಶ್ರೇಣಿ, 12 ದ್ವಿತೀಯ ಶ್ರೇಣಿ, 3 ತೃತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ.

ಹೆಬ್ಬಾಳು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇಬ್ಬರು ನಾಪತ್ತೆ


ಚಕ್ರಬೋರ್ತಿ


ಸುನೀತಾ

ಮೈಸೂರು, ಮೇ 16–ಮೈಸೂರಿನ ಹೆಬ್ಬಾಳು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇಬ್ಬರು ಕಾಣೆಯಾಗಿರುವ ಪ್ರಕರಣ ದಾಖಲಾಗಿದೆ.

ಮೊದಲನೇ ಪ್ರಕರಣದಲ್ಲಿ ರಿಚ್ಚರ್ಡ್ ಚಕ್ರಬೋರ್ತಿ (22) ಮೇ 14 ರಂದು ಮನೆಯಿಂದ ಹೊರ ಹೋದವರು ಇದುವರೆಗೆ ಮನೆಗೆ ವಾಪಸ್ ಬಂದಿಲ್ಲ ಎಂದು ಆತ ವಾಸವಿದ್ದ ಮನೆಯ ಮಾಲೀಕ ರಾಘವೇಂದ್ರ ದೂರು ದಾಖಲಿಸಿದ್ದಾರೆ. ಈತನ ಬಗ್ಗೆ ಮಾಹಿತಿ ತಿಳಿದಲ್ಲಿ ದೂ. 2418318, 2418339 ಸಂಪರ್ಕಿಸಲು ಕೋರಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಸುನೀತಾ (31) ಮೇ 8 ರಂದು ಕೆಲಸಕ್ಕೆಂದು ಹೊರಗೆ ಹೋಗಿದ್ದು ಇದುವರೆಗೂ ಮನೆಗೆ ವಾಪಸ್ ಬಂದಿಲ್ಲ ಎಂದು ಆಕೆಯ ಪತಿ ರಾಮಶೆಟ್ಟಿ ದೂರಿನಲ್ಲಿ ತಿಳಿಸಿದ್ದಾರೆ. ಈಕೆಯ ಬಗ್ಗೆ ಮಾಹಿತಿ ತಿಳಿದಲ್ಲಿ ದೂ. 2418318, 2418339 ಸಂಪರ್ಕಿಸಲು ಕೋರಲಾಗಿದೆ.

ನೀರು ವ್ಯತ್ಯಯ

ಮೈಸೂರು, ಮೇ 16–ವಿದ್ಯುತ್ ವ್ಯತ್ಯಯದ ಹಿನ್ನೆಲೆಯಲ್ಲಿ ನಾಳೆ (ಬುಧವಾರ) ಹಾಗೂ ನಾಳಿದ್ದು (ಗುರುವಾರ) ಮೈಸೂರು ನಗರ ವಾರ್ಡ್ ನಂ.9 ರಿಂದ 16, 28 ರಿಂದ 39, 52, 53, ಇದಕ್ಕೆ ಸಂಬಂಧಪಟ್ಟ ಪ್ರದೇಶಗಳಾದ ಕೆಸರೆ, ರಾಜೇಂದ್ರನಗರ, ಸುಭಾಷ್‌ನಗರ, ಎನ್.ಆರ್. ಮೊಹಲ್ಲಾ, ಗಾಂಧಿನಗರ, ಉದಯಗಿರಿ, ರಾಜೀವ್‌ನಗರ, 1, 2 ಮತ್ತು 3ನೇ ಹಂತ, ಶಾಂತಿನಗರ, ಕಲ್ಯಾಣಗಿರಿ, ಡಾ. ರಾಜ್ ಕುಮಾರ್ ರಸ್ತೆ ಹೊಂದಿಕೊಂಡ ಪ್ರದೇಶಗಳು, ಯರಗನಹಳ್ಳಿ, ಸಿದ್ದಾರ್ಥ ಬಡಾವಣೆ, ಆಲನಹಳ್ಳಿ, ನಂದಿನಿ ಬಡಾವಣೆ, ಗಿರಿದರ್ಶಿನಿ ಬಡಾವಣೆ, ಗೌಸಿಯಾನಗರ, ಕ್ಯಾತಮಾರನಹಳ್ಳಿ ಹಾಗೂ ಇನ್ನಿತರ ಪ್ರದೇಶಗಳಲ್ಲಿ ನೀರು ಸರಬರಾಜಿಲ್ಲಿ ವ್ಯತ್ಯಯವಾಗಲಿದೆ ಎಂದು ವಾಣಿವಿಲಾಸ ವಾಟರ್ ವರ್ಕ್ಸ್ ಪ್ರಕಟಣೆ ತಿಳಿಸಿದೆ.

ವಿದ್ಯುತ್ ವ್ಯತ್ಯಯ

ಮೈಸೂರು, ಮೇ 16– ನಿರ್ವಹಣಾ ಕಾಮಗಾರಿ ನಿಮಿತ್ತ ಮೇ 17 ರಂದು ಬೆಳಗ್ಗೆ 10 ರಿಂದ ಸಂಜೆ 5:30 ಘಂಟೆಯ ವರೆಗೆ ಸಿದ್ದಖಿನಗರ, ಶಿವರಾತ್ರೀಶ್ವರನಗರ, ಮಣಿಪಾಲ್ ಹಾಸ್ಪಿಟಲ್, ಹನುಮಂತ ನಗರ, ಹುಡ್ಕೊ, ಇಂಡಸ್ಟ್ರಿಯಲ್ 'ಎ' ಬಡಾವಣೆ, 'ಸಿ' ಬಡಾವಣೆ, ಟೆಲಿಫೋನ್ ಎಕ್ಸ್ಚೇಂಜ್, ಕೆಎಸ್ಆರ್‌ಟಿಸಿ ಡಿಪೋ, ಲಿಡ್ಕರ್ ಕಾಲೋನಿ, ಇಂಡಸ್ಟ್ರಿಯಲ್ 'ಬಿ' ಬಡಾವಣೆ, ಹೈವೆ ವೃತ್ತ, ಸ್ಟಾರ್ ಆಫ್ ಮೈಸೂರು, ಪರಹಾ ಕಾಂಪೌಂಡ್, ಕಾವೇರಿ ನಗರ, ಬೆಲವತ್ತ ಸಾದನಹಳ್ಳಿ, ಸಿದ್ದಲಿಂಗಪುರ, ಕೆ.ಆರ್. ಮಿಲ್ ಕಾಲೋನಿ, ನಾಗನಹಳ್ಳಿ, ಲಕ್ಷ್ಮೀಪುರ, ಕಳಸ್ತವಾಡಿ, ಮೈಸೂರು–ಬೆಂಗಳೂರು ಮುಖ್ಯರಸ್ತೆ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ತಿಳಿಸಿದೆ.

ಸರ್ಕಾರಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಶ್ರಮಿಸಿ

ಮೈಸೂರು ಜಿಲ್ಲೆಯ ಪಿಡಿಓಗಳಿಗೆ ಜಿಪಂ ಸಿಇಓ ಕೆ.ಎಂ.ಗಾಯತ್ರಿ ತಾಕೀತು





ಮೈಸೂರು, ಮೇ 16(ಆರ್‌ಕೆ)–ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಶ್ರಮಿಸಬೇಕೆಂದು ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ. ಗಾಯತ್ರಿ ಅವರು ಮೈಸೂರು ಜಿಲ್ಲೆಯ ಎಲ್ಲಾ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ (ಪಿಡಿಓ)ಗಳಿಗೆ ತಾಕೀತು ಮಾಡಿದ್ದಾರೆ.


ಕಳೆದ ಒಂದು ತಿಂಗಳಿಂದ ಚುನಾವಣಾ ಕರ್ತವ್ಯದಲ್ಲಿ ನಿರತರಾಗಿದ್ದ ಗಾಯತ್ರಿ ಅವರು, ಮೈಸೂರಿನ ಜಿಲ್ಲಾ ಪಂಚಾಯ್ತಿ ಕಚೇರಿ ಸಭಾಂಗಣದಲ್ಲಿ ಪಿಡಿಓಗಳೊಂದಿಗೆ ಸಭೆ ನಡೆಸಿ ಗ್ರಾಮ ಮತ್ತು ತಾಲೂಕು ಪಂಚಾಯ್ತಿ ಮಟ್ಟದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಕುರಿತಂತೆ ಪರಿಶೀಲನೆ ನಡೆಸಿದರು.

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು, ಸಂಭಾವನೆ ಪಾವತಿ, ಸ್ವಚ್ಛ ಭಾರತ್ ಮಿಷನ್ ಅಭಿಯಾನದ ಪ್ರಗತಿ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ (NRLM) ಅಡಿ ಸ್ವಂತ ಉದ್ಯೋಗ ಮಾಡಲು ಮುಂದೆ ಬರುವ ಯುವಕರಿಗೆ ನೀಡಿರುವ ತರಬೇತಿ, ಬ್ಯಾಂಕ್ ಸಾಲ ಸೌಲಭ್ಯ, ಹೋಟೆಲ್, ಕ್ಯಾಂಟಿನ್ ವೃತ್ತಿ ಆರಂಭಿಸಲು ನೀಡಿರುವ ಪ್ರೋತ್ಸಾಹ ಕುರಿತಂತೆ ಅವರು ಪರಿಶೀಲನೆ ನಡೆಸಿದರು.

ಜಲ್ ಜೀವನ್ ಮಿಷನ್, ಇ–ಗವರ್ನೆನ್ಸ್, ಜಿಲ್ಲೆಯಾದ್ಯಂತ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಗ್ರಂಥಾಲಯ ಅಭಿವೃದ್ಧಿ, ವಿದ್ಯಾರ್ಥಿನಿಲಯಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲಾಗಿದೆಯೇ? ಸಂಜೀವಿನಿ ಗ್ರೂಪ್‌ನ ಮಹಿಳೆಯರು ಕ್ಯಾಂಟಿನ್ ಆರಂಭಿಸಿ ನಡೆಸಲು ನೀಡಿರುವ ಪ್ರೋತ್ಸಾಹ ಸೇರಿದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಪಾತ್ರ ಪ್ರಮುಖವಾದುದು ಎಂದು ಗಾಯತ್ರಿ ಅವರು ತಿಳಿಸಿದರು.

ಜಿಲ್ಲಾ ಪಂಚಾಯ್ತಿ ಉಪ ಕಾರ್ಯದರ್ಶಿ–2 ಕೃಷ್ಣರಾಜು, ಮುಖ್ಯ ಲೆಕ್ಕಾಧಿಕಾರಿ ನಂದ, ಮುಖ್ಯ ಯೋಜನಾಧಿಕಾರಿ ಧನುಷ್, ಸಹಾಯಕ ಕಾರ್ಯದರ್ಶಿ ಕುಲ್‌ದೀಪ್ ಹಾಗೂ ಯೋಜನಾ ನಿರ್ದೇಶಕಿ ಸವಿತಾ ಅವರು ಸಭೆಯಲ್ಲಿ ಉಪಸ್ಥಿತರಿದ್ದರು.

ಸೋತವರಿಗೆ ಧೈರ್ಯ ತುಂಬುತ್ತಿದ್ದೇನೆ: ಬೊಮ್ಮಾಯಿ



ಬೆಂಗಳೂರು, ಮೇ 16 (ಕೆಎಂಶಿ)– ಚುನಾವಣೆಯ ಸೋಲು ಏಕೆ ಆಯ್ತು, ಏನಾಯ್ತು ಎಂದು ನಾವು ಪರಾಮರ್ಶೆ ಮಾಡಿದ್ದೇವೆ ಎಂದು ಹಂಗಾಮಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದು ಸುಧಾಕರ್ ಭೇಟಿ ಮಾಡಿದ್ದಿನಿ. ನಮ್ಮ ಜೊತೆ ಕೆಲಸ ಮಾಡಿದವರು ಅಲ್ಪ ಪ್ರಮಾಣದಲ್ಲಿ ಸೋತಿದ್ದಾರೆ. ಧೈರ್ಯ ತುಂಬುವ ಕೆಲಸ ಮಾಡುತ್ತಿದ್ದೇನೆ. ಸೋಲಿನ ಕಾರಣದ ಬಗ್ಗೆ ಚರ್ಚೆ ಮಾಡಿದ್ದೇವೆ. ಸೋಮಣ್ಣ ಅವರನ್ನೂ ಭೇಟಿ ಮಾಡುತ್ತೇನೆ ಎಂದರು. ಕಾಂಗ್ರೆಸ್‌ನಲ್ಲಿ ಸ್ಥಾನ ಹಗ್ಗಜಗ್ಗಾಟ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿ, ಅದು ಅವರ ಪಕ್ಷದ ವಿಚಾರ. ಸಿಎಂ ಯಾರು ಆಗುತ್ತಾರೆ ಎನ್ನುವುದನ್ನು ಕಾಯ್ದು ನೋಡೋಣ ಎಂದರು. ಡಿಜಿಪಿ ಪ್ರವೀಣ್‌ಸೂದ್ ಸಿಬಿಐ ನಿರ್ದೇಶಕರಾಗಿರುವ ವಿಚಾರದಲ್ಲಿ ಪ್ರತಿಕ್ರಿಯಿಸಿದ ಅವರು, ಪ್ರವೀಣ್ ಸೂದ್ ನಿರ್ದೇಶಕರನ್ನಾಗಿ ಮಾಡಿರುವುದು ಕೇಂದ್ರ ಸರ್ಕಾರದ ನಿರ್ಧಾರ. ಆಲ್ ಇಂಡಿಯಾ ಸರ್ವೀಸ್ ಅವರಲ್ಲಿ ಇರುವುದರಿಂದ ಅವರು ಮಾಡಿದ್ದಾರೆ ಎಂದರು.

ಶರಣರ ನಿಜಾನುಭಾವವೇ ಗುರುವಚನ: ಶ್ರೀ ಬಸವ ಮರುಳಸಿದ್ಧ ಸ್ವಾಮಿಗಳು



ಮೈಸೂರು, ಮೇ 16– ಶರಣರ ನಿಜಾನುಭಾವವೇ ಗುರುವಚನ ಎಂದು ಚಿಕ್ಕಮಗಳೂರಿನ ಬಸವ ಕೇಂದ್ರದ ಶ್ರೀ ಬಸವ ಮರುಳಸಿದ್ಧ ಸ್ವಾಮಿಗಳವರು ಪ್ರತಿಪಾದಿಸಿದ್ದಾರೆ. ಶ್ರೀ ಸುತ್ತೂರು ಕ್ಷೇತ್ರದಲ್ಲಿ ಮೇ 15ರಂದು ಅಧ್ಯಯನ ಶಿಬಿರದಲ್ಲಿ ಎರಡನೆಯ ಉಪನ್ಯಾಸ ನೀಡಿದರು. ಅಖಂಡಾದ್ವಯ, ನಿತ್ಯ, ನಿರಂತರ, ಪರಿಪೂರ್ಣ, ಸತ್–ಚಿತ್–ಆನಂದದಿಂದ ನಿಷ್ಕಲ ವಸ್ತು ತಾನೊಂದೇ ಅಲ್ಲದೆ, ಅನ್ಯವಾಗಿ ತೋರುವ ತತ್ವಂಗಳೇನೂ ಇಲ್ಲದ, ಸರ್ವವೂ ಶೂನ್ಯವಾಗಿ, ತಾನೆಂಬ ಅರಿವಿನ ತೋರಿಕೆ ತೊರೆದು, ತನ್ನ ನಿಜ ಸ್ವಭಾವದಲ್ಲಿ ಶೂನ್ಯವಾದ ವಸ್ತುವೇ ನಿಷ್ಕಲಲಿಂಗಸ್ಥಲವಾಗಿದೆ ಎಂದು ತಿಳಿಸಿದರು.

ಉಪನ್ಯಾಸಕರು ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಡಾ. ಎಂ.ಎನ್. ನಂದೀಶ್ ಹಂಚೆಯವರು ಕೃತಿಯ ವ್ಯಾಖ್ಯಾನ ನೀಡುತ್ತಾ, ಶರಣರ ಚಾರಿತ್ರ, ಶರಣರ ಮಾರ್ಗವಾಗಿದೆ. ಭಕ್ತಿ ಕಾಂಡವನ್ನು ನಿರೂಪಿಸುವ ಷಟ್ಸ್ಥಲ ಮಾರ್ಗವಾಗಿದೆ. ಪರಮ ಅನುಭವದಲ್ಲಿ ನುಡಿದ ನುಡಿಯೇ ಶರಣರ ವಚನ. ಕರ್ಮ, ಜ್ಞಾನ, ಭಕ್ತಿಯೆಂಬ ಮೂರರಲ್ಲಿ ಕರ್ಮವನ್ನು ಬಿಟ್ಟು ಜ್ಞಾನದಿಂದ ವಿಭಿನ್ನವಾದದ್ದು ಭಕ್ತಿ, ಇದುವೇ ಷಟ್ಸ್ಥಲ ಮಾರ್ಗ, ಈ ಷಟ್ಸ್ಥಲ ಮಾರ್ಗವೇ ಲಿಂಗಲೀಲಾ ವಿಲಾಸ ಚಾರಿತ್ರವಾಗಿದೆ ಎಂದು ತಿಳಿಸಿದರು. ಸುತ್ತೂರಿನ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಂಯೋಜನಾಧಿಕಾರಿ ಜಿ.ಎಲ್.ತ್ರಿಪುರಾಂತಕ ಅವರು ಸುತ್ತೂರು ಗುರುಪರಂಪರೆಯನ್ನು ಕುರಿತು ಮಾತನಾಡಿ, ಶ್ರೀಮಠವು ಸಮಾಜಕ್ಕೆ ಅನ್ನ, ಜ್ಞಾನ, ಆರೋಗ್ಯ ದಾಸೋಹವನ್ನು ನೀಡುವ ತಾಣವಾಗಿದೆ. ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಭಗವತ್ಪಾದರು ಜಗತ್ತಿಗೆ ಶಾಂತಿ ಮಂತ್ರವನ್ನು ಸಾರಿದರು, ನಂತರ ಗುರುಪರಂಪರೆಯ ಎಲ್ಲಾ ಜಗದ್ಗುರುಗಳವರ ದಿವ್ಯ ತಪಸ್ಸಿನ ಫಲವಾಗಿ ಶ್ರೀಮಠವು ಸಮಾಜಕ್ಕೆ ಅಪಾರ ಕೊಡುಗೆಯನ್ನು ನೀಡುತ್ತಾ ಬಂದಿದೆ. ರಾಜ್ಯದ ಹಾಗೂ ರಾಷ್ಟ್ರದ ವಿವಿಧ ಭಾಗದ ಬಡ ಮಕ್ಕಳಿಗೆ ಜ್ಞಾನಾನ್ನ ದಾಸೋಹವನ್ನು ಕರುಣಿಸಿದೆ. ಸಂಸ್ಥೆಯ ಅಡಿಯಲ್ಲಿ ಅನೇಕ ಸಾಮಾಜಿಕ ಕಾರ್ಯಗಳು ನಡೆಯುತ್ತಿದ್ದು, ಪೂಜ್ಯಶ್ರೀಗಳವರ ಉದಾರ ಮನೋಭಾವದಿಂದಾಗಿ ಶ್ರೀಮಠದ ಕೀರ್ತಿ ಪ್ರಪಂಚಾದ್ಯಂತ ವಿಸ್ತರಿಸಿದೆ. ಇಂದಿನ ದಿನಗಳಲ್ಲಿ ಸುತ್ತೂರು ಜಾತ್ರೆಯು ನಾಡಹಬ್ಬವಾಗಿ ಪರಿವರ್ತನೆಯಾಗಿದೆ ಎಂದು ಅಭಿಪ್ರಾಯಪಟ್ಟರು. ಶಿಬಿರದಲ್ಲಿ ಕರ್ನಾಟಕ ಹಾಗೂ ಮಹಾರಾಷ್ಟ್ರದಿಂದ ಆಗಮಿಸಿರುವ 80 ಶಿಬಿರಾರ್ಥಿಗಳು ಪಾಲ್ಗೊಂಡಿದ್ದಾರೆ.

ಎನ್.ಆರ್.ಕ್ಷೇತ್ರವನ್ನು ಶಾಸಕ ತನ್ವೀರ್ ಸೇಠ್ ಇನ್ನಾದರೂ ಅಭಿವೃದ್ಧಿಪಡಿಸಲಿ: ಆದರ್ಶ್ ಅರಸ್

ಮೈಸೂರು,ಮೇ 16(ಎಂಟಿವೈ)– ಮೈಸೂರಿನ ಎನ್.ಆರ್.ಕ್ಷೇತ್ರ ಅಭಿವೃದ್ಧಿಯಿಂದ ವಂಚಿತವಾಗಿದ್ದು, ಸತತ ಆರು ಬಾರಿ ಆಯ್ಕೆಯಾಗಿರುವ ಶಾಸಕ ತನ್ವೀರ್ ಸೇಠ್ ಇನ್ನಾದರೂ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ (ಕೆಆರ್‌ಎಸ್)ದ ಜಿಲ್ಲಾಧ್ಯಕ್ಷ ಬಿ.ಎಂ. ಆದರ್ಶ್ ಅರಸ್ ಒತ್ತಾಯಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎನ್.ಆರ್.ಕ್ಷೇತ್ರವನ್ನು ಅಭಿವೃದ್ಧಿ ಮಾಡುವ ಏಕೈಕ ಗುರಿಯೊಂದಿಗೆ ವಿಧಾನಸಭಾ ಚುನಾವಣೆಯಲ್ಲಿ ಕೆಆರ್‌ಎಸ್ ಪಕ್ಷದ ಅಭ್ಯರ್ಥಿಯಾಗಿ ಸುಂದರ್ ಪ್ರೇಮ್‌ಕುಮಾರ್ ಅವರನ್ನು ಕಣಕ್ಕಿಳಿಸಲಾಗಿತ್ತು. ಆದರೆ, ಕ್ಷೇತ್ರದ ಮತದಾರರು ನಮ್ಮ ಪಕ್ಷದ ಅಭ್ಯರ್ಥಿಯನ್ನು ತಿರಸ್ಕರಿಸಿ, ಕಾಂಗ್ರೆಸ್ ಅಭ್ಯರ್ಥಿ ತನ್ವೀರ್ ಸೇಠ್ ಅವರನ್ನು ಆಯ್ಕೆ ಮಾಡಿದ್ದಾರೆ. ಜನರ ತೀರ್ಪನ್ನು ನಮ್ಮ ಪಕ್ಷ ಸ್ವಾಗತಿಸುತ್ತದೆ. ನೂತನ ಶಾಸಕರಿಗೆ ಅಭಿನಂದನೆ ಸಲ್ಲಿಸುವುದರೊಂದಿಗೆ ಕ್ಷೇತ್ರದ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡುವುದಾಗಿ ತಿಳಿಸಿದರು. ಎನ್.ಆರ್.ಕ್ಷೇತ್ರದಲ್ಲಿ ತಮ್ಮ ಅಭ್ಯರ್ಥಿ ಪರ ಪ್ರಚಾರ ಮಾಡಲು ತೆರಳಿದ್ದ ವೇಳೆ ಕ್ಷೇತ್ರದ ಹಲವು ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಕೆಲವು ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿದ್ದಾಗ ಅಲ್ಲಿ ಮೂಲ ಸೌಲಭ್ಯ ಇಲ್ಲದಿರುವುದು ಕಂಡು ಬಂದಿದೆ. ಸಿಬ್ಬಂದಿ ಕೊರತೆಯೂ ಎದ್ದು ಕಾಣುತ್ತಿದೆ. ಆದರೆ ಈ ಬಗ್ಗೆ ಶಾಸಕರಾಗಲೀ, ಈ ಹಿಂದಿನ ಸರ್ಕಾರವಾಗಲೀ ಗಮನ ಹರಿಸಿಲ್ಲ. ಕ್ಷೇತ್ರದ ಬಹಳಷ್ಟು ಜನ ಬಡತನ ರೇಖೆಗಿಂತ ಕೆಳಗಿನ ವರಾಗಿದ್ದಾರೆ. ಇವರ ಬಡತನ ನಿರ್ಮೂಲನೆಗೂ ಇಲ್ಲಿನ ಜನಪ್ರತಿನಿಧಿ ಯಾವುದೇ ಕ್ರಮ ಕೈಗೊಂಡಿಲ್ಲ ಎಂದರು.

ಬೇರೆ ಕ್ಷೇತ್ರಗಳಿಗೆ ಹೋಲಿಸಿದರೆ ನರಸಿಂಹರಾಜ ಕ್ಷೇತ್ರದಲ್ಲಿ ನಿರುದ್ಯೋಗ ಸಮಸ್ಯೆಯು ಹೆಚ್ಚಿನ ಪ್ರಮಾಣದಲ್ಲಿದೆ. ನ್ಯಾಯಬದ್ಧವಾಗಿ ಗ್ರಾಹಕರಿಗೆ ಪಡಿತರ ತಲುಪುತ್ತಿಲ್ಲ. ಸರಿಯಾದ ರಸ್ತೆ ವ್ಯವಸ್ಥೆಯಿಲ್ಲ. ಇಷ್ಟೆಲ್ಲಾ ಸಮಸ್ಯೆಗಳಿದ್ದರು ನಮ್ಮ ನರಸಿಂಹರಾಜ ಕ್ಷೇತ್ರದ ಜನತೆ ಪಾರಂಪರಿಕ ರಾಜಕಾರಣಕ್ಕೆ ಜೈಕಾರ ಹಾಕಿರುವುದು ಎಷ್ಟರ ಮಟ್ಟಿಗೆ ಸರಿಯೆಂದು ಅವಲೋಕನ ಮಾಡಿಕೊಳ್ಳಬೇಕು. ನೂತನ ಶಾಸಕರು ಕ್ಷೇತ್ರದಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಕೆಆರ್‌ಎಸ್ ಕ್ಷೇತ್ರದ ಪರಾಜಿತ ಅಭ್ಯರ್ಥಿ ಸುಂದರ್ ಪ್ರೇಮ್‌ಕುಮಾರ್ ಮಾತನಾಡಿ, ವಿಧಾನಸಭಾ ಚುನಾವಣೆಯಲ್ಲಿ ನಾನು ಸೋತಿದ್ದರೂ, ಮುಂದಿನ ದಿನಗಳಲ್ಲಿ ನನ್ನ ಸಮಾಜ ಸೇವಾ ಕಾರ್ಯ ಮುಂದುವರೆಸುತ್ತೇನೆ ಎಂದರು. ಸುದ್ದಿಗೋಷ್ಠಿಯಲ್ಲಿ ಕೆಆರ್‌ಎಸ್ ಪಕ್ಷದ ಪದಾಧಿಕಾರಿಗಳಾದ ವಿಜಯಕುಮಾರ್, ಆರ್. ನಾಗರಾಜು, ಭಾನುಮೋಹನ್ ಇದ್ದರು.



ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

17.5.2023 ಬುಧವಾರ, ಮಳೆ ನಕ್ಷತ್ರ: ಕೃತ್ತಿಕ, 11.05.2023 ರಿಂದ 24.05.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಕೃಷ್ಣ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ರೇವತಿ,
ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಪೀಠ, ಜೆಎಸ್‌ಎಸ್ ಮಹಾವಿದ್ಯಾಪೀಠ :** ಅಧ್ಯಯನ ಶಿಬಿರ, ಕಲ್ಲುಮಠದ ಪ್ರಭುದೇವರ ಲಿಂಗಲೀಲಾವಿಲಾಸ ಚಾರಿತ್ರ್ಯ, ಉಪನ್ಯಾಸ–1, ಡಾ.ಜ್ಯೋತಿಶಂಕರ್ ಅವರಿಂದ ಗುರುಕರುಣಸ್ಥಲ–ಭಕ್ತಿಸ್ಥಲ, ಉಪನ್ಯಾಸ–2, ಪ್ರೊ.ಚಂದ್ರಶೇಖರ್ ಅವರಿಂದ ಮಾಹೇಶ್ವರಸ್ಥಳ–ಪ್ರಸಾದಿಸ್ಥಲ, ಉಪನ್ಯಾಸ–3, ಡಾ. ಬಿ.ವಿ.ವಸಂತಕುಮಾರ್ ಅವರಿಂದ ಪ್ರಾಣಲಿಂಗಿಸ್ಥಲ–ಶರಣಸ್ಥಲ, ಸ್ಥಳ: ಸುತ್ತೂರು ಶ್ರೀ ಕ್ಷೇತ್ರ, ಬೆಳಗ್ಗೆ 10ರಿಂದ.

■ **ಶ್ರೀ ರಾಘವೇಂದ್ರಸ್ವಾಮಿ ಸೇವಾ ಸಮಿತಿ :** ಪ್ರಸಿದ್ಧ ಪ್ರವಚನಕಾರರಾದ ಪಂಡಿತ್ ನರಸಿಂಹಚಾರ್ಯ ಘೋಟೆ ಅವರಿಂದ ಭಗವದ್ಗೀತೆ 83ನೇ ಅಧ್ಯಯನ ಕುರಿತು ಪ್ರವಚನ ಕಾರ್ಯಕ್ರಮ, ಸ್ಥಳ: ಮಠದ ಆವರಣ, ಜಯಲಕ್ಷ್ಮಿಪುರಂ, ಸಂಜೆ 5 ಗಂಟೆಗೆ.

■ **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟೆಬಲ್ ಟ್ರಸ್ಟ್ :** ವಿದುಷಿ ಅರ್ಚನಾ ಮತ್ತು ವಿದುಷಿ ಸಮನ್ವಿ ಅವರಿಂದ ಗಾಯನ, ಪೃಥ್ವಿ ಭಾಸ್ಕರ್– ಪಿಟೀಲು, ವಿದ್ವಾನ್ ಬಿ.ಎಸ್.ಪ್ರಶಾಂತ್–ಮೃದಂಗ, ಸ್ಥಳ:ಮೈಸೂರು ಕೆ. ವಾಸುದೇವಾಚಾರ್ಯ ಭವನ, ನಾದಬ್ರಹ್ಮ ಸಂಗೀತ ಸಭಾ, ಸಂಜೆ 6 ರಿಂದ.

■ **ಶ್ರೀ ಉತ್ತರಾದಿ ಮಠ :** ಶ್ರೀ ಭಗವದ್ಗೀತಾ ಅಭಿಯಾನ, ರೋಗ ಮೋಚನ ಶ್ರೀ ಧನ್ವಂತರಿ ಸನ್ನಿಧಾನ, ಶ್ರೀ ಸತ್ಯ ಸಂಕಲ್ಪತೀರ್ಥರು ಹಾಗೂ ಶ್ರೀ ಸತ್ಯ ಸಂತುಷ್ಟ ತೀರ್ಥರ ಸನ್ನಿಧಾನ, ಪರಮಪೂಜ್ಯ ಶ್ರೀ ಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀ ಪಾದಂಗಳವರ ಆಜ್ಞೆ ಹಾಗೂ ಅನುಗ್ರಹದಿಂದ ಹೆಸರಾಂತ ಪ್ರವಚನಕಾರ ಪಂ. ಶ್ರೀ ನರಸಿಂಹಾಚಾರ್ಯ ಘೋಟೆ ಅವರಿಂದ ಭಗವದ್ಗೀತೆ ಅಧ್ಯಾಯ 8 ಕುರಿತು ಪ್ರವಚನ, ಸ್ಥಳ: ಉತ್ತರಾದಿ ಮಠ, ಅಗ್ರಹಾರ, ಸಂಜೆ 6.30 ರಿಂದ.

■ **ರೋಟರಿ ಮೈಸೂರು ಮಿಡ್‌ಟೌನ್ :** ವೀನಸ್ ಶ್ರಮಜೀವಿ ಪ್ರದಾನ ಸಮಾರಂಭ, ಪ್ರಶಸ್ತಿ ಪ್ರದಾನ : ನಿಕಟಪೂರ್ವ ರೋಟರಿ ಜಿಲ್ಲಾ ಗವರ್ನರ್ ಮತ್ತು ಫೌಂಡೇಷನ್ಸ್ ಇನ್‌ಫ್ರಾಸ್ಟ್ರಕ್ಚರ್ ಪ್ರೈವೇಟ್ ಲಿಮಿಟೆಡ್ ಮ್ಯಾನೇಜಿಂಗ್ ಡೈರೆಕ್ಟರ್ ಎ.ಆರ್. ರವೀಂದ್ರ ಭಟ್, ಪ್ರಶಸ್ತಿ ಪುರಸ್ಕೃತರು : ವೀರಶೈವ ರುದ್ರಭೂಮಿ ಉಸ್ತುವಾರಿ ಶ್ರೀಮತಿ ನೀಲಮ್ಮ, ಅಪೋಲೋ ಆಸ್ಪತ್ರೆ ಆಫೀಸ್ ಅಸಿಸ್ಟೆಂಟ್ ಎನ್. ಜಗದೀಶ್, ಸ್ಥಳ: ರೋಟರಿ ಸಭಾಂಗಣ, ಜೆಎಲ್‌ಬಿ ರಸ್ತೆ, ಸಂಜೆ 6.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನೆ, 6.15 ಗೀತಾರಾಧನ, 6.35 ನಮ್ಮ ನದಿಗಳು, ಲೇಖನ–ಎ.ಆರ್. ರಘುರಾಂ, ಪ್ರಸ್ತುತಿ–ಬಿ.ದಿಗ್ವಿಜಯ್, 6.40 ಪದಸಂಸ್ಕೃತಿ– ಕನ್ನಡ ಪದಗಳ ಬಳಕೆ, ಕಲಿಕೆಯ ವಿಶಿಷ್ಟ ಬಾನುಲಿ ಸರಣಿ, ಪ್ರಸ್ತುತಿ– ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್, 8.30 ನೆಲದ ಹಾಡು, ಪ್ರಸ್ತುತಿ– ಡಾ. ಉಮೇಶ್, 9.00 ವೃತ್ತಿ ಮಾರ್ಗದರ್ಶನ–ಇಂಟೀರಿಯರ್ ಡಿಸೈನ್ ಕೋರ್ಸ್, ವೇದಿಕ್ ಆರ್ಕಿಟೆಕ್ಚರ್, ಡಿಜಿಟಲ್ ಆರ್ಕಿಟೆಕ್ಟ್ ವಿಷಯಗಳಲ್ಲಿರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಆಚಾರ್ಯ ಐ.ಐ.ಟಿ ಸಂಸ್ಥೆಯ ಸಂಸ್ಥಾಪಕರೊಂದಿಗೆ ನೇರ ಮಾತುಕತೆ, 9.30 ಚಿತ್ರಗೀತೆ, 10.00 ಹಿಂದೂಸ್ಥಾನಿ ಸಂಗೀತ–ಭಜನ್ ಸಪೋರಿ–ಸಂತೂರ್ ವಾದನ, 11.00 ಸ್ಪೆಷಲ್ ಚುರುಮುರಿ, ಪ್ರಸ್ತುತಿ– ಪ್ರಭುಸ್ವಾಮಿ ಮಳೀಮಠ್ ಮತ್ತು ಕೆ.ಬಿ. ಮೀನಾ.

ಮಧ್ಯಾಹ್ನ: 12.00 ಮಿತ್ರ ಮಾಧುರ್ಯ, 12.30 ದೇವರನಾಮ–ರಾಜ್‌ಕುಮಾರ್ ಭಾರತಿ, 1.20 ಭಾವಗೀತೆ–ವಿನುತ ಬಿ.ಜಿ. 3.00 ಲಯ ಸಂಭ್ರಮ "ಪಾಶ್ಚಾತ್ಯಲಯ ವಾದ್ಯಗಳ ಪರಿಚಯ" ಭಾಗ ವಹಿಸುವವರು–ವಿ. ಪ್ರಮಥ್ ಕಿರಣ್, ಪ್ರಸ್ತುತಿ–ಹೆಚ್.ಎಲ್.ಶಿವಶಂಕರ ಸ್ವಾಮಿ, 4.00 ಮಹಿಳಾರಂಗ – ಸ್ತ್ರೀ ಚೇತನ. ಭಾಗವಹಿಸುವವರು ವೃತ್ತಿಯಲ್ಲಿ ವೈದ್ಯ ಹಾಗೂ ಪ್ರವೃತ್ತಿಯಲ್ಲಿ ಗಾಯಕಿಯಾಗಿರುವ ಡಾ. ಸುಷ್ಮಾ ಕೃಷ್ಣಮೂರ್ತಿ ಅವರೊಂದಿಗೆ ಮಾತುಕತೆ, 4.45 ಹಿಂದಿ ಪಾಠ–ಶಾಂತಾ ಡಿ. ಕಿಣಿ, 5.05 ಮಿತ್ರ ಮಾಧುರ್ಯ, 6.50 ಕೃಷಿರಂಗ–ಕಿಸಾನ್‌ವಾಣಿ–ಬೆಳೆ ಸಮೃದ್ಧಿಗಾಗಿ ಜೇನು ಸಾಕಣೆ ಕುರಿತು ಡಾ. ಜಿ.ಕೆ. ರಾಮೇಗೌಡ ಅವರೊಂದಿಗೆ ಸಂದರ್ಶನ. ಸಂದರ್ಶಕರು– ಎಸ್.ಸುಬ್ರಹ್ಮಣ್ಯ, 10.00 ಜನಪದ ಸಂಗೀತ – ಬುತ್ತಿನಾಗಮ್ಮ ಮತ್ತು ಸಂಗಡಿಗರು.

ನೇಮಕಾತಿ ವ್ಯವಸ್ಥೆಯಲ್ಲಿನ ಬದಲಾವಣೆಗಳು ಭ್ರಷ್ಟಾಚಾರ, ಸ್ವಜನಪಕ್ಷಪಾತವನ್ನು ಕೊನೆಗೊಳಿಸಿವೆ: ಪ್ರಧಾನಿ ಮೋದಿ



ನವದೆಹಲಿ, ಮೇ 16– ನೇಮಕಾತಿ ವ್ಯವಸ್ಥೆಯಲ್ಲಿನ ಬದಲಾವಣೆಗಳು ಭ್ರಷ್ಟಾಚಾರ ಮತ್ತು ಸ್ವಜನಪಕ್ಷಪಾತಗಳನ್ನು ಕೊನೆಗೊಳಿಸಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಮಂಗಳವಾರ ಹೇಳಿದರು. ಕೇಂದ್ರ ಸರ್ಕಾರದ 'ರೋಜ್ಗಾರ್ ಮೇಳ'ದ ಅಡಿಯಲ್ಲಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಉದ್ಯೋಗ ಪಡೆದ 71 ಸಾವಿರ ಯುವಕರಿಗೆ ನೇಮಕಾತಿ ಪತ್ರ ವಿತರಿಸಿದ ಬಳಿಕ ಮಾತನಾಡಿದ ಅವರು, ಸರ್ಕಾರಿ ಉದ್ಯೋಗಗಳಿಗೆ ಅರ್ಜಿ ಸಲ್ಲಿಸುವುದರಿಂದ ಹಿಡಿದು ಫಲಿತಾಂಶ ಪ್ರಕಟಣೆಯವರೆಗೆ ಸಂಪೂರ್ಣ ಪ್ರಕ್ರಿಯೆಯನ್ನು ಆನ್‌ಲೈನ್‌ನಲ್ಲಿ ಮಾಡಲಾಗಿದೆ. ಈ ಬದಲಾವಣೆಗಳು ಭ್ರಷ್ಟಾಚಾರ ಹಾಗೂ ಸ್ವಜನಪಕ್ಷಪಾತವನ್ನು ಕೊನೆಗೊಳಿಸಿದೆ ಎಂದು ಹೇಳಿದರು.


ಅಲ್ಲದೆ, ಕಳೆದ ಒಂಬತ್ತು ವರ್ಷಗಳಲ್ಲಿ ಕೇಂದ್ರದ ಬಿಜೆಪಿ ಆಡಳಿತದಿಂದ ಸೃಷ್ಟಿಯಾದ ಉದ್ಯೋಗಾವಕಾಶಗಳು ಮತ್ತು ಮೂಲಸೌಕರ್ಯ ಅಭಿವೃದ್ಧಿ ಕುರಿತು ಮೋದಿಯವರು ವಿವರಿಸಿದರು.

ಕಳೆದ ಒಂಬತ್ತು ವರ್ಷಗಳಲ್ಲಿ, ದೇಶದಲ್ಲಿ ಉದ್ಯೋಗಾವಕಾಶಗಳನ್ನು ಹೆಚ್ಚಿಸುವತ್ತ ಹೆಚ್ಚಿನ ಗಮನವನ್ನು ನೀಡಲಾಗಿದೆ. ಆಧುನಿಕ ಮೂಲಸೌಕರ್ಯ, ಗ್ರಾಮೀಣ ಅಭಿವೃದ್ಧಿಯ ನಿರ್ಮಾಣ ಸೇರಿದಂತೆ ಸರ್ಕಾರದ ಪ್ರತಿಯೊಂದು ಯೋಜನೆ ಮತ್ತು ನೀತಿಯು ಈ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ. ಸರ್ಕಾರಿ ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆಯನ್ನು ಪಾರದರ್ಶಕ ಮತ್ತು ನ್ಯಾಯಯುತವಾಗಿ ಮಾಡಲು ಹೆಚ್ಚಿನ ಆದ್ಯತೆ ನೀಡಲಾಗಿದೆ. ನೇಮಕಾತಿಗೆ ಅರ್ಜಿ ಸಲ್ಲಿಸುವುದರಿಂದ ಫಲಿತಾಂಶಗಳನ್ನು ಪಡೆಯುವವರೆಗೆ ಸಂಪೂರ್ಣ ಪ್ರಕ್ರಿಯೆಯನ್ನು ಆನ್‌ಲೈನ್ ಮಾಡಲಾಗಿದೆ. ಇದರಿಂದ ಭ್ರಷ್ಟಾಚಾರ ಮತ್ತು ಸ್ವಜನಪಕ್ಷಪಾತದ ಸಾಧ್ಯತೆಗಳು ಕೊನೆಗೊಂಡಿವೆ ಎಂದು ತಿಳಿಸಿದರು. ಇದೇ ವೇಳೆ ಸರ್ಕಾರದ ಯೋಜನೆಗಳು ಮತ್ತು ನೀತಿಗಳನ್ನು ಶ್ಲಾಘಿಸಿದ ಅವರು, ಇದು ಯುವಕರಿಗೆ ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತಿದೆ ಎಂದು ಹೇಳಿದರು. "ಭಾರತ ಸರ್ಕಾರದ ಪ್ರತಿಯೊಂದು ಯೋಜನೆಗಳು, ಪ್ರತಿಯೊಂದು ನೀತಿಯು ಯುವಜನರಿಗೆ ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತಿದೆ ಎಂದರು. ಬಳಿಕ ನೇಮಕಾತಿ ಪತ್ರ ಪಡೆದ ಅಭ್ಯರ್ಥಿಗಳು ಮತ್ತು ಅವರ ಕುಟುಂಬಗಳಿಗೆ ಪ್ರಧಾನಿ ಮೋದಿ ಅಭಿನಂದನೆಗಳನ್ನು ತಿಳಿಸಿದರು.

"ಕಳೆದ ಒಂಬತ್ತು ವರ್ಷಗಳಲ್ಲಿ ಉದ್ಯೋಗಗಳ ಸ್ವರೂಪವೂ ಬಹಳ ವೇಗವಾಗಿ ಬದಲಾಗಿದೆ. ಬದಲಾಗುತ್ತಿರುವ ಈ ಪರಿಸ್ಥಿತಿಗಳಲ್ಲಿ ಯುವಜನರಿಗೆ ಹೊಸ ಕ್ಷೇತ್ರಗಳು ಹುಟ್ಟಿಕೊಂಡಿವೆ. ಕೇಂದ್ರ ಸರ್ಕಾರವು ಈ ಹೊಸ ಕ್ಷೇತ್ರಗಳಿಗೂ ನಿರಂತರವಾಗಿ ಬೆಂಬಲ ನೀಡುತ್ತಿದೆ. ಈ ಒಂಬತ್ತು ವರ್ಷಗಳಲ್ಲಿ ಬದಲಾವಣೆಗಳಿಗೆ ದೇಶ ಸಾಕ್ಷಿಯಾಗಿದೆ. ಸ್ಟಾರ್ಟ್-ಅಪ್ ಸಂಸ್ಕೃತಿಯಲ್ಲಿ ಹೊಸ ಕ್ರಾಂತಿಯಾಗಿದೆ. ಒಂಬತ್ತು ವರ್ಷಗಳ ಹಿಂದೆ ದೇಶದಲ್ಲಿ ಸುಮಾರು 100 ಸ್ಟಾರ್ಟಪ್‌ಗಳಿದ್ದವು. ಆದರೆ, ಇಂದು ಅದರ ಸಂಖ್ಯೆ ಸುಮಾರು 1 ಲಕ್ಷದಷ್ಟಿದೆ. ದೇಶದಲ್ಲಿ ವಿದೇಶಿ ನೇರ ಬಂಡವಾಳ ಹೂಡಿಕೆಗಳು ಮತ್ತು ದೇಶದಿಂದ ದಾಖಲೆಯ ರಫ್ತುಗಳು ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತಿವೆ. ಹೊಸ ಕ್ಷೇತ್ರಗಳಿಗೆ ಸತತವಾಗಿ ಬೆಂಬಲ ನೀಡುತ್ತಿದೆ. 2014 ರ ಮೊದಲು, ದೇಶದ ಗ್ರಾಮೀಣ ರಸ್ತೆ ಸಂಪರ್ಕವು 4 ಲಕ್ಷ ಕಿಲೋಮೀಟರ್‌ಗಳಿಗಿಂತ ಕಡಿಮೆಯಿತ್ತು, ನಂತರ ಅದನ್ನು 7.25 ಲಕ್ಷಕ್ಕೆ ಹೆಚ್ಚಿಸಲಾಯಿತು. 2014ಕ್ಕೂ ಮೊದಲು ದೇಶದಲ್ಲಿ 74 ವಿಮಾನ ನಿಲ್ದಾಣಗಳು ಮಾತ್ರ ಇತ್ತು. ಈ ಸಂಖ್ಯೆ ಇದೀಗ 150ಕ್ಕೆ ಏರಿಕೆಯಾಗಿದೆ. ಕೆಲವು ದಿನಗಳ ಹಿಂದೆ ವಾಲ್‌ಮಾರ್ಟ್‌ನ ಸಿಇಒ ಅವರನ್ನು ಭೇಟಿ ಮಾಡಿದೆ. ಅವರು ತಮ್ಮ ಕಂಪನಿಯು ಮುಂದಿನ 3-4 ವರ್ಷಗಳಲ್ಲಿ 80,000 ಕೋಟಿ ರೂಪಾಯಿಗಳ ರಫ್ತು ಮಾಡಲಿದೆ ಎಂದು ಹೇಳಿದರು. ಲಾಜಿಸ್ಟಿಕ್ಸ್ ಮತ್ತು ಪೂರೈಕೆ ಸರಪಳಿ ವಲಯದಲ್ಲಿ ಕೆಲಸ ಮಾಡಲು ಬಯಸುವ ಯುವಕರಿಗೆ ಇದು ಬಹು ದೊಡ್ಡ ಸುದ್ದಿಯಾಗಿದೆ. ಸಿಸ್ಕೊ 8,000 ಕೋಟಿ ಮೌಲ್ಯದ ಮೇಡ್-ಇನ್-ಇಂಡಿಯಾ ಉತ್ಪನ್ನಗಳನ್ನು ರಫ್ತು ಮಾಡುವ ಗುರಿಯನ್ನು ಹೊಂದಿದೆ ಎಂದು ಸಿಇಒ ಹೇಳಿದರು. ಮುಂದಿನ ವಾರ ದೊಡ್ಡ ಕಂಪನಿಗಳ ಸಿಇಒಗಳನ್ನು ಭೇಟಿ ಮಾಡುತ್ತಿದ್ದೇನೆ. ಅವರೆಲ್ಲರೂ ಭಾರತದಲ್ಲಿ ಹೂಡಿಕೆ ಮಾಡಲು ಉತ್ಸುಕರಾಗಿದ್ದಾರೆಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ, ನೂತನವಾಗಿ ನೇಮಕಗೊಂಡ ಯುವಕರನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಮಂತ್ರಿಗಳು, ರೋಜ್‌ಗಾರ್ ಮೇಳವು ಯುವಜನರನ್ನು ಸಬಲೀಕರಣಗೊಳಿಸಲು ಮತ್ತು ರಾಷ್ಟ್ರೀಯ ಅಭಿವೃದ್ಧಿಯಲ್ಲಿ ಅವರ ಭಾಗವಹಿಸುವಿಕೆಯನ್ನು ಬಲಪಡಿಸುವ ಸರ್ಕಾರದ ಪ್ರಯತ್ನವಾಗಿದೆ. ಇಂತಹ ರೋಜ್ಗಾರ್ ಮೇಳವು ಯುವಜನರ ಬಗ್ಗೆ ಸರ್ಕಾರದ ಬದ್ಧತೆಯನ್ನು ಬಿಂಬಿಸುತ್ತದೆ ಎಂದರು.

ದೇಶದಲ್ಲಿ 71 ಸಾವಿರ ಯುವಜನರಿಗೆ ಉದ್ಯೋಗ ನೇಮಕಾತಿ ಪತ್ರ ವಿತರಣೆ



ಬೆಂಗಳೂರು, ಮೇ 16 (ಕೆಎಂಶಿ)– ದೇಶದಲ್ಲಿ ಏಕಕಾಲಕ್ಕೆ 71,000 ಯುವಕ/ಯುವತಿಯರಿಗೆ ಉದ್ಯೋಗ ಕಲ್ಪಿಸುವ ಬೃಹತ್ ಯೋಜನೆ ರೋಜ್‌ಗಾರ್ ಮೇಳದ ಐದನೇ ಆವೃತ್ತಿಯನ್ನು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ಇಂದು ಉದ್ಘಾಟಿಸಿದರು. ನಗರದಲ್ಲಿಂದು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ರೋಜ್‌ಗಾರ್ ಮೇಳದ ಐದನೇ ಆವೃತ್ತಿ ಉದ್ಘಾಟಿಸಿದ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು, "ಈವರೆಗೆ ಒಟ್ಟು 3.6 ಲಕ್ಷ ಜನರಿಗೆ ಉದ್ಯೋಗ ನೇಮಕಾತಿ ಮಾಡುವ ಮೂಲಕ, ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಲು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮಾರ್ಗದರ್ಶನದಲ್ಲಿ ನಮ್ಮ ಕೇಂದ್ರ ಸರಕಾರ ಮಹತ್ತರವಾದ ಹೆಜ್ಜೆ ಇಟ್ಟಿದೆ. ಸರಕಾರಿ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಿ, ಇಲಾಖೆಗಳು ಉತ್ತಮವಾಗಿ ಕಾರ್ಯನಿರ್ವಹಿಸುವಂತೆ ಮಾಡಲು ಈ ಯೋಜನೆ ಸಹ ಕಾರಿಯಾಗಿದೆ ಮತ್ತು ಯುವಪೀಳಿಗೆಗೆ ಉದ್ಯೋಗ ಅವಕಾಶ ಕೂಡ ನೀಡಿದಂತಾಗಿದೆ. ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ನಮ್ಮ ಕೇಂದ್ರ ಸರಕಾರ ಸದಾ ಬದ್ಧವಾಗಿದ್ದು, ಯುವಜನತೆಯ ಕೌಶಲ್ಯ ಅಭಿವೃದ್ಧಿಗಾಗಿ ಹತ್ತಾರು ಯೋಜನೆಗಳನ್ನು ಕಾರ್ಯರೂಪಕ್ಕೆ ತರಲಾಗಿದೆ. ರಾಜ್ಯದ ಜನರ ಬೇಡಿಕೆಗೆ ಅನುಗುಣವಾಗಿ ನಮ್ಮ ಕೇಂದ್ರ ಸರಕಾರ ಮುಂದೆಯೂ ಕಾರ್ಯನಿರ್ವಹಿಸಲಿದೆ ಎಂದರು. ಕಾರ್ಯಕ್ರಮದಲ್ಲಿ ಸಂಸದ ಪಿಸಿ ಮೋಹನ್ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

ಅಧಿಕಾರಿಗಳಿಗೆ ಹಂಗಾಮಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಚಹಾ ಕೂಟ

ಅಧಿಕಾರಾವಧಿಯಲ್ಲಿ ಸಹಕರಿಸಿದ್ದಕ್ಕೆ ಧನ್ಯವಾದ



ಬೆಂಗಳೂರು, ಮೇ 16 (ಕೆಎಂಶಿ)–ಆಡಳಿತ ಅವಧಿಯಲ್ಲಿ ದಿಟ್ಟ ನಿರ್ಧಾರ ತೆಗೆದುಕೊಳ್ಳಲು ಸಹಕಾರ ನೀಡಿರುವುದಕ್ಕೆ ಹಂಗಾಮಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅಧಿಕಾರಿಗಳಿಗೆ ಧನ್ಯವಾದ ಹೇಳಿದ್ದಾರೆ.

ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ರಾಜ್ಯ ಸರ್ಕಾರದ ಅಧಿಕಾರಿಗಳಿಗೆ ಚಹಾ ಕೂಟ ಏರ್ಪಡಿಸಿ ಅನೌಪಚಾರಿಕವಾಗಿ ಮಾತನಾಡಿದರು. ನಾವು ಸಂವಿಧಾನ ಒಪ್ಪಿಕೊಂಡಿದ್ದೇವೆ. ಆಡಳಿತದಲ್ಲಿ ಕಾರ್ಯಾಂಗ, ಶಾಸಕಾಂಗ ಎರಡೂ ಪ್ರಮುಖ ಪಾತ್ರ ವಹಿಸುತ್ತವೆ. ನಾವು ಅದರ ಅಡಿಯಲ್ಲಿ ಕೆಲಸ ಮಾಡುತ್ತಿದ್ದೇವೆ. ನಾನು ಅಧಿಕಾರಕ್ಕೆ ಬಂದಾಗ ಕೋವಿಡ್, ಪ್ರವಾಹ ಸಂದರ್ಭ ಎದುರಾಯಿತು. ಎಲ್ಲವನ್ನೂ ಯಶಸ್ವಿಯಾಗಿ ನಿಭಾಯಿಸಿದ್ದೇವೆ.

ನಮ್ಮ ಆಡಳಿತದಲ್ಲಿ ಯಾವುದೇ ಹಿಂಸಾತ್ಮಕ ಚಟುವಟಿಕೆಗಳು ನಡೆಯಲಿಲ್ಲ. ಚುನಾವಣೆ ಸಂದರ್ಭದಲ್ಲಿಯೂ ಯಾವುದೇ ಅಹಿತಕರ ಘಟನೆ ನಡೆಯಲಿಲ್ಲ. ಗೃಹ ಇಲಾಖೆಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು. ನಾವು ಅನೇಕ ಮಹತ್ವದ ನಿರ್ಧಾರಗಳನ್ನು ತೆಗೆದುಕೊಂಡಿದ್ದೇವೆ. ಮೀಸಲಾತಿ ಹೆಚ್ಚಳ, ಸರ್ಕಾರಿ ನೌಕರ ಸವಾಲು, ಹೊಸ ನೀತಿಗಳನ್ನು ಜಾರಿಗೆ ತಂದಿದ್ದೇವೆ. ಉದ್ಯೋಗ ನೀತಿ, ಕೈಗಾರಿಕಾ ನೀತಿ ಎಲ್ಲ ಹೊಸ ಯೋಜನೆಗಳ ತರಲು ಅಧಿಕಾರಿಗಳ ಪಾತ್ರ ಮಹತ್ವದ್ದು, ನಿಮ್ಮ ಸಹಕಾರ ಅತ್ಯಂತ ಮುಖ್ಯವಾಗಿತ್ತು ಎಂದರು.

ನಾವು ಐದು ವರ್ಷಕ್ಕೆ ಬರುವವರು, ನೀವು ಸುದೀರ್ಘ ಅಧಿಕಾರದಲ್ಲಿ ಇರುವವರು. ರಾಜ್ಯದ ಏಳಿಗೆಗೆ ಎಲ್ಲರೂ ಶ್ರಮಿಸೋಣ. ಕೆಲಸ ವೇಗವಾಗಿ ಆಗಲಿ ಅಂತ ನಾನು ಗಟ್ಟಿ ಧನಿಯಲ್ಲಿ ಹೇಳಿರಬಹುದು. ಆದರೆ ಯಾವುದೇ ವೈಯಕ್ತಿಕ ಅಭಿಪ್ರಾಯ ಇರಲಿಲ್ಲ ಎಂದರು.

ಕರ್ನಾಟಕ ಹಲವಾರು ವಿಚಾರದಲ್ಲಿ ಮುಂಚೂಣಿಯಲ್ಲಿದೆ. ಜಿಎಸ್ಟಿಯಲ್ಲಿ ಮುಂಚೂಣಿಯಲ್ಲಿದ್ದೇವೆ. ಬಂಡವಾಳ ಸೆಳೆಯುವಲ್ಲಿ ನಂಬರ್ ಒನ್ ಸ್ಥಾನದಲ್ಲಿದ್ದೇವೆ. ಕರ್ನಾಟಕದ ಅಭಿವೃದ್ಧಿಗೆ ಅಧಿಕಾರಿಗಳ ಪಾತ್ರ ಮುಖ್ಯವಾಗಿದ್ದು, ರಾಜ್ಯದ ಅಭಿವೃದ್ಧಿಗೆ ಎಲ್ಲರೂ ಕೆಲಸ ಮಾಡೋಣ ಎಂದರು.

ಮಹಾರಾಜ ಕಾಲೇಜು ಮೈದಾನದಲ್ಲಿ 19ರಿಂದ ವಾಣಿಜ್ಯ ಮೇಳ

ಮೈಸೂರು,ಮೇ 16(ಎಂಟಿವೈ)– ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಮೇ 19 ರಿಂದ 28ರವರೆಗೆ ಗೃಹಶೋಭೆ ಅಂತರರಾಷ್ಟ್ರೀಯ ವಾಣಿಜ್ಯ ಮೇಳ ಹಾಗೂ ಪ್ರದರ್ಶನ ಆಯೋಜಿಸಲಾಗಿದೆ ಎಂದು ಪ್ರದರ್ಶನದ ಆಯೋಜಕ ನಾಗಚಂದ್ರ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ನಾಗರಿಕರಿಗೆ ಒಂದೇ ಸೂರಿನಡಿ ವಿವಿಧ ವಸ್ತುಗಳು ಲಭ್ಯವಾಗುವಂತೆ ಕಳೆದ 27 ವರ್ಷದಿಂದ ಗೃಹಶೋಭೆ ಹೆಸರಲ್ಲಿ ಗೃಹೋಪಯೋಗಿ ವಸ್ತುಗಳ ಮಾರಾಟ ಹಾಗೂ ಪ್ರದರ್ಶನ ಮೇಳ ನಡೆಸುತ್ತಾ ಬರಲಾಗಿದೆ. ಮೈಸೂರಿನ ಜನತೆ ಗೃಹಶೋಭೆ ವಸ್ತುಪ್ರದರ್ಶನವನ್ನು ಒಪ್ಪಿಕೊಂಡಿದ್ದಾರೆ. ಈ ಬಾರಿಯ ಮೇಳವನ್ನು 10 ದಿನಗಳ ಕಾಲ ನಡೆಸಲಾಗುತ್ತಿದ್ದು, ಅದರಲ್ಲಿ ಆಟೋಮೊಬೈಲ್, ಇಂಟೀರಿಯರ್ಸ್ ಮತ್ತು ಪೀಠೋಪಕರಣಗಳ ಪ್ರದರ್ಶನ ಇರಲಿದೆ. ಜೊತೆಗೆ, ವಿಂಟೇಜ್ ಕಾರುಗಳ ಪ್ರದರ್ಶನ ಎಲೆಕ್ಟ್ರಿಕಲ್ ವಾಹನಗಳೊಂದಿಗೆ ವಿವಿಧ ಕಂಪನಿಗಳ ಕಾರುಗಳನ್ನು ಪ್ರದರ್ಶನಕ್ಕಿಡಲಾಗುವುದು ಎಂದರು. 200ಕ್ಕೂ ಮಳಿಗೆಗಳಲ್ಲಿ ಎಲೆಕ್ಟ್ರಾನಿಕ್ಸ್ ಉಪಕರಣಗಳು, ಆಟೋಮೊಬೈಲ್‌ಗಳು, ಪೀಠೋಪಕರಣಗಳು, ಪೇಂಟಿಂಗ್, ಕಾರ್ಪೆಟ್‌ಗಳು, ಮಾಡ್ಯುಲರ್ ಕಿಚನ್‌ಗಳಂತಹ ಬ್ರಾಂಡೆಡ್ ಉತ್ಪನ್ನಗಳನ್ನು ಪ್ರದರ್ಶಿಸಲು ಕ್ರಮ ಕೈಗೊಳ್ಳಲಾಗಿದೆ. ಮೇ 19 ರಿಂದ 28ರವರೆಗೆ ಬೆಳಗ್ಗೆ 11ರಿಂದ ರಾತ್ರಿ 9 ಗಂಟೆವರೆಗೆ ಪ್ರದರ್ಶನ ವೀಕ್ಷಿಸಬಹುದಾಗಿ ಎಂದು ತಿಳಿಸಿದರು.

ಮಾವು, ಹಲಸು ಮೇಳ: ಗೃಹಶೋಭೆಗೆ ಬರುವ ಗ್ರಾಹಕರಿಗಾಗಿ ಮೇ 23ರಿಂದ 28 ರವರೆಗೆ ಹಲಸು ಹಾಗೂ ಮಾವಿನ ಹಣ್ಣಿನ ಮೇಳ ಆಯೋಜಿಸಲಾಗಿದೆ. ಈ ಮೇಳದಲ್ಲಿ ಮೈಸೂರು, ಮಂಡ್ಯ, ಚನ್ನಪಟ್ಟಣ, ರಾಮನಗರದಿಂದ ರೈತರು ತಾವು ಬೆಳೆದ ಮಾವಿನ ಹಣ್ಣು ಹಾಗೂ ಹಲಸಿನ ಹಣ್ಣನ್ನು ತಂದು ಮಾರಾಟ ಮಾಡಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಮುರಳಿಚಂದ್ರನ್ ಇದ್ದರು.

ಕಗ್ಗಂಟಾಗಿದ್ದ ಪಾಲಿಕೆ ಸ್ಥಾಯಿ ಸಮಿತಿ ರಚನೆಗೆ

ಇಂದು ದಿನಾಂಕ ನಿಗದಿ, 15 ದಿನದೊಳಗೆ ಬಜೆಟ್



ಮೈಸೂರು, ಮೇ 16(ಆರ್‌ಕೆ)– ಮೂರೂ ಪಕ್ಷಗಳ ಸದಸ್ಯರ ಸಮನ್ವಯತೆ ಕೊರತೆಯಿಂದಾಗಿ ಕಗ್ಗಂಟಾಗಿದ್ದ ಮೈಸೂರು ಮಹಾನಗರ ಪಾಲಿಕೆ ಸ್ಥಾಯಿ ಸಮಿತಿ ರಚನೆಗೆ ನಾಳೆ (ಮೇ 17) ಸಭೆ ನಿಗದಿಪಡಿಸಲಾಗುವುದು ಎಂದು ಮೇಯರ್ ಶಿವಕುಮಾರ್ ತಿಳಿಸಿದ್ದಾರೆ.

ಪಾಲಿಕೆ ಸದಸ್ಯರು ಒಮ್ಮತಕ್ಕೆ ಬಾರದ ಕಾರಣ, ಪ್ರಸಕ್ತ ಅವಧಿಯ ನಾಲ್ಕು ಸ್ಥಾಯಿ ಸಮಿತಿಗಳ ರಚನೆಗಾಗಿ ನಿಗದಿಯಾಗಿದ್ದ ಸಭೆಗಳನ್ನು ಮೂರು ಬಾರಿ ಮುಂದೂಡಿದ್ದ ಕಾರಣ ನನೆಗುದಿಗೆ ಬಿದ್ದಿತ್ತಲ್ಲದೇ, ಅದೇ ಕಾರಣಕ್ಕಾಗಿ ಪಾಲಿಕೆಯ 2023-24ನೇ ಸಾಲಿನ ಆಯ-ವ್ಯಯ ಸಭೆಯೂ ನಡೆದಿಲ್ಲ ಎಂದು ಅವರು ತಿಳಿಸಿದರು.

ಇದೀಗ ಚುನಾವಣೆ ಪ್ರಕ್ರಿಯೆ ಮುಗಿದಿರುವುದರಿಂದ ಬುಧವಾರ (ನಾಳೆ)ವೇ ತೆರಿಗೆ, ಹಣಕಾಸು ಸ್ಥಾಯಿ ಸಮಿತಿ, ಆರೋಗ್ಯ ಸ್ಥಾಯಿ ಸಮಿತಿ, ನಗರ ಯೋಜನೆ ಮತ್ತು ಸುಧಾರಣೆ ಸ್ಥಾಯಿ ಸಮಿತಿ ಹಾಗೂ ಲೆಕ್ಕಪತ್ರ ಸ್ಥಾಯಿ ಸಮಿತಿ ರಚಿಸುವ ಸಂಬಂಧ ದಿನಾಂಕ ನಿಗದಿಪಡಿಸುತ್ತೇವೆ ಎಂದು ಶಿವಕುಮಾರ್ ತಿಳಿಸಿದರು. ಸಮಿತಿಗಳು ರಚನೆಯಾಗುತ್ತಿದ್ದಂತೆಯೇ 15 ದಿನದೊಳಗಾಗಿ ಪ್ರಸಕ್ತ ಸಾಲಿನ ಬಜೆಟ್ ಅನ್ನು ಮಂಡಿಸಲಾಗುವುದು. ಆಯ-ವ್ಯಯ ಮಂಡನೆಯಾಗಿ ಅನುಮೋದನೆಯಾಗದಿರುವುದರಿಂದ ಪಾಲಿಕೆಯಲ್ಲಿ ಯಾವುದೇ ಪಾವತಿ ಹಾಗೂ ವೆಚ್ಚ ಮಾಡಲು ಸಾಧ್ಯವಾಗುತ್ತಿಲ್ಲ. ಬಜೆಟ್ ಆಗದೇ ಈ ಸಮಸ್ಯೆಗೆ ಪರಿಹಾರ ಸಿಗುವುದಿಲ್ಲ ಎಂದು ಅವರು ತಿಳಿಸಿದರು.

ತನ್ವೀರ್ ಸೇಠ್‌ಗೆ ಡಿಸಿಎಂ ಸ್ಥಾನ ನೀಡಿ: ಎಸ್.ರಾಜೇಶ್ ಆಗ್ರಹ

ಮೈಸೂರು,ಮೇ 16(ಎಂಟಿವೈ)– ಎನ್.ಆರ್. ಕ್ಷೇತ್ರದಲ್ಲಿ ಸತತವಾಗಿ ಜಯಗಳಿಸುತ್ತಿರುವ ಕಾಂಗ್ರೆಸ್ ಶಾಸಕ ತನ್ವೀರ್ ಸೇಠ್ ಅವರಿಗೆ ನೂತನ ಸಚಿವ ಸಂಪುಟದಲ್ಲಿ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ವಕ್ತಾರ ಎಸ್.ರಾಜೇಶ್ ಮನವಿ ಮಾಡಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತನ್ವೀರ್‌ಸೇಠ್ ಆರನೇ ಬಾರಿ ಅತ್ಯಧಿಕ ಮತಗಳ ಅಂತರದಿಂದ ಆಯ್ಕೆಯಾಗಿರುವುದು ಸಂತಸ ತಂದಿದೆ. ಇವರು ಕೊಡಗು, ಚಾಮರಾಜನಗರ, ಮೈಸೂರು, ಮಂಡ್ಯ, ಹಾಸನ ಭಾಗಗಳಲ್ಲಿರುವ ಏಕೈಕ ಮುಸ್ಲಿಂ ಸಮುದಾಯದ ಶಾಸಕರಾಗಿದ್ದಾರೆ. ಎಲ್ಲ ಧರ್ಮದವರನ್ನೂ ಸಮಾನತೆಯಿಂದ ಮುನ್ನಡೆಸುವವರಾಗಿದ್ದಾರೆ. ಬಿಜೆಪಿ ಸರ್ಕಾರ ಎನ್.ಆರ್.ಕ್ಷೇತ್ರಕ್ಕೆ ಅನುದಾನ ನೀಡದೆ ತಾರತಮ್ಯ ಮಾಡಿದೆ. ಆದರೂ ತನ್ವೀರ್ ಸೇಠ್ ಹೆಚ್ಚಿನ ಅನುದಾನ ತಂದು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಹಾಗಾಗಿ ಮುಸ್ಲಿಮರ ಕೋಟಾದಲ್ಲಿ ತನ್ವೀರ್ ಸೇಠ್ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ನಾಗರಾಜು, ಜ್ಯೋತಿ ಪ್ರಕಾಶ್, ಎಂ.ರಸೂಲ್, ಸುಲೇಮಾನ್, ಕುಮಾರ್ ಇದ್ದರು.

ಮೈಸೂರಲ್ಲಿ ಹೆಚ್ಚಿದ ತಾಪ; ಜನತೆ ಕಂಗಾಲು

ಮೈಸೂರು, ಮೇ 16(ಎಸ್‌ಬಿಡಿ)– ಮೈಸೂರಿನಲ್ಲಿ ಬಿಸಿಲ ತಾಪ ಹೆಚ್ಚಾಗುತ್ತಿದ್ದು, ಜನ ತತ್ತರಿಸಿ ಹೋಗಿದ್ದಾರೆ. ಬೆಳಗ್ಗೆಯಿಂದಲೇ ಬಿಸಿಲಿನ ಪ್ರಖರತೆ ಹೆಚ್ಚಾಗಿದ್ದು, ಮಧ್ಯಾಹ್ನದ ವೇಳೆಗಂತೂ ಮತ್ತಷ್ಟು ತಾಪ ಹೆಚ್ಚಾಗುತ್ತಿದೆ. ಬೀದಿಬದಿ ವ್ಯಾಪಾರಿಗಳು ದೊಡ್ಡ ಛತ್ರಿಗಳ ಆಶ್ರಯಿಸಿದ್ದಾರೆ. ಪಾದಚಾರಿಗಳೂ ಹ್ಯಾಟ್, ಛತ್ರಿ ಜೊತೆಗೆ ತಲೆಗೆ ಬಟ್ಟೆ ಹೊದ್ದು ಸಾಗುವುದು ಕಂಡುಬರುತ್ತಿದೆ. ದ್ವಿಚಕ್ರ ವಾಹನ ಸವಾರರು ಸಿಗ್ನಲ್‌ನಲ್ಲಿ ನಿಲ್ಲಲಾಗದೆ ಹೆಣಗಾಡುವಂತಹ ಸ್ಥಿತಿ ಎದುರಾಗಿದೆ. ಕೈಕಾಲುಗಳಿಗೆ ಬಿಸಿಲು ತಾಕಿದರೆ ಸುಟ್ಟುಹೋದ ಅನುಭವವಾಗುತ್ತಿದೆ. ಬಿಸಿಲ ಝಳ ಹೆಚ್ಚಾಗಿರುವುದರಿಂದ ಸಹಜವಾಗಿ ತಂಪು ಪಾನೀಯ, ಎಳನೀರು, ಐಸ್‌ಕ್ರೀಂ ಅಂಗಡಿಗಳಲ್ಲಿ ಗ್ರಾಹಕರ ಸಂಖ್ಯೆ ಹೆಚ್ಚಿದೆ.



ಮತ್ತಷ್ಟು ಏರಿಕೆ ಸಾಧ್ಯತೆ: ಮುಂದಿನ ಐದು ದಿನಗಳ ಹವಾಮಾನ ಮುನ್ಸೂಚನೆ ಅನ್ವಯ ಉಷ್ಣಾಂಶ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ಮೈಸೂರು, ಮಂಡ್ಯ, ಕೊಡಗಿನಲ್ಲಿ ಗರಿಷ್ಠ 39 ಸೆಲ್ಸಿಯಸ್ ಹಾಗೂ ಚಾಮರಾಜನಗರದಲ್ಲಿ 41 ಸೆಲ್ಸಿಯಸ್ ಉಷ್ಣಾಂಶವಿರಲಿದೆ ಎನ್ನಲಾಗಿದೆ.

5 ದಿನ ಮಳೆ ಸಂಭವ: ಮೈಸೂರು ಹಾಗೂ ಕೊಡಗು ಜಿಲ್ಲೆಗಳಲ್ಲಿ ಐದು ದಿನ ಸಾಧಾರಣ ಮಳೆಯಾಗುವ ಮುನ್ಸೂಚನೆ ಇದೆ. ಮೈಸೂರು ಜಿಲ್ಲೆಯಲ್ಲಿ ನಾಳೆ(ಮೇ 17) 5 ಮಿ.ಮೀ., ಮೇ 18ರಂದು 25, ಮೇ 19ರಂದು 10, ಮೇ 20 ಹಾಗೂ 21ರಂದು 35 ಮಿ.ಮೀ. ಮಳೆಯಾಗಬಹುದು. ಕೊಡಗಿನಲ್ಲೂ ಐದು ದಿನ ಕ್ರಮವಾಗಿ 20, 30, 10, 18 ಹಾಗೂ 40 ಮಿ.ಮೀ. ಮಳೆಯಾಗಲಿದೆ. ಮಂಡ್ಯ ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ 4ರಿಂದ 18 ಮಿ.ಮೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.




ಸೋಮವಾರ ಹುಟ್ಟುಹಬ್ಬ ಆಚರಿಸಿಕೊಂಡ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರನ್ನು ಮೈಸೂರಿನ ಉದ್ಯಮಿಗಳಾದ ಆರ್.ಯಶ್ವಂತ್‌ಕುಮಾರ್, ಕೆಪಿಸಿಸಿ ಖಜಾಂಚಿ ವಿನಯ್ ಕಾರ್ತಿಕ್, ಕಾಂಗ್ರೆಸ್ ಮುಖಂಡ ಶ್ರೀನಾಥ್ ಬಾಬು ಆತ್ಮೀಯವಾಗಿ ಅಭಿನಂದಿಸಿ, ಶುಭಾಶಯ ಕೋರಿದರು.

ಈ ತಿಂಗಳ ಅಂತ್ಯಕ್ಕೆ ಹೊಸ ಸಂಸತ್ ಭವನ ಲೋಕಾರ್ಪಣೆ ಸಾಧ್ಯತೆ

ನವದೆಹಲಿ, ಮೇ 16– ನೂತನ ಸಂಸತ್ ಭವನಕ್ಕೆ ಅಂತಿಮ ಸ್ಪರ್ಶ ನೀಡಲಾಗುತ್ತಿದ್ದು, ಈ ತಿಂಗಳ ಅಂತ್ಯದ ವೇಳೆಗೆ ಸಿದ್ಧಗೊಳ್ಳುವ ಸಾಧ್ಯತೆ ಇದೆ ಎಂದು ಮೂಲಗಳು ಮಂಗಳವಾರ ತಿಳಿಸಿವೆ.

ಅವರ ಪ್ರಕಾರ, ಸಿವಿಲ್ ಕಟ್ಟಡಗಳ ಸ್ವಚ್ಛತೆ ಪ್ರಾರಂಭವಾಗಿದೆ ಮತ್ತು ಹೊಸ ಕಟ್ಟಡದ ಉದ್ಘಾಟನೆಯ ಬಗ್ಗೆ ಇನ್ನೂ ಸರ್ಕಾರದಿಂದ ಯಾವುದೇ ಮಾಹಿತಿ ಇಲ್ಲ. ಎರಡು ವರ್ಷಗಳ ಹಿಂದೆ ನೂತನ ಸಂಸತ್ ಭವನದ ನಿರ್ಮಾಣ ಕಾರ್ಯ ಆರಂಭವಾಗಿತ್ತು.



ಸೆಂಟ್ರಲ್ ವಿಸ್ತಾ ಯೋಜನೆ ಭಾಗವಾಗಿ ಹೊಸ ಸಂಸತ್ ಭವನವನ್ನು ನಿರ್ಮಿಸಲಾಗುತ್ತಿದೆ. ತ್ರಿಕೋನಾಕಾರದ ಸಂಸತ್ ಭವನ ಇದಾಗಿದೆ. ಕಟ್ಟಡ ಕಾಮಗಾರಿ ಈಗಾಗಲೇ ಪೂರ್ಣಗೊಂಡಿದ್ದು, ಕಟ್ಟಡದ ಒಳಾಂಗಣ ವಿನ್ಯಾಸದ ಕೆಲಸಗಳು ನಡೆಯುತ್ತಿವೆ.

ಪ್ರಧಾನಿ ನರೇಂದ್ರಮೋದಿ ಅವರು ಡಿಸೆಂಬರ್ 2020ರಲ್ಲಿ ಈ ಹೊಸ ಸಂಸತ್ ಕಟ್ಟಡ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದ್ದರು. ಸರ್ಕಾರ ಕಳೆದ ವರ್ಷದ ನವೆಂಬರ್ ಒಳಗಡೆ ಕಾಮಗಾರಿ ಮುಕ್ತಾಯಗೊಳಿಸುವ ಗುರಿಯನ್ನು ನಿಗದಿಪಡಿಸಿತ್ತು. ಆದರೆ ಕೋವಿಡ್ ಮತ್ತು ಇತರೆ ಕೆಲ ಸಮಸ್ಯೆಗಳಿಂದಾಗಿ ಡೆಡ್ಲೈನ್ ವಿಸ್ತರಣೆಯಾಗಿ ಈಗ ಉದ್ಘಾಟನೆಯ ಹಂತಕ್ಕೆ ಬಂದಿದೆ.

ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆ ವೆಬ್‌ಸೈಟ್ ತಂತ್ರಾಂಶದಲ್ಲಿ ದೋಷ

ಮೈಸೂರು, ಮೇ 16 (ಎಸ್‌ಪಿಎನ್)– ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವೆಬ್‌ಸೈಟ್‌ನ ಎಸ್‌ಎಟಿಎಸ್ ತಂತ್ರಾಂಶದಲ್ಲಿ ಭಾರಿ ದೋಷ ಕಂಡುಬಂದಿದೆ. ಶಾಲಾ ವಿದ್ಯಾರ್ಥಿಗಳ ಹೆಸರು ಎರಡೆರಡು ಬಾರಿ ದಾಖಲಾಗಿರುವುದು ತೀವ್ರ ಗೊಂದಲ ಸೃಷ್ಟಿಯಾಗಿದೆ.



ಇದನ್ನು ಆಯಾ ಶಾಲಾ ಹಂತದಲ್ಲಿ ಪುನರ್ ಪರಿಶೀಲಿಸುವಂತೆ ರಾಜ್ಯದ ಎಲ್ಲಾ ಡಿಡಿಪಿಐ, ಬಿಇಒಗಳಿಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಆಯುಕ್ತರು ಸೂಚನೆ ನೀಡಿದ್ದಾರೆ. ಒಂದೇ ಹೆಸರು, ಬೇರೆಬೇರೆ ಶಾಲೆಗಳಲ್ಲಿ ಪ್ರವೇಶಾತಿ ಪಡೆದಿರುವುದು. ಇಲ್ಲವೇ ಎರಡೆರಡು ಬಾರಿ ಎಸ್‌ಎಟಿಎಸ್ ತಂತ್ರಾಂಶದಲ್ಲಿ ನಮೂದಿಸಿರುವುದು ಬೆಳಕಿಗೆ ಬಂದಿದೆ. ಈ ಗೊಂದಲದಿಂದ ವಿವಿಧ ಇಲಾಖೆಗಳ ಯೋಜನೆಗಳಡಿ ವಿದ್ಯಾರ್ಥಿ ವೇತನವನ್ನು ವಿತರಿಸಲು, ವಿವಿಧ ಪ್ರವೇಶ ಪರೀಕ್ಷೆಗಳ ಹಾಜರಾತಿಗೆ ಹಾಗೂ ಶಾಲೆಯಿಂದ ಹೊರಗುಳಿದ ವಿದ್ಯಾರ್ಥಿಗಳ ಜಾಡು ಹಿಡಿಯಲು ತೊಂದರೆಯಾಗುತ್ತಿದೆ.

ಎಸ್‌ಎಟಿಎಸ್ ತಂತ್ರಾಂಶದಲ್ಲಿರುವ ವಿದ್ಯಾರ್ಥಿಯ ಹೆಸರನ್ನು ಮಾತ್ರ (ಶಾಲಾ ದಾಖಲಾತಿಯಂತೆ) ಆಧಾರ್‌ನಲ್ಲಿರುವ ಹೆಸರಿನೊಂದಿಗೆ ಪರಿಶೀಲಿಸಿ, ವರದಿ ನೀಡುವಂತೆ ಈ ಹಿಂದೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿತ್ತು. ಅದರ ಪ್ರಕ್ರಿಯೆ ಆಯಾ ಶಾಲಾ ಹಂತದಲ್ಲಿ ಉಳಿದಿದೆ ಎಂದು ಶಿಕ್ಷಣ ಇಲಾಖೆ ಆಯುಕ್ತರು ತಿಳಿಸಿದ್ದಾರೆ.

ಈ ಪ್ರಕ್ರಿಯೆಯಲ್ಲಿ ಒಂದೇ ವಿದ್ಯಾರ್ಥಿ ಹೆಸರು ಇನ್ನೊಂದು ಶಾಲೆಯಲ್ಲಿ ಅಥವಾ ಅದೇ ಶಾಲೆಯಲ್ಲಿ ಡ್ಯೂಪ್ಲಿಕೇಟ್ ಎಸ್‌ಎಟಿಎಸ್ ಸಂಖ್ಯೆಯನ್ನು ಹೊಂದಿರುವುದು ಕಂಡುಬಂದಿದೆ. ಈ ದೋಷ ಕುರಿತು ಕುರಿತು ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಗಳಿಗೆ ಭೇಟಿ ನೀಡಿ, ವಿದ್ಯಾರ್ಥಿಯ ಮೂಲ ದಾಖಲಾತಿ ಆಧಾರದ ಮೇಲೆ ಯಾವ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುತ್ತಾನೆ ಎಂಬುದನ್ನು ಖಚಿತಪಡಿಸಿಕೊಂಡು, ಎಸ್‌ಎಟಿಎಸ್‌ನಲ್ಲಿರುವ ಡೂಪ್ಲಿಕೇಟ್ ಸಂಖ್ಯೆಯನ್ನು ಡಿಲೀಟ್ ಮಾಡುವಂತೆ ಸೂಚಿಸಿದ್ದಾರೆ.

ಎಸ್‌ಎಟಿಎಸ್ ತಂತ್ರಾಂಶದಲ್ಲಿರುವ ವಿದ್ಯಾರ್ಥಿಗಳ ಮಾಹಿತಿಯು ಶಾಲಾ ದಾಖಲಾತಿಯ ವಿದ್ಯಾರ್ಥಿಯ ಮೂಲ ದಾಖಲಾಗಿರುತ್ತದೆ. ಹಾಗಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಆಯಾ ಶಾಲೆಗಳಿಗೆ ಭೇಟಿ ನೀಡಿ, ಈ ವಿಷಯವನ್ನು ವಿದ್ಯಾರ್ಥಿಗಳ ಪೋಷಕರೊಂದಿಗೆ ಚರ್ಚಿಸಿ, ಆಧಾರ್ ಕಾರ್ಡ್ ಹೊಂದಿರದ ವಿದ್ಯಾರ್ಥಿಗಳಿಗೆ ಶಾಲಾ ವಿದ್ಯಾರ್ಥಿಗಳ ಹೆಸರು, ಶಾಲಾ ದಾಖಲಾತಿಯಂತೆ ಆಧಾರ್‌ಕಾರ್ಡ್ ಪಡೆಯಲು ಪೋಷಕರಿಗೆ ಮನವರಿಕೆ ಮಾಡಿಕೊಡಬೇಕು ಎಂದು ಸೂಚಿಸಿದ್ದಾರೆ.

ಮೈಸೂರು ಈಗ ಗುಂಡಿಯೂರು, ನಗರದ ಹಲವೆಡೆ ಬಾಯ್ತೆರೆದ ರಸ್ತೆ ಗುಂಡಿಗಳು

ವಾಹನ ಸಂಚಾರಕ್ಕೆ ತೀವ್ರ ತೊಂದರೆ ಎಂದ ಸಾರ್ವಜನಿಕರು, ಕ್ರಮ ಕೈಗೊಳ್ಳದ ಇಲಾಖೆ ಮೇಲೆ ಆಕ್ರೋಶ

ಮೈಸೂರು, ಮೇ 16 (ಎಸ್‌ಪಿಎನ್)– ಮೈಸೂರು ನಗರದ ವಿವಿಧ ಬಡಾವಣೆಗಳಲ್ಲಿ ಹಮ್ಮಿಕೊಂಡಿರುವ ಕಾಮಗಾರಿ ಮುಗಿದಿದ್ದರೂ ಕೆಲ ಮಾರ್ಗದ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಮುಕ್ತಿ ನೀಡುತ್ತಿಲ್ಲ. ಹಾಗಾಗಿ ಈ ಮಾರ್ಗಗಳಲ್ಲಿ ಸಂಚಾರಕ್ಕೆ ಭಾರಿ ತೊಂದರೆಯಾಗುತ್ತಿದೆ ಎಂದು ವಾಹನ ಸವಾರರು ಆಕ್ರೋಶ ವ್ಯಕ್ತಪಡಿಸಿದ್ದಾರೆ.


ಮೈಸೂರು ನಗರದ ಬಹುತೇಕ ರಸ್ತೆಗಳು ಗುಂಡಿಮಯವಾಗಿದ್ದು, ಮಳೆಗಾಲ ಆರಂಭವಾಗಿರುವುದರಿಂದ ಈ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳಲ್ಲಿ ನೀರು ತುಂಬಿಕೊಂಡು ವಾಹನ ಸವಾರರ ಓಡಾಟಕ್ಕೆ ತೀವ್ರ ತೊಂದರೆಯಾಗುತ್ತಿದೆ. ಅಲ್ಲದೆ, ಆಗಾಗ ಅಪಘಾತ ಸಂಭವಿಸುತ್ತಿವೆ ಎಂದು ಸಾರ್ವಜನಿಕರು ದೂರಿದ್ದಾರೆ.

ನಗರದ ವಿವಿಧೆಡೆ ಒಳಚರಂಡಿ ಕಾಮಗಾರಿ, ನೀರು ಸರಬರಾಜು ಪೈಪ್‌ಲೈನ್ ಅಳವಡಿಕೆಗೆ ರಸ್ತೆಗಳನ್ನು ಅಗೆದು, ಸ್ವಲ್ಪ ಪ್ರಮಾಣದಲ್ಲಿ ಮಣ್ಣು ಮುಚ್ಚಿ ಹೋಗಿದ್ದಾರೆ. ಈ ಜಾಗದ ರಸ್ತೆಗಳು ಗುಂಡಿಮಯವಾಗುತ್ತಿದ್ದು, ಮಳೆಗಾಲದಲ್ಲಿ ನೀರು ತುಂಬಿ ವಾಹನ ಸವಾರರ ಓಡಾಟಕ್ಕೆ ತೊಂದರೆಯಾಗುತ್ತಿದೆ ಎಂಬುದು ಸ್ಥಳೀಯವಾಸಿಗಳ ಅಳಲಾಗಿದೆ.



ಕುವೆಂಪುನಗರ ಕಾಂಪ್ಲೆಕ್ಸ್ ಪಕ್ಕದ ರಸ್ತೆಯಿಂದ ಕೆಎಸ್‌ಆರ್‌ಟಿಸಿ ಡಿಪೋವರೆಗಿನ ರಸ್ತೆ ಸಂಪೂರ್ಣ ಗುಂಡಿಮಯವಾಗಿದ್ದು, ಈ ರಸ್ತೆಯಲ್ಲಿ ವಾಹನ ಓಡಿಸುವುದೇ ಕಷ್ಟವಾಗಿದೆ. ಹಾಗಾಗಿ ಮಳೆ ಬಂದಾಗ ಈ ರಸ್ತೆಯಲ್ಲಿ ಗುಂಡಿಗಳಲ್ಲಿ ನೀರು ತುಂಬಿಕೊಳ್ಳುವುದರಿಂದ ಭಾರೀ ತೊಂದರೆಯಾಗುತ್ತಿದೆ.

ಉದಯಗಿರಿ, ಶಾಂತಿನಗರ ಸೇರಿದಂತೆ ಇತರೆ ಬಡಾವಣೆಗಳ ಮೂಲಕ ಮಹದೇವಪುರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಸಂಪೂರ್ಣ ಗುಂಡಿಮಯವಾಗಿ ಇಲ್ಲಿಯೂ ತೊಂದರೆಯಾಗಿದೆ. ಈ ಗುಂಡಿಗಳನ್ನು ಮುಚ್ಚುವಂತೆ ಸಂಬಂಧಪಟ್ಟ ಅಧಿಕಾರಿಗಳಲ್ಲಿ ಅನೇಕ ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಇಲ್ಲಿನ ನಿವಾಸಿಗಳು ಕಿಡಿಕಾರಿದ್ದಾರೆ.



ವಿದ್ಯಾರಣ್ಯಪುರಂನ ಬಹುತೇಕ ರಸ್ತೆಗಳು ಗುಂಡಿಮಯವಾಗಿದೆ. ಕಾಮಗಾರಿಗಳಿಗೆ ರಸ್ತೆಗಳನ್ನು ಅಗೆದು, ಅರೆಬರೆ ಮಣ್ಣಿನಿಂದ ಮುಚ್ಚಿದ್ದಾರೆ. ತಿಂಗಳುಗಳೇ ಕಳೆದರೂ ಡಾಂಬರ್ ಹಾಕದ ಹಿನ್ನೆಲೆಯಲ್ಲಿ ಈ ರಸ್ತೆಗಳಲ್ಲಿ ಓಡಾಟಕ್ಕೆ ತೀವ್ರ ತೊಂದರೆಯಾಗುತ್ತಿದೆ ಎಂದು ಇಲ್ಲಿನ ನಿವಾಸಿ ರಮೇಶ್ 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ನ್ಯೂ ಸಯ್ಯಾಜಿರಾವ್ ರಸ್ತೆಯ ತಿಲಕ್ ನಗರದ ಸಮೀಪದ ಕಿವುಡ-ಮೂಗರ ಶಾಲೆಯ ಮುಂಭಾಗದಲ್ಲಿ ಯುಜಿಡಿ ಪೈಪ್‌ಲೈನ್ ಅಳವಡಿಕೆ ಕಾಮಗಾರಿ ಮುಗಿದು ಹಲವು ತಿಂಗಳೇ ಕಳೆದಿವೆ. ಇತ್ತೀಚೆಗೆ ಸುರಿದ ಮಳೆಗೆ ಮಣ್ಣು ಕೊಚ್ಚಿ ಮತ್ತೆ ಗುಂಡಿ ಬಿದ್ದಿದೆ. ಇದರಿಂದ ವಾಹನ ಸವಾರರು ಸಂಚರಿಸುವುದು ಕಷ್ಟವಾಗುತ್ತಿವೆ ಎಂದು ಸೈಯದ್ ಅಹಮದ್ ಪತ್ರಿಕೆಗೆ ತಿಳಿಸಿದರು.

ಕಾಮಾಕ್ಷಿ ಆಸ್ಪತ್ರೆ ರಸ್ತೆಯಲ್ಲಿ ನೀರು ಸರಬರಾಜು ಪೈಪ್‌ಲೈನ್ ಅಳವಡಿಕೆ ಕಾಮಗಾರಿ ಪೂರ್ಣಗೊಂಡಿದೆ. ಹದಿನೈದು ದಿನಗಳ ಹಿಂದೆ ಈ ಸ್ಥಳದಲ್ಲಿ ಜಲ್ಲಿ-ಕಲ್ಲು ಸುರಿದು ಹೋಗಿದ್ದಾರೆ. ಅದು ಚೆಲ್ಲಾಪಿಲ್ಲಿಯಾಗಿ ರಸ್ತೆಯ ಮೇಲೆ ಬಿದ್ದಿದೆ. ದ್ವಿಚಕ್ರ ವಾಹನಗಳು ಇಲ್ಲಿ ಸಂಚರಿಸುವುದು ತೀವ್ರ ಸಂಕಷ್ಟವಾಗಿದೆ ಎಂದು ಸಾರ್ವಜನಿಕರು ಅಳಲು ತೋಡಿಕೊಂಡಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ರಸ್ತೆ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಗೆಳೆಯ : "ಏನೋ ಲಗ್ನಗಿಗ್ನ ಮಾಡಿಕೊಂಡಿದ್ದೀಯೋ ಇಲ್ವೋ? ಅಥವಾ ಇನ್ನೂ ಹೋಟೆಲ್‌ನಲ್ಲಿ ಊಟ, ಉಪಾಹಾರ ಮಾಡುತ್ತಿರುವೆಯೋ?"
ಆತ : "ಹೌದು"
ಗೆಳೆಯ : ಏನು ಯಾವುದು ಹೌದು?"
ಆತ : "ಎರಡೂ ಹೌದು!"

ಮೈಸೂರು ಮಿತ್ರ

ಬುಧವಾರ, 17 ಮೇ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಜೀವನದಲ್ಲಿ ಎಲ್ಲಾ ಲಾಭಗಳನ್ನು ಒಮ್ಮೆಲೇ ಪಡೆಯಲು ಪ್ರಯತ್ನಿಸುವವನಿಗೆ ಏನೂ ದೊರೆಯದು –ಬೂಮ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಆನೆ ಭಾರ ಆನೆಗೆ ಸೊಳ್ಳೆ ಭಾರ ಸೊಳ್ಳೆಗೆ

ನಿಮ್ಮ ಪತ್ರಗಳು

ಡಿಕೆಶಿ ಮುಖ್ಯಮಂತ್ರಿಯಾಗಲಿ!

ಮಾನ್ಯರೆ,

ಇತ್ತೀಚೆಗೆ ಕರ್ನಾಟಕ ವಿಧಾನಸಭೆಗೆ ಚುನಾವಣೆ ಮುಗಿದು ಫಲಿತಾಂಶ ಬಂದು ಕಾಂಗ್ರೆಸ್ ಪಕ್ಷಕ್ಕೆ ಕರ್ನಾಟಕ ಜನತೆ ಸ್ಪಷ್ಟ ಬಹುಮತ ನೀಡಿ ಆಶೀರ್ವದಿಸಿದ್ದಾರೆ. ಕಾಂಗ್ರೆಸ್ ಪಕ್ಷವು 135 ಸ್ಥಾನಗಳಲ್ಲಿ ಗೆದ್ದು ನಗೆಯ ಬೀರಿದೆ. ಕಳೆದ ಐದು ವರ್ಷಗಳಿಂದ ಆಳಿದ ಭ್ರಷ್ಟ ಬಿಜೆಪಿ ಸರ್ಕಾರವನ್ನು ತೊಲಗಿಸಿ ಕಾಂಗ್ರೆಸ್‌ಗೆ ಆಶೀರ್ವಾದ ಮಾಡಿದ್ದಾರೆ. ಈಗ ಪಕ್ಷವು ಜನತೆ ನೀಡಿರುವ ಅವಕಾಶವನ್ನು ದುರುಪಯೋಗಪಡಿಸಿಕೊಳ್ಳದೆ ಸದುಪಯೋಗಪಡಿಸಿಕೊಂಡು ಮುಂದಿನ ಐದು ವರ್ಷ ಕಾಲ ಯಶಸ್ವಿ ಆಡಳಿತ ನಡೆಸಿಕೊಂಡು ಹೋಗಲೆಂದು ಆಶಿಸುತ್ತೇನೆ.

ಇನ್ನು ಮುಖ್ಯಮಂತ್ರಿ ವಿಚಾರಕ್ಕೆ ಬಂದರೆ ಮಾಜಿ ಸಿಎಂ ಸಿದ್ದರಾಮಯ್ಯ ಹಾಗೂ ಪ್ರದೇಶ ಅಧ್ಯಕ್ಷರಾದ ಡಿ.ಕೆ.ಶಿವಕುಮಾರ್ ನಡುವೆ ಸ್ಪರ್ಧೆ ಇರುವುದು ಸಹಜ. ಪಕ್ಷವನ್ನು ಮುನ್ನಡೆಸಿಕೊಂಡು ಬಂದಿರುವ ಡಿ.ಕೆ. ಶಿವಕುಮಾರ್‌ಗೆ ಮುಖ್ಯಮಂತ್ರಿ ಸ್ಥಾನವನ್ನು ನೀಡಿ. ಈಗಾಗಲೇ ಸಿದ್ದರಾಮಯ್ಯ ಅವರು ಒಮ್ಮೆ ಐದು ವರ್ಷಗಳ ಕಾಲ ಮುಖ್ಯಮಂತ್ರಿಗಳಾಗಿ ಯಶಸ್ವಿ ಆಡಳಿತ ನಡೆಸಿದ್ದಾರೆ. ಈಗ ಡಿಕೆಶಿ ಅವರಿಗೆ ಅವಕಾಶ ಮಾಡಿಕೊಡಿ. ಯಾರೇ ಮುಖ್ಯಮಂತ್ರಿಯಾದರೂ ಅವರವರ ಅಭಿಮಾನಿಗಳು ಕಚ್ಚಾಡದೆ ಸಂತೋಷದಿಂದ ಒಪ್ಪಿಕೊಂಡು ಮುಂದೆ ಬರಲಿರುವ ಲೋಕಸಭಾ ಚುನಾವಣೆಯಲ್ಲೂ ಇದೇ ರೀತಿ ಪಕ್ಷವನ್ನು ಅಧಿಕಾರಕ್ಕೆ ತರಲು ಪ್ರಯತ್ನಿಸಲೆಂದು ಹಾರೈಸುತ್ತೇನೆ. ವಿಧಾನಸಭೆಗೆ ಆಯ್ಕೆಯಾದ ಎಲ್ಲಾ ಕಾಂಗ್ರೆಸ್ ಶಾಸಕರಿಗೂ ಹೃದಯಪೂರ್ವಕ ಅಭಿನಂದನೆಗಳು.

–ಬಿ ಚಾಮರಾಜ ಅರಸ್, ಕುವೆಂಪುನಗರ, ಮೈಸೂರು.

ಪ್ರಯಾಣಿಕರ ರೈಲು ಬೋಗಿಯಲ್ಲಿ ಅಂಚೆ ಸರಕು ಸಾಗಣೆ ಎಷ್ಟು ಸರಿ ...?

ಮಾನ್ಯರೆ,

ಭಾರತೀಯ ರೈಲ್ವೆ ಇಲಾಖೆಯು ಭಾರತದ ಅತಿದೊಡ್ಡ ಸಾರಿಗೆಗೆ ಹೆಸರುವಾಸಿಯಾಗಿದ್ದು, ಬಡವರು, ಶ್ರೀಮಂತರು ಹಾಗೂ ಇತರರಿಗೆ ಕೈಗೆಟಕುವ ದರದಲ್ಲಿ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಪ್ರಯಾಣ ಮಾಡಲು ಅನುಕೂಲವಾಗಿದೆ. ಕೆಲವು ಎಕ್ಸ್‌ಪ್ರೆಸ್ ಹಾಗೂ ಸೂಪರ್ ಫಾಸ್ಟ್ ರೈಲಿನಲ್ಲಿ 16–18 ಬೋಗಿಗಳಿದ್ದು, ಅದರಲ್ಲಿ SL (sleeper class) ಮತ್ತು AC [ಹವಾನಿಯಂತ್ರಿತ] ಬೋಗಿಗಳೆ ಹೆಚ್ಚಾಗಿವೆ. ಇಂತಹ ಬೋಗಿಗಳಿಗೆ ರಿಸರ್ವ್ ಟಿಕೆಟ್ ಮಾಡಿಸಿ ಪ್ರಯಾಣಿಸುತ್ತಾರೆ. ಇನ್ನು ರೈಲು ಹೊರಡುವ ಸಮಯದಲ್ಲಿ ಜನರಲ್ ಟಿಕೇಟ್ ಖರೀದಿ ಮಾಡಿ ಪ್ರಯಾಣಿಸುವವರಿಗೆ ರೈಲಿನ ಇಂಜಿನ್ ಹಿಂದೆ ಒಂದು ಬೋಗಿಯಾದರೆ, ರೈಲಿನ ಕೊನೆಯಲ್ಲಿ ಮತ್ತೊಂದು ಬೋಗಿ ಇರುತ್ತದೆ. ಈ ಎರಡು ಬೋಗಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಜನರಲ್ ಟಿಕೆಟ್ ಪಡೆದು ಪ್ರಯಾಣಿಸುವವರಿಗೆ ಮೀಸಲಾದ ರೈಲ್ವೆ ಸೀಟಿನಲ್ಲಿ ಭಾರತೀಯ ಅಂಚೆ ಇಲಾಖೆಯ ಸರಕನ್ನು ಸಾಗಿಸುತ್ತಿರುವುದರಿಂದ ಈ ಬೋಗಿಯ ಪ್ರಯಾಣಿಕರಿಗೆ ಸ್ಥಳವೇ ಇಲ್ಲದೆ, ಸ್ಲೀಪರ್ ಬೋಗಿಗೆ ಹತ್ತಿ ಜಗಳ ಮಾಡುತ್ತಿದ್ದು ರೈಲಿನಲ್ಲಿ ಪ್ರಯಾಣ ಮಾಡುವವರಿಗೆ ಕಿರಿಕಿರಿಯಾಗುತ್ತಿದೆ.

ಪ್ರತಿನಿತ್ಯ ಕಾಚಿಗೂಡದಿಂದ ಬೆಂಗಳೂರಿನವರೆಗೂ ಇವುಗಳನ್ನು ಸಾಗಿಸುತ್ತಿದ್ದು, ಈ ಸರಕನ್ನು ಇಳಿಸುವಾಗ 15–20 ನಿಮಿಷ ತಡವಾಗುತ್ತದೆ. ಈ ರೈಲುಗಾಡಿಯು ಬೆಂಗಳೂರಿನಿಂದ ಮೈಸೂರಿಗೆ ಹೊರಡಲು ತಡವಾಗುತ್ತಿದ್ದು, ಸಮಯಕ್ಕೆ ಸರಿಯಾಗಿ ತಲುಪದೆ ಸಾರ್ವಜನಿಕರ ಕೆಲಸಗಳು ಆಗುತ್ತಿಲ್ಲವಾದ್ದರಿಂದ ರೈಲನ್ನು ದೂರುತ್ತಿದ್ದಾರೆ. ಇದಕ್ಕೆ ಸಂಬಂಧಪಟ್ಟ ರೈಲ್ವೆಯ ಅಧಿಕಾರಿಗಳು ಪ್ರಯಾಣಿಕರಿಗೆ ಮೀಸಲಿರುವ ಬೋಗಿಗಳಲ್ಲಿ ಅಂಚೆ ಇಲಾಖೆಯ ಹಾಗೂ ಇತರೆ ಸರಕನ್ನು ಸಾಗಿಸಲು ಅನುಮತಿ ನೀಡಿ ಹಣಗಳಿಸುತ್ತಿರುವುದು ರೈಲ್ವೆ ಇಲಾಖೆಯು ದೇಶದ ನಾಗರಿಕರಿಗೆ ಮಾಡುತ್ತಿರುವ ದೊಡ್ಡ ಅಪಮಾನವಾಗಿದೆ. ಇಂತಹ ಅಶಿಸ್ತು ಉಲ್ಲಂಘಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕೈಗೊಳ್ಳಲು ಉನ್ನತ ರೈಲ್ವೆ ಅಧಿಕಾರಿಗಳು ಮುಂದಾಗಬೇಕು.

–ನಾಗೇಶ್, ಮಾನಸಗಂಗೋತ್ರಿ

ಪ್ರಗತಿಯ ಪಥ

ಮಾನ್ಯರೇ,

ಅನೈತಿಕ ರಾಜಕಾರಣಕ್ಕೆ ರೆಸಾರ್ಟ್ ಪ್ರಹಸನಕ್ಕೆ ಅವಕಾಶ ನೀಡದಂತೆ ನಾಡಿನ ಮತದಾರರು ತೀರ್ಪು ನೀಡಿದ್ದಾರೆ. ಆ ಮೂಲಕ ಪ್ರಬುದ್ಧತೆ ಎತ್ತಿಹಿಡಿದಿದ್ದಾರೆ. ಸಂವಿಧಾನದ ಅಸ್ಮಿತೆ ಸರ್ಕಾರ ರಚಿಸಲು ಒಂದೇ ಪಕ್ಷಕ್ಕೆ ದೊರೆತಿದೆ. ಬಹುಮತದ ಸ್ಪಷ್ಟತೆ ಸರ್ವ ಜನಾಂಗದ ತೋಟದಲ್ಲಿ ಸಾಮರಸ್ಯದ ಹೂವರಳಿ ಬಹುತ್ವದ ಭಾವ ಮರಳಿ ತೆರೆದುಕೊಳ್ಳಲಿ. ಪ್ರಾತಿಯ ಪಥ ಸಾಗಲಿ ಪ್ರಜಾಪ್ರಭುತ್ವದ ರಥ.

–ಟಿ. ಸತೀಶ್ ಜವರೇಗೌಡ, ಮೈಸೂರು

ನುಡಿದಂತೆ ನಡೆಯಿರಿ...

ಮಾನ್ಯರೇ,

ಯಾವುದೇ ಪಕ್ಷ ಚುನಾವಣೆಯ ಸಂದರ್ಭದಲ್ಲಿ ತನ್ನ ಪ್ರಣಾಳಿಕೆಯಲ್ಲಿ ನೀಡಿದ ಆಶ್ವಾಸನೆ ಹಾಗೂ ಭರವಸೆಗಳನ್ನು, ಗೆದ್ದು ಅಧಿಕಾರ ಹಿಡಿದ ನಂತರ ಪೂರೈಸಬೇಕು. ಜನರು ಪಕ್ಷದ ಆಶ್ವಾಸನೆಗಳನ್ನು ನಂಬಿ ವಿಶ್ವಾಸದಿಂದ ಮತ ಹಾಕಿರುತ್ತಾರೆ. ಆ ವಿಶ್ವಾಸ, ನಂಬಿಕೆಯನ್ನು ಉಳಿಸಿಕೊಳ್ಳುವ ಜವಾಬ್ದಾರಿ ಜನ ಪ್ರತಿನಿಧಿಗಳಿಗೆಬೇಕು. ಆಗ ಮಾತ್ರ ಅದು ಪ್ರಜಾಪ್ರಭುತ್ವಕ್ಕೆ ಸಂದ ಜಯವಾಗುತ್ತದೆ.


–ಪುಷ್ಪಲತಾ, ಮೈಸೂರು.

ಯೋಗ್ಯತೆಗೆ ಯೋಗಾಯೋಗ

ಮಾನ್ಯರೆ,

ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಮತದಾರರು ರಾಜಕೀಯದಲ್ಲಿ ಪ್ರಜೆಗಳೇ ಮಹಾರಾಜರು ಎಂಬ ಮಾತನ್ನು ನಿಜ ಮಾಡಿದ್ದಾರೆ. ಯಾವ ರಾಜಕೀಯ ವಿಶ್ಲೇಷಕ ಕಲ್ಪನೆ ಕೂಡ ಮಾಡಿಕೊಳ್ಳದಂತೆ ಫಲಿತಾಂಶ ಹೊರತಂದಿದ್ದಾರೆ. ಪ್ರದೀಪ್ ಈಶ್ವರ್ ಅವರನ್ನು ವಿಧಾನಸಭೆಗೆ ಆಯ್ಕೆ ಮಾಡಿದ್ದು ಸಮಯೋಚಿತ ಮತ್ತು ಪ್ರಜ್ಞಾವಂತಿಕೆ ಹಿಡಿದ ಕೈಗನ್ನಡಿ. ಪ್ರದೀಪ್ ಈಶ್ವರ್ ಅವರು ಸಾವಿರಾರು ಬಡ ಕುಟುಂಬದ ಮಕ್ಕಳಿಗೆ ನೀಟ್ ಪರೀಕ್ಷೆಯಲ್ಲಿ ಉತ್ತಮ ಅಂಕಗಳೊಂದಿಗೆ ತೇರ್ಗಡೆ ಮಾಡಿಸಿ ಡಾಕ್ಟರ್ ಆಗುವ ಕನಸು ನನಸು ಮಾಡಿದ್ದಾರೆ. ಇಲ್ಲಿ ಪ್ರಮುಖ ಅಂಶವೆಂದರೆ ಪ್ರದೀಪ್ ಈಶ್ವರ್ ಒಬ್ಬ ಸಾಮಾನ್ಯ ಕುಟುಂಬದ ಮಗನಾಗಿ ಸಾಧನೆಗೈದವರು. ಆದರೆ ಅದೇ ಡಾ.ಸುಧಾಕರ್ ಅವರು ಭೂ ಮಾಲೀಕರ ಮಗ ಮತ್ತು ಎಲೈಟ್ ಕ್ಯಾಂಡಿಡೇಟ್. ಇಲ್ಲಿ ಹಣ ಬಲದ ಮುಂದೆ ಜನಬಲ ಮೇಲು ಮತ್ತು ಯೋಗ್ಯತೆಗೇ ಯೋಗಾಯೋಗ ಎಂದು ಸಾಬೀತಾಗಿದೆ. ಪ್ರದೀಪ್ ಈಶ್ವರ್ ಅವರು ಚಿಕ್ಕಬಳ್ಳಾಪುರ ಜನತೆಯ ಕುಂದು ಕೊರತೆಗಳಿಗೆ ಸ್ಪಂದಿಸುತ್ತಾರೆ ಎಂಬುದರಲ್ಲಿ ಎರಡು ಮಾತಿಲ್ಲ. ಇದೇ ರೀತಿ ಎಲ್ಲಾ ಸಾರ್ವತ್ರಿಕ ಚುನಾವಣೆಯಲ್ಲಿ ಜನರು ಯೋಗ್ಯ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕಿದೆ. ಇದಕ್ಕೆ ಚಿಕ್ಕಬಳ್ಳಾಪುರ ನಿದರ್ಶನವಾಗಿದೆ.

–ಡಾ.ವಿಜಯಕುಮಾರ್ ಎಚ್.ಕೆ., ರಾಯಚೂರು



ಕೆಬಿಜಿಯವರ

ಭೂಮಂತ್ರ... ಭೂಮಂತ್ರ... ಭೂಮಂತ್ರ...


ವಿಜಯಿ ಮತದಾರ ಪ್ರಭು

ಕರ್ನಾಟಕ ವಿಧಾನಸಭಾ ಚುನಾವಣೆ–2023





ಮಲ್ಲಿಕಾರ್ಜುನ ಖರ್ಗೆ



ಡಿ.ಕೆ. ಶಿವಕುಮಾರ್



ಸಿದ್ದರಾಮಯ್ಯ



ಹಿಂದೆ 1980ರ ಲೋಕಸಭಾ ಚುನಾವಣೆಯಲ್ಲಿ ಜನತಾ ಪಕ್ಷವನ್ನು ಹೀನಾಯವಾಗಿ ಸೋಲಿಸಿ ಜಯಭೇರಿ ಬಾರಿಸಿದಂತಹ ಇಂದಿರಾ ಗಾಂಧಿ ಅವರನ್ನು ಈ ಗೆಲುವಿನ ಬಗ್ಗೆ ನಿಮಗೇನನಿಸುತ್ತದೆ ಎಂದು ಪತ್ರಕರ್ತರು ಪ್ರಶ್ನಿಸಿದಾಗ ಅದಕ್ಕೆ ಅವರು ನೀಡಿದ್ದ ಉತ್ತರ ಹೀಗಿತ್ತು: "ಇಡೀ ಜಗತ್ತು ವಿಜೇತರನ್ನು ಪ್ರೀತಿಸುತ್ತದೆ".

ಸೋತವರು ಅನಾಥರಲ್ಲ ಎಂಬುದಾಗಿ ಅವರೇನು ಹೇಳಲಿಲ್ಲ. ಆದರೆ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಸಾಧಿಸಿರುವ ಅಭೂತಪೂರ್ವ ಜಯ ನೋಡಿದಾಗ ಒಂದಂತೂ ಸ್ಪಷ್ಟವಾಗಿದೆ. ಇಡೀ ಜಗತ್ತು ಇಲ್ಲವೇ ಇಡೀ ಕರ್ನಾಟಕ ಕಾಂಗ್ರೆಸ್ ಪಕ್ಷವನ್ನು ಪ್ರೀತಿಸದೇ ಇರಬಹುದು, ಆದರೆ ಬಿಜೆಪಿಯನ್ನಂತೂ ಅನಾಥವನ್ನಾಗಿಸಿಬಿಟ್ಟಿದೆ.

ನಿಚ್ಚಳ ಬಹುಮತದೊಂದಿಗೆ ಅಭೂತಪೂರ್ವ ಗೆಲುವು ಸಾಧಿಸಿರುವ ಕಾಂಗ್ರೆಸ್ ಈಗ ಸುಭದ್ರ ಸ್ಥಿತಿಯಲ್ಲಿದೆ. ಒಂದು ವೇಳೆ ಅಲ್ಪ ಬಹುಮತ ಬಂದಿದ್ದರೆ ಕಾಂಗ್ರೆಸ್ ಪಕ್ಷಕ್ಕೆ ಈ ಹಿಂದೆ ಆಗಿರುವಂತೆ "ಆಪರೇಷನ್ ಕಮಲ" ಭೀತಿ ಆವರಿಸದೆ ಇರುತ್ತಿರಲಿಲ್ಲ. ಆದರೆ ಆಪರೇಷನ್ ಈಗ ಕಷ್ಟ ಸಾಧ್ಯ. ಅಷ್ಟಕ್ಕೂ ಈ ಬಾರಿಯ ಚುನಾವಣೆಯಲ್ಲಿ ನಿಜವಾದ ವಿಜಯಿ ಯಾರು ಎಂದರೆ ಅದು ಮತದಾರ. ಇಲ್ಲಿ ಮತ್ತೊಬ್ಬ ಅನಾಥ ಜೆಡಿಎಸ್.

2018ರ ವಿಧಾನಸಭೆ ಚುನಾವಣೆ ನಂತರ ಕಾಂಗ್ರೆಸ್–ಜೆಡಿಎಸ್ ರಚಿಸಿದ ದೋಸ್ತಿ ಸರ್ಕಾರ ಪತನಗೊಂಡು ಆಪರೇಷನ್ ಕಮಲ ಎಂಬ ಅನೈತಿಕ ನಡೆಯಿಂದ 2019 ರಲ್ಲಿ ಬಿಜೆಪಿ ಸರ್ಕಾರ ಜನ್ಮ ತಾಳಿತು.

ಈ ಬಾರಿ ಜೆಡಿಎಸ್ ಮೂರನೇ ಬಾರಿ ಅದೃಷ್ಟ ಪರೀಕ್ಷೆಗೆ ಇಳಿದಿತ್ತು. ಕಡಿಮೆ ಸ್ಥಾನಗಳನ್ನು ಗಳಿಸಿಯೂ, ಅತಂತ್ರ ಸ್ಥಿತಿ ನಿರ್ಮಾಣವಾದರೆ ಮತ್ತೆ ಮುಖ್ಯಮಂತ್ರಿಗಾದಿಗೇರಬಹುದೆಂದು ಕನಸು ಕಾಣುತ್ತಿತ್ತು. ಆದರೆ ಜೆಡಿಎಸ್ ದುರದೃಷ್ಟ ಹಾಗಾಗಲಿಲ್ಲ. ಈ ಬಾರಿ ರಾಜಕೀಯವಾಗಿ ಅಕ್ಷರಶಃ ಜೆಡಿಎಸ್ ಅನಾಥವಾಗಿದೆ.

ಈ ನಡುವೆ ಬಿಜೆಪಿ ಸ್ಥಿತಿ ನಿಜಕ್ಕೂ ಶೋಚನೀಯ. ಇದು ಒಂದು ರೀತಿಯ ಸ್ವಯಂಕೃತ ಅಪರಾಧ. ಜೊತೆಗೆ ರಾಜಕೀಯ ಆಘಾತ. ಗಾಯಗೊಂಡ ಹುಲಿಯಂತೆ ಗಾಯಗೊಂಡಿರುವ ಬಿಜೆಪಿಯು ಐದು ವರ್ಷಗಳ ಕಾಲ ಅದಕ್ಕೆ ಮುಲಾಮು ಹಚ್ಚಿಕೊಳ್ಳುತ್ತಾ ದಿನದೂಡಬೇಕಾಗಿದೆ. 2013 ರಿಂದ 2018ರ ಅವಧಿಯಲ್ಲೂ ಇಂತಹುದೇ ಪರಿಸ್ಥಿತಿ ಉಂಟಾಗಿತ್ತು. ಸಿದ್ದರಾಮಯ್ಯ ಐದು ವರ್ಷಗಳ ಪೂರ್ಣಾವಧಿಗೆ ಮುಖ್ಯಮಂತ್ರಿಯಾಗಿ ಆಡಳಿತ ನೀಡಿ ಯಶಸ್ವಿಯಾಗಿದ್ದರು. ಮೊಘಲ್ ಆಳ್ವಿಕೆಯ ಕಡೇ ದಿನಗಳಂತೆ ಅಧಃಪತನಕ್ಕೆ ಇಳಿದಿದ್ದ ಕಾಂಗ್ರೆಸ್ ಹೈಕಮಾಂಡ್ ಕೂಡ ಆಗ ಕೈಕಟ್ಟಿ ಕೂರುವಂತಾಯಿತು.

ಈ ಬಾರಿ ನಮ್ಮೆಲ್ಲರಲ್ಲೂ ಉದ್ಭವಿಸಿರುವ ಪ್ರಶ್ನೆ ಎಂದರೆ ಮುಖ್ಯಮಂತ್ರಿ ಯಾರಾಗಬಹುದು? ಕಾಂಗ್ರೆಸ್‌ನ ಇಬ್ಬರು ಪವರ್‌ಫುಲ್ ನಾಯಕರಾದ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ನಡುವೆ ಹಂಚಿಕೆಯಾಗಬಹುದೇ? ಕಳೆದ ಬಾರಿ ಸಿದ್ದರಾಮಯ್ಯ ಪ್ರತಿಪಕ್ಷದ ನಾಯಕರಾಗಿದ್ದರೆ, ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷರು. ಸಿದ್ದರಾಮಯ್ಯ ಈಗಾಗಲೇ ಒಮ್ಮೆ ಮುಖ್ಯಮಂತ್ರಿಯಾಗಿ ಅಧಿಕಾರ ಅನುಭವಿಸಿದ್ದಾರೆ. ಹಾಗೆ ನೋಡಿದರೆ ಡಿ.ಕೆ.ಶಿವಕುಮಾರ್‌ಗೆ ಈ ಬಾರಿ ಆ ಗೌರವ ಸಲ್ಲುವುದು ಸೂಕ್ತ ಎನ್ನಿಸುತ್ತದೆ. 1999ರಲ್ಲಿ ಕಾಂಗ್ರೆಸ್ ಪಕ್ಷ ಜಯಗಳಿಸಿದಾಗ ಆಗ ಕೆಪಿಸಿಸಿ ಅಧ್ಯಕ್ಷರಾಗಿದ್ದ ಎಸ್.ಎಂ. ಕೃಷ್ಣ ಸಹಜವಾಗಿ ಮುಖ್ಯಮಂತ್ರಿ ಸ್ಥಾನಕ್ಕೆ ಆಯ್ಕೆಯಾದರು. ಈ ಹಿಂದೆ ದೇವರಾಜ ಅರಸ್ ಅವರನ್ನು ಇದೇ ರೀತಿ ಇಂದಿರಾ ಗಾಂಧಿ ನೇಮಕ ಮಾಡಿದ್ದರು. ಈಗ ಏಕೆ ಡಿ.ಕೆ.ಶಿವಕುಮಾರ್ ಆಗಬಾರದು? ಎಂಬ ಪ್ರಶ್ನೆ ಸ್ವಾಭಾವಿಕವಾಗಿ ಉದ್ಭವಿಸುತ್ತದೆ.

ಆದರೆ ರಾಜಕೀಯ ಎಂಬುದು ಹಲವಾರು ಸಾಧ್ಯತೆಗಳ ಆಗರ. ಇಲ್ಲಿ ಅಧಿಕಾರಕ್ಕಾಗಿ ರಾಜಕಾರಣಿಗಳ ನಡುವೆ ಸಮರ ನಡೆಯುತ್ತಲೇ ಇರುತ್ತದೆ. ರಾಜಕಾರಣಿಗೆ ಸದಾ ಅಧಿಕಾರದ ಆಸೆ. ಸಿದ್ದರಾಮಯ್ಯ ಪಕ್ಕಾ ರಾಜಕಾರಣಿ. ಅವರ ದೇಹದ ಕಣ ಕಣದಲ್ಲೂ ಇದು ಹಾಸು ಹೊಕ್ಕಿದೆ. ಸಿಎಂ ರೇಸ್‌ನಲ್ಲಿ ಸಿದ್ದರಾಮಯ್ಯಗೆ ಟಕ್ಕರ್ ಕೊಡಲು ಸಜ್ಜಾಗಿರುವ ಡಿ.ಕೆ. ಶಿವಕುಮಾರ್ ಕೂಡ ಗಟ್ಟಿ ಆಸಾಮಿ. ಸಾಮಾನ್ಯವಾಗಿ, ರೂಢಿಯಲ್ಲಿರುವಂತೆ, ಕಾನೂನಾತ್ಮಕವಾಗಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ನಾಯಕನ ಆಯ್ಕೆಯಾಗುತ್ತದೆ. ಆದರೆ ಅದು ಹಾಗೆ ಆಗಿಲ್ಲ. ಆಯ್ಕೆ ಪ್ರಕ್ರಿಯೆ ಕಾಂಗ್ರೆಸ್ ಹೈಕಮಾಂಡ್ ಅಂಗಳಕ್ಕೆ ಹೋಗಿದೆ. ಈಗ ಇಡೀ ದೇಶದಲ್ಲಿ ಎಲ್ಲ ರಾಜಕೀಯ ಪಕ್ಷಗಳ ಸಿಎಂಗಳ ಆಯ್ಕೆ ಆಗುತ್ತಿರುವುದೇ ಹೈಕಮಾಂಡ್ ಮಟ್ಟದಲ್ಲಿ. ಇದರಲ್ಲಿ ಎರಡು ಮಾತಿಲ್ಲ.

ಈ ಎಲ್ಲದರ ನಡುವೆ ಒಂದು ಪ್ರಶ್ನೆ ಕಾಂಗ್ರೆಸ್ ಪಕ್ಷದಲ್ಲಿ ಚರ್ಚೆಯಾಗುತ್ತಿದೆ. ಕಾಂಗ್ರೆಸ್‌ನ ಈ ಅಭೂತಪೂರ್ವ ಗೆಲುವಿಗೆ ಕಾರಣ ಯಾರು? ಆದರೆ ಕರ್ನಾಟಕ ಕಾಂಗ್ರೆಸ್ ನಾಯಕರು ಈಗಾಗಲೇ ಈ ಗೆಲುವಿನ ಶ್ರೇಯಸ್ಸನ್ನು ರಾಹುಲ್ ಗಾಂಧಿ ಚರಣಾರವಿಂದಗಳಿಗೆ ಸಮರ್ಪಿಸಿ ಬಿಟ್ಟಿದ್ದಾರೆ. ಇವರೇ ಈಗ ಯಾರು ಮುಖ್ಯಮಂತ್ರಿ ಎಂಬುದನ್ನು ನಿರ್ಧರಿಸುತ್ತಾರೆ. ಸಾಮಾನ್ಯವಾಗಿ ಹೇಳುವ ಪ್ರಕಾರ ಸಿದ್ದರಾಮಯ್ಯ ಅವರಿಗೆ ರಾಹುಲ್ ಗಾಂಧಿ ಬೆಂಬಲ ಇದ್ದರೆ, ಡಿ.ಕೆ. ಶಿವಕುಮಾರ್‌ಗೆ ಸೋನಿಯಾ ಗಾಂಧಿ, ಪ್ರಿಯಾಂಕಾಗಾಂಧಿ ಕೃಪಾಶೀರ್ವಾದ, ಬಲವಿದೆ. ಇಬ್ಬರೂ ಅಧಿಕಾರ ಹಂಚಿಕೊಳ್ಳಿ ಎಂದು ಕಾಂಗ್ರೆಸ್ ಹೇಳಬಹುದು. ಪರಿಸ್ಥಿತಿ ಈ ರೀತಿ ಆದರೆ ಮತ್ತೊಂದು ಪ್ರಶ್ನೆಯೂ ಉದ್ಭವಿಸುತ್ತದೆ. ಮೊದಲಿಗೆ ಯಾರು ಮುಖ್ಯಮಂತ್ರಿ ಗದ್ದುಗೆ ಏರುವುದು? ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವ ವಿಜೃಂಭಣೆಯ ಪಟ್ಟಾಭಿಷೇಕವನ್ನು ಇಡೀ ಕರುನಾಡು ನೋಡುತ್ತದೆ. ಎರಡೂವರೆ ವರ್ಷದ ನಂತರ ಅಧಿಕಾರದ ಗದ್ದುಗೆಯನ್ನು ಮತ್ತೊಬ್ಬರಿಗೆ ಹಸ್ತಾಂತರವಾಗುವುದರಲ್ಲಿ ಯಾವ ಸಂಭ್ರಮವೂ ಇರುವುದಿಲ್ಲ. ಸದ್ಯಕ್ಕೆ ಕಾಂಗ್ರೆಸ್‌ನಲ್ಲಿ "ಯಾರಾಗುತ್ತಾರೆ ಸಿಎಂ" ಎಂಬ ನಾಟಕದ ಅಧ್ಯಾಯ ಮೊದಲು ಅಂತ್ಯವಾಗಬೇಕು. ಕಾದು ನೋಡೋಣ. ನಿನ್ನೆ ರಾತ್ರಿ ಈ ನಿರ್ಣಯ ಆದಾಗಲೇ ಆಗಿರಬೇಕು.

ಹೊಸ ಮುಖ್ಯಮಂತ್ರಿ ಬಗ್ಗೆ ನಾನು ಮೆಲುಕು ಹಾಕುತ್ತಿದ್ದಾಗ ಅನಿಸಿದ್ದು: ಏನೇ ನಡೆಯಲಿ ಕರ್ನಾಟಕಕ್ಕೆ ಮೊದಲ ದಲಿತ ಮುಖ್ಯಮಂತ್ರಿ ಸಿಗುವ ಸಾಧ್ಯತೆ ಇದೆಯಾ? ಎಐಸಿಸಿ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆ ಸಹ ಈ ಚುನಾವಣೆಯಲ್ಲಿ ಬೆವರು ಸುರಿಸಿದ್ದಾರೆ. ಅದರಂತೆ 2013 ರಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿದ್ದರೂ ಚುನಾವಣೆಯಲ್ಲಿ ಸೋತ ಡಾ. ಜಿ. ಪರಮೇಶ್ವರ್ ಈಗ ಗೆಲುವಿನೊಂದಿಗೆ ಮುಂಚೂಣಿಯಲ್ಲಿದ್ದಾರೆ. ಈ ಬಗ್ಗೆಯೂ ಪ್ರಶ್ನೆಗಳು ಉದ್ಭವಿಸಬಹುದು. ಅದಕ್ಕೆ ಹೈಕಮಾಂಡ್ ಚಾಣಾಕ್ಷ ರೀತಿ ಉತ್ತರಿಸುವ ಸಾಧ್ಯತೆ ಇದೆ. ನೋಡೋಣ.

ಒಟ್ಟಾರೆ, ಒಂದು ವಿಷಯವಂತೂ ನಮಗೆಲ್ಲರಿಗೂ ಸಮಾಧಾನ ತಂದಿದೆ. ಸದ್ಯ ಈ ಬಾರಿ ಸ್ಥಿರ ಸರ್ಕಾರ ಸಿಕ್ಕಿರುವುದು. ಇದೇ ಕಾರಣಕ್ಕಾಗಿಯೇ ನಾನು ಹೇಳಿರುವುದು "ವಿಜಯಿ ಮತದಾರ ಪ್ರಭು" ಎಂದು. ಸ್ಥಿರ ಸರ್ಕಾರದಿಂದ ಮಾತ್ರ ಉತ್ತಮ ಆಡಳಿತ ಸಾಧ್ಯ. ಈ ಹಿಂದೆ ಎಸ್.ಎಂ.ಕೃಷ್ಣ ಅವಧಿ, ಸಿದ್ದರಾಮಯ್ಯ ಅವಧಿಯಲ್ಲಿ ಐದು ವರ್ಷಗಳ ಪೂರ್ಣ ಆಡಳಿತವನ್ನು ನೋಡಿದ್ದೇವೆ. ಸಿದ್ದರಾಮಯ್ಯ ಆಡಳಿತಾವಧಿಯಲ್ಲಿ ಕೆಲವು ವಿವಾದಾತ್ಮಕ ತೀರ್ಮಾನಗಳಾಗಿದ್ದವು. ಧಾರ್ಮಿಕವಾಗಿ ವೀರಶೈವ – ಲಿಂಗಾಯತ ವಿಭಜನೆ, ಟಿಪ್ಪು ಜಯಂತಿ ನಿರ್ಧಾರ ಭಾರೀ ಚರ್ಚೆಗೆ ಕಾರಣವಾಗಿದ್ದವು. ಇದರಿಂದಾಗಿ ಕಾಂಗ್ರೆಸ್ 2018 ಚುನಾವಣೆಯಲ್ಲಿ ಭಾರೀ ಬೆಲೆ ತೆರಬೇಕಾಯಿತು. ಇವೆಲ್ಲದರ ಹೊರತಾಗಿಯೂ ಸಿದ್ದರಾಮಯ್ಯ ಕರ್ನಾಟಕದಲ್ಲಿ ಕೇವಲ ಸ್ಥಿರ ಆಡಳಿತ ನೀಡಿದ್ದರು.

ಕರ್ನಾಟಕದಲ್ಲಿ ಬಿಜೆಪಿಯು ಕೆಲವೊಂದು ಸಮಸ್ಯೆಗಳಿಂದ ಹೊರ ಬರಬೇಕಾಗಿದೆ. ವೈಯಕ್ತಿಕ ಶಕ್ತಿ ಪ್ರದರ್ಶನ ಹಾಗೂ ಅಧಿಕಾರ ವ್ಯಾಮೋಹ ಬಿಡಬೇಕಾಗಿದೆ. ಸ್ವಾಮಿ ವಿವೇಕಾನಂದರು ಒಮ್ಮೆ ಹೇಳಿದ್ದರು: ಧರ್ಮವನ್ನು ದರಿದ್ರ ನಾರಾಯಣನಿಗೆ ಅವನ ಹೊಟ್ಟೆಯ ಮೂಲಕ ಬೋಧಿಸಬೇಕು. ಕಾಂಗ್ರೆಸ್ ಈ ವಿಷಯವನ್ನು ಬಡವರ (ಬಡತನ ರೇಖೆಗಿಂತ ಕೆಳಗಿರುವವರು) ಬಳಿಗೆ ತೆಗೆದುಕೊಂಡು ಹೋಗದೇ ಇದ್ದರು, ಬಡವರ ಹೊಟ್ಟೆಗೆ ಅನ್ನವನ್ನು ನೀಡಿದೆ. ಪ್ರತಿಯೊಬ್ಬರಿಗೆ 10 ಕೆಜಿ ಅಕ್ಕಿಯ ಗ್ಯಾರಂಟಿ ಕೊಟ್ಟಿದ್ದು ನೆನಪಿದೆಯಾ? ಇದೇ ಈ ಚುನಾವಣೆಯ ಯಶಸ್ಸಿನ ಮೂಲ ಮಂತ್ರ ಎಂಬುದು ನನ್ನ ಅಭಿಪ್ರಾಯ. ಮಧ್ಯಮವರ್ಗದವರು ಹಾಗೂ ಬಡವರೇ ಚುನಾವಣೆಯಲ್ಲಿ ಅಧಿಕ ಸಂಖ್ಯೆಯಲ್ಲಿ ಮತ ಹಾಕುವವರು. ಇತರರು ಮತದಾನ ದಿನದ ರಜೆಯಲ್ಲಿ ಮೋಜು ಮಾಡುತ್ತಾರೆ.

ಕಾಂಗ್ರೆಸ್‌ನವರು ಈ ಬಾರಿ ಮಾಡಿರುವ ಪ್ರಚಾರ ವೈಖರಿ ನಿಜಕ್ಕೂ ಅಚ್ಚರಿ ಸಂಗತಿ. ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಸಹಿ ಹಾಕಿರುವ **ಗ್ಯಾರಂಟಿ ಕಾರ್ಡ್** ಅಡಿ ಆಹಾರ ಭದ್ರತೆ ಒದಗಿಸಿದೆ. ಪ್ರತಿ ಮನೆ ಯಜಮಾನಿಗೆ ತಿಂಗಳಿಗೆ 2000 ರೂಪಾಯಿ ನೀಡುವ ಗೃಹಲಕ್ಷ್ಮಿ ಯೋಜನೆ, ಅನ್ನಭಾಗ್ಯ ಯೋಜನೆಯಡಿ ಬಡವರಿಗೆ ತಲಾ 10 ಕೆಜಿ ಉಚಿತ ಅಕ್ಕಿ, ಗೃಹ ಜ್ಯೋತಿ ಯೋಜನೆಯಡಿ 200 ಯೂನಿಟ್ ಉಚಿತ ವಿದ್ಯುತ್, ನಿರುದ್ಯೋಗಿ ಪದವೀಧರರಿಗೆ 3000, ಡಿಪ್ಲೊಮಾದಾರರಿಗೆ 1500 ರೂಪಾಯಿ ನಿರುದ್ಯೋಗ ಭತ್ಯೆ ನೀಡುವ ಯುವನಿಧಿ, ಮಹಿಳೆಯರಿಗೆ ಸಾರಿಗೆ ಬಸ್‌ನಲ್ಲಿ ಉಚಿತ ಪ್ರಯಾಣ ಯೋಜನೆಗಳು ಅಂತೂ ಜನಮನ ಗೆದ್ದಿವೆ.

ನೆನಪಿರಲಿ, ಕಾಂಗ್ರೆಸ್ ಈ ಬಾರಿ ಕೇವಲ ಘೋಷಣೆ, ಭರವಸೆ ನೀಡಿಲ್ಲ. **ಬುದ್ಧಿವಂತ ಜನರು ರಾಜಕಾರಣಿಗಳ ಘೋಷಣೆಗಳನ್ನು ನಂಬುವುದಿಲ್ಲ ಎಂದು ಕಾಂಗ್ರೆಸ್ ಅರ್ಥ ಮಾಡಿಕೊಂಡಿದೆ. ಅದಕ್ಕೆ ರಾಜ್ಯ ಕಾಂಗ್ರೆಸ್ ಬಡಜನರಿಗಾಗಿ ಈ ಬಾರಿ 'ಗ್ಯಾರಂಟಿ' ನೀಡಿತು. ಇದರಿಂದ ಕಾಂಗ್ರೆಸ್ ಪಕ್ಷಕ್ಕೆ ಬಹುಮತ 'ಗ್ಯಾರಂಟಿ'ಯಾಯಿತು.**

ಈಗ ಕರ್ನಾಟಕ ಬಿಜೆಪಿ ಬಗ್ಗೆಯೂ ಸ್ವಲ್ಪ ಹೇಳಬೇಕಿದೆ. 2019ರಲ್ಲಿ ರಾಜಕೀಯ ಬಿಕ್ಕಟ್ಟಿನ ಕೊಳದಿಂದ ಕಮಲವಲ್ಲ ಅರಳಿದ್ದು, ಅಲ್ಲಿ ಅರಳಿದ್ದು ದುರ್ವಾಸನೆಯುಕ್ತ ಹೂವು. ಹೆಸರಿಗೆ ಮಾತ್ರ ಸರ್ಕಾರ ಇತ್ತು. ನಾಮಕಾವಸ್ತೆ ಆಡಳಿತ ಇತ್ತು. ಅಲ್ಲಿ ಸಮರ್ಥ, ಸ್ಥಿರ ಆಡಳಿತವೇ ಇರಲಿಲ್ಲ. ಭ್ರಷ್ಟಾಚಾರ ಮಿತಿ ಮೀರಿತ್ತು. ಟಿವಿಯಲ್ಲಿ, ಸಾಮಾಜಿಕ ಜಾಲತಾಣಗಳಲ್ಲಿ, ಮಾಧ್ಯಮಗಳಲ್ಲಿ ಇದು ಜನರ ಕಣ್ಣಿಗೆ ರಾಚಿತು. ಹಾಗಾಗಿ ಮತದಾರ ನಮ್ಮ ರಾಜ್ಯ ಸರಕಾರ ಕೇಂದ್ರದ ಸಹಕಾರದಿಂದ ಒದಗಿಸಿದ ಅನೇಕ ಮೂಲಭೂತ ಸೌಕರ್ಯಗಳನ್ನು ಗಮನಿಸಲೇ ಇಲ್ಲ.

ನದಿ ದಾಟುವಾಗ ಮೂರ್ಖ ಮಾತ್ರ ನೀರಿನ ಮಧ್ಯದಲ್ಲಿ ತಾನು ಏರಿ ಕುಳಿತಿರುವ ಕುದುರೆಯನ್ನು ಬದಲಾಯಿಸುತ್ತಾನೆ ಎಂಬ ಒಂದು ಗಾದೆ ಮಾತು ಇಂಗ್ಲಿಷ್ ಭಾಷೆಯಲ್ಲಿದೆ.

ಬಿ.ಎಸ್. ಯಡಿಯೂರಪ್ಪ ಅವರನ್ನು ಕೆಳಗಿಳಿಸಿ ಬಸವರಾಜ ಬೊಮ್ಮಾಯಿ ಅವರನ್ನು ಸಿಎಂ ಸ್ಥಾನದಲ್ಲಿ ಪ್ರತಿಷ್ಠಾಪಿಸುವ ಅಗತ್ಯವಾದರೂ ಏನಿತ್ತು? ದಿಟ್ಟ ಹೋರಾಟಗಾರರು, ಶ್ರಮಜೀವಿಗಳಾದ ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಅಂಥ ಘಟಾನುಘಟಿಗಳನ್ನು ಎದುರಿಸಲು ಓರ್ವ ವಿನಮ್ರ, ಸೌಮ್ಯ ಸ್ವಭಾವದ ಬೊಮ್ಮಾಯಿಗೆ ಸಾಧ್ಯವಾಗಲಿಲ್ಲ. 2014, 2019ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಹೀನಾಯವಾಗಿ ಸೋಲನುಭವಿಸಿದಂತೆ ಬಿಜೆಪಿ ಹೀನಾಯ ಮುಖಭಂಗ ಅನುಭವಿಸಿದ್ದು ಇದೇ ಕಾರಣಕ್ಕೆ.

ದಕ್ಷಿಣ ಭಾರತದಲ್ಲಿ ಗಟ್ಟಿಯಾಗಿ ಬೇರೂರಿದ್ದ ಬಿಜೆಪಿಯ ಈ ರೀತಿಯ ಕಳಪೆ ಪ್ರದರ್ಶನ ನಿಜಕ್ಕೂ ದುರದೃಷ್ಟಕರ. ಇದಕ್ಕೂ ಬೇಸರದ ಸಂಗತಿ ಎಂದರೆ ಬಿಜೆಪಿಯು ಪ್ರಚಾರಕ್ಕಾಗಿ ಪ್ರಧಾನಿ ನರೇಂದ್ರ ಮೋದಿ, ಅಮಿತ್ ಶಾರಂಥ ಅತಿರಥ ಮಹಾರಥರನ್ನು ಕರೆಸಿಕೊಂಡಿದ್ದು. ಕಾಂಗ್ರೆಸ್ ಕೂಡ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಪ್ರಿಯಾಂಕಾ ಗಾಂಧಿ ಮೊರೆ ಹೋಯಿತು. ಮೋದಿಯವರ ಈ ಬಾರಿಯ ಪ್ರಚಾರ ವೈಖರಿ ಕರ್ನಾಟಕದ ಇತಿಹಾಸದಲ್ಲೇ ನಾನು ನೋಡಿರಲಿಲ್ಲ. ರೋಡ್ ಶೋಗಳು, ಸಾರ್ವಜನಿಕ ಸಭೆ, ಟೆಂಪಲ್ ರನ್‌ಗಳು ಹೆಚ್ಚಾಗಿದ್ದವು. ಮೋದಿ, ಅಮಿತ್ ಶಾ ಹಾಗೂ ಇತರರು ಪ್ರಚಾರ ಮಾಡಿದ್ದರೂ ಕೊನೆಗೆ ಸಿಕ್ಕಿದ್ದು ಮಾತ್ರ ಶೂನ್ಯ. ಈಶಾನ್ಯ ರಾಜ್ಯಗಳಲ್ಲಿ ಸುತ್ತಿ ಪ್ರಚಾರ ಮಾಡಿ ಅಭೂತಪೂರ್ವ ಗೆಲುವು ತಂದುಕೊಟ್ಟ ನರೇಂದ್ರ ಮೋದಿಗೆ ಕರ್ನಾಟಕದಲ್ಲಿ ವಿಶೇಷ ಬಳುವಳಿ ಏನೂ ಸಿಗಲಿಲ್ಲ. ಬಿಜೆಪಿಗೆ ಈ ಬಾರಿ ಭಾರೀ ಮುಖಭಂಗ ಉಂಟಾಯಿತು. ಮೋದಿ, ಅಮಿತ್ ಶಾ ಹಾಗೂ ನಡ್ಡಾ ಅವರಿಗೂ ಇದೊಂದು ರೀತಿಯಲ್ಲಿ ಮುಖಭಂಗವೇ.

ಏನೇ ಆಗಲಿ ಕಾಂಗ್ರೆಸ್ ಪಕ್ಷದ ಈ ಗೆಲುವು 2024ರ ಲೋಕಸಭಾ ಚುನಾವಣೆಗೆ ಆ ಪಕ್ಷಕ್ಕೆ ಆತ್ಮವಿಶ್ವಾಸದ ಆಕ್ಸಿಜನ್ ಸಿಕ್ಕಿದಂತಾಗಿದೆ. ಪ್ರತಿಪಕ್ಷಗಳು ಒಗ್ಗೂಡದೇ ಇದ್ದರೂ ಕಾಂಗ್ರೆಸ್ ನಾಯಕತ್ವಕ್ಕೆ ಮಣೆ ಹಾಕಬೇಕಾಗುತ್ತದೆ.

ಇನ್ನು ಅಂತಿಮವಾಗಿ ಕೇಂದ್ರದಲ್ಲಿ ನರೇಂದ್ರ ಮೋದಿ ಆಡಳಿತದ ಮಾದರಿಯಲ್ಲಿ ರಾಜ್ಯದಲ್ಲಿ ಜನ ಬಯಸಿದ ಬದಲಾವಣೆ ತರಲು ರಾಜ್ಯ ಬಿಜೆಪಿಗೆ ಸಾಧ್ಯವಾಗಲಿಲ್ಲ. ರಾಜ್ಯದ ಶಕ್ತಿ ಕೇಂದ್ರ ವಿಧಾನಸೌಧದಲ್ಲಿ, ಸ್ಥಳೀಯ ಮತ್ತು ಗ್ರಾಮ ಮಟ್ಟದ ಆಡಳಿತದಲ್ಲಿ ಭ್ರಷ್ಟಾಚಾರ ಹೆಚ್ಚಾಗಿ ತಾಂಡವವಾಡುತ್ತಿದ್ದರೂ ಪ್ರಧಾನಿ ನರೇಂದ್ರ ಮೋದಿ ಮೌನ ಪ್ರೇಕ್ಷಕರಾಗಿ ವೀಕ್ಷಿಸಿದರೆ ಹೊರತು ಗಟ್ಟಿಯಾಗಿ ದನಿ ಎತ್ತಲಿಲ್ಲ.

ಪ್ರಿಯ ನರೇಂದ್ರ ಮೋದಿಯವರೇ: ಬೆಕ್ಕು ಕಣ್ಣು ಮುಚ್ಚಿ ಹಾಲು ಕುಡಿದರೆ ಯಾರೂ ನೋಡುತ್ತಿಲ್ಲ ಎಂದುಕೊಂಡು ಇರುವುದು ಸರಿಯಲ್ಲ. ಈಗ ಮಾಡಿದುಣ್ಣೋ ಮಹಾರಾಯ!

ಜೈಹಿಂದ್, ಜೈ ಕರ್ನಾಟಕ

email: voice @starofmysore.com

ಇಂದಿನಿಂದ ಭಾಷಾ ದಾಖಲೀಕರಣ ಕುರಿತು ತರಬೇತಿ ಕಾರ್ಯಕ್ರಮ

ಮೈಸೂರು, ಮೇ 16– ಭಾರತೀಯ ಭಾಷಾ ಸಂಸ್ಥಾನದ ಅಳಿವಿನಂಚಿನ ಭಾಷೆಗಳ ರಕ್ಷಣೆ ಮತ್ತು ಸಂರಕ್ಷಣಾ ಯೋಜನೆಯ ವತಿಯಿಂದ ಭಾಷಾ ದಾಖಲೀಕರಣ ಕುರಿತ ಎರಡು ವಾರಗಳ ತರಬೇತಿ ಕಾರ್ಯಕ್ರಮವನ್ನು ಮೇ 17 ರಿಂದ ಮೇ 31ರವರೆಗೆ ಆಯೋಜಿಸಲಾಗಿದೆ ಮಾನಸ ಗಂಗೋತ್ರಿಯ ಭಾರತೀಯ ಭಾಷಾ ಸಂಸ್ಥಾನದ ಸಭಾಂಗಣದಲ್ಲಿ ಮೇ 17ರ ಬೆಳಗ್ಗೆ 10.00 ಗಂಟೆಗೆ ಜವಹರಲಾಲ್ ನೆಹರು ವಿವಿ ವಿಶ್ರಾಂತ ಭಾಷಾ ವಿಜ್ಞಾನ ಪ್ರಾಧ್ಯಾಪಕರಾದ ಪದ್ಮಶ್ರೀ ಪ್ರೊ. ಅನ್ವಿತಾ ಅಬ್ಬಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ ಎಂದು ಭಾರತೀಯ ಭಾಷಾ ಸಂಸ್ಥಾನದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಸೋತಿದ್ದೇನೆ, ಧೃತಿಗೆಡಲ್ಲ, ಸೇವಾ ಕಾರ್ಯ ಮುಂದುವರಿಸುತ್ತೇನೆ: ಎಲ್. ನಾಗೇಂದ್ರ



ಮೈಸೂರು,ಮೇ 16 (ಎಂಟಿವೈ)– ಚಾಮರಾಜ ಕ್ಷೇತ್ರದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸಿದ್ದರೂ, ಕ್ಷೇತ್ರದ ಜನತೆ ನನ್ನನ್ನು ಸೋಲಿಸಿದ್ದಾರೆ. ಆದರೂ, ಧೃತಿಗೆಡದೆ ಕ್ಷೇತ್ರದಲ್ಲಿ ಸೇವಾ ಕಾರ್ಯವನ್ನು ಮುಂದುವರೆಸುತ್ತೇನೆ ಎಂದು ಚಾಮರಾಜ ಕ್ಷೇತ್ರದ ಬಿಜೆಪಿ ಪರಾಜಿತ ಅಭ್ಯರ್ಥಿ ಎಲ್.ನಾಗೇಂದ್ರ ಸ್ಪಷ್ಟಪಡಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಘೋಷಣೆ ಮಾಡಿದ ಭಾಗ್ಯಗಳ ಯೋಜನೆಗೆ ಕೆಲವೆಡೆ ಜನ ಮಾರು ಹೋಗಿದ್ದಾರೆ. ಕಾಂಗ್ರೆಸ್ ಈ ಹಿಂದೆ ಘೋಷಣೆ ಮಾಡಿರುವ ಕೆಲ ರಾಜ್ಯಗಳಲ್ಲಿ ಇನ್ನೂ ಯಾವುದೇ ಕಾರ್ಯಕ್ರಮ ಜಾರಿಗೊಳಿಸುವ ಮನಸ್ಸು ಮಾಡಿಲ್ಲ. ಆದರೂ ರಾಜ್ಯದಲ್ಲಿ ಕಾಂಗ್ರೆಸ್ ಭಾಗ್ಯಗಳ ಘೋಷಣೆಯನ್ನೇ ಮುಂದುವರೆಸಿದೆ ಎಂದರು.

ನಾನು ಸೋಲನುಭವಿಸಿರುವುದಕ್ಕೆ ಯಾವುದೇ ಬೇಸರವಿಲ್ಲ. ಕಳೆದ ಚುನಾವಣೆಯಲ್ಲಿ ನನಗೆ 51 ಸಾವಿರ ಮತ ಬಂದಿತ್ತು. ಈ ಬಾರಿ ಸುಮಾರು 68 ಸಾವಿರ ಮತ ಬಂದಿದೆ. ಕಳೆದ ಬಾರಿ ಜೆಡಿಎಸ್ ಹೆಚ್ಚು ಮತ ಪಡೆದಿತ್ತು. ಈ ಬಾರಿ ಜೆಡಿಎಸ್ ಮತಗಳು ಎಲ್ಲಿ ಹೋದವೆಂಬ ಪ್ರಶ್ನೆ ಕಾಡುತ್ತಿದೆ. ಕೆಲ ಭಾಗ್ಯಗಳು ಕಾಂಗ್ರೆಸ್ ಕೈಹಿಡಿದಿರಬಹುದಾಗಿದೆ. ನನ್ನ ಸೋಲಿಗೆ ಪಕ್ಷದ ಕಾರ್ಯಕರ್ತರು ಎದೆಗುಂದಬಾರದು. ಮುಂದೆಯೂ ಕ್ಷೇತ್ರದ ಜನರ ಸೇವೆಯಲ್ಲಿ ತೊಡಗಿಸಿಕೊಳ್ಳುತ್ತೇನೆ. ಕಾರ್ಯಕರ್ತರು ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ನಾನು ಲೋಕಸಭಾ ಚುನಾವಣೆಯ ಟಿಕೆಟ್ ಆಕಾಂಕ್ಷಿಯಲ್ಲ. ಆ ಕ್ಷೇತ್ರಕ್ಕೆ ಪ್ರತಾಪ ಸಿಂಹ ಇದ್ದಾರಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಚಾಮರಾಜ ಕ್ಷೇತ್ರದ ಅಭಿವೃದ್ಧಿಗೆ ನಾನು ಸಾಕಷ್ಟು ಅನುದಾನ ತಂದಿದ್ದೆ. ನನ್ನ ಅವಧಿಯಲ್ಲಿ ಆದ ಅಭಿವೃದ್ಧಿ ಕಾರ್ಯಗಳು ಮುಂದಿನ 6 ತಿಂಗಳವರೆಗೂ ನಡೆಯುತ್ತವೆ. ನೂತನ ಶಾಸಕರು ಆ ಎಲ್ಲಾ ಕಾರ್ಯಕ್ರಮಗಳನ್ನು ಮುಂದುವರೆಸಿಕೊಂಡು ಹೋಗಬೇಕು ಎಂದು ಸಲಹೆ ನೀಡಿದರು.

ಕ್ಷೇತ್ರದಲ್ಲಿ ಅನಧಿಕೃತವಾಗಿರುವ ಹುಕ್ಕಾಬಾರ್‌ಗಳ ವಿರುದ್ಧ ಸಮರ ಸಾರಿದ್ದೆ. ಆದರೆ, ಈ ಹುಕ್ಕಾಬಾರ್‌ಗಳ ಮಾಲೀಕರ ಸಹಕಾರದಿಂದ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಗೆಲುವಾಗಿದೆ. ಕಾಂಗ್ರೆಸ್‌ನವರು ಶೇ.40ರಷ್ಟು ಕಮೀಷನ್ ದಂಧೆ ಆರೋಪ ಇದುವರೆಗೂ ಸಾಬೀತು ಮಾಡಲು ಸಾಧ್ಯವಾಗಿಲ್ಲ. ಯಾವುದೇ ಒಂದು ಸಾಕ್ಷಿಯನ್ನು ನೀಡಿಲ್ಲ. ಕೇವಲ ಸುಳ್ಳು ಆರೋಪ ಮಾಡಿಕೊಂಡೇ ಜನರನ್ನು ದಿಕ್ಕು ತಪ್ಪಿಸಿದರು. ಭಾಗ್ಯಗಳ ಯೋಜನೆಗಳು ಘೋಷಣೆಯೂ ಸುಳ್ಳೇ ಆಗಿವೆ. ಆದರೆ ಜನ ಮಾತ್ರ ನಂಬಿದ್ದಾರೆ ಎಂದು ನಾಗೇಂದ್ರ ತಿಳಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಬಹುಮತ ಗಳಿಸಿದ್ದರೂ ಸರ್ಕಾರ ರಚನೆಗೆ ಕಚ್ಚಾಡುತ್ತಿರುವುದು ಸರಿಯಲ್ಲ. ಮೂರು ದಿನವಾದರೂ ಮುಖ್ಯಮಂತ್ರಿ ಆಯ್ಕೆ ಮಾಡಲು ಸಾಧ್ಯವಾಗಿಲ್ಲ. ಕೇಂದ್ರ ಸರ್ಕಾರ ನಿಷೇಧಿಸಿರುವ ಸಂಘಟನೆಗಳ ಬಗ್ಗೆ ನೂತನ ಸರ್ಕಾರ ಮೃದು ಧೋರಣೆ ತಾಳಬಾರದು. ಫಲಿತಾಂಶ ಪ್ರಕಟವಾದ ಬಳಿಕ ಕೆಲವೆಡೆ ಬಿಜೆಪಿ ಕಾರ್ಯಕರ್ತರಿಗೆ ಕ್ಷುಲ್ಲಕ ಕಾರಣದಿಂದ ಕಿರುಕುಳ ನೀಡಲಾಗುತ್ತಿದ್ದು, ಕೂಡಲೇ ಅದನ್ನು ನಿಲ್ಲಿಸಬೇಕು ಎಂದು ನಾಗೇಂದ್ರ ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಪಾಲಿಕೆ ಸದಸ್ಯರಾದ ರವೀಂದ್ರ, ಸತೀಶ್, ವೇದಾವತಿ, ಮುಖಂಡರಾದ ಸೋಮಶೇಖರ ರಾಜು, ಎಸ್.ಕೆ. ದಿನೇಶ್ ಇದ್ದರು.



ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಸೋಮವಾರ ಅವರನ್ನು ಬೆಂಗಳೂರಲ್ಲಿ ಭೇಟಿಯಾದ ಮೈಸೂರಿನ ಕಾಂಗ್ರೆಸ್ ಮುಖಂಡ ಚೇತನ್ ಅಭಿನಂದಿಸಿ, ಶುಭಾಶಯ ಕೋರಿದರು.

26ರಿಂದ 29ರವರೆಗೆ ಮೈ ರಿಯಾಲಿಟಿ ಪ್ರಾಪರ್ಟಿ ಎಕ್ಸ್‌ಪೋ

ಮೈಸೂರು, ಮೇ 16 (ಎಂಟಿವೈ)– ಮೈಸೂರು ಬಿಲ್ಡರ್ಸ್ ಅಸೋಸಿಯೇಷನ್ (ಬಿಎಐ) ಹಾಗೂ ಕ್ರೆಡಾಯ್ ಸಂಸ್ಥೆಯ ಸಹಯೋಗದಲ್ಲಿ ಮೇ 26ರಿಂದ 29ರವರೆಗೆ ಮೈಸೂರಿನ ಸ್ಕೌಟ್ಸ್ ಮತ್ತು ಗೈಡ್ಸ್ ಮೈದಾನದಲ್ಲಿ 'ಮೈ ರಿಯಾಲಿಟಿ ಮೆಗಾ ಪ್ರಾಪರ್ಟಿ ಎಕ್ಸ್‌ಪೋ' ಆಯೋಜಿಸಲಾಗಿದೆ ಎಂದು ಮೇಳದ ಆಯೋಜಕ ಉದಯ್ ಎಸ್.ಕುಮಾರ್ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಎಐ ಹಾಗೂ ಕ್ರೆಡಾಯ್ ಸಂಸ್ಥೆ 15 ವರ್ಷದಿಂದ ಪ್ರಾಪರ್ಟಿ ಶೋ ಏರ್ಪಡಿಸುತ್ತಾ ಬಂದಿದೆ. ರಿಯಲ್ ಎಸ್ಟೇಟ್‌ಗೆ ಸಂಬಂಧಿಸಿದ ಮಾಹಿತಿಯನ್ನು ಒಂದೇ ಸೂರಿನಡಿ ಕಲ್ಪಿಸುವ ಉದ್ದೇಶದಿಂದ ಈ ಪ್ರದರ್ಶನ ನಡೆಸಲಾಗುತ್ತಿದೆ. ಈ ಬಾರಿ ನಾಲ್ಕು ದಿನಗಳ ಪ್ರದರ್ಶನ ನಡೆಸಲು ತೀರ್ಮಾನಿಸಲಾಗಿದ್ದು, ಮೇ 26ರಿಂದ 29ರವರೆಗೆ ಪ್ರತಿದಿನ ಬೆಳಗ್ಗೆ 10ರಿಂದ ರಾತ್ರಿ 8.30ರವರೆಗೆ ಸಾರ್ವಜನಿಕರಿಗೆ ಪ್ರವೇಶಾವಕಾಶ ಕಲ್ಪಿಸಲಾಗಿದೆ ಎಂದರು.

ಮೇಳದಲ್ಲಿ ತಲಾ 4 ಪ್ಲಾಟಿನಂ, ಗೋಲ್ಡ್, ಸಿಲ್ವರ್ ಮಳಿಗೆ ಹಾಗೂ 26 ಸಾಮಾನ್ಯ ಮಳಿಗೆ ತೆರೆಯಲಾಗುತ್ತದೆ. ಈ ಎಲ್ಲಾ ಮಳಿಗೆಗಳಲ್ಲಿ ರಿಯಲ್ ಎಸ್ಟೇಟ್‌ಗೆ ಸಂಬಂಧಿಸಿದ ಮಾಹಿತಿಗಳ ಲಭ್ಯವಿರುತ್ತದೆ. ಅಪಾರ್ಟ್‌ಮೆಂಟ್, ಲೇಔಟ್, ಡೆವಲಪರ್ಸ್, ಅಭಿವೃದ್ಧಿ ಪಡಿಸಿರುವ ವಿವಿಧ ಲೇಔಟ್‌ಗಳು, ಅಪಾರ್ಟ್‌ಮೆಂಟ್‌ಗಳು, ಗುಂಪು ಮನೆಗಳು ಹಾಗೂ ವಿಲ್ಲಾಗಳ ಬಗ್ಗೆ ಮಾಹಿತಿ ನೀಡಲಾಗುತ್ತದೆ. ಜೊತೆಗೆ ಬ್ಯಾಂಕುಗಳು ಮತ್ತು ವಿಮಾ ಕಂಪನಿಗಳು ಹಣಕಾಸಿನ ಯೋಜನೆಗಳ ಬಗ್ಗೆ ಮಾಹಿತಿ ನೀಡಲಿವೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಪದಾಧಿಕಾರಿಗಳಾದ ನಾಗರಾಜ್ ಭೈರಿ, ಶ್ರೀಹರಿ, ಮುರಳೀಧರ್, ಕೆ.ಸಿ. ನಂದಕುಮಾರ್, ಎಂ.ಎಸ್. ಬಾಲಾಜಿ ಇದ್ದರು.

ಮಹಿಳೆಗೆ ಗುದ್ದಿಸಿ ಪರಾರಿಯಾಗಲೆತ್ನಿಸಿದ ಟಾಂಗಾವಾಲಾ ಹಿಡಿದು ಥಳಿಸಿದ ನಾರಿಯರು!

ಮೈಸೂರು, ಮೇ 16(ಎಂಕೆ)– ರಸ್ತೆ ದಾಟುತ್ತಿದ್ದ ಮಹಿಳೆಗೆ ಟಾಂಗಾ ಗಾಡಿಯಿಂದ ಗುದ್ದಿಸಿ, ಪರಾರಿಯಾಗಲು ಯತ್ನಿಸಿದ ಟಾಂಗಾವಾಲಾನನ್ನು ಮಹಿಳೆಯರೇ ಹಿಡಿದು ಹಿಗ್ಗಾಮುಗ್ಗಾ ಥಳಿಸಿದ ಘಟನೆ ಮೈಸೂರಿನ ಕೆ.ಆರ್.ವೃತ್ತದಲ್ಲಿ ಮಂಗಳವಾರ ಸಂಜೆ ನಡೆಯಿತು. ಶ್ರೀರಂಗಪಟ್ಟಣದ ಬಾಬುರಾಯನಕೊಪ್ಪಲು ಗ್ರಾಮದ ನಿರ್ಮಲಾ ಎಂಬುವರು, ಕೆಲಸ ಮುಗಿಸಿಕೊಂಡು ಸಯ್ಯಾಜಿರಾವ್ ರಸ್ತೆ(ನಗರ ಬಸ್ ನಿಲ್ದಾಣದ ಕಡೆ) ದಾಟುತ್ತಿದ್ದ ವೇಳೆ ಏಕಾಏಕಿ ಗರುಡಾ ಮಾಲ್ ಕಡೆಯಿಂದ ಬಂದ ಟಾಂಗಾ ಗಾಡಿ ಗುದ್ದಿದೆ. ಈ ವೇಳೆ ನೆಲಕ್ಕೆ ಬಿದ್ದ ನಿರ್ಮಲಾ ಅವರ ಕಣ್ಣು ಮತ್ತು ಹಣೆಯ ಭಾಗಕ್ಕೆ ಗಾಯವಾಗಿದೆ. ಟಾಂಗಾ ಗಾಡಿಯಿಂದ ಗುದ್ದಿಸಿದ್ದಲ್ಲದೆ ಮಹಿಳೆಗೆ ಏನಾಗಿದೆ ಎಂಬುದನ್ನು ನೋಡದೆ ಪರಾರಿಯಾಗಲು ಯತ್ನಿಸಿದ ಟಾಂಗಾವಾಲಾ ತಿಲಕ್‌ನಗರದ ಸಂತೋಷ್‌ನನ್ನು ಹಿಡಿದ ಪಾದಚಾರಿ ಮಹಿಳೆಯರು ಹಿಗ್ಗಾಮುಗ್ಗಾ ಥಳಿಸಿದರು. ಬಳಿಕ ಸ್ಥಳಕ್ಕೆ ಆಗಮಿಸಿದ ದೇವರಾಜ ಸಂಚಾರ ಪೊಲೀಸರು, ಜಗಳ ಬಿಡಿಸಿ, ಗಾಯಗೊಂಡಿದ್ದ ನಿರ್ಮಲಾ ಅವರನ್ನು ಆಸ್ಪತ್ರೆಗೆ ಕಳುಹಿಸಿದರಲ್ಲದೆ ಕುದುರೆಗಾಡಿ ಮಾಲೀಕನಿಗೆ ಚಿಕಿತ್ಸೆ ಕೊಡಿಸುವಂತೆ ತಾಕೀತು ಮಾಡಿದರು.

19 ವರ್ಷದ ಯುವಕ ನಾಪತ್ತೆ



ಮೈಸೂರು, ಮೇ 16– ಆಚೆ ಹೋಗಿ ಬರುತ್ತೇನೆ ಎಂದು ಹೇಳಿ ಹೋಗಿದ್ದ ಯುವಕನೊಬ್ಬ ನಾಪತ್ತೆಯಾಗಿರುವುದು ತಡವಾಗಿ ಬೆಳಕಿಗೆ ಬಂದಿದೆ. ಈತನ ಪತ್ತೆಗಾಗಿ ಪೋಷಕರು ಜಯಲಕ್ಷ್ಮೀಪುರಂ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. 19 ವರ್ಷದ ಎಸ್.ರಕ್ಷಿತ್ ನಾಪತ್ತೆಯಾಗಿರುವ ಯುವಕ. ಪೋಷಕರು ತಡವಾಗಿ ದೂರು ದಾಖಲಿಸಿದ್ದಾರೆ. ಜಯಲಕ್ಷ್ಮೀಪುರಂ ಠಾಣಾ ವ್ಯಾಪ್ತಿಯ ನಿವಾಸಿ ರಕ್ಷಿತ್ ಕಾಳಿದಾಸ ರಸ್ತೆಯಲ್ಲಿರುವ ಕೆಫೆಯೊಂದರಲ್ಲಿ ಕೆಲಸ ಮಾಡುತ್ತಿದ್ದ. ಏ.28 ರಂದು ಮಧ್ಯಾಹ್ನ 12 ಗಂಟೆ ವೇಳೆಗೆ ತನ್ನ ಪೋಷಕರಿಗೆ ತಿಳಿಸಿ ಮನೆಯಿಂದ ಹೋದವನು ಮತ್ತೆ ಬಂದಿಲ್ಲ. ಇದರಿಂದ ಗಾಬರಿಗೊಂಡ ಪೋಷಕರು, ಈತನ ಪತ್ತೆಗಾಗಿ ಸಂಬಂಧಿಕರ ಮನೆಯಲ್ಲಿ, ಎಲ್ಲೆಡೆ ಹುಡುಕಾಡಿದ್ದಾರೆ. ಕೊನೆಗೆ ಮೇ 9ರಂದು ಜಯಲಕ್ಷ್ಮೀಪುರಂನ ಠಾಣೆಯಲ್ಲಿ ಯುವಕನ ತಂದೆ ದೂರು ದಾಖಲಿಸಿದ್ದಾರೆ. ಸಾರ್ವಜನಿಕರಿಗೆ ಈತನ ಸುಳಿವು ಸಿಕ್ಕರೆ ಪೊಲೀಸ್ ಕಂಟ್ರೋಲ್ ರೂಂ 0821–2418339/340/319 ಅನ್ನು ಸಂಪರ್ಕಿಸಬಹುದು ಎಂದು ಠಾಣೆ ಎಎಸ್ಐ ಆರ್.ಪ್ರಭುರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಧ ಎಕರೆ ಭೂಮಿ ಬರಡಾಗಿಸಿದ ತೋಟಗಾರಿಕೆ ಇಲಾಖೆ ಅಧಿಕಾರಿಗಳು; ಸಾರ್ವಜನಿಕರ ಆಕ್ರೋಶ

● ನೀರು ನಿಲ್ಲುವ ನೆಪದಲ್ಲಿ ಕಟ್ಟಡದ ತ್ಯಾಜ್ಯ ಸುರಿದು ಮಟ್ಟ ಮಾಡಿ ಕೈ ತೊಳೆದುಕೊಂಡ 'ಬುದ್ಧಿ'ಜೀವಿ ಅಧಿಕಾರಿಗಳು ● ಮೈಸೂರು ವಿವಿ ಆವರಣದ ಕುಕ್ಕರಹಳ್ಳಿ ಕೆರೆ ತೀರದಲ್ಲಿ ಪರಿಸರ ಹಾನಿ



ಮೈಸೂರಿನ ಕುಕ್ಕರಹಳ್ಳಿ ಕೆರೆ ಏರಿಯ ಪಕ್ಕದ ತೋಟಗಾರಿಕಾ ಕ್ಷೇತ್ರದಲ್ಲಿ ಕಟ್ಟಡ ತ್ಯಾಜ್ಯ ರಾಶಿ ಹಾಕಿರುವುದು.



ವಾಯುವಿಹಾರಿಗಳು ಪ್ರಶ್ನಿಸಿದ್ದರಿಂದ ತ್ಯಾಜ್ಯದ ರಾಶಿಯನ್ನು ಹರಡುವ ಮೂಲಕ ಫಲವತ್ತಾದ ಭೂಮಿಯನ್ನು ನಿಷ್ಪ್ರಯೋಜಕಗೊಳಿಸಿರುವುದನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಮೇ 16(ಎಸ್‌ಬಿಡಿ)– ತೋಟಗಾರಿಕೆ ಇಲಾಖೆ ಅಧಿಕಾರಿಗಳ ಉಡಾಫೆಯಿಂದ ಅರ್ಧ ಎಕರೆಯಷ್ಟು ಫಲವತ್ತಾದ ಭೂಮಿ ಪಾಳು ಬಿದ್ದಿದೆ.

ಮೈಸೂರಿನ ಕುಕ್ಕರಹಳ್ಳಿ ಕೆರೆ ಏರಿಯ ಪಕ್ಕದಲ್ಲಿರುವ ಕುಕ್ಕರಹಳ್ಳಿ ತೋಟಗಾರಿಕಾ ಕ್ಷೇತ್ರದ ಸುಮಾರು ಅರ್ಧ ಎಕರೆ ಪ್ರದೇಶದಲ್ಲಿ ಲೋಡ್‌ಗಟ್ಟಲೆ ಕಟ್ಟಡ ತ್ಯಾಜ್ಯವನ್ನು ಸುರಿದು ಭೂಮಿಯನ್ನು ನಿಷ್ಪ್ರಯೋಜಕಗೊಳಿಸಲಾಗಿದೆ ಈ ಕೃತ್ಯವನ್ನು ಖಂಡಿಸಿರುವ ಸಾರ್ವಜನಿಕರು, ಇದಕ್ಕೆ ತೋಟಗಾರಿಕೆ ಇಲಾಖೆ ಅಧಿಕಾರಿಗಳ ಬುದ್ಧಿಗೇಡಿತನವೇ ಕಾರಣ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಳೆದ ವರ್ಷ ಈ ಜಾಗದಲ್ಲಿ ಇಲಾಖೆ ವತಿಯಿಂದ ವಿತರಿಸಲು ತೆಂಗಿನ ಸಸಿಗಳನ್ನು ಬೆಳೆಯಲಾಗಿತ್ತು. ಇದು ಸ್ವಲ್ಪ ತಗ್ಗು ಪ್ರದೇಶವಾದ್ದರಿಂದ ಭಾರೀ ಮಳೆಯಾದಾಗ ನೀರು ನಿಂತಿತ್ತು. ಇಷ್ಟಕ್ಕೆ ಈ ಭೂಮಿಯನ್ನೇ ನಿಷ್ಪ್ರಯೋಜಕಗೊಳಿಸಲಾಗಿದೆ. ಕಟ್ಟಡ ತ್ಯಾಜ್ಯವನ್ನು ಸುರಿದು, ಮಟ್ಟ ಮಾಡಲಾಗಿದೆ. ಪರಿಣಾಮ ಒಂದು ಗರಿಕೆ ಬೆಳೆಯುವುದಕ್ಕೂ ಅವಕಾಶವಿಲ್ಲದಂತಾಗಿದೆ. ಸುಮಾರು ಅರ್ಧ ಎಕರೆ ಜಾಗ ಹೀಗೆ ಬರಡಾಗಿದೆ.

ಇಟ್ಟಿಗೆ, ಸಿಮೆಂಟ್ ತ್ಯಾಜ್ಯವನ್ನು ಸುರಿದರೆ ಇನ್ನೆಂದೂ ಯಾವುದೇ ಬೆಳೆ ಬೆಳೆಯಲು ಸಾಧ್ಯವಿಲ್ಲ. ನೈಸರ್ಗಿಕವಾಗಿ ಬೆಳೆಯುತ್ತಿದ್ದ ಗಿಡಗಂಟಿಗಳೂ ನಿರ್ನಾಮವಾಗುತ್ತವೆ. ಕಟ್ಟಡ ತ್ಯಾಜ್ಯವನ್ನು ತಂದು ರಾಶಿ ಹಾಕುವುದು ತಿಂಗಳುಗಳಿಂದ ನಡೆದಿದೆ. ಈ ಬಗ್ಗೆ ಮೈಸೂರು ವಿಶ್ವವಿದ್ಯಾನಿಲಯ ಅಧಿಕಾರಿಗಳ ಗಮನಕ್ಕೆ ತರಲಾಗಿತ್ತು. ಅವರಿಂದ ವಿಷಯ ತಿಳಿದ ತೋಟಗಾರಿಕೆ ಇಲಾಖೆಯವರು ತ್ಯಾಜ್ಯದ ರಾಶಿಯನ್ನು ತೆರವುಗೊಳಿಸುವ ಬದಲು ಸುಮಾರು ಅರ್ಧ ಎಕರೆಗೆ ಹರಡಿ ಕೈ ತೊಳೆದುಕೊಂಡಿದ್ದಾರೆ ಇದರಿಂದಾಗುವ ದುಷ್ಪರಿಣಾಮದ ಕನಿಷ್ಠ ಜ್ಞಾನ ಇದ್ದವರು ಯಾರೂ ಈ ರೀತಿ ಕೆಲಸ ಮಾಡುವುದಿಲ್ಲ ಎಂದು ವಾಯುವಿಹಾರಿಗಳು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

ಯಾರೋ ಖಾಸಗಿ ವ್ಯಕ್ತಿಗಳು ಕಟ್ಟಡ ತ್ಯಾಜ್ಯವನ್ನು ತಂದು ಇಲ್ಲಿ ಸುರಿಯಲು ಸಾಧ್ಯವೇ ಇಲ್ಲ. ತೋಟಗಾರಿಕಾ ಕ್ಷೇತ್ರಕ್ಕೆ ಖಾಸಗಿ ವಾಹನಗಳನ್ನು ಬಿಡುವುದೂ ಇಲ್ಲ. ಹಾಗಾದರೆ ಇಲಾಖೆಯವರೇ ತ್ಯಾಜ್ಯ ಸುರಿದಿರಬೇಕು. ತಮ್ಮದೇ ಭೂಮಿಯಾಗಿದ್ದರೆ ಹೀಗೆ ಮಾಡುತ್ತಿದ್ದರಾ?. ರೈತರಿಗೆ ಸೂಕ್ತ ಮಾರ್ಗದರ್ಶನ ಮಾಡಬೇಕಾದವರೇ ಈ ರೀತಿ ನಡೆದುಕೊಂಡರೆ ಗತಿಯೇನು?. ಫಲವತ್ತಾದ ಭೂಮಿಗೆ ಕಟ್ಟಡ ತ್ಯಾಜ್ಯ ಸುರಿದರೆ ಯಾವುದೇ ಬೆಳೆ ಅಸಾಧ್ಯ ಎಂಬ ಕನಿಷ್ಠ ಪರಿಜ್ಞಾನವೂ ಅವರಿಗಿಲ್ಲವೇ?. ಮಣ್ಣಿನಲ್ಲಿರುವ ಜೀವಿಗಳು ಸಾಯುತ್ತವೆ, ಪ್ರಕೃತಿ ಹಾಳಾಗುತ್ತದೆ ಎಂದು ತಿಳಿದಿಲ್ಲವೇ? ಎಂದು ತೀಕ್ಷ್ಣವಾಗಿ ಪ್ರಶ್ನಿಸಿದ್ದಾರೆ.

ಹಿಂದೆ ಇದೇ ಜಾಗದಲ್ಲಿ ತೆಂಗಿನ ಮಡಿ ಸಸಿಗಳು ಸೊಂಪಾಗಿ ಬೆಳೆದಿದ್ದವು. ಜಮೀನು ಸುಂದರವಾಗಿ ಕಂಗೊಳಿಸುತ್ತಿತ್ತು. ಆದರೀಗ ಮಣ್ಣಿನ ಫಲವತ್ತತೆಯನ್ನೇ ಹಾಳು ಮಾಡಿದ್ದಾರೆ. ಇಟ್ಟಿಗೆ ಚೂರುಗಳು, ಸಿಮೆಂಟ್ ಚಕ್ಕೆಗಳು ಹರಡಿ ಬರಡು ಭೂಮಿಯಾಗಿದೆ. ಒಂದು ಗಿಡಗಂಟಿಯೂ ಬೆಳೆದಿಲ್ಲ ಚಿನ್ನದಂತಹ ಬೆಳೆ ಬೆಳೆಯುವ ಭೂಮಿಯನ್ನು ಉಪಯೋಗಕ್ಕೆ ಬಾರದಂತೆ ಮಾಡಿದ್ದಾರೆ. ಮಳೆ ಬಂದಾಗ ಹಳ್ಳದಲ್ಲಿ ನೀರು ತುಂಬುವುದರಿಂದ ಏನೂ ನಷ್ಟವಾಗುತ್ತಿರಲಿಲ್ಲ. ತಗ್ಗು ಪ್ರದೇಶ ಎತ್ತರಿಸಲು ಕಟ್ಟಡ ತ್ಯಾಜ್ಯ ಬಳಸಿರುವುದು ಸರಿಯಲ್ಲ. ಮಣ್ಣಿನ ಬಗ್ಗೆ ಕಾಳಜಿಯಾಗಲೀ ಕಟ್ಟಡ ತ್ಯಾಜ್ಯವನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಬೇಕೆಂಬ ತಿಳುವಳಿಕೆಯಾಗಲೀ ಈ ಕೃತ್ಯವೆಸಗಿದವರಿಗೆ ಇದ್ದಂತಿಲ್ಲ ಎಂದಿದ್ದಾರೆ.

ನಿರಂತರವಾಗಿ ಕಟ್ಟಡ ತ್ಯಾಜ್ಯವನ್ನು ತಂದು ರಾಶಿ ಹಾಕುತ್ತಿರುವುದನ್ನು ಗಮನಿಸಿದ ವಾಯುವಿಹಾರಿಗಳು ಪ್ರಶ್ನಿಸಿದ್ದರಿಂದ ಯಾರೂ ಇಲ್ಲದ ಸಂದರ್ಭದಲ್ಲಿ ಆ ರಾಶಿಯನ್ನು ಹರಡಲಾಗಿದೆ. ಹೀಗೆ ಹರಡಿರುವ ಕಟ್ಟಡ ತ್ಯಾಜ್ಯವನ್ನು ಕೂಡಲೇ ತೆರವುಗೊಳಿಸಿ ಭೂಮಿಯನ್ನು ಉಳಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಸಂಬಂಧಪಟ್ಟವರು ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಪರಿಸರ ಪ್ರೇಮಿಗಳು ಆಗ್ರಹಿಸಿದ್ದಾರೆ.

ಕಾಂಗ್ರೆಸ್ ಪ್ರಣಾಳಿಕೆ ಭರವಸೆ ಈಡೇರಿಸಲು

ಮತ್ತೊಮ್ಮೆ ಸಿದ್ದರಾಮಯ್ಯರಿಗೇ ಮುಖ್ಯಮಂತ್ರಿ ಸ್ಥಾನ ನೀಡಿ

ಕರ್ನಾಟಕ ಪ್ರದೇಶ ಕುರುಬರ ಸಂಘದ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಕಾಂಗ್ರೆಸ್ ವರಿಷ್ಠರಲ್ಲಿ ಒತ್ತಾಯ



ಮೈಸೂರು, ಮೇ 16(ಪಿಎಂ)– ಸಿದ್ದರಾಮಯ್ಯನವರು 2013–18ರ ಅವಧಿಯಲ್ಲಿ ಮುಖ್ಯಮಂತ್ರಿಗಳಾಗಿ ನೀಡಿದ ಕಾರ್ಯಕ್ರಮಗಳನ್ನು ಮುಂದುವರೆಸಲು ಮತ್ತು ಈಗಿನ ಚುನಾವಣೆಯ ಪ್ರಣಾಳಿಕೆಯ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಜಾರಿಗೊಳಿಸಲು ಮತ್ತೊಮ್ಮೆ ಸಿದ್ದರಾಮಯ್ಯ ಅವರನ್ನೇ ಮುಖ್ಯಮಂತ್ರಿಗಳನ್ನಾಗಿ ಆಯ್ಕೆ ಮಾಡಬೇಕೆಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಕಾಂಗ್ರೆಸ್ ವರಿಷ್ಠರಲ್ಲಿ ಒತ್ತಾಯಿಸಿದ್ದಾರೆ.

2023–2028ರ ಅವಧಿಯ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭೂತಪೂರ್ವ ಗೆಲುವು ಸಾಧಿಸಿದ್ದು, ಇದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಹೋರಾಟಕ್ಕೆ ಸಂದ ಜಯವಾಗಿದೆ ಕಾಂಗ್ರೆಸ್‌ನ ಈ ಅಭೂತಪೂರ್ವ ಗೆಲುವಿಗೆ ಸಂಘವು ತುಂಬು ಹೃದಯದ ಅಭಿನಂದನೆ ಸಲ್ಲಿಸುತ್ತದೆ.

ಯಾವುದೇ ಭ್ರಷ್ಟಾಚಾರವಿಲ್ಲದೆ ಕಳಂಕ ರಹಿತವಾಗಿ ಸರ್ವರಿಗೂ ಸಮಪಾಲು ಎಂಬ ಸೂತ್ರದಡಿ ರಾಜ್ಯವನ್ನಾಳಿದ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಹುದ್ದೆಗೆ ಸೂಕ್ತ ವ್ಯಕ್ತಿಯಾಗಿದ್ದಾರೆ. ಕಾರಣ ಇವರ ಈ ಹಿಂದಿನ ಆಡಳಿತಾವಧಿಯಲ್ಲಿ ರಾಜ್ಯದ ಸರ್ವರಿಗೂ ಸಾಮಾಜಿಕ ನ್ಯಾಯದ ತತ್ವದಡಿ ಯೋಜನೆಗಳನ್ನು ರೂಪಿಸಿ, ಅರ್ಹರಿಗೆ ಯೋಜನೆಗಳ ಸವಲತ್ತು ತಲುಪುವಂತೆ ಮಾಡಿದ್ದಾರೆ. ರಾಜ್ಯದ ಜನತೆಗೆ ಸಾಮಾಜಿಕ ನ್ಯಾಯದಡಿ ಆಡಳಿತ ನೀಡಲು ಸಿದ್ದರಾಮಯ್ಯ ಸಮರ್ಥರಾಗಿದ್ದು, ಇವರನ್ನು ರಾಜ್ಯದ ಮುಖ್ಯಮಂತ್ರಿಯಾಗಿ ಘೋಷಿಸುವಂತೆ ಎಐಸಿಸಿ ವರಿಷ್ಠರಲ್ಲಿ ಮನವಿ ಮಾಡಿದ್ದಾರೆ.

ಈ ಸಂಬಂಧ ಕಾಂಗ್ರೆಸ್ ರಾಷ್ಟ್ರೀಯ ವರಿಷ್ಠರಾದ ಸೋನಿಯಾ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ರಾಹುಲ್‌ಗಾಂಧಿ, ಪ್ರಿಯಾಂಕ ಗಾಂಧಿ ವಾದ್ರ, ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ ಮತ್ತು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಲ್ಲಿ ಮನವಿ ಮಾಡುವುದಾಗಿ ಪ್ರಕಟಣೆಯಲ್ಲಿ ಅವರು ತಿಳಿಸಿದ್ದಾರೆ.



ಮೈಸೂರು ಕೃಷ್ಣರಾಜ ಕ್ಷೇತ್ರದ ಶಾಸಕ ಶ್ರೀವತ್ಸ ಮಂಗಳವಾರ ಬೆಂಗಳೂರಿನಲ್ಲಿ ಪಕ್ಷದ ಧುರೀಣ ಬಿ.ಎಸ್.ಯಡಿಯೂರಪ್ಪ ಅವರನ್ನು ಭೇಟಿಯಾಗಿ, ಅಭಿನಂದನೆ ಸಲ್ಲಿಸಿದರು. ಈ ವೇಳೆ ಶಾಸಕ ಬಿ.ವೈ. ವಿಜಯೇಂದ್ರ, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ವಕ್ತಾರ ಮೋಹನ್, ಮೇಯರ್ ಶಿವಕುಮಾರ್, ಮುಖಂಡರಾದ ಬಿ.ಎಂ.ರಘು ಉಪಸ್ಥಿತರಿದ್ದಾರೆ.

ಮರಕ್ಕೆ ಗುದ್ದಿದ ಕಾರು; ಕಾಂಗ್ರೆಸ್ ಮುಖಂಡ ಸ್ಥಳದಲ್ಲೇ ಸಾವು

ಶಿವಮೊಗ್ಗ: ಚಾಲಕನ ನಿಯಂತ್ರಣ ತಪ್ಪಿ ಮಾರುತಿ ಸ್ವಿಫ್ಟ್ ಕಾರೊಂದು ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಕಾಂಗ್ರೆಸ್ ಮುಖಂಡ ಸ್ಥಳದಲ್ಲೇ ಸಾವನ್ನಪ್ಪಿರುವ ದಾರುಣ ಘಟನೆ ನಡೆದಿದೆ. ಹೊಸನಗರ ತಾಲೂಕಿನ ಕೋಡೂರು ಸಮೀಪದ ತುರುಗೋಡು ನಾಗರಾಜ್ ಗೌಡ (55) ಮೃತ ದುರ್ದೈವಿ. ಶಿಕಾರಿಪುರದಿಂದ ವಾಪಸ್ ಆಗುವ ವೇಳೆ ಗೌತಮಪುರ ಸಮೀಪದ ಅಂಬಲಿಗೊಳ ಬಳಿ ಘಟನೆ ನಡೆದಿದೆ. ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಪಕ್ಕದ ಮರಕ್ಕೆ ಕಾರು ಡಿಕ್ಕಿ ಹೊಡೆದ ಪರಿಣಾಮ ಚಾಲಕ ನಾಗರಾಜ್ ಸ್ಥಳದಲ್ಲೇ ಮೃತ ಪಟ್ಟಿದ್ದಾರೆ. ಕಾರಿನಲ್ಲಿ ಮೂರು ಮಂದಿ ಪ್ರಯಾಣಿಸುತ್ತಿದ್ದು ಗಾಯಾಳುಗಳನ್ನು ಶಿವಮೊಗ್ಗದ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಸಾಗರ ತಾಲೂಕಿನ ಆನಂದಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

ಮೈಸೂರು ಪೇಯಿಂಟ್ಸ್ ಅಂಡ್ ವಾರ್ನಿಷ್ ಕಂಪನಿ ಅಧ್ಯಕ್ಷ ಸ್ಥಾನಕ್ಕೆ ಆರ್.ರಘು ರಾಜೀನಾಮೆ



ಮೈಸೂರು, ಮೇ 16(ಪಿಎಂ)– ರಾಜ್ಯ ಸರ್ಕಾರ ಅಧೀನದ ಮೈಸೂರು ಪೇಯಿಂಟ್ಸ್ ಅಂಡ್ ವಾರ್ನಿಷ್ ಲಿಮಿಟೆಡ್‌ನ ಅಧ್ಯಕ್ಷ ಸ್ಥಾನಕ್ಕೆ ಬಿಜೆಪಿ ಮುಖಂಡ ಆರ್.ರಘು (ಕೌಟಿಲ್ಯ) ಮಂಗಳವಾರ ರಾಜೀನಾಮೆ ಸಲ್ಲಿಸಿದ್ದಾರೆ. ಮೈಸೂರು ಪೇಯಿಂಟ್ಸ್ ಅಂಡ್ ವಾರ್ನಿಷ್ ಲಿಮಿಟೆಡ್‌ನ ಅಧ್ಯಕ್ಷರಾಗಿ 2022ರ ಜು.29ರಿಂದ ನೇಮಕಗೊಂಡಿದ್ದು, ಈ ತಕ್ಷಣದಿಂದ ಜಾರಿಯಾಗುವಂತೆ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿರುವುದಾಗಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಸಲ್ಲಿಸಿರುವ ರಾಜೀನಾಮೆ ಪತ್ರದಲ್ಲಿ ಆರ್.ರಘು (ಕೌಟಿಲ್ಯ) ತಿಳಿಸಿದ್ದಾರೆ.

ಸಿದ್ದರಾಮಯ್ಯ ಮತ್ತೊಮ್ಮೆ ಮುಖ್ಯಮಂತ್ರಿ ಆಗಲೆಂದು ಚಾಮುಂಡೇಶ್ವರಿಗೆ ವಿಶೇಷ ಪೂಜೆ



ಮೈಸೂರು, ಮೇ 16(ಪಿಎಂ)– ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತೊಮ್ಮೆ ರಾಜ್ಯದ ಮುಖ್ಯಮಂತ್ರಿ ಆಗಲೆಂದು ಅಖಿಲ ಕರ್ನಾಟಕ ರಾಕೇಶ್ ಸಿದ್ದರಾಮಯ್ಯ ಅಭಿಮಾನಿಗಳ ಬಳಗದ ವತಿಯಿಂದ ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ಸನ್ನಿಧಿಯಲ್ಲಿ ಮಂಗಳವಾರ ವಿಶೇಷ ಪೂಜೆ ಸಲ್ಲಿಸಲಾಯಿತು.

ಸಿದ್ದರಾಮಯ್ಯ ಮತ್ತೊಮ್ಮೆ ಮುಖ್ಯಮಂತ್ರಿ ಆಗಲೆಂದು ತಾಯಿ ಚಾಮುಂಡೇಶ್ವರಿಯಲ್ಲಿ ಪ್ರಾರ್ಥಿಸಿ ನೂರೊಂದು ಈಡುಗಾಯಿ ಒಡೆಯಲಾಯಿತು. ಇದೇ ವೇಳೆ ಮಾತನಾಡಿದ ಬಳಗದ ರಾಜ್ಯಾಧ್ಯಕ್ಷ ವಿಶ್ವನಾಥ್ (ವಿಶ್ವ), ನಾಡು ಕಂಡ ಧೀಮಂತ ನಾಯಕ ಸಿದ್ದರಾಮಯ್ಯ ಈಗಾಗಲೇ ಒಮ್ಮೆ ಮುಖ್ಯ ಮಂತ್ರಿಗಳಾಗಿ ಜನಪರ ಆಡಳಿತ ನೀಡಿದ್ದಾರೆ. ಸರ್ವರಿಗೂ ಸಮಪಾಲು ಎಂಬ ಸಾಮಾಜಿಕ ನ್ಯಾಯದಡಿ ಆಡಳಿತ ನಡೆಸಿದ ಅವರು ಮತ್ತೆ ಮುಖ್ಯಮಂತ್ರಿಯಾಗಲಿ ಎಂದು ಆಶಯ ವ್ಯಕ್ತಪಡಿಸಿದರು. ಬಳಗದ ನಗರಾಧ್ಯಕ್ಷ ರಮೇಶ್ ರಾಮಪ್ಪ, ಮುಖಂಡರಾದ ಜೋಡಿಹಕ್ಕಿ ಮಹದೇವು, ಶ್ರೀನಿವಾಸ್, ನಾಗರಾಜು, ವಿನಾಯಕ್, ಚಾಮುಂಡಿಬೆಟ್ಟ ಗ್ರಾಪಂ ಅಧ್ಯಕ್ಷ ಭರತ್ ಮತ್ತಿತರರು ಪಾಲ್ಗೊಂಡಿದ್ದರು.

ಶುಂಠಿಗೆ ಗೆಡ್ಡೆ ಕೊಳೆರೋಗ: ಇದಕ್ಕೆ ಶುಂಠಿ ಸ್ಪೆಷಲ್ ಸಿಂಪಡಣೆ ಪರಿಹಾರ





ಮೈಸೂರು, ಮೇ 16(ಎಂಕೆ)– ರೈತರ ಲಾಭದಾಯಕ ಬೆಳೆಯಾದ ಶುಂಠಿ ಬೆಳೆಯನ್ನು, ಗಡ್ಡೆ ಕೊಳೆ ರೋಗ ಮತ್ತು ಶಲ್ಕ ಕೀಟಗಳ ಬಾಧೆಯಿಂದ ರಕ್ಷಿಸಿಕೊಳ್ಳಲು ಸೂಕ್ಷ್ಮ ಪೋಷಕಾಂಶಗಳ ಮಿಶ್ರಣವಾದ ಶುಂಠಿ ಸ್ಪೆಷಲ್ ಸಿಂಪಡಣೆ ಅಗತ್ಯವಾಗಿದೆ.

ಈಗಾಗಲೇ ಬಿತ್ತನೆ ಆರಂಭಗೊಂಡಿರುವ ಶುಂಠಿ ಬೆಳೆಯ ಪೋಷಣೆ ಅಗತ್ಯವಾಗಿದ್ದು, ಶೇ.10–15 ರಷ್ಟು ಹೆಚ್ಚಿನ ಹಾಗೂ ಉತ್ತಮ ಗುಣಮಟ್ಟದ ಇಳುವರಿಯನ್ನು ಪಡೆಯಲು ಶುಂಠಿ ಸ್ಪೆಷಲ್ ಬಳಕೆ ಅವಶ್ಯವಾಗಿದೆ ಎಂದು ನಾಗನಹಳ್ಳಿ ವಿಸ್ತರಣಾ ಘಟಕದ ಸಹಾಯಕ ಪ್ರಾಧ್ಯಾಪಕ ರಾಹುಲ್ ದಾಸ್ ತಿಳಿಸಿದ್ದಾರೆ.

ಮುಖ್ಯವಾಗಿ ಶುಂಠಿ ಬಿತ್ತನೆ ಮಾಡಲು ಹೆಚ್ಚು ಸಾವಯವ ಪದಾರ್ಥಗಳನ್ನೊಳಗೊಂಡ ಚೆನ್ನಾಗಿ ನೀರು ಬಸಿದು ಹೋಗುವಂತಹ ಮರಳು, ಮರಳು ಮಿಶ್ರಿತ ಗೋಡು, ಕೆಂಪುಗೋಡು ಅಥವಾ ಗೋಡು ಮಿಶ್ರಿತ ಜಂಬಿಟ್ಟಿಗೆ ಮಣ್ಣು ಉತ್ತಮ. ಸಾಮಾನ್ಯವಾಗಿ 25–150 ಸೆಂ.ಮಿ ಮಳೆ ಬೀಳುವ ಹಾಗೂ 28–35 ಡಿ.ಸೆ. ಉಷ್ಣತೆಯಿರುವ ಪ್ರದೇಶದಲ್ಲಿ ಬೆಳೆಯುವ ಬೆಳೆ ಇದಾಗಿದೆ. ಬಿತ್ತನೆ ಸಮಯದಿಂದ ಗಡ್ಡೆಗಳು ಮೊಳಕೆ ಬರುವವರೆಗೆ ಸಾಧಾರಣ ಮಳೆ, ಬೆಳವಣಿಗೆಯ ಅವಧಿಯಲ್ಲಿ ಅಧಿಕ ಹಾಗೂ ಕೊಯಿಲು ಮಾಡುವುದಕ್ಕಿಂತ ಮುಂಚೆ ಒಂದು ತಿಂಗಳವರೆಗೆ ಒಣ ಹವೆಯ ವಾತಾವರಣ ಅವಶ್ಯಕವಾಗಿ ಬೇಕಾಗುತ್ತದೆ ಎಂದಿದ್ದಾರೆ.

ಶುಂಠಿಯಲ್ಲಿ ಮಾರನ್, ಕುರುಪ್ಪಂಪಾಡಿ, ಎರ್ನಾಡ್, ವೈನಾಡ್, ಹಿಮಾಚಲ ಮತ್ತು ನಾಡಿಯಾ ಎಂಬ ಪ್ರಮುಖ ದೇಶೀಯ ತಳಿಗಳು ಹಾಗೂ ರಿಯೊ–ಡಿ–ಜನೈರೋ ಎಂಬ ವಿದೇಶಿ(ಬ್ರೆಜಿಲ್ ದೇಶದ ತಳಿ) ತಳಿಗಳೂ ಸಹ ಬೆಳೆಗಾರರಲ್ಲಿ ಜನಪ್ರಿಯವಾಗಿವೆ. ಫೆಬ್ರವರಿಯಿಂದ ಮೇ ತಿಂಗಳ ಆರಂಭದ 15 ದಿನಗಳವರೆಗೆ ಬಿತ್ತನೆ ಮಾಡಲು ಅತ್ಯಂತ ಸೂಕ್ತ ಸಮಯ ವಾಗಿದೆ. ಬೇಸಿಗೆ (ಪೂರ್ವ ಮುಂಗಾರು) ಮಳೆ ಬಂದಾಗ ಬಿತ್ತನೆ ಮಾಡು ವುದರಿಂದ ಅಧಿಕ ಇಳುವರಿ ಪಡೆಯುವುದರ ಜೊತೆಗೆ ರೋಗಗಳ ಬಾಧೆ ಕಡಿಮೆ ಮಾಡಬಹುದು ಎಂದು ಸಲಹೆ ನೀಡಿದ್ದಾರೆ.

ಈ ಬೆಳೆಗಳನ್ನು ಬೆಳೆಯಬಾರದು: ಶುಂಠಿ ನಂತರ ಟೊಮೆಟೊ, ಆಲೂಗೆಡ್ಡೆ, ಮೆಣಸಿನಕಾಯಿ, ಬದನೆಕಾಯಿ ಮತ್ತು ಶೇಂಗಾ ಬೆಳೆಗಳನ್ನು, ಬೆಳೆಯಬಾರದು. ಏಕೆಂದರೆ ಈ ಬೆಳೆಗಳು ಸೊರಗು ರೋಗ ಉಂಟು ಮಾಡುವ ರಾಲ್‌ಸ್ಟೋನಿಯಾ ಸೋಲಾನೇಸಿ ಯಾರಂ ಎಂಬ ಸೂಕ್ಷ್ಮಾಣು ಜೀವಿಗೆ ಆಶ್ರಯ ಸಸ್ಯಗಳಾಗಿವೆ. ಹಾಗೆಯೇ ಹೆಚ್ಚಿಗೆ ಮಳೆ ಬಂದಾಗ ಮಡಿಗಳ ಮೇಲಿರುವ ಮಣ್ಣು ಚದುರುವುದು ಮತ್ತು ಕೊಚ್ಚಿ ಹೋಗು ವುದನ್ನು ತಡೆಗಟ್ಟಲು ಮಡಿಗಳ ಮಣ್ಣಿನ ಮೇಲೆ ಹಸಿರು ಎಲೆ ಅಥವಾ ಸಾವಯವ ತ್ಯಾಜ್ಯ ವಸ್ತುಗಳನ್ನು ಹರಡಿ, ಹೊದಿಕೆ ಹಾಕಬೇಕು ಎಂದು ಎಚ್ಚರಿಸಿದರು.

ಶುಂಠಿ ಸ್ಪೆಷಲ್ ಸಿಂಪಡಣೆ: ನಾಟಿ ಮಾಡಿದ 60ನೇ, 90ನೇ ಮತ್ತು 120ನೇ ದಿನಗಳ ನಂತರ ಕೇರಳದ ಕೋಯಿಕ್ಕೋಡ್‌ನಲ್ಲಿರುವ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸ್ಪೈಸಸ್ ರಿಸರ್ಚ್(ಐಐಎಸ್‌ಆರ್) ಅನುಮೋದನೆಯಾದ ಸೂಕ್ಷ್ಮ ಪೋಷಕಾಂಶಗಳ ಮಿಶ್ರಣವಾದ ಶುಂಠಿ ಸ್ಪೆಷಲ್‌ಅನ್ನು ಸಿಂಪಡಣೆ ಮಾಡುವುದರಿಂದ ಶೇ.10–15 ರಷ್ಟು ಹೆಚ್ಚಿನ ಮತ್ತು ಉತ್ತಮ ಗುಣಮಟ್ಟದ ಇಳುವರಿಯನ್ನು ಪಡೆಯಬಹುದು ಎಂದು ಸಲಹೆ ನೀಡಿದ್ದಾರೆ.

ಸೋಲಿನಿಂದ ಧೃತಿಗೆಡಲ್ಲ, ಜನಸೇವೆ ಮುಂದುವರೆಸುವೆ: ರಾಮಚಂದ್ರ



"ಬಂಡಾಯ ಸ್ಪರ್ಧೆ, ನಗರದ ಮತದಾರರು, ಮುಸ್ಲಿಂ ಮತದಾರರು ಕೈ ಹಿಡಿಯಲಿಲ್ಲ ಎಂದು ನಾನು ದೂಷಿಸುವುದಿಲ್ಲ. ಎಲ್ಲಾ ಸಮುದಾಯದ ಮುಖಂಡರು ನಮ್ಮ ಪರವಾಗಿ ಚುನಾವಣೆ ಮಾಡಿದ್ದಾರೆ. ಸ್ವಲ್ಪ ವ್ಯತ್ಯಾಸಗಳಾಗಿರಬಹುದು. ಆದರೆ ಯಾರೂ ನನ್ನ ಸೋಲಿಗೆ ಕಾರಣರಲ್ಲ. ಸೋಲಿನ ಹೊಣೆಯನ್ನು ನಾನೇ ಹೊರುವೆ.

-ರಾಮಚಂದ್ರ, ಮಂಡ್ಯ ಕ್ಷೇತ್ರದ ಪರಾಜಿತ ಜೆಡಿಎಸ್ ಅಭ್ಯರ್ಥಿ.

ಮಂಡ್ಯ, ಮೇ 16– ನನ್ನ ಸೋಲಿಗೆ ನಾನು ಯಾರನ್ನೂ ದೂಷಿಸುವುದಿಲ್ಲ. ಸೋಲಿನಿಂದ ಧೃತಿಗೆಡುವುದಿಲ್ಲ. ಹಿಂದಿನಿಂದಲೂ ಜನ ಸೇವೆ ಮಾಡಿಕೊಂಡು ಬಂದಿದ್ದೇನೆ. ಮುಂದೆಯೂ ನನ್ನ ಜನ ಸೇವೆ ಮುಂದುವರೆಯಲಿದೆ ಎಂದು ಮಂಡ್ಯ ಕ್ಷೇತ್ರದ ಜೆಡಿಎಸ್ ಪರಾಜಿತ ಅಭ್ಯರ್ಥಿ ಹಾಗೂ ಮನ್‌ಮುಲ್ ಅಧ್ಯಕ್ಷ ಬಿ.ಆರ್.ರಾಮಚಂದ್ರ ತಿಳಿಸಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಬ್ಬ ಸಾಮಾನ್ಯ ರೈತನ ಮಗನನ್ನು ಗುರುತಿಸಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಹಾಗೂ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ನನಗೆ ಟಿಕೆಟ್ ನೀಡಿದರು. ಕಡಿಮೆ ಅವಧಿಯಲ್ಲಿ ನಾನು ಮತದಾರರನ್ನು ತಲುಪಲು ಸಾಧ್ಯವಾಗಿಲ್ಲ. ಆದರೂ ನನಗೆ 59 ಸಾವಿರಕ್ಕೂ ಹೆಚ್ಚು ಮತ ನೀಡಿದ ಕ್ಷೇತ್ರದ ಮತದಾರರಿಗೆ ಅಭಾರಿಯಾಗಿ ದ್ದೇನೆ ಎಂದು ತಿಳಿಸಿದರು. ನಾನು ನಗರದ ಎಲ್ಲಾ ವಾರ್ಡ್‌ಗಳಿಗೆ ತೆರಳಲು ಸಾಧ್ಯವಾಗಿಲ್ಲ. ಆದರೂ ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರು, ಸ್ನೇಹಿತರು, ಹಿತೈಷಿಗಳು ನನ್ನ ಪರ ಚುನಾವಣೆಯಲ್ಲಿ ಶ್ರಮಿಸಿದ್ದಾರೆ. ನಾನು ಸೋತಿಲ್ಲ. ಕ್ಷೇತ್ರದ ಜನರ ಪ್ರೀತಿಯಲ್ಲಿ ಗೆದ್ದಿದ್ದೇನೆ. ಇಷ್ಟೊಂದು ಮತಗಳನ್ನು ನೀಡಿ ನನಗೆ ಮತ್ತಷ್ಟು ಶಕ್ತಿ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಪಕ್ಷ ಸಂಘಟನೆ ಮಾಡಲಾಗುವುದು ಎಂದರು.

ನನಗೆ ಮತ ನೀಡಿದ ಕ್ಷೇತ್ರದ ಜನರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಎರಡ್ಮೂರು ದಿನಗಳಲ್ಲಿ ಪ್ರತಿ ಗ್ರಾಮಗಳಿಗೆ ತೆರಳಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಮತದಾರರನ್ನು ಭೇಟಿ ನೀಡಿ ಕೃತಜ್ಞತೆ ಸಲ್ಲಿಸಲಿದ್ದೇನೆ. ಮಾಜಿ ಪ್ರಧಾನಿ ದೇವೇಗೌಡ ಹಾಗೂ ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿದ್ದೆ. ಅವರು ನನಗೆ ಆತ್ಮಸ್ಥೈರ್ಯ ತುಂಬಿದ್ದಾರೆ ಎಂದರು.

ನಮ್ಮ ನಾಯಕರಾದ ಸಿ.ಎಸ್.ಪುಟ್ಟರಾಜು ಸೋಲುತ್ತಾರೆ ಎಂದು ನಿರೀಕ್ಷಿಸಿರಲಿಲ್ಲ. ಮೇಲುಕೋಟೆ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದಾರೆ. ಬಡವರ ನೆರವಿಗೆ ನಿಂತಿದ್ದಾರೆ. ಆದರೂ ಮತದಾರರು ಬಿಜೆಪಿ ಹಾಗೂ ಜೆಡಿಎಸ್ ನೋಡಿದ್ದೇವೆ ಎಂದು ಕಾಂಗ್ರೆಸ್‌ಗೆ ಮತ ನೀಡಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ನಗರಸಭೆ ಅಧ್ಯಕ್ಷ ಹೆಚ್.ಎಸ್.ಮಂಜು ಮಾತನಾಡಿ, ನಗರದ ಎಲ್ಲಾ ವಾರ್ಡ್‌ಗಳಲ್ಲೂ ನಾವು ಪ್ರಚಾರ ಮಾಡಿದ್ದೇವೆ. ಎಲ್ಲಾ ಮುಖಂಡರು, ಸದಸ್ಯರು, ಕಾರ್ಯಕರ್ತರು ಪಕ್ಷದ ಅಭ್ಯರ್ಥಿ ಪರ ಕೆಲಸ ಮಾಡಿದ್ದೇವೆ ಎಂದ ಅವರು, ಚುನಾವಣೆ ದೃಷ್ಟಿಯಿಂದ ಬೇರೆ ಬೇರೆಯಾಗಿದ್ದೆವು. ಇನ್ನು ಮುಂದೆ ನಾವೆಲ್ಲರೂ ಅಣ್ಣ ತಮ್ಮಂದಿರಂತೆ ಮುಂದುವರೆಯುತ್ತೇವೆ. ಯಾವುದೇ ಭಿನ್ನಾಭಿಪ್ರಾಯವಿಲ್ಲದೆ ಜೊತೆಗಿರಲಿದ್ದೇವೆ ಎಂದು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಗೋಷ್ಠಿಯಲ್ಲಿ ಮನ್‌ಮುಲ್ ಉಪಾಧ್ಯಕ್ಷ ಎಂ.ಎಸ್.ರಘುನಂದನ್, ಜೆಡಿಎಸ್ ಎಸ್ಸಿ ಎಸ್ಟಿ ಜಿಲ್ಲಾಧ್ಯಕ್ಷ ಸಾತನೂರು ಜಯರಾಂ, ಮುಖಂಡರಾದ ಸ್ವಾಮಿ, ಮೋಹನ್, ಪ್ರತಾಪ್ ಇದ್ದರು.

ಡಿಕೆಶಿ ಮುಖ್ಯಮಂತ್ರಿ ಮಾಡಲು ಒತ್ತಾಯಿಸಿ ಪ್ರತಿಭಟನೆ



ಮದ್ದೂರು, ಮೇ 16– ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡುವಂತೆ ಒತ್ತಾಯಿಸಿ ಶ್ರೀನಾಡಪ್ರಭು ಕೆಂಪೇಗೌಡ ಒಕ್ಕಲಿಗರ ಸಂಘದ ಕಾರ್ಯಕರ್ತರು ಮಂಗಳವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಪ್ರವಾಸಿ ಮಂದಿರದ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿ ಡಿಕೆಶಿಯನ್ನು ಸಿಎಂ ಮಾಡುವಂತೆ ಆಗ್ರಹಿಸಿದರು.

ಸಂಘದ ತಾಲೂಕು ಅಧ್ಯಕ್ಷ ಪಿ.ಶಿವಪ್ಪ ಮಾತನಾಡಿ, ಈ ಹಿಂದೆ ಬಿಜೆಪಿ ನೇತೃತ್ವದ ಸರ್ಕಾರ ಇದ್ದರೂ ಈ ಚುನಾವಣೆಯಲ್ಲಿ ಕಾಂಗ್ರೆಸ್ ಹೆಚ್ಚು ಸ್ಥಾನ ಗಳಿಸಲು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು ಸಾಕಷ್ಟು ಶ್ರಮಿಸಿದ್ದಾರೆ ಎಂದರು.

ಈ ಹಿಂದೆ ಬಿಜೆಪಿ ಆಪರೇಷನ್ ಕಮಲ ಮಾಡುವುದನ್ನು ತಪ್ಪಿಸಲು ಗುಜರಾತ್ ಕಾಂಗ್ರೆಸ್ ಸದಸ್ಯರನ್ನು ಕರ್ನಾಟಕದಲ್ಲಿ ಸುರಕ್ಷಿತಗೊಳಿಸಿ ಪ್ರಧಾನಿ ಮೋದಿ ಸೇರಿದಂತೆ ಹಲವು ಬಿಜೆಪಿ ನಾಯಕರ ಕೆಂಗಣ್ಣಿಗೆ ಗುರಿಯಾಗಿದ್ದರು. ಅಲ್ಲದೇ ಕಾಂಗ್ರೆಸ್–ಜೆಡಿಎಸ್ ಸಮ್ಮಿಶ್ರ ಸರ್ಕಾರದ ಪ್ರಮುಖ ರೂವಾರಿಯಾಗಿದ್ದರು ಎಂದ ಅವರು ಪಕ್ಷಕ್ಕಾಗಿ ಇಷ್ಟೊಂದು ಕಾಣಿಕೆ ನೀಡಿರುವ ಡಿ.ಕೆ.ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡಲೇಬೇಕೆಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಪಕ್ಷದ ವರಿಷ್ಠರನ್ನು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಂಘದ ಕಾರ್ಯದರ್ಶಿ ಸುರೇಶ್, ಪದಾಧಿಕಾರಿಗಳಾದ ಡಾ.ಕೃಷ್ಣ ರವಿಕುಮಾರ್, ಕುಮಾರ್, ಪ್ರಕಾಶ್, ಶಿವರಾಮು, ಶ್ರೀನಿವಾಸ್, ಮಹೇಶ್, ದೊರೆಸ್ವಾಮಿ ಸೇರಿದಂತೆ ಇತರರಿದ್ದರು.

ನೇರ ಸಂದರ್ಶನ

ಮಂಡ್ಯ, ಮೇ 16– ಮೆ॥ ಬಿ.ಜೆಡ್ ಫಿನ್‌ಸರ್ವ್ ಪ್ರೈ.ಲಿ ವತಿಯಿಂದ ಪಿಯುಸಿ ಮತ್ತು ಯಾವುದೇ ಪದವಿ ಉತ್ತೀರ್ಣರಾದ ಮಹಿಳಾ ಅಭ್ಯರ್ಥಿಗಳಿಗೆ ಮೇ 19 ರಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ.

ಅಂದು ಬೆಳಗ್ಗೆ 10 ಗಂಟೆ ಸಂದರ್ಶನ ಪ್ರಾರಂಭವಾಗಲಿದ್ದು, 4 ಭಾವಚಿತ್ರ, ಬಯೋಡೇಟಾ, ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಅಂಕ ಪಟ್ಟಿ, ಆಧಾರ್ ಕಾರ್ಡ್ ಮತ್ತು ಪ್ಯಾನ್ ಕಾರ್ಡ್ ಪ್ರತಿಯೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗೆ ದೂ: 8217803781, 08232–295124 ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಎನ್.ಆರ್.ವೇಣುಗೋಪಾಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿಪ್ಲೋಮಾ: ಅರ್ಜಿ ಆಹ್ವಾನ

ಮಂಡ್ಯ, ಮೇ 16– ಕೆ.ಆರ್.ಪೇಟೆ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಪ್ರಸಕ್ತ ಸಾಲಿನ ಡಿಪ್ಲೋಮಾ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು, ಅರ್ಜಿ ಸಲ್ಲಿಸಲು ಮೇ 18 ರಂದು ಕೊನೆ ದಿನ. ಎಸ್‌ಎಸ್‌ಎಲ್‌ಸಿ ತೇರ್ಗಡೆಯಾಗಿರುವ ಅರ್ಹ ವಿದ್ಯಾರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ, ಮೆರಿಟ್ ಆಧಾರದ ಮೇಲೆ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಕಚೇರಿ ಅಥವಾ ಮೊ. 9448268206 ಸಂಪರ್ಕಿಸಬಹುದು ಎಂದು ಕೆ.ಆರ್.ಪೇಟೆ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆ ತಿಳಿಸಿದೆ.

ಯುವಕ ಅನುಮಾನಾಸ್ಪದ ಸಾವು



ಭಾರತೀನಗರ, ಮೇ 16– ಇಲ್ಲಿಗೆ ಸಮೀಪದ ಬಿದರಹಳ್ಳಿ ಗ್ರಾಮದ ಯುವಕನೋರ್ವ ನೇಣು ಬಿಗಿದ ಸ್ಥಿತಿಯಲ್ಲಿ ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ಬೆಂಗಳೂರಿನ ಬಿಡದಿಯಲ್ಲಿ ನಡೆದಿದೆ.

ಬಿದರಹಳ್ಳಿ ಗ್ರಾಮದ ಬಿ.ಎಚ್. ಕೃಷ್ಣೇಗೌಡರ ಪುತ್ರ ಬಿ.ಕೆ.ಚಂದನ್ (23) ಸಾವನ್ನಪ್ಪಿದ ಯುವಕ. ಈತ ಬಿಡದಿಯ ಟಯೋಟಾ ಕಂಪನಿಯಲ್ಲಿ ಗುತ್ತಿಗೆ ಕಾರ್ಮಿಕನಾಗಿ ಕಾರ್ಯ ನಿರ್ವಹಿಸುತ್ತಿದ್ದು, ಬಿಡದಿ ಬಳಿಯ ಭತ್ರ ಗ್ರಾಮದಲ್ಲಿ ಮನೆ ಮಾಡಿಕೊಂಡು ವಾಸವಾಗಿದ್ದ ಎನ್ನಲಾಗಿದೆ. ಇದೀಗ ಅದೇ ಮನೆಯಲ್ಲಿ ಚಂದನ್‌ನ ಎರಡೂ ಕೈಗಳಿಗೆ ದಾರ, ಕಣ್ಣಿಗೆ ಬಟ್ಟೆ ಕಟ್ಟಿದ್ದು, ನೇಣು ಬಿಗಿದ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಗಿದೆ. ಚಂದನ್ ಪೋಷಕರು ನಮ್ಮ ಮಗ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಳ್ಳಲು ಸಾಧ್ಯವಿಲ್ಲ.

ಹೀಗಾಗಿ ನಮ್ಮ ಮಗನನ್ನು ಯಾರೋ ಕೊಲೆ ಮಾಡಿದ್ದಾರೆ ಎಂದು ಶಂಕಿಸಿ ಬಿಡದಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಸ್ಥಳಕ್ಕಾಗಮಿಸಿ ಪರಿಶೀಲನೆ ನಡೆಸಿ, ಮೃತದೇಹವನ್ನು ಬೆಂಗಳೂರಿನ ರಾಜರಾಜೇಶ್ವರಿ ಮೆಡಿಕಲ್ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಒಪ್ಪಿಸಿದ್ದಾರೆ. ಇದೇ ವೇಳೆ ಚಂದನ್ ಅವರ ಕಣ್ಣುಗಳನ್ನು ಬೆಂಗಳೂರಿನ ರಾಜರಾಜೇಶ್ವರಿ ಮೆಡಿಕಲ್ ಆಸ್ಪತ್ರೆಗೆ ದಾನ ಮಾಡಲಾಗಿದೆ.

ಸೋಲು–ಗೆಲುವನ್ನು ಸಮನಾಗಿ ಸ್ವೀಕರಿಸುವೆ: ಮುನಿರಾಜು



ಮಳವಳ್ಳಿ, ಮೇ 16– ಸೋಲು–ಗೆಲುವನ್ನು ಸಮನಾಗಿ ಸ್ವೀಕರಿಸಿ ಮುಂಬರುವ ಲೋಕಸಭೆ, ಜಿಲ್ಲಾ ಹಾಗೂ ತಾಪಂ ಚುನಾವಣೆಗಳಿಗೆ ಈಗಿನಿಂದಲೇ ತಯಾರಿ ನಡೆಸಲಾಗುವುದು ಎಂದು ಕ್ಷೇತ್ರದ ಪರಾಜಿತ ಬಿಜೆಪಿ ಅಭ್ಯರ್ಥಿ ಜಿ.ಮುನಿರಾಜು ತಿಳಿಸಿದರು.

ಪಟ್ಟಣದ ಹೊರವಲಯದ ಮಾರೇಹಳ್ಳಿ ಶ್ರೀಲಕ್ಷ್ಮಿ ನರಸಿಂಹಸ್ವಾಮಿ ದೇವಸ್ಥಾನದ ಬಳಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಷೇತ್ರಕ್ಕೆ ಬಂದಾಗಿನಿಂದಲೂ ಇಲ್ಲಸಲ್ಲದ ಆರೋಪ ಮಾಡುತ್ತಾ ಬಂದರು. ಮೊದಲು ಸೈಟ್ ಹಗರಣ, ನಂತರ ಆಡಿಯೋ ಬಿಟ್ಟರು. ದೇವರ ಸನ್ನಿಧಿಯಲ್ಲಿ ಹೇಳುತ್ತೇನೆ. ನಾನು ಯಾರ ಬಳಿಯೂ ಒಳ ಒಪ್ಪಂದ ಮಾಡಿಕೊಂಡಿಲ್ಲ. ಚುನಾವಣೆ ಸಮೀಪಿಸುತ್ತಿದ್ದಂತೆ ವಿರೋಧಿಗಳು ಅವರ ಹತ್ತಿರ, ಇವರ ಹತ್ತಿರ ಬುಕ್ ಆಗಿದ್ದಾರೆ ಎಂದು ಮತದಾರರನ್ನು ದಾರಿ ತಪ್ಪಿಸಿದರು. ನಾನೇನಾದರೂ ಆ ಕೆಲಸ ಮಾಡಿದ್ದರೇ ನನ್ನ ಕುಟುಂಬವನ್ನು ನರಸಿಂಹಸ್ವಾಮಿ ಸರ್ವನಾಶ ಮಾಡಲಿ. ಇಲ್ಲವೇ ನನ್ನ ವಿರುದ್ಧ ಸುಳ್ಳು ಹೇಳಿದ್ದವರಿಗೆ ದೇವರೇ ಶಿಕ್ಷೆ ನೀಡಲಿ ಎಂದರು.

ಕ್ಷೇತ್ರ ಬಿಟ್ಟು ಹೋಗಬಾರದಿತ್ತು ಎಂದು ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಮುಂದಿನ 5 ವರ್ಷ ಮಳವಳ್ಳಿಯಲ್ಲಿಯೇ ಇದ್ದು, ಪಕ್ಷ ಸಂಘಟನೆ ಮಾಡುತ್ತೇನೆ. ಎಲ್ಲರ ವಿಶ್ವಾಸ ಗಳಿಸುತ್ತೇನೆ. ರಾಜಕಾರಣ ನಿಂತ ನೀರಲ್ಲ. ಹರಿಯುವ ನೀರು. ಎರಡೂವರೆ ಲಕ್ಷ ಜನರ ವಿಶ್ವಾಸ ಗಳಿಸುತ್ತೇನೆ ಎಂದು ಭರವಸೆ ನೀಡಿದರು.

ಬಿಜೆಪಿ ತಾಲೂಕು ಅಧ್ಯಕ್ಷ ಕೃಷ್ಣ ಮಾತನಾಡಿ, ಕಾಂಗ್ರೆಸ್ ಭರವಸೆಗಳಿಗೆ ಮನಸೋತ ರಾಜ್ಯದ ಜನರು ಕಾಂಗ್ರೆಸ್ ಪಕ್ಷ ಬೆಂಬಲಿಸಿದ್ದಾರೆ. ಬಿಜೆಪಿ ಕಾರ್ಯಕರ್ತರು ಧೃತಿಗೆಡದೇ ಬಿಜೆಪಿ ಕಟ್ಟಿ ಬೆಳೆಸಲು ಮುಂದಾಗುತ್ತಾರೆಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಕೆ.ಸಿ.ನಾಗೇಗೌಡ, ಅಶೋಕ್, ಪುಟ್ಟಸ್ವಾಮಿ, ಶಕುಂತಲ, ರಾಜೀವ್, ವೇಣುಗೋಪಾಲ್, ನಾಗಣ್ಣ, ಸಿದ್ದಲಿಂಗಸ್ವಾಮಿ, ನಾಗೇಶ್, ಮಂಜಣ್ಣ ಸೇರಿದಂತೆ ಇತರರಿದ್ದರು.

ಡಿಕೆಶಿ ಸಿಎಂ ಮಾಡುವಂತೆ ಒಕ್ಕಲಿಗರ ಸಂಘ ಆಗ್ರಹ



ಕೆ.ಆರ್.ಪೇಟೆ, ಮೇ 16– ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡುವಂತೆ ತಾಲೂಕು ಒಕ್ಕಲಿಗರ ಸಂಘದ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.

ಪಟ್ಟಣದ ತಾಲೂಕು ಒಕ್ಕಲಿಗರ ಸಂಘದ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಆರ್.ಎಸ್. ಶಿವರಾಮೇಗೌಡ, ಒಕ್ಕಲಿಗರ ಪ್ರಾಬಲ್ಯವಿರುವ ಜಿಲ್ಲೆಗಳಲ್ಲಿ ಕಾಂಗ್ರೆಸ್ ಹೆಚ್ಚಿನ ಸ್ಥಾನ ಪಡೆದಿದೆ. ಇದಕ್ಕೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಪರಿಶ್ರಮ ಕಾರಣ. ಪಕ್ಷ ಸಂಕಷ್ಟದಲ್ಲಿದ್ದಾಗ ಕೆಪಿಸಿಸಿ ಅಧ್ಯಕ್ಷರಾಗಿ ಕಷ್ಟಪಟ್ಟು ಪಕ್ಷ ಸಂಘಟನೆ ಮಾಡಿದ್ದಾರೆ. ಕಾಂಗ್ರೆಸ್‌ನಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿದ್ದ ವೇಳೆ ಪಕ್ಷಕ್ಕೆ ಬಹುಮತ ಬಂದರೆ ಅಧ್ಯಕ್ಷರಿಗೆ ಸಿಎಂ ಹುದ್ದೆ ನೀಡುವುದು ವಾಡಿಕೆ. ಈ ಹಿನ್ನಲೆಯಲ್ಲಿ ಕಾಂಗ್ರೆಸ್ ವರಿಷ್ಠರು ಡಿ.ಕೆ. ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಹುದ್ದೆ ನೀಡುವ ಮೂಲಕ ಅವರ ಪರಿಶ್ರಮಕ್ಕೆ ತಕ್ಕ ಪ್ರತಿಫಲ ನೀಡಬೇಕು ಎಂದು ವರಿಷ್ಠರಾದ ಸೋನಿಯಾಗಾಂಧಿ, ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಒತ್ತಾಯಿಸಿದರು.

ಕಳೆದ 20 ವರ್ಷಗಳ ಹಿಂದೆ ಎಸ್.ಎಂ. ಕೃಷ್ಣ ಮುಖ್ಯಮಂತ್ರಿಯಾಗಿದ್ದು ಬಿಟ್ಟರೇ, ಇಲ್ಲಿವರೆಗೆ ಒಕ್ಕಲಿಗರಿಗೆ ಸಿಎಂ ಹುದ್ದೆ ಸಿಕ್ಕಿಲ್ಲ. ಹೀಗಾಗಿ ಶಿವಕುಮಾರ್ ಅವರಿಗೆ ಸಿಎಂ ಪಟ್ಟ ನೀಡಬೇಕು. ಈಗಾಗಲೇ 5 ವರ್ಷ ಸಿಎಂ ಆಗಿದ್ದ ಸಿದ್ದರಾಮಯ್ಯನವರು ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಲು ಅವಕಾಶ ನೀಡಬೇಕು. ಇಲ್ಲದಿದ್ದರೇ ತಾಲೂಕು ಒಕ್ಕಲಿಗರ ಸಂಘದಿಂದ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ತಾಲೂಕು ಒಕ್ಕಲಿಗರ ಸಂಘದ ಕಾರ್ಯದರ್ಶಿ ಎಂ.ಬಿ. ತಿಮ್ಮೇಗೌಡ, ಕೆ.ಆರ್.ಪೇಟೆ ಕೃಷ್ಣ ಪ್ರತಿಷ್ಠಾನ ಅಧ್ಯಕ್ಷ ಜವರಾಯಿಗೌಡ, ಸಂಘದ ಪದಾಧಿಕಾರಿಗಳಾದ ವಸಂತಕುಮಾರ್, ವಕೀಲ ಆರ್.ಕೆ. ರಾಜೇಗೌಡ, ಚನ್ನಿಂಗೇಗೌಡ, ಅಂಚಿ. ಸಣ್ಣಸ್ವಾಮೀಗೌಡ, ಜಿ.ಎಂ.ಶ್ರೀಧರ್, ಎಂ.ಆರ್.ಪ್ರಸನ್ನಕುಮಾರ್ ಮತ್ತಿತರರಿದ್ದರು.

ಮುಖ್ಯಮಂತ್ರಿ ಸ್ಥಾನಕ್ಕೆ ಒತ್ತಾಯಿಸಿ ಖರ್ಗೆಗೆ ವೀರಶೈವ ಮಹಾಸಭಾ ಪತ್ರ

ಡಿಸಿಎಂ ಹುದ್ದೆಗಾಗಿ ಇತರ ಸಮುದಾಯಗಳ ಲಾಬಿ

ಬೆಂಗಳೂರು, ಮೇ 16– ಕರ್ನಾಟಕದ ಮುಂದಿನ ಮುಖ್ಯಮಂತ್ರಿ ಆಯ್ಕೆಗಾಗಿ ಕಸರತ್ತು ತೀವ್ರಗೊಂಡಿದ್ದು, ಅಖಿಲ ಭಾರತ ವೀರಶೈವ ಮಹಾಸಭಾ ಕಾಂಗ್ರೆಸ್ ಹೈಕಮಾಂಡ್‌ಗೆ ಪತ್ರ ಬರೆದು ಸಮುದಾಯಕ್ಕೆ ಪ್ರತಿಷ್ಠಿತ ಹುದ್ದೆ ನೀಡುವಂತೆ ಒತ್ತಾಯಿಸಿದೆ.

ಕಾಂಗ್ರೆಸ್‌ನಿಂದ 34 ಚುನಾಯಿತ ಶಾಸಕರು ಲಿಂಗಾಯತರಾಗಿರುವುದರಿಂದ ಅವರ ಬೇಡಿಕೆಯನ್ನು ಪರಿಗಣಿಸಬೇಕು ಎಂದು ಮಹಾಸಭಾ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಬರೆದ ಪತ್ರದಲ್ಲಿ ತಿಳಿಸಿದೆ. ಪಕ್ಷವು 46 ಅಭ್ಯರ್ಥಿಗಳಿಗೆ ಟಿಕೆಟ್ ನೀಡಿದ್ದು, ಅದರಲ್ಲಿ 34 ಮಂದಿ ಗೆದ್ದಿದ್ದಾರೆ. ಇತರ 50 ಸ್ಥಾನಗಳಲ್ಲಿ ಶಾಸಕರನ್ನು ಆಯ್ಕೆ ಮಾಡುವಲ್ಲಿ ಸಮುದಾಯವು ಪ್ರಮುಖ ಪಾತ್ರ ವಹಿಸಿದೆ. ಸಮುದಾಯವು ಬಿಜೆಪಿಯಿಂದ ಕಾಂಗ್ರೆಸ್‌ಗೆ ತನ್ನ ನಿಷ್ಠೆಯನ್ನು ಬದಲಾಯಿಸಿದೆ ಎಂದು ಪತ್ರದಲ್ಲಿ ಹೇಳಲಾಗಿದೆ. ಇದೇ ವೇಳೆ ಇತರ ಸಮುದಾಯದವರೂ ತಮ್ಮ ನಾಯಕರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವಂತೆ ಒತ್ತಾಯಿಸಿವೆ.

ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಬೆಳಗಾವಿ ಉತ್ತರ ಶಾಸಕ ಆಸೀಫ್ ಸೇಠ್ ಒತ್ತಾಯಿಸಿದ್ದಾರೆ. ಉತ್ತರ ಕರ್ನಾಟಕದಲ್ಲಿ ಸತೀಶ್ ಜಾರಕಿಹೊಳಿ ನಾಯಕ. ಅವರಿಗೆ ಹುದ್ದೆ ನೀಡಬೇಕು. ಹಿರಿಯ ನಾಯಕ ಜಮೀರ್ ಅಹ್ಮದ್ ಖಾನ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವುದು ಪಕ್ಷದ ವಿವೇಚನೆಗೆ ಬಿಟ್ಟ ವಿಚಾರ ಎಂದು ಸೇಠ್ ಹೇಳಿದ್ದಾರೆ.

ಇದೇ ವೇಳೆ ಕಾಂಗ್ರೆಸ್ ಹಿರಿಯ ಮುಖಂಡ ರಾಮಲಿಂಗಾರೆಡ್ಡಿ ಬೆಂಬಲಿಗರು ಕೂಡ ಅವರಿಗೆ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಕರ್ನಾಟಕ ರೆಡ್ಡಿ ಜನಸಂಘದ ಸಂಚಾಲಕ, ರಾಮಲಿಂಗಾರೆಡ್ಡಿ ಸಮುದಾಯದ ಹಿರಿಯ ನಾಯಕ. ಶಿವಕುಮಾರ್ ಮತ್ತು ಸಿದ್ದರಾಮಯ್ಯ ಅವರಿಗಿಂತ ಹೆಚ್ಚು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ರಾಮಲಿಂಗಾರೆಡ್ಡಿ ಅವರು ಉಪಮುಖ್ಯಮಂತ್ರಿಯಾಗಲು ಅರ್ಹರು ಎಂದು ಹೇಳಿದರು.

ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಮೂವರನ್ನು ಸಚಿವರನ್ನಾಗಿಸಿದ್ದರು. ಅವರ ನಂತರ ಒಂದೇ ಒಂದು ಸಚಿವ ಸ್ಥಾನ ನೀಡಿದ್ದು, ಬಿಜೆಪಿ ಅದಕ್ಕೀಗ ಬೆಲೆ ತೆತ್ತಿದೆ. ರಾಮಲಿಂಗಾರೆಡ್ಡಿ ಅವರನ್ನು ಡಿಸಿಎಂ ಮಾಡಬೇಕು ಹಾಗೂ ಸಮುದಾಯದ ಇಬ್ಬರನ್ನು ಸಚಿವರನ್ನಾಗಿ ಮಾಡಬೇಕು ಎಂದು ಆಗ್ರಹಿಸಿದರು.

ನಾವು ಕಾಂಗ್ರೆಸ್ ಹೈಕಮಾಂಡ್‌ಗೆ ಪತ್ರ ಬರೆದಿದ್ದೇವೆ. ಅವರು ಪ್ರತಿಕ್ರಿಯಿಸದಿದ್ದರೆ ಮುಂದಿನ ದಿನಗಳಲ್ಲಿ ಪಕ್ಷವು ಸಮುದಾಯದಿಂದ ತೀವ್ರ ಪ್ರತಿರೋಧವನ್ನು ಎದುರಿಸಬೇಕಾಗುತ್ತದೆ ಎಂದಿದ್ದಾರೆ.

ಕೊಪ್ಪಳ ಜಿಲ್ಲೆಯ ಗಂಗಾವತಿಯಲ್ಲಿ ಕಾಂಗ್ರೆಸ್ ಮುಖಂಡ ಜಮೀರ್ ಅಹ್ಮದ್ ಖಾನ್ ಅವರಿಗೆ ಸ್ಥಾನ ನೀಡುವಂತೆ ಆಗ್ರಹಿಸಿ ಮುಸ್ಲಿಂ ಸಮುದಾಯದವರು ಪ್ರತಿಭಟನೆ ನಡೆಸಿದರು.

ಮುಂಬೈಗೆ ಸೋಲು; ಪ್ಲೇಆಫ್ ಸನಿಹದಲ್ಲಿ ಲಕ್ನೋ



ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಗುಜರಾತ್	13	9	4	0	18
ಸಿಎಸ್‌ಕೆ	13	7	5	1	15
ಲಕ್ನೋ	13	7	5	1	15
ಮುಂಬೈ	13	7	6	0	14
ಆರ್‌ಸಿಬಿ	12	6	6	0	12
ರಾಜಸ್ಥಾನ್	13	6	7	0	12
ಕೋಲ್ಕತ್ತಾ	13	6	7	0	12
ಪಂಜಾಬ್	12	6	6	0	12
ಎಸ್‌ಆರ್‌ಹೆಚ್	12	4	8	0	08
ಡೆಲ್ಲಿ	12	4	8	0	08

ಲಕ್ನೋ, ಮೇ 16(ಸಿಎನ್)– ಸ್ಟೋಯಿನಿಸ್ ಸ್ಫೋಟಕ ಆಟ ಹಾಗೂ ಅಂತಿಮ ಓವರ್‌ನಲ್ಲಿ ಮೊಹ್ಸಿನ್ ಖಾನ್ ಅವರ ಬಿಗಿ ಬೌಲಿಂಗ್ ನೆರವಿನಿಂದಾಗಿ ಮುಂಬೈ ವಿರುದ್ಧ 5 ರನ್‌ಗಳ ರೋಚಕ ಜಯ ಸಾಧಿಸಿ ಲಕ್ನೋ ಪ್ಲೇಆಫ್ ಸನಿಹ ತಲುಪಿತು.

ಇಲ್ಲಿನ ಅಟಲ್‌ಬಿಹಾರಿ ವಾಜಪೇಯಿ ಏಕತಾ ಕ್ರೀಡಾಂಗಣದಲ್ಲಿ ಟಾಸ್ ಸೋತು ಬ್ಯಾಟಿಂಗ್ ಮಾಡಿದ ಲಕ್ನೋ ನಿಗದಿತ 20 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 177 ರನ್ ಪೇರಿಸಿತು. ತಂಡದ ಪರ ಆರಂಭಿಕರಾಗಿ ಕಣಕ್ಕಿಳಿದ ಕ್ವಿಂಟನ್ ಡಿಕಾಕ್ (16), ದೀಪಕ್ ಹೂಡ ಐದು ರನ್ ಗಳಿಸಿ ಬಹುಬೇಗನೆ ವಿಕೆಟ್ ಒಪ್ಪಿಸಿದರು. ನಂತರ ಬಂದ ಪ್ರೇರಕ್‌ಮಂಕಡ್ ಸೊನ್ನೆ ಸುತ್ತಿ ವಿಕೆಟ್ ಕೈಚೆಲ್ಲಿದರೆ, ಕೃನಾಲ್‌ಪಾಂಡ್ಯ ನಿಧಾನಗತಿಯಲ್ಲಿ ಬ್ಯಾಟ್‌ಬೀಸಿ 49 ರನ್ ಗಳಿಸಿದಾಗ ಗಾಯಗೊಂಡು ನಿವೃತ್ತರಾಗಿ ನಿರ್ಗಮಿಸಿದರು. ಬಳಿಕ ಕ್ರೀಸ್‌ಗಿಳಿದ ಮಾರ್ಕಸ್ ಸ್ಟೋಯಿನಿಸ್ ಮುಂಬೈ ಬೌಲರ್‌ಗಳನ್ನು ಮನಬಂದಂತೆ ದಂಡಿಸಿ, ಕೇವಲ 48 ಎಸೆತಗಳಲ್ಲಿ ಆಕರ್ಷಕ 8 ಸಿಕ್ಸರ್ ಹಾಗೂ 4 ಬೌಂಡರಿ ಒಳಗೊಂಡ 89 ರನ್ ಸಿಡಿಸಿ ಅಜೇಯರಾಗಿ ಉಳಿದರು. ಇನ್ನೊಂದೆಡೆ ನಿಕಾಲಸ್ ಪೂರನ್ 8 ರನ್ ಗಳಿಸಿ ಸ್ಟೋಯಿನ್ಸ್‌ಗೆ ಉತ್ತಮ ಸಾಥ್ ನೀಡಿ ತಂಡದ ಮೊತ್ತ ಹೆಚ್ಚಿಸಲು ನೆರವಾದರು. ಮುಂಬೈ ಪರ ಬೆಹ್ರೆನ್ಡಾರ್ಫ್ 2 ವಿಕೆಟ್ ಉರುಳಿಸಿದರೆ, ಪಿಯುಷ್‌ಚಾವ್ಲಾ 1 ವಿಕೆಟ್ ಪಡೆದರು.

178 ರನ್‌ಗಳ ಗುರಿ ಬೆನ್ನತ್ತಿದ ಮುಂಬೈ ತಂಡ ಪರ ನಾಯಕ ರೋಹಿತ್‌ಶರ್ಮಾ 37ರನ್ ಗಳಿಸಿ ರವಿ ಬಿಷ್ಣೋಯ್ ಸ್ಪಿನ್ ಬಲೆಗೆ ಬಿದ್ದರು. ಇನ್ನೊಂದೆಡೆ ಇಶಾನ್‌ಕಿಶಾನ್ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿ 39 ಎಸೆತಗಳಲ್ಲಿ 3 ಸಿಕ್ಸರ್ ಹಾಗೂ 1 ಬೌಂಡರಿ ಒಳಗೊಂಡ 59 ರನ್ ಸಿಡಿಸಿ ರವಿ ಬಿಷ್ಣೋಯ್ ಎಸೆತದಲ್ಲಿ ಕ್ಯಾಚ್ ನೀಡಿ ವಿಕೆಟ್ ಒಪ್ಪಿಸಿದರು. 3ನೇ ವಿಕೆಟ್‌ಗೆ ಜೊತೆಯಾದ ಮುಂಬೈ ಸ್ಟಾರ್ ಆಟಗಾರ ಸೂರ್ಯಕುಮಾರ್ ಯಾದವ್ ಕೇವಲ 7 ರನ್ ಗಳಿಸಿ ಕ್ಲೀನ್‌ಬೋಲ್ಡ್ ಆದರು. ನೆಹಾಲ್‌ವಧೇರಾ 16 ರನ್ ಹಾಗೂ ವಿಷ್ಣು ವಿನೋದ್ 2 ರನ್‌ಗಳಿಗೆ ವಿಕೆಟ್ ಒಪ್ಪಿಸಿದರು. ಬಳಿಕ ಬಂದ ಕ್ಯಾಮರಾನ್‌ಗ್ರೀನ್ 4 ರನ್ ಗಳಿಸಿದರೆ, ಟೀಮ್‌ಡೇವಿಡ್ 32 ರನ್ ಗಳಿಸಿ ಲಕ್ನೋ ಬೌಲರ್‌ಗಳನ್ನು ಕಾಡಿದರಾದರೂ, ಪಂದ್ಯ ಗೆಲ್ಲಿಸಿ ಕೊಡುವಲ್ಲಿ ವಿಫಲವಾದರು. ಅಂತಿಮವಾಗಿ ಮುಂಬೈ 5 ರನ್‌ಗಳಿಂದ ಲಕ್ನೋ ತಂಡಕ್ಕೆ ಶರಣಾಯಿತು. ಲಕ್ನೋ ಪರ ಯಶ್‌ಠಾಕೂರ್ ಹಾಗೂ ರವಿ ಬಿಷ್ಣೋಯ್ ತಲಾ 2 ವಿಕೆಟ್ ಪಡೆದರೆ, ಮೊಹ್ಸಿನ್‌ಖಾನ್ 1 ವಿಕೆಟ್ ಪಡೆದು ತಂಡದ ಗೆಲುವಿಗೆ ನೆರವಾದರು. ಲಕ್ನೋ ತಂಡದ ಮಾರ್ಕಸ್ ಸ್ಟೋಯಿನಿಸ್ ಪಂದ್ಯೋತ್ತಮ ಪ್ರಶಸ್ತಿಗೆ ಭಾಜನರಾದರು.

ಪಶ್ಚಿಮ ಬಂಗಾಳ: ಅಕ್ರಮ ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ; 7 ಮಂದಿ ಸಾವು

ನವದೆಹಲಿ: ಪಶ್ಚಿಮ ಬಂಗಾಳದ ಪುರ್ಬಾ ಮೇದಿನಿಪುರ ಜಿಲ್ಲೆಯ ಎಗ್ರಾದಲ್ಲಿ ಪಟಾಕಿ ಕಾರ್ಖಾನೆಯೊಂದರಲ್ಲಿ ಸ್ಫೋಟ ಸಂಭವಿಸಿದ್ದು, ಘಟನೆಯಲ್ಲಿ ಏಳು ಜನ ಸಾವನ್ನಪ್ಪಿದ್ದಾರೆ ಎಂದು ಪೂರ್ವ ಮಿಡ್ನಾಪುರದ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

ಎಗ್ರಾದಲ್ಲಿರುವ ಅಕ್ರಮ ಪಟಾಕಿ ಘಟಕದಲ್ಲಿ ಸ್ಫೋಟ ಸಂಭವಿಸಿದೆ. ಘಟನೆಯಲ್ಲಿ ಏಳು ಮಂದಿ ಮೃತಪಟ್ಟಿದ್ದಾರೆ ಮತ್ತು ಇತರ ಏಳು ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಸ್ಫೋಟದಲ್ಲಿ ಮೃತಪಟ್ಟವರ ಕುಟುಂಬದ ನೆರವಿಗೆ ಸರ್ಕಾರ ಕ್ರಮ ಕೈಗೊಳ್ಳಲಿದೆ. ಜನ ತಮ್ಮ ಪ್ರದೇಶದಲ್ಲಿ ಅಕ್ರಮ ಪಟಾಕಿ ಕಾರ್ಖಾನೆಗಳಿದ್ದರೆ ಮಾಹಿತಿ ನೀಡಬೇಕು. ಅವುಗಳ ವಿರುದ್ಧ ನಾವು ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ರಾಜ್ಯ ಪರಿಸರ ಸಚಿವ ಮಾನಸ್ ರಂಜನ್ ಭುನಿಯಾ ಅವರು ಹೇಳಿದ್ದಾರೆ.

ವಾಹನ ತಪಾಸಣೆ ವೇಳೆ ಸಿಕ್ಕಿಬಿದ್ದ ಬೈಕ್ ಕಳ್ಳ

ಮೈಸೂರು, ಮೇ 16(ಎಂಕೆ)– ವಾಹನ ತಪಾಸಣೆ ವೇಳೆ ಸಿಕ್ಕಿಬಿದ್ದ ಬೈಕ್ ಕಳ್ಳನನ್ನು ಬಂಧಿಸಿರುವ ಅಶೋಕಪುರಂ ಠಾಣೆ ಪೊಲೀಸರು ಆತನಿಂದ ಎರಡು ಬೈಕ್‌ಗಳನ್ನು ವಶಕ್ಕೆ ಪಡೆದಿದ್ದಾರೆ.

ಹುಣಸೂರು ತಾಲೂಕಿನ ಬಿಳಿಕೆರೆ ಹೋಬಳಿಯ ಹಳ್ಳದಪುರ ನಿವಾಸಿ ಹರೀಶ್(32) ಬಂಧಿತ ಆರೋಪಿ. ಠಾಣೆ ವ್ಯಾಪ್ತಿಯ ಉದಯರವಿ ರಸ್ತೆಯಲ್ಲಿ ತಪಾಸಣೆ ನಡೆಸುವ ವೇಳೆ ಈತ ಸಿಕ್ಕಿಬಿದ್ದಿದ್ದು, ಅನುಮಾನಗೊಂಡು ವಿಚಾರಿಸಿದಾಗ ಪಾಂಡವಪುರ ಹಾಗೂ ಜಯಲಕ್ಷ್ಮಿಪುರಂ ಠಾಣೆಯ ವ್ಯಾಪ್ತಿಯ ಬೈಕ್ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಎಂದು ತಿಳಿದು ಬಂದಿದೆ. ಈ ಸಂಬಂಧ ಅಶೋಕಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಎರಡು ಗುಂಪುಗಳ ಮಧ್ಯೆ ಹಿಂಸಾಚಾರ: 16 ಮಂದಿ ಸಾವು

ಇಸ್ಲಾಮಾಬಾದ್, ಮೇ 16– ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ಎರಡು ಗುಂಪುಗಳ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಕನಿಷ್ಠ 16 ಜನರು ಮೃತಪಟ್ಟು ನಾಲ್ವರು ಗಾಯಗೊಂಡಿದ್ದಾರೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ.

ಕಲ್ಲಿದ್ದಲು ಗಣಿಯ ಗಡಿರೇಖೆಯ ವಿಷಯದಲ್ಲಿ ಕೋಹತ್ ಜಿಲ್ಲೆಯ ದರ್ರಾ ಆದಮ್ ಖೇಲ್ ಬುಡಕಟ್ಟು ಪ್ರದೇಶದಲ್ಲಿ ಎರಡು ಗುಂಪುಗಳ ನಡುವೆ ಕಳೆದ ರಾತ್ರಿ ವಿವಾದ ಉಂಟಾಗಿ ತೀವ್ರ ಘರ್ಷಣೆ ಏರ್ಪಟ್ಟಿತು ಎಂದು ಪೊಲೀಸ್ ಅಧಿಕಾರಿಗಳು ಕ್ಸಿನ್ಹುವಾ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ. ಎರಡು ಬುಡಕಟ್ಟು ಗುಂಪುಗಳ ನಡುವಿನ ದೀರ್ಘಕಾಲದ ವಿವಾದದಿಂದಾಗಿ ಗುಂಡಿನ ದಾಳಿ ನಡೆದಿದೆ ಎಂದು ಪೊಲೀಸರು ಹೇಳಿದ್ದಾರೆ. ಬುಡಕಟ್ಟು ಜನಾಂಗದ ವರನ್ನು ರಾಜೀ ಮಾಡಲು ಜಿರ್ಗಾ, ಸ್ಥಳೀಯ ಬುಡಕಟ್ಟು ನ್ಯಾಯಾಲಯದ ಹಲವಾರು ಸಭೆಗಳನ್ನು ನಡೆಸಿದರೂ ವಿಫಲವಾಗಿತ್ತು.

ನಿನ್ನೆ ಮುಂಜಾನೆ ಕಲ್ಲಿದ್ದಲು ಗಣಿಯಲ್ಲಿ ಕೆಲಸ ಮಾಡುವಾಗ ಗುಂಪುಗಳು ಪರಸ್ಪರ ಮುಖಾಮುಖಿಯಾದಾಗ ಹಿಂಸಾಚಾರಕ್ಕೆ ತಿರುಗಿದವು. ಘಟನೆಯ ನಂತರ, ಪೊಲೀಸರು ಮತ್ತು ರಕ್ಷಣಾ ತಂಡಗಳು ತಕ್ಷಣವೇ ಸ್ಥಳಕ್ಕೆ ಧಾವಿಸಿ ಸಂತ್ರಸ್ತರನ್ನು ಹತ್ತಿರದ ಆಸ್ಪತ್ರೆಗೆ ಸ್ಥಳಾಂತರಿಸಿದ್ದಾರೆ.

ಪೊಲೀಸರು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ವಿವಾದಿತ ಕಲ್ಲಿದ್ದಲು ಗಣಿಯನ್ನು ಕಾನೂನು ಜಾರಿ ಸಂಸ್ಥೆಗಳು ನಿಯಂತ್ರಣಕ್ಕೆ ತೆಗೆದುಕೊಂಡಿವೆ ಎಂದು ಪೊಲೀಸರು ತಿಳಿಸಿದ್ದಾರೆ, ಕೆಲವು ಆರೋಪಿಗಳು ಗುಂಡು ಹಾರಿಸಿದ ನಂತರ ಸ್ಥಳದಿಂದ ಪರಾರಿಯಾಗಿದ್ದಾರೆ. ಅವರನ್ನು ಪತ್ತೆಹಚ್ಚಲು ಶೋಧ ಕಾರ್ಯಾಚರಣೆ ನಡೆಯುತ್ತಿದೆ.



ಮಂಗಳವಾರ ಕೊಳ್ಳೇಗಾಲ ಶಾಸಕ ಎ.ಆರ್. ಕೃಷ್ಣಮೂರ್ತಿ, ಅವರ ಪತ್ನಿ ಶ್ರೀಮತಿ ಮಂಜುಳಾ ಕೃಷ್ಣಮೂರ್ತಿ, ಪುತ್ರ ಶ್ರೀವರ್ಧನ್ ಇತರರು ಮೈಸೂರಲ್ಲಿ ಸುತ್ತೂರು ಶ್ರೀಗಳನ್ನು ಭೇಟಿಯಾಗಿ ಆಶೀರ್ವಾದ ಪಡೆದರು. ಈ ವೇಳೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ. ಮರಿಸ್ವಾಮಿ, ಸದಾಶಿವಮೂರ್ತಿ, ಆಲ್ದೂರು ರಾಜಶೇಖರ್, ಆಲೂರು ಪ್ರವೀಣ್, ಪ್ರದೀಪ್, ತೋಟೇಶ್, ಮಧುವನಹಳ್ಳಿ ನಂಜುಂಡಸ್ವಾಮಿ, ಶಿವಕುಮಾರ್, ಮಹದೇವ್, ಪುಟ್ಟಸ್ವಾಮಿ, ಅಣಗಳ್ಳಿ ಬಸವರಾಜು, ಬೂದಿತಿಟ್ಟು ಸತೀಶ್ ಇತರರಿದ್ದರು.

7ನೇ ವೇತನ ಆಯೋಗದ ವರದಿ ಸಲ್ಲಿಕೆ ಅವಧಿ 6 ತಿಂಗಳು ವಿಸ್ತರಿಸಿದ ಸರ್ಕಾರ

ಬೆಂಗಳೂರು, ಮೇ 16– ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆ ಪರಿಷ್ಕರಣೆ ಸಂಬಂಧ ನಿವೃತ್ತ ಐಎಎಸ್ ಅಧಿಕಾರಿ ಸುಧಾಕರ್ ರಾವ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ 7ನೇ ವೇತನ ಆಯೋಗಕ್ಕೆ ವರದಿ ಸಲ್ಲಿಸುವ ಅವಧಿಯನ್ನು ಆರು ತಿಂಗಳು ವಿಸ್ತರಣೆ ಮಾಡಲಾಗಿದೆ. ರಾಜ್ಯಪಾಲರ ಆದೇಶದಂತೆ, 7ನೇ ವೇತನ ಆಯೋಗದ ವರದಿ ಸಲ್ಲಿಕೆಗೆ ನೀಡಲಾಗಿದ್ದ ಸಮಯಾವಕಾಶವನ್ನು ಮೇ 19, 2023 ರಿಂದ ಆರು ತಿಂಗಳವರೆಗೆ ವಿಸ್ತರಿಸಲಾಗಿದೆ ಎಂದು ರಾಜ್ಯ ಸರ್ಕಾರದ ಉಪ ಕಾರ್ಯದರ್ಶಿ(ಆರ್ಥಿಕ ಇಲಾಖೆ) ಆದೇಶ ಹೊರಡಿಸಿದ್ದಾರೆ. ನವೆಂಬರ್ 19, 2022ರಲ್ಲಿ 7ನೇ ವೇತನ ಆಯೋಗ ರಚಿಸಲಾಗಿತ್ತು ಮತ್ತು ವರದಿ ಸಲ್ಲಿಸಲು ಆರು ತಿಂಗಳ ಸಮಯ ನೀಡಲಾಗಿತ್ತು.

ಪ್ರತಿಭಾವಂತ ವೀರಶೈವ ಲಿಂಗಾಯತ ವಿದ್ಯಾರ್ಥಿಗಳಿಗೆ ಪುರಸ್ಕಾರ

ಮೈಸೂರು, ಮೇ 16– ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ವೀರಶೈವ ಲಿಂಗಾಯತ ಮಠಾಧಿಪತಿಗಳ ಗೋಷ್ಠಿ ವತಿಯಿಂದ ಈ ಎರಡು ಜಿಲ್ಲೆಗಳಿಗೆ ಸೇರಿದ, 2022–23ನೇ ಸಾಲಿನ ರಾಜ್ಯ ಹಾಗೂ ಕೇಂದ್ರೀಯ ಪಠ್ಯಕ್ರಮದ 10ನೇ ತರಗತಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿರುವ ಪ್ರತಿಭಾವಂತ ವೀರಶೈವ ಲಿಂಗಾಯತ ವಿದ್ಯಾರ್ಥಿಗಳಿಗೆ ನಗದು ಬಹುಮಾನ ನೀಡಿ ಪುರಸ್ಕರಿಸಲು ತೀರ್ಮಾನಿಸಿದ್ದು, ಜೂ.30ರೊಳಗೆ ಅರ್ಜಿ ಸಲ್ಲಿಸಬೇಕು. ಮಾಹಿತಿಗೆ ಮೊ.ಸಂ. 9449030588 (ಸಿ.ಮಹದೇವಪ್ರಸಾದ್) ಸಂಪರ್ಕಿಸಬಹುದು.

ಜೂ.4, ಅಮೆರಿಕದ ಮ್ಯಾಡಿಸನ್ ಸ್ಕ್ವೇರ್‌ನಲ್ಲಿ ರಾಹುಲ್ ಗಾಂಧಿ ರ‍್ಯಾಲಿ



ನವದೆಹಲಿ, ಮೇ 16– ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಇದೇ ತಿಂಗಳ 30 ರಂದು 10 ದಿನಗಳ ಅಮೆರಿಕ ಭೇಟಿ ಕೈಗೊಳ್ಳಲಿದ್ದಾರೆ. ಜೂನ್ 4 ರಂದು ರಾಹುಲ್ ಗಾಂಧಿ ನ್ಯೂಯಾರ್ಕ್‌ನ ಮ್ಯಾಡಿ ಸನ್ ಸ್ಕ್ವೇರ್ ಗಾರ್ಡನ್‌ನಲ್ಲಿ ರ‍್ಯಾಲಿ ನಡೆಸಲಿದ್ದಾರೆ. ಇದರಲ್ಲಿ ಸುಮಾರು 5,000 ಅನಿವಾಸಿ ಭಾರತೀಯರು ಭಾಗವಹಿಸಲಿದ್ದಾರೆ ಎಂದು ಮೂಲಗಳು ಮಂಗಳವಾರ ತಿಳಿಸಿವೆ.

ಇದಲ್ಲದೆ, ಅವರು ಪ್ಯಾನೆಲ್ ಡಿಸ್ಕಶನ್‌ಗಾಗಿ ವಾಷಿಂಗ್ಟನ್ ಹಾಗೂ ಕ್ಯಾಲಿಫೋರ್ನಿಯಾಗೆ ಭೇಟಿ ನೀಡಲಿದ್ದಾರೆ. ಅಲ್ಲದೇ ಸ್ಟಾನ್ ಫೋರ್ಡ್ ವಿವಿಯಲ್ಲಿ ಭಾಷಣ ಮಾಡಲಿದ್ದಾರೆ. ರಾಜಕಾರಣಿಗಳು ಮತ್ತು ಉದ್ಯಮಿಗಳನ್ನು ಕೂಡ ರಾಹುಲ್ ಭೇಟಿಯಾಗಲಿದ್ದಾರೆ.

ತೋಟದ ಕಾರ್ಮಿಕರ ಮೇಲೆ ಕಾಡಾನೆ ದಾಳಿ

ಓರ್ವನಿಗೆ ತೀವ್ರ ಗಾಯ, ಮೈಸೂರು ಆಸ್ಪತ್ರೆಗೆ ದಾಖಲು, ಉಳಿದವರು ಪಾರು



ಮಡಿಕೇರಿ, ಮೇ 16– ಕಾಫಿ ತೋಟದ ಕೆಲಸಕ್ಕೆ ತೆರಳಿದ್ದ ಕಾರ್ಮಿಕರ ಮೇಲೆ ಕಾಡಾನೆ ದಾಳಿ ಮಾಡಿದ ಪರಿಣಾಮ ಒಬ್ಬರು ಗಂಭೀರ ಗಾಯಗೊಂಡು ಆಸ್ಪತ್ರೆಗೆ ದಾಖಲಾದ ಘಟನೆ ಪಾಲಿಬೆಟ್ಟದ ಮಸ್ಕಲ್ ಕಾಫಿ ತೋಟದಲ್ಲಿ ನಡೆದಿದೆ.

ಪಾಲಿಬೆಟ್ಟದ ನಿವಾಸಿ ಬಾಬು(58) ಎಂಬುವರೇ ಕಾಡಾನೆ ದಾಳಿಯಿಂದ ಗಂಭೀರ ಗಾಯಗೊಂಡ ಕಾರ್ಮಿಕರಾಗಿದ್ದು ಇದೀಗ ಮೈಸೂರು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಪಾಲಿಬೆಟ್ಟ ಸಮೀಪದ ಮಸ್ಕಲ್ ಕಾಫಿ ತೋಟದಲ್ಲಿ ಕೆಲಸ ಮಾಡುತ್ತಿದ್ದ ಸಂದರ್ಭ ತೋಟದಲ್ಲಿದ್ದ ಕಾಡಾನೆ ದಿಢೀರ್ ದಾಳಿ ಮಾಡಿ, ಕಾರ್ಮಿಕ ಬಾಬು ಅವರ ಎದೆ ಹಾಗೂ ಕೈಗೆ ಗಂಭೀರ ಗಾಯ ಗೊಳಿಸಿದೆ. ಈ ಸಂದರ್ಭ ಜೊತೆಯಲ್ಲಿದ್ದ ಇತರ ಕಾರ್ಮಿಕರು ಸ್ಥಳದಿಂದ ಓಡಿ ತಪ್ಪಿಸಿಕೊಂಡಿದ್ದಾರೆ. ಬಳಿಕ ಬಾಬು ಅವರನ್ನು ಅಮ್ಮತ್ತಿ ಆರ್‌ಎಚ್‌ಪಿ ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ನಂತರ ಹೆಚ್ಚಿನ ಚಿಕಿತ್ಸೆಗೆ ಅರಣ್ಯ ಇಲಾಖೆ ಅಧಿಕಾರಿಗಳು ಮೈಸೂರು ಆಸ್ಪತ್ರೆಗೆ ಸ್ಥಳಾಂತರಿಸಿದ್ದಾರೆ. ಕಳೆದ 5 ವರ್ಷಗಳ ಹಿಂದೆಯೂ ಬಾಬು ಅವರು ಕಾಡಾನೆ ದಾಳಿಗೆ ಸಿಲುಕಿ ಗಾಯಗೊಂಡಿದ್ದರು.

ಘಟನಾ ಸ್ಥಳಕ್ಕೆ ಡಿಎಫ್‌ಒ ಶರಣಬಸಪ್ಪ, ಎಸಿಎಫ್ ನೆಹರು ಮತ್ತು ಸಿಬ್ಬಂದಿಗಳೂ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಇಲಾಖೆ ವತಿಯಿಂದಲೇ ಚಿಕಿತ್ಸೆ ವೆಚ್ಚವನ್ನು ಭರಿಸುವುದಾಗಿ ವಲಯ ಅರಣ್ಯ ಅಧಿಕಾರಿ ಕಳ್ಳಿರ ಎಂ. ದೇವಯ್ಯ ತಿಳಿಸಿದ್ದಾರೆ. ಕಾಡಾನೆ ಹಾವಳಿಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಇಲಾಖೆ ವತಿಯಿಂದ ಹಲವಾರು ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದ್ದು ಆನೆಗಳನ್ನು ಕಾಡಿಗಟ್ಟುವ ಕಾರ್ಯಾಚರಣೆ ಮುಂದುವರಿದಿದೆ ಎಂದು ಮಾಹಿತಿ ನೀಡಿದರು. ಈ ಸಂದರ್ಭ ಉಪವಲಯ ಅರಣ್ಯಾಧಿಕಾರಿ ಸಂಜಿತ್ ಸೋಮಯ್ಯ, ಆರ್.ಆರ್.ಟಿ ಸಿಬ್ಬಂದಿಗಳು ಹಾಜರಿದ್ದರು.

ಕಾಡಾನೆ ಹಾವಳಿ ತಡೆಯಿರಿ: ಕಾಫಿ ತೋಟಗಳಲ್ಲಿ ಬೀಡು ಬಿಟ್ಟಿರುವ ಕಾಡಾನೆಗಳು ನಿರಂತರವಾಗಿ ಕಾರ್ಮಿಕರ ಮೇಲೆ ದಾಳಿ ಮಾಡುತ್ತಿದ್ದು ಕಾರ್ಮಿಕರು ಜೀವ ಭಯದಲ್ಲಿ ಕೆಲಸ ಮಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಮಸ್ಕಲ್ ತೋಟದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರ ಮೇಲೆ ದಾಳಿ ಮಾಡಿದ ಕಾಡಾನೆಯಿಂದ ಸುತ್ತಮುತ್ತಲ ಕಾರ್ಮಿಕರು ತೋಟ ಕೆಲಸಕ್ಕೆ ತೆರಳಲು ಹಿಂದೇಟು ಹಾಕುತ್ತಿದ್ದಾರೆ. ದಾಳಿ ಮಾಡಿರುವ ಕಾಡಾನೆಯನ್ನು ಸೆರೆ ಹಿಡಿದು ಇತರ ಆನೆಗಳನ್ನು ಕಾಡಿಗಟ್ಟಬೇಕೆಂದು ಕಾರ್ಮಿಕ ವಿನು ಒತ್ತಾಯಿಸಿದ್ದಾರೆ.

ಆನೆ ದಾಳಿ: ಮುಸುಕಿನ ಜೋಳ ಬೆಳೆ ನಾಶ

ಗುಡ್ಡೆಹೊಸೂರು, ಮೇ 16– ಇಲ್ಲಿಗೆ ಸಮೀಪದ ಬೊಳ್ಳೂರು ಸುಣ್ಣದಕೇರೆ ಗ್ರಾಮದ ನಿವಾಸಿ ಮಂಡೆಪಂಡ ಸೋಮಯ್ಯ (ರಘು) ಎಂಬುವವರ ಜಮೀನಿನ ಮೇಲೆ ಒಂಟಿ ಸಲಗ ದಾಳಿ ನಡೆಸಿ ಮುಸುಕಿನ ಜೋಳವನ್ನು ನಾಶಪಡಿಸಿದೆ. ಜೊತೆಗೆ ಅವರು ಸಲಗ ದಾಳಿಯಿಂದ ಪಾರಾಗಿದ್ದಾರೆ. ಸೋಮಯ್ಯ ಅವರು ತಮ್ಮ ಎರಡು ಎಕರೆ ಜಮೀನಿನಲ್ಲಿ ಮುಸುಕಿನ ಜೋಳ ಬೆಳೆದಿದ್ದರು. ಕಳೆದ ರಾತ್ರಿ ಒಂಟಿ ಸಲಗ ಹೊಲಕ್ಕೆ ದಾಳಿ ನಡೆಸಿ ಜೋಳ ತಿಂದು, ತುಳಿದು ನಾಶ ಪಡಿಸಿದ್ದು, ಅಪಾರ ನಷ್ಟವಾಗಿದೆ. ಒಂದು ಬಾರಿ ಬೆಳೆಯ ರುಚಿ ನೋಡಿದ ಸಲಗ ಮತ್ತೆ ಮತ್ತೆ ದಾಳಿ ನಡೆಸಿ ಮತ್ತಷ್ಟು ಬೆಳೆ ನಾಶಪಡಿಸುವ ಆತಂಕದಲ್ಲಿ ಸೋಮಯ್ಯ ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ. ಕಳೆದ ರಾತ್ರಿ ಸೋಮಯ್ಯ ಅವರು ಹೊಲಕ್ಕೆ ತೆರಳಿದ ಸಂದರ್ಭದಲ್ಲಿ ಸಲಗನ ದಾಳಿಯಿಂದ ಕೂದಲೆಳೆಯ ಅಂತರದಲ್ಲಿ ಪಾರಾಗಿದ್ದಾರೆ.

ನಂಜರಾಯಪಟ್ಟಣದಲ್ಲಿ ವಿಜೃಂಭಣೆಯ

ಶ್ರೀ ನಂಜುಂಡೇಶ್ವರ ಜಾತ್ರೋತ್ಸವ



ಕುಶಾಲನಗರ, ಮೇ 16– ತಾಲೂಕಿನ ಪ್ರವಾಸಿ ಕೇಂದ್ರದ ಪವಿತ್ರ ಕಾವೇರಿ ನದಿ ದಂಡೆ ಮೇಲಿರುವ ನಂಜರಾಯಪಟ್ಟಣ ಗ್ರಾಮದ ಪುರಾತನ ಹಾಗೂ ವಾಸ್ತು ಶಿಲ್ಪಧಾರಿತ ಶ್ರೀ ನಂಜುಂಡೇಶ್ವರ ದೇವರ ವಾರ್ಷಿಕ ಉತ್ಸವ ಮತ್ತು ಜಾತ್ರೋತ್ಸವವು ಮಂಗಳವಾರ ವಿಜೃಂಭಣೆಯಿಂದ ನಡೆಯಿತು.

ನಂಜರಾಯಪಟ್ಟಣ ಶ್ರೀ ನಂಜುಂಡೇಶ್ವರ ದೇವಾಲಯ ಸಮಿತಿ ವತಿಯಿಂದ ಕ್ಷೇತ್ರದಲ್ಲಿ ನಂಜುಂಡೇಶ್ವರ ದೇವರ ವಾರ್ಷಿಕ ಉತ್ಸವದೊಂದಿಗೆ ಕನ್ನಾಂಬಾಡಿಯಮ್ಮ, ಬಸವೇಶ್ವರ ಹಾಗೂ ವೀರಭದ್ರೇಶ್ವರ ಸ್ವಾಮಿಯ ದೇವರ ಉತ್ಸವವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಮಂಗಳವಾರ ಸೂರ್ಯೋದಯಕ್ಕೂ ಮುನ್ನ ದೇವರಿಗೆ ಮಹಾರುದ್ರಾಭಿಷೇಕ ನೆರವೇರಿಸಲಾಯಿತು. ನಂತರ ದುಬಾರೆ ಬಳಿಯಿರುವ ಕಾವೇರಿ ನದಿಯಲ್ಲಿ ದೇವರ ವಿಗ್ರಹಗಳಿಗೆ ಗಂಗಾಸ್ನಾನ ಹಾಗೂ ಗಂಗಾಪೂಜೆ ನೆರವೇರಿಸಲಾಯಿತು. ಬಳಿಕ ವಿವಿಧ ಪುಷ್ಪಗಳಿಂದ ಅಲಂಕೃತಗೊಂಡಿದ್ದ ಅಡ್ಡಪಲ್ಲಕ್ಕಿಯಲ್ಲಿ ದೇವರ ವಿಗ್ರಹಗಳನ್ನು ಪ್ರತಿಷ್ಠಾಪಿಸಿ ಮಂಗಳಾರತಿ ಬಳಿಕ ಉತ್ಸವಕ್ಕೆ ಚಾಲನೆ ನೀಡಲಾಯಿತು.

ಉತ್ಸವದಲ್ಲಿ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ಶ್ರೀ ಬಸವಜ್ಯೋತಿ ಮಠದ ಅಪ್ಪಾಜಿ ಸ್ವಾಮಿಗಳ ನೇತೃತ್ವದಲ್ಲಿ ಉತ್ಸವದ ಎಲ್ಲಾ ಧಾರ್ಮಿಕ ಆಚರಣೆಗಳು ಹಾಗೂ ಪೂಜಾ ವಿಧಿ–ವಿಧಾನಗಳನ್ನು ನೆರವೇರಿಸಿದರು.

ಉತ್ಸವದ ಮೆರವಣಿಗೆ ಸಂದರ್ಭ ವೀರಭದ್ರೇಶ್ವರ ವೀರಗಾಸೆ ನೃತ್ಯ ನೆರೆದಿದ್ದ ಭಕ್ತರ ಗಮನ ಸೆಳೆಯಿತು. ದೇವರ ಉತ್ಸವವು ದೇವಸ್ಥಾನದ ಆವರಣಕ್ಕೆ ತಲುಪಿದ ನಂತರ ಬೆಂಕಿಕೊಂಡಕ್ಕೆ ಪೂಜೆ ಸಲ್ಲಿಸಲಾಯಿತು. ಉತ್ಸವಗಳು ಬೆಂಕಿಕೊಂಡ ಹಾಯ್ದು ದೇವಾಲಯ ಪ್ರದಕ್ಷಿಣೆ ನಡೆಸಿದವು.

ಸೋಮವಾರಪೇಟೆಯ ಕೆ.ಪಿ.ಯೋಗೇಶ್ ಹಾಗೂ ದೇವಾಲಯದ ಅರ್ಚಕ ಎಸ್.ಪಿ.ಅಪ್ಪಣ್ಣ ಅವರು ಶ್ರೀ ನಂಜುಂಡೇಶ್ವರ ಹಾಗೂ ಕನ್ನಂಬಾಡಿ ಅಮ್ಮನವರ ವಿಗ್ರಹಕ್ಕೆ ವಿವಿಧ ಪುಷ್ಪಗಳಿಂದ ಅಲಂಕಾರಗೈದು ಮಹಾ ಪೂಜೆ ಹಾಗೂ ಮಹಾ ಮಂಗಳಾರತಿ ನೆರವೇರಿಸಿದರು. ನಂತರ ಭಕ್ತಾದಿಗಳು ಬೆಂಕಿಕೊಂಡ ತುಳಿದು ಪೂಜೆ ಸಲ್ಲಿಸಿ ದೇವರ ಕೃಪೆಗೆ ಪಾತ್ರರಾದರು. ಈ ಸಂದರ್ಭ ದೇವಾಲಯ ಅಭಿವೃದ್ಧಿ ಸಮಿತಿ ಅಧ್ಯಕ್ಷ ಎನ್.ಕೆ.ಮೋಹನಕುಮಾರ್, ಉಪಾಧ್ಯಕ್ಷ ಕೆ.ಜಿ.ಲೋಕನಾಥ್, ಕಾರ್ಯದರ್ಶಿ ಕೆ.ವಿ. ಪ್ರೇಮಾನಂದ, ಖಜಾಂಚಿ ಬಿ.ಸಿ.ಮುರುಳಿ ಮಾದಯ್ಯ, ಸಹಕಾರ್ಯದರ್ಶಿ ಕೆ.ಎಸ್.ರತೀಶ್, ನಿರ್ದೇಶಕರಾದ ಟಿ.ಕೆ.ರಘು, ಸಿ.ಬಿ.ಆಶೀಷ್ ಅಪ್ಪಣ್ಣ, ಕೆ.ಕೆ.ಲೀಲಾವತಿ, ಕೆ.ಸಿ.ಕಾರ್ಯಪ್ಪ, ಬಿ.ಸಿ.ಕಾಳಯ್ಯ ಮುಖಂಡರಾದ ಕೆ.ಜಿ.ಲೋಕನಾಥ್, ಕೆ.ಪಿ.ಲೀಲಾವತಿ, ಬಿ.ಸಿ.ಕಾಳಯ್ಯ, ಗ್ರಾಪಂ ಅಧ್ಯಕ್ಷ ಸಿ.ಎಲ್.ವಿಶ್ವ ಇದ್ದರು.

ಪೂಜೋತ್ಸವದ ಅಂಗವಾಗಿ ದೇವಾಲಯವನ್ನು ಬಣ್ಣ ಬಣ್ಣದ ವಿದ್ಯುತ್ ಪುಷ್ಪಗಳಿಂದ ಹಾಗೂ ಪುಷ್ಪಗಳಿಂದ ಅಲಂಕರಿಸಲಾಗಿತ್ತು ನಂಜರಾಯಪಟ್ಟಣ ಸುತ್ತಲಿನ ಗಿರಿಜನ ಹಾಡಿಗಳಲ್ಲಿ ನೆಲೆಸಿರುವ ಗಿರಿಜನ ನಿವಾಸಿಗಳು ಮಹಿಳೆಯರು ಮಕ್ಕಳಾದಿಯಾಗಿ ಪೂಜೋತ್ಸವದಲ್ಲಿ ಪಾಲ್ಗೊಂಡಿದ್ದರು.

ದುಬಾರೆ ಸೇರಿದಂತೆ ವಿವಿಧ ಗಿರಿಜನ ಹಾಡಿಗಳ ನಿವಾಸಿಗಳು ಮಹಿಳೆಯರು ಹಾಗೂ ಮಕ್ಕಳಾದಿಯಾಗಿ ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು. ದೇವಾಲಯ ಸಮಿತಿ ವತಿಯಿಂದ ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ನೆರವೇರಿಸಲಾಯಿತು.

ಮೇ 19ರಿಂದ ಹಿಂದೂ ಕಪ್ ಷಟಲ್ ಪಂದ್ಯಾವಳಿ



ವಿರಾಜಪೇಟೆ, ಮೇ 16– ಕಾಕೋಟು ಪರಂಬು ಸ್ಪೋರ್ಟ್ಸ್ ಅಂಡ್ ರಿಕ್ರಿಯೇಷನ್ ಕ್ಲಬ್ ವತಿಯಿಂದ ಪುರುಷ ಹಾಗೂ ಮಹಿಳೆಯರಿಗೆ ಮೇ 19ರಿಂದ 21ರವರೆಗೆ ಜಿಲ್ಲಾ ಮಟ್ಟದ ಎರಡನೇ ವರ್ಷದ ಹಿಂದೂ ಕಪ್ ಷಟಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯನ್ನು ಏರ್ಪಡಿಸಲಾಗಿದೆ. ಮೇ 21 ಭಾನುವಾರ ಸಂಜೆ 6 ಗಂಟೆಗೆ ಫೈನಲ್ ಪಂದ್ಯಾವಳಿ ನಡೆಯಲಿದೆ ಎಂದು ಕ್ಲಬ್ ಅಧ್ಯಕ್ಷ ಮೇವಡ ಚಿಣ್ಣಪ್ಪ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2008ರಲ್ಲಿ ಪ್ರಾರಂಭಗೊಂಡ ರಿಕ್ರಿಯೇಷನ್ ಕ್ಲಬ್ ಉತ್ತಮ ಜನಪರ ಕಾರ್ಯ ಚಟುವಟಿಕೆಗಳನ್ನು ನಡೆಸುತ್ತಾ ಬಂದಿದೆ. 2013 ರಿಂದ 2019 ರವರೆಗೆ ಜಿಲ್ಲಾ ಮಟ್ಟದ ಹಾಕಿ ಪಂದ್ಯಾವಳಿಗಳನ್ನು ಯಶಸ್ವಿಯಾಗಿ ನಡೆಸಿದ ಹೆಗ್ಗಳಿಕೆ ಇದ್ದು, ಯುವ ಪೀಳಿಗೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಕಳೆದ ವರ್ಷ 30 ಲಕ್ಷ ರೂ. ವೆಚ್ಚದಲ್ಲಿ ವುಡನ್ ಷಟಲ್ ಕೋರ್ಟ್ ನಿರ್ಮಿಸಲಾಗಿದೆ ಎಂದರು.

ಷಟಲ್ ಪಂದ್ಯಾಟವನ್ನು ಪುರುಷ ಕ್ರೀಡಾಪಟುಗಳ ವಿವಿಧ ವಯೋಮಿತಿ ಆಧಾರದ ಮೇಲೆ ಡಬಲ್ಸ್ ಹಾಗೂ ಸಿಂಗಲ್ಸ್ ಮತ್ತು ಮುಕ್ತ ಪಂದ್ಯಾವಳಿಯನ್ನು 4 ವಿಭಾಗಗಳಲ್ಲಿ ಆಯೋಜಿಸಲಾಗಿದೆ ಎಂದ ಮೇವಡ ಚಿಣ್ಣಪ್ಪ ಕಳೆದ ಬಾರಿ ನಡೆಸಿದ ಪಂದ್ಯಾಟದಿಂದ ಉತ್ತಮ ಸ್ಪಂದನೆ ದೊರೆತಿರುವುದಾಗಿ ಹೇಳಿದರು.

ಕ್ಲಬ್ ಕಾರ್ಯದರ್ಶಿ ಅಮ್ಮಂಡಿರ ಚೇತನ್ ಮಾತನಾಡಿ, ಪಂದ್ಯಾಟದ ಪ್ರಥಮ ಹಾಗೂ ದ್ವಿತೀಯ ವಿಜೇತರಿಗೆ ನಗದು ಮತ್ತು ಆಕರ್ಷಕ ಟ್ರೋಫಿ ನೀಡಲಾಗುವುದು. ಪಂದ್ಯಾಟದಲ್ಲಿ ಪಾಲ್ಗೊಳ್ಳಲು ಇಚ್ಛಿಸುವವರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಸಮಾರೋಪ ಸಮಾರಂಭ ಫೈನಲ್ ಪಂದ್ಯಾಟದ ನಂತರ ನಡೆಯಲಿದ್ದು ಸಭೆ ಅಧ್ಯಕ್ಷತೆಯನ್ನು ಸ್ಪೋರ್ಟ್ಸ್ ಕ್ಲಬ್‌ನ ಅಧ್ಯಕ್ಷ ಮೇವಡ ಚಿಣ್ಣಪ್ಪ ವಹಿಸಲಿದ್ದಾರೆ ಎಂದರು. ಗೋಷ್ಠಿಯಲ್ಲಿ ಕ್ಲಬ್ ಸದಸ್ಯರಾದ ಮಂಡೇಪಂಡ ದಿನೇಶ್ ಉಪಸ್ಥಿತರಿದ್ದರು.

ಕೊಡವರ ಬೇಡಿಕೆ ಈಡೇರಿಕೆಗೆ ಸಿಎನ್‌ಸಿಯಿಂದ ನೂತನ ಶಾಸಕರಿಗೆ ಹಕ್ಕೊತ್ತಾಯ ಮಂಡನೆ



ಮಡಿಕೇರಿ, ಮೇ 16– ದೇವಟ್‌ಪರಂಬ್ ಕೊಡವ ನರಮೇಧ ದುರಂತ ಸ್ಮಾರಕ ಸಮಾಧಿಯಲ್ಲಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ಹಿರಿಯರಿಗೆ ಪುಷ್ಪನಮನ ಸಲ್ಲಿಸಿತು.

ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ಅವರ ಅಧ್ಯಕ್ಷತೆಯಲ್ಲಿ ಕೊಡವ ಲ್ಯಾಂಡ್ ಭೌಗೋಳಿಕ–ರಾಜಕೀಯ ಸ್ವಾಯತ್ತತೆಯನ್ನು ರಚಿಸುವ ಮೂಲಕ ಕೊಡವ ಸ್ವಯಂ ಶಾಸನದ ಹಕ್ಕುಗಳನ್ನು ಮಾನ್ಯ ಮಾಡುವ ಮೂಲಕ 'ಕೊಡವ' ಜನಾಂಗೀಯ ಸಮಸ್ಯೆಗಳನ್ನು ಪರಿಹರಿಸಲು ಕರ್ನಾಟಕದ ಹೊಸ ಆಡಳಿತ ವ್ಯವಸ್ಥೆ ಮತ್ತು ಕೊಡವ ಹೃದಯಭಾಗದಿಂದ ಹೊಸದಾಗಿ ಚುನಾಯಿತರಾದ ಶಾಸಕರಿಗೆ ಹಕ್ಕೊತ್ತಾಯ ಮಂಡಿಸಲಾಯಿತು.

ಕೌನ್ಸಿಲ್‌ನ ಪ್ರಮುಖ ಆಶಯಗಳು: ಕರ್ನಾಟಕದಡಿಯಲ್ಲಿ ಸಂವಿಧಾನದ ಅಡಿಯಲ್ಲಿ ಕೊಡವ ಲ್ಯಾಂಡ್ ಭೌಗೋಳಿಕ–ರಾಜಕೀಯ ಸ್ವಾಯತ್ತತೆ ಮತ್ತು ಆಂತರಿಕ ರಾಜಕೀಯ ಸ್ವಯಂ ನಿರ್ಣಯ ಹಕ್ಕು ಪ್ರತಿಪಾದನೆ. ಕೊಡಗಿನ ಆದಿಮಸಂಜಾತ ಮೂಲನಿವಾಸಿ ಕೊಡವ ಜನಾಂಗವನ್ನು ನಮ್ಮ ಸಂವಿಧಾನದ ಶೆಡ್ಯೂಲ್ ಪಟ್ಟಿಯಲ್ಲಿ ಸೇರಿಸಬೇಕು. ಕೊಡವ ಸಂಪ್ರದಾಯಿಕ ಕಾಯ್ದೆಯಡಿ ಬರುವ ಜನಾಂಗೀಯ ಸಂಸ್ಕಾರ ತೋಕ್ ಹಕ್ಕುಗಳನ್ನು ಸಿಖ್ಖರ ಕಿರ್ಪಾನ್‌ಗೆ ಸಮಾನವಾಗಿ ನಮ್ಮ ಸಂವಿಧಾನದ 25 ಮತ್ತು 26ನೇ ವಿಧಿಗಳ ಅಡಿಯಲ್ಲಿ ರಕ್ಷಿಸಬೇಕು ಸೇರಿದಂತೆ ಹತ್ತಾರು ಹಕ್ಕೊತ್ತಾಯಗಳನ್ನು ಮಂಡಿಸಲಾಯಿತು.

ಕೊಡವ ಹೃದಯ ಭಾಗದ ನೂತನ ಪ್ರತಿನಿಧಿ ಮತ್ತು ಕರ್ನಾಟಕದ ಹೊಸ ಆಡಳಿತ ವ್ಯವಸ್ಥೆ ತಮ್ಮದೇ ಕನ್ನಡಕವನ್ನು ಧರಿಸಿ ಸಿಎನ್‌ಸಿ ಮತ್ತು ಕೊಡವರನ್ನು ನೋಡಬೇಕಾಗಿದೆ. ಬೇರೆ ಕನ್ನಡಕವನ್ನು ಧರಿಸಿ ಕೊಡವರನ್ನು ಮತ್ತು ಅವರ ಆಶೋತ್ತರಗಳನ್ನು ಅಳೆಯಬಾರದು ಎಂದು ನಾಚಪ್ಪ ಒತ್ತಾಯಿಸಿದರು.

ಸಿಎನ್‌ಸಿ ಪ್ರಮುಖರಾದ ಕಲಿಯಂಡ ಪ್ರಕಾಶ್, ಅರೆಯಡ ಗಿರೀಶ್, ಪಟ್ಟಮಾಡ ಕುಶ, ಮಂದ ಪಂಡ ಮನೋಜ್, ಬೇಪಡಿಯಂಡ ಬಿದ್ದಪ, ಬೇಪಡಿ ಯಂಡ ದಿನು, ಆಳಮಂಡ ಜೈ, ಮಣವಟಿರ ಚಿಣ್ಣಪ್ಪ, ಪುದಿಯೋಕಡ ಕಾಶಿ, ಪಟ್ಟಮಾಡ ಅಶೋಕ್, ಪಟ್ಟಮಾಡ ತಿಮ್ಮಯ್ಯ, ಚೀಯೇಬೆರ ಸತೀಶ್ ಹಾಜರಿದ್ದರು.

ವ್ಯಕ್ತಿ ಸಾವು



ಮಡಿಕೇರಿ, ಮೇ 16– ಬೆಳ್ತಂಗಡಿ ಪೊಲೀಸ್ ಠಾಣಾ ವ್ಯಾಪ್ತಿಯ ಉಜಿರೆ ಟೆಲಿಫೋನ್ ಎಕ್ಸ್‌ಚೇಂಜ್ ಟವರ್ ಬಳಿ ವ್ಯಕ್ತಿಯೊಬ್ಬರ ಮೃತದೇಹ ಪತ್ತೆಯಾಗಿದ್ದು, ವಾರಸುದಾರರ ಪತ್ತೆಗೆ ಪೊಲೀಸರು ಮನವಿ ಮಾಡಿದ್ದಾರೆ. ಮೃತ ವ್ಯಕ್ತಿ ಕೊಡಗು ಜಿಲ್ಲೆಯ ಕುಶಾಲನಗರದ ತಮ್ಮಯ್ಯ(55) ಎಂದು ತಿಳಿದು ಬಂದಿದ್ದು, ಮೃತ ದೇಹದ ಬಳಿ 6.65 ಲಕ್ಷ ರೂ. ಪತ್ತೆಯಾಗಿದೆ ಇವರು ಸೌದೆ ಒಡೆದು ಜೀವನ ಸಾಗಿಸುತ್ತಿದ್ದು, ದುಡಿದ ಹಣವನ್ನು ಉಳಿತಾಯ ಮಾಡಿರಬಹುದೆಂದು ಹೇಳಲಾಗಿದೆ

ಬಸ್ ಟಿಕೆಟ್ ಮತ್ತಿತರ ಚೀಟಿಗಳನ್ನು ಪರಿಶೀಲಿಸಿದಾಗ ತಮ್ಮಯ್ಯ ಕುಶಾಲನಗರ ಭಾಗದವರೆಂದು ತಿಳಿದು ಬಂದಿದೆ. ಬೆಳ್ತಂಗಡಿ ಪೊಲೀಸರು ಕುಶಾಲನಗರ ಮತ್ತು ಬೈಲುಕೊಪ್ಪಕ್ಕೆ ಭೇಟಿ ನೀಡಿ ಮೃತ ವ್ಯಕ್ತಿಯ ಸಂಬಂಧಿಕರ ಪತ್ತೆಗೆ ಪ್ರಯತ್ನಿಸಿದರು. ಆದರೆ ಯಾರೂ ಪತ್ತೆಯಾಗದೆ ಇರುವುದರಿಂದ ತಮ್ಮಯ್ಯ ಅವರ ವಾರಸುದಾರರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಬೆಳ್ತಂಗಡಿ ಪೊಲೀಸ್ ಠಾಣೆಯನ್ನು (08256–232093, 9480805370) ಸಂಪರ್ಕಿಸುವಂತೆ ಮನವಿ ಮಾಡಿದ್ದಾರೆ.

ರಾಜೀವ್‌ಗಾಂಧಿ ಜ್ಯೋತಿ ಯಾತ್ರೆ ಆಗಮನ

ಚಾಮರಾಜನಗರದಲ್ಲಿ ಕಾಂಗ್ರೆಸ್ ಮುಖಂಡರಿಂದ ಭವ್ಯ ಸ್ವಾಗತ



ಚಾಮರಾಜನಗರ, ಮೇ 16– ಕರ್ನಾಟಕ ಪ್ರದೇಶ ಕಾಂಗ್ರೆಸ್ ಕಚೇರಿಯಿಂದ ಹೊರಟು ಮಂಗಳವಾರ ಚಾಮರಾಜನಗರಕ್ಕೆ ಆಗಮಿಸಿದ ರಾಜೀವ್ ಗಾಂಧಿ ಜ್ಯೋತಿ ಯಾತ್ರೆಗೆ ನಗರದಲ್ಲಿ ಜಿಲ್ಲಾ ಕಾಂಗ್ರೆಸ್ ಮುಖಂಡರು ಭವ್ಯ ಸ್ವಾಗತ ಕೋರಿ, ಬರಮಾಡಿಕೊಂಡರು.

ನಗರದ ಮುಖ್ಯದ್ವಾರದಲ್ಲಿ ಆಗಮಿಸಿದ ಜ್ಯೋತಿಯನ್ನು ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್ ಹಾಗೂ ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಮದ್ ಅಸ್ಗರ್ (ಮುನ್ನಾ) ನೇತೃತ್ವದಲ್ಲಿ ಕಾಂಗ್ರೆಸ್ ಮುಖಂಡರು ಸ್ವೀಕರಿಸಿ ಪ್ರಮುಖ ಬೀದಿಗಳಲ್ಲಿ ಜಾಗೃತಿ ಜಾಥಾ ನಡೆಸಿ, ತಮಿಳುನಾಡಿನ ಶ್ರೀಪೆರಂಬ ದೂರಿಗೆ ಬೀಳ್ಕೊಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್ ಮಾತನಾಡಿ, ಕಳೆದ 32 ವರ್ಷಗಳ ಹಿಂದೆ ಚುನಾವಣೆ ಪ್ರಚಾರಕ್ಕೆ ತೆರಳಿದ್ದ ದೇಶದ ಮಾಜಿ ಪ್ರಧಾನಿ ರಾಜೀವ್‌ಗಾಂಧಿ ಅವರು ಉಗ್ರರ ದಾಳಿಯಿಂದಾಗಿ ಪ್ರಾಣ ತ್ಯಾಗ ಮಾಡಿದರು. ಮೇ 21 ರಂದು ಪೆರಂಬದೂರಿನಲ್ಲಿ ನಡೆದ ಕಹಿ ಘಟನೆಯಿಂದಾಗಿ ದೇಶವೇ ಭಯೋತ್ಪಾದನೆಯಿಂದ ಬೆಚ್ಚಿ ಬಿದ್ದಿತ್ತು. ಉಗ್ರಗಾಮಿಗಳು ಹಾಗೂ ಭಯೋತ್ಪಾದನೆಯನ್ನು ಬುಡಸಮೇತ ಕಿತ್ತು ಹಾಕಬೇಕೆಂದು ಸಂಕಲ್ಪ ಮಾಡಿ, ರಾಷ್ಟ್ರಾದ್ಯಂತ ಜಾಗೃತಿ ಮಾಡಲು ಮೇ 15 ರಿಂದ ಮೇ 21ರವರೆಗೆ ರಾಜೀವ್‌ಗಾಂಧಿ ಜ್ಯೋತಿ ಸಂಚರಿಸಿ, ಶ್ರೀಪೆರಂಬ ದೂರಿನಲ್ಲಿ ಅಂತ್ಯವಾಗಲಿದೆ.

ಮಾಜಿ ಪ್ರಧಾನಿ ರಾಜೀವ್‌ಗಾಂಧಿ ಅವರು ದೇಶ ಕಂಡ ಪ್ರಧಾನಿಗಳಲ್ಲಿ ಅಗ್ರಗಣ್ಯರು. ಅಂದೇ ಅವರು ಮಾಹಿತಿ ತಂತ್ರಜ್ಞಾನದ ಬೆಳವಣಿಗೆಗೆ ಹೆಚ್ಚಿನ ಒತ್ತು ನೀಡಿದ್ದರು. ಅದರ ಪರಿಣಾಮ ಡಿಜಿಟಲ್ ಹಾಗೂ ಮೊಬೈಲ್ ಕ್ರಾಂತಿಯಾಗಿದೆ. 18 ವರ್ಷಕ್ಕೆ ಮತದಾನದ ಹಕ್ಕು ನೀಡಿದವರು ರಾಜೀವ್‌ಗಾಂಧಿ. ಹೀಗಾಗಿ ಇತ್ತೀಚಿನ ದಿನಗಳಲ್ಲಿ ಯುವ ಜನಾಂಗದ ಐಕಾನ್ ಮೋದಿ ಎಂಬುದು ಸುಳ್ಳು. ಯುವಕರ ನಾಯಕ ರಾಜೀವ್‌ಗಾಂಧಿ ಅವರು 30 ವರ್ಷಗಳ ಹಿಂದೆಯೇ ಯುವ ಜನಾಂಗ ಸಕ್ರಿಯವಾಗಿ ರಾಜಕಾರಣದಲ್ಲಿರಬೇಕೆಂದು ಬಯಸಿ ಮತದಾನದ ಹಕ್ಕು ನೀಡಿದ್ದರು. ನಿಜವಾದ ಯುವ ಜನಾಂಗದ ಐಕಾನ್ ರಾಜೀವ್‌ಗಾಂಧಿ ಹಾಗೂ ರಾಹುಲ್ ಗಾಂಧಿ ಎಂದು ರವಿಕುಮಾರ್ ಬಣ್ಣಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಮದ್ ಅಸ್ಗರ್ (ಮುನ್ನಾ), ರಾಜೀವ್‌ಗಾಂಧಿ ಜ್ಯೋತಿಯಾತ್ರಾ ಸಮಿತಿ ಅಧ್ಯಕ್ಷ ಆರ್. ದೊರೆವೇಲು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವ್, ಚುಡಾ ಮಾಜಿ ಅಧ್ಯಕ್ಷ ಸುಹೇಲ್ ಆಲಿಖಾನ್, ಮಾಧ್ಯಮ ಕಾರ್ಯದರ್ಶಿ ಅರುಣ್‌ಕುಮಾರ್, ದೊಡ್ಡರಾಯಪೇಟೆ ರವಿಗೌಡ, ಮಹದೇವ್, ಪರ್ವಿಜ್ ಅಹಮದ್, ಅಫ್ಜಲ್, ಗೋಮಧೇಶನ್, ರಾಲ್ಫರಾವ್ ಮೊದಲಾದವರಿದ್ದರು.

ಜ್ಞಾನಪ್ರಕಾಶ ಸ್ವಾಮೀಜಿಗಳಿಂದ ನೂತನ ಶಾಸಕರಿಗೆ ಸನ್ಮಾನ

ಎಲ್ಲಾ ಸಮಾಜದ ಉನ್ನತಿಗೆ ಶ್ರಮಿಸಲು ಶ್ರೀಗಳ ಸಲಹೆ



ಕೊಳ್ಳೇಗಾಲ, ಮೇ 16– ಕೊಳ್ಳೇಗಾಲ ಮೀಸಲು ವಿಧಾನಸಭಾ ಕ್ಷೇತ್ರದಿಂದ ನೂತನವಾಗಿ ಆಯ್ಕೆಯಾಗಿರುವ ಶಾಸಕ ಎ.ಆರ್. ಕೃಷ್ಣಮೂರ್ತಿ ಅವರು ಇಂದು ಮಠದಲ್ಲಿ ಜ್ಞಾನ ಪ್ರಕಾಶಸ್ವಾಮೀಜಿ ಅವರನ್ನು ಭೇಟಿಯಾಗಿ ಸನ್ಮಾನಿಸಿದರು.

ಮೈಸೂರಿನ ಗಾಂಧಿನಗರದ ಉರಿಲಿಂಗಿ ಪೆದ್ದಿಮಠದ ಜ್ಞಾನ ಪ್ರಕಾಶಸ್ವಾಮೀಜಿ ಅವರನ್ನು ಭೇಟಿಯಾದ ಕೃಷ್ಣಮೂರ್ತಿ ಅವರು, ಹಾರ, ಶಾಲು ಹೊದಿಸಿ ಫಲಪುಷ್ಪ ಅರ್ಪಿಸುವ ಮೂಲಕ ಸನ್ಮಾನಿಸಿ ಆಶೀರ್ವಾದ ಪಡೆದರು. ಈ ವೇಳೆ ಸ್ವಾಮೀಜಿಗಳು ಸಹಾ ನೂತನ ಶಾಸಕರನ್ನು ಗೌರವಿಸಿದರು.

ಸ್ವಾಮೀಜಿ ಮಾತನಾಡಿ, ದಲಿತ ಸಮಾಜಕ್ಕೆ ಗೌರವ ತರುವಂತಹ ಕೆಲಸ ಮಾಡುವ ಮೂಲಕ ಎಲ್ಲರ ಸಮಸ್ಯೆಯ ಧ್ವನಿಯಾಗಿ ವಿಧಾನಸಭೆಯಲ್ಲಿ ಹೋರಾಟ ನಡೆಸಿ, ದಲಿತ ಸಮಾಜದ ಗಟ್ಟಿ ಧ್ವನಿಯಾಗಿ, ಜೊತೆಗೆ ಕ್ಷೇತ್ರದ ಜನರ ಭಾವನೆಗಳಿಗೂ ಸ್ಪಂದಿಸಿ ಎಂದು ಸಲಹೆ ನೀಡಿದರು.

ಸನ್ಮಾನ ಸ್ವೀಕರಿಸಿದ ಶಾಸಕ ಎ.ಆರ್. ಕೃಷ್ಣಮೂರ್ತಿ ಮಾತನಾಡಿ, ಎಲ್ಲಾ ಸಮಾಜವನ್ನು ಒಗ್ಗಟ್ಟಿನಿಂದ ಅಭಿವೃದ್ಧಿಯತ್ತ ಕೊಂಡೊಯ್ಯುವ ಕೆಲಸ ಮಾಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಬಸವನಂದಾ ಸ್ವಾಮೀಜಿ, ಸಿದ್ದರಾಮೇಶ್ವರ ಸ್ವಾಮೀಜಿ, ಮುಖಂಡರಾದ ಶಂಕನಪುರ ಶೇಖರ್ ಬುದ್ಧ, ಮುಳ್ಳೂರು ನಾಗರಾಜು ಉಪ್ಪಾರ್, ರಾಜಶೇಖರ್, ಚೇತನ್ ಇನ್ನಿತರರು ಇದ್ದರು.

ವಸತಿ ಶಾಲೆಗಳಲ್ಲಿ ಪ್ರಥಮ ಪಿಯು ಪ್ರವೇಶಕ್ಕೆ ಅರ್ಜಿ ಆಹ್ವಾನ

ಚಾಮರಾಜನಗರ, ಮೇ 16– ಜಿಲ್ಲೆಯ ಕ್ರೈಸ್ ವಸತಿ ಶಾಲೆಗಳಿಗೆ 2023–24ನೇ ಸಾಲಿಗೆ ಪ್ರಥಮ ಪಿ.ಯು.ಸಿ. ಪ್ರವೇಶಕ್ಕೆ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2022–23 ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆದ ಸರ್ಕಾರಿ, ಅನುದಾನ ಮತ್ತು ಅನುದಾನರಹಿತ ಶಾಲೆಗಳ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿದ್ದು, ಮೇ 18 ಕೊನೆಯ ದಿನವಾಗಿದೆ. ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುತ್ತದೆ. ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ, ಸಮವಸ್ತ್ರ, ಪಠ್ಯ ಪುಸ್ತಕ ಇತರೆ ಮೂಲಭೂತ ಸೌಕರ್ಯಗಳೊಂದಿಗೆ ಸಿ.ಇ.ಟಿ, ನೀಟ್, ಜೆ.ಇ.ಇ ಪರೀಕ್ಷೆಗಳಿಗೆ ಉಚಿತ ತರಬೇತಿ ನೀಡಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ವೀರಶೈವ – ಲಿಂಗಾಯತರಿಗೆ ಸಿಎಂ ಸ್ಥಾನ ನೀಡಲು ಅಖಿಲ ಭಾರತ ವೀರಶೈವ ಮಹಾಸಭಾ ಆಗ್ರಹ

ಚಾಮರಾಜನಗರ, ಮೇ 16– ವೀರಶೈವ – ಲಿಂಗಾಯತರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾ ಘಟಕ ಕಾಂಗ್ರೆಸ್ ವರಿಷ್ಠರನ್ನು ಒತ್ತಾಯಿಸಿದೆ.

ವೀರಶೈವ ಸಮಾಜದ ವೀರೇಂದ್ರ ಪಾಟೀಲ್ ನಂತರ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಯಾರೂ ಆಗಿಲ್ಲ. ಆದ್ದರಿಂದ ಈ ಸಲವಾದರೂ ರಾಜ್ಯದ ಮುಖ್ಯಮಂತ್ರಿ ಸ್ಥಾನ ವೀರಶೈವ– ಲಿಂಗಾಯತರಿಗೆ ಅವಕಾಶ ಕಲ್ಪಿಸುವಂತೆ ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾ ಘಟಕ ಆಗ್ರಹಿಸಿದೆ.

ಬಿಜೆಪಿಯಲ್ಲಿ ವೀರಶೈವ– ಲಿಂಗಾಯತರ ಕುರಿತಾಗಿ ನಡೆದುಕೊಂಡಿದ್ದನ್ನು ಬೇಸತ್ತು ವೀರಶೈವ– ಲಿಂಗಾಯತರು ಬೆಂಬಲಿಸಿದ ಪರಿಣಾಮ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಾಧ್ಯವಾಗಿದ್ದರಿಂದ ಈ ಸಲ ಮುಖ್ಯಮಂತ್ರಿ ಮಾಡುವುದರ ಮುಖಾಂತರ ನ್ಯಾಯ ಕಲ್ಪಿಸಬೇಕೆಂದು ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಮೂಡ್ಲಪುರ ನಂದೀಶ್ ಆಗ್ರಹಿಸಿದರು.

ವೀರಶೈವ ಸಮಾಜದ ನೂತನ ಶಾಸಕರಾದ ಈಶ್ವರ್ ಖಂಡ್ರೆ, ಎಂ.ಬಿ.ಪಾಟೀಲ್, ಎಸ್.ಎಸ್.ಮಲ್ಲಿಕಾರ್ಜುನ ಅವರು ಮುಖ್ಯಮಂತ್ರಿ ಕುರ್ಚಿಗೆ ಯೋಗ್ಯರಾಗಿದ್ದಾರೆ. ಇವರಲ್ಲಿ ಒಬ್ಬರನ್ನು ಮುಖ್ಯಮಂತ್ರಿಯಾಗಿ ಮಾಡಬೇಕೆಂದು ಕಾಂಗ್ರೆಸ್ ವರಿಷ್ಠರಲ್ಲಿ ಮನವಿ ಮಾಡಿದರು. ಎಲ್ಲರ ಮನಸ್ಸಿನಗುಣವಾಗಿ ಸಿಎಂ ಸ್ಥಾನ ಕಲ್ಪಿಸಬೇಕು. ಇಲ್ಲದಿದ್ದರೆ ಚಾಮರಾಜನಗರದಿಂದ ಬೆಂಗಳೂರಿನ ವಿಧಾನಸೌಧದವರೆಗೆ ಪಾದಯಾತ್ರೆ ನಡೆಸುವುದಾಗಿ ಮೂಡ್ಲುಪುರ ನಂದೀಶ್ ಎಚ್ಚರಿಸಿದ್ದಾರೆ.

ಸಿಇಟಿ ಸಾಮಾನ್ಯ ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ

ಚಾಮರಾಜನಗರ, ಮೇ 16– ಸಿಇಟಿ ಸಾಮಾನ್ಯ ಪರೀಕ್ಷೆಗಳನ್ನು ಮೇ 20 ಮತ್ತು 21ರಂದು ನಡೆಸುತ್ತಿರುವ ಹಿನ್ನೆಲೆಯಲ್ಲಿ ಪರೀಕ್ಷಾ ಕಾರ್ಯವು ನ್ಯಾಯೋಚಿತವಾಗಿ ನಡೆಸುವ ಸದುದ್ದೇಶದಿಂದ ಜಿಲ್ಲೆಯ ಒಟ್ಟು 6 ಪರೀಕ್ಷಾ ಕೇಂದ್ರದ ಸುತ್ತಲ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ಸಾರ್ವಜನಿಕ ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ಆದೇಶ ಹೊರಡಿಸಿದ್ದಾರೆ.

ಚಾಮರಾಜನಗರ ಪಟ್ಟಣದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು (ಪರೀಕ್ಷಾ ಕೇಂದ್ರದ ಸಂಕೇತ: TK), ಸತ್ತಿ ರಸ್ತೆಯಲ್ಲಿರುವ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು (ಪರೀಕ್ಷಾ ಕೇಂದ್ರದ ಸಂಕೇತ: TJ), ಶಂಕರಪುರದಲ್ಲಿರುವ ಸೇವಾಭಾರತಿ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು (ಪರೀಕ್ಷಾ ಕೇಂದ್ರದ ಸಂಕೇತ: TL), ಜೆ.ಎಸ್.ಎಸ್. ಮಹಿಳಾ ಪದವಿ ಪೂರ್ವ ಕಾಲೇಜು (ಪರೀಕ್ಷಾ ಕೇಂದ್ರದ ಸಂಕೇತ: TH) ಹಾಗೂ ಕೊಳ್ಳೇಗಾಲ ಪಟ್ಟಣದ ಎಸ್.ವಿ.ಕೆ. ಪದವಿ ಪೂರ್ವ ಬಾಲಕಿಯರ ಕಾಲೇಜು (ಪರೀಕ್ಷಾ ಕೇಂದ್ರದ ಸಂಕೇತ: TM), ಸರ್ಕಾರಿ ಎಂ.ಜಿ.ಎಸ್.ವಿ. ಪದವಿ ಪೂರ್ವ ಕಾಲೇಜು (ಪರೀಕ್ಷಾ ಕೇಂದ್ರದ ಸಂಕೇತ: TN) ಗಳಲ್ಲಿ ಪರೀಕ್ಷೆ ನಡೆಯಲಿದೆ.

ಪರೀಕ್ಷಾ ಕೇಂದ್ರದ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ಸೆಕ್ಷನ್ 144 ರನ್ವಯ ಪರೀಕ್ಷಾ ದಿನಗಳಂದು ಬೆಳಿಗ್ಗೆ 6 ರಿಂದ ಸಂಜೆ 5 ಗಂಟೆಯವರೆಗೆ ನಿಷೇಧಾಜ್ಞೆ ವಿಧಿಸಲಾಗಿದೆ. ಅಲ್ಲದೇ ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರದ 200 ಮೀಟರ್ ವ್ಯಾಪ್ತಿಯಲ್ಲಿ ಬರುವ ಜೆರಾಕ್ಸ್ ಅಂಗಡಿಗಳನ್ನು ಬೆಳಿಗ್ಗೆ 6 ರಿಂದ ಸಂಜೆ 5 ಗಂಟೆಯವರೆಗೆ ಮುಚ್ಚಲು ಸಹ ಆದೇಶಿಸಲಾಗಿದೆ.

ನಿಷೇಧಾಜ್ಞೆ ಆದೇಶವು ಪರೀಕ್ಷೆ ಕೆಲಸಕ್ಕೆ ನಿಯೋಜಿತರಾದ ಅಧಿಕಾರಿ ಸಿಬ್ಬಂದಿ ವರ್ಗದವರಿಗೆ ಮತ್ತು ಸಿಇಟಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

ಡೆಂಘೀ ಜ್ವರದ ಬಗ್ಗೆ ಅರಿವು ಅಗತ್ಯ: ಡಿಸಿ ರಮೇಶ್



ಚಾಮರಾಜನಗರ, ಮೇ 16– ಡೆಂಘೀ ಜ್ವರದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಡಿ.ಎಸ್. ರಮೇಶ್ ತಿಳಿಸಿದರು.

ನಗರದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ವತಿಯಿಂದ ರಾಷ್ಟ್ರೀಯ ಡೆಂಘೀ ಜ್ವರದ ಜಾಗೃತಿ ದಿನಾಚರಣೆ ಅಂಗವಾಗಿ ಜಿಲ್ಲಾಡಳಿತ ಭವನದ ಮುಂಭಾಗ ಆಯೋಜಿಸಲಾಗಿದ್ದ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.

ಜನರು ಸ್ವಚ್ಛತೆಗೆ ಹೆಚ್ಚಿನ ಒತ್ತು ನೀಡಬೇಕು. ಅನವಶ್ಯಕ ವಸ್ತುಗಳನ್ನು ಎಲ್ಲೆಂದರಲ್ಲಿ ಬಿಸಾಡಬಾರದು. ಆರೋಗ್ಯ ಇಲಾಖೆ, ನಗರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ಅಧಿಕಾರಿಗಳು ಡೆಂಘೀ ಜ್ವರದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಎಸ್. ಪೂವಿತಾ ಅವರು ಮಾತನಾಡಿ, ರೋಗಗಳು ಹೆಚ್ಚಾಗುವ ಮುನ್ನ ನಿಯಂತ್ರಣಾ ಕ್ರಮಗಳನ್ನು ಕೈಗೊಳ್ಳುವುದು ಸೂಕ್ತ. ಈ ನಿಟ್ಟಿನಲ್ಲಿ ಎಲ್ಲಾ ಸ್ಥಳೀಯ ಮಟ್ಟದ ಸಂಸ್ಥೆಗಳಿಗೆ ಅಗತ್ಯ ಕ್ರಮಗಳ ಬಗ್ಗೆ ತಿಳಿಸಲಾಗಿದೆ. ಸಾರ್ವಜನಿಕರು ಸಹ ಜವಾಬ್ದಾರಿಯಿಂದ ಸ್ವಚ್ಛತೆಯನ್ನು ಕಾಪಾಡಬೇಕು ಎಂದರು.

ಡೆಂಘೀ ಅರಿವು ಜಾಥಾ ಜಿಲ್ಲಾಡಳಿತ ಭವನದ ಮುಂಭಾಗ ಆರಂಭವಾಗಿ ನಗರದ ಪ್ರಮುಖ ಬೀದಿಗಳಲ್ಲಿ ಘೋಷ ವಾಕ್ಯಗಳ ಮೂಲಕ ಸಾಗಿತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾ ಧಿಕಾರಿ ಡಾ. ಕೆ.ಎಂ. ವಿಶ್ವೇಶ್ವರಯ್ಯ, ಜೆಎಸ್‌ಎಸ್ ನರ್ಸಿಂಗ್ ವಿದ್ಯಾರ್ಥಿಗಳು, ಇನ್ನಿತರರು ಜಾಥಾದಲ್ಲಿ ಭಾಗವಹಿಸಿದ್ದರು.

ಇಂದು ನಗರಕ್ಕೆ ಮಾಜಿ ಸಚಿವ ವಿ. ಸೋಮಣ್ಣ



ಚಾಮರಾಜನಗರ, ಮೇ 16– ಮಾಜಿ ಸಚಿವ, ಚಾಮರಾಜನಗರ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿದ್ದ ವಿ. ಸೋಮಣ್ಣ ಅವರು ಬುಧವಾರ ನಗರದಲ್ಲಿ ವಿಧಾನಸಭಾ ಕ್ಷೇತ್ರದ ಕಾರ್ಯಕರ್ತರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ನಗರದ ಭಗೀರಥ ನಗರದಲ್ಲಿರುವ ನೂತನ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಕೃತಜ್ಞತಾ ಸಭೆ ಬೆಳಗ್ಗೆ 10ಕ್ಕೆ ನಡೆಯಲಿದೆ. ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಪ್ರಕಟಣೆಯಲ್ಲಿ ಕೋರಲಾಗಿದೆ.

ರಾಜೇಶ್ವರಿ ಶಾಲೆಗೆ ಪ್ರಥಮ



ಚಾಮರಾಜನಗರ, ಮೇ 16– ನಗರದ ರಾಮಸಮುದ್ರದಲ್ಲಿರುವ ಧೀನಬಂಧು ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ವ್ಯಾಸಂಗ ಮಾಡಿದ ಬಿ. ರಾಜೇಶ್ವರಿ 625 ಅಂಕಗಳಿಗೆ 579 ಅಂಗಳನ್ನು (ಶೇ.92.64) ಗಳಿಸಿ ಶಾಲೆಗೆ ಪ್ರಥಮ ಸ್ಥಾನ ಗಳಿಸಿದ್ದಾಳೆ.

ಕನ್ನಡದಲ್ಲಿ 125, ಇಂಗ್ಲಿಷ್ 88, ವಿಜ್ಞಾನ 90, ಗಣಿತ 82, ಸಮಾಜ 96, ಹಿಂದಿಯಲ್ಲಿ 98 ಅಂಕ ಪಡೆಯುವ ಮೂಲಕ ಶಾಲೆಗೆ ಹಾಗೂ ಪೋಷಕರಿಗೆ ಹೆಸರು ತಂದಿದ್ದಾಳೆ. ಈಕೆ ರಾಮಸಮುದ್ರದ ಹಳ್ಳದ ಬೀದಿಯ ನಿವಾಸಿ ಯಜಮಾನ್ ಬಸವರಾಜು, ವಸಂತ ದಂಪತಿ ಪುತ್ರಿ.

ವಿವಿಧೆಡೆ ವಿದ್ಯುತ್ ವ್ಯತ್ಯಯ

ಚಾಮರಾಜನಗರ, ಮೇ 16– ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಮೇ 17ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಹಿರಿಕೆರೆ, ಕಾಳಿಕಾಂಬ ಕಾಲೋನಿ, ಚಂದಕವಾಡಿ, ರೇಚಂಬಳ್ಳಿ, ಮಲ್ಲೇದೇವನಹಳ್ಳಿ, ನವೋದಯ, ಹೊಂಡರಬಾಳು, ಜ್ಯೋತಿಗೌಡನಪುರ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಒಂದನೇ ಪುಟದಿಂದ

ಮೈಸೂರಲ್ಲಿ ನೇಮಕಾತಿ ಅಭಿಯಾನ

ಮಾತನಾಡಿದ ಸಂಸದ ಪ್ರತಾಪ್ ಸಿಂಹ, ಈ ಹಿಂದೆ ಗಂಡು ಮಕ್ಕಳಾದರೆ ಅವರಿಗೆ ಆಸ್ತಿ ಸಂಪಾದಿಸಿಡಬೇಕೆಂದು ಹಾತೊರೆಯುತ್ತಿದ್ದ ಪೋಷಕರು, ಹೆಣ್ಣು ಮಕ್ಕಳಾದರೆ ಅವರ ಮದುವೆಗೆ ಹಣ ಹೊಂದಿಸುವಲ್ಲಿ ನಿರತರಾಗುತ್ತಿದ್ದರು. ಆದರೆ, ಈಗ ಗಂಡಾಗಲೀ, ಹೆಣ್ಣಾಗಲೀ ಅವರ ಶಿಕ್ಷಣದ ಮೇಲೆ ಹೆಚ್ಚು ಹಣ ತೊಡಗಿಸಿ ಉತ್ತಮ ಶಿಕ್ಷಣ ಕೊಡಿಸುತ್ತಾರೆ. ಅಂದರೆ ಶಿಕ್ಷಣದಿಂದ ಯಾವುದೇ ಶಿಫಾರಸ್ಸು, ಹಣ ಇಲ್ಲದೆಯೇ ಸರ್ಕಾರಿ ಉದ್ಯೋಗ ಪಡೆದುಕೊಳ್ಳಬಹುದೆಂಬ ವಿಶ್ವಾಸ ಜನಸಾಮಾನ್ಯರಲ್ಲಿ ಬಂದಿದೆ ಎಂದು ನುಡಿದರು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರವು ದೇಶವನ್ನು ಆರ್ಥಿಕವಾಗಿ ಅಭಿವೃದ್ಧಿಗೊಳಿಸಲು ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಿದೆ. ದೇಶದ ಯುವ ಸಮೂಹಕ್ಕೆ ಉದ್ಯೋಗ ಸೃಷ್ಟಿಸುತ್ತಿರುವುದರಿಂದ ಸ್ಟಾರ್ಟ್ ಅಪ್‌ಗಳಿಗೆ ಅವಕಾಶ ಲಭ್ಯವಾಗಿದೆ ಎಂದು ಅವರು ನುಡಿದರು. ಮೈಸೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕಿ ಶಿಲ್ಪಿ ಅಗರವಾಲ್, ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ ನಿರ್ದೇಶಕಿ ಡಾ. ಪುಷ್ಪಾವತಿ, ದಕ್ಷಿಣ ಕರ್ನಾಟಕ ಅಂಚೆ ಸೇವೆಗಳ ನಿರ್ದೇಶಕ ಟಿ.ಎಸ್. ಅಶ್ವಥ್‌ನಾರಾಯಣ, ಅಂಚೆ ಇಲಾಖೆ ಹಿರಿಯ ಅಧಿಕಾರಿ ಏಂಜೆಲ್‌ರಾಜ್ ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಇದೇ ವೇಳೆ ಹೊಸದಾಗಿ ನೇಮಕಗೊಂಡಿರುವ 28 ಮಂದಿಯೊಂದಿಗೆ ನೆರೆದವರೆಲ್ಲರೂ ವೀಡಿಯೋ ಕಾನ್ಫರೆನ್ಸ್ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು ದೇಶದ 71,000 ಮಂದಿ ನವ ಉದ್ಯೋಗಿಗಳನ್ನು ಉದ್ದೇಶಿಸಿ ಮಾಡಿದ ಭಾಷಣವನ್ನು ವೀಕ್ಷಿಸಿದರು.

ತಯಾರಿಕಾ ಘಟಕದ ಮೇಲೆ ದಾಳಿ

ಕಟ್ಟಡಗಳನ್ನು ಗುರುತಿಸಿ ಅಲ್ಲಿಗೆ ನಮ್ಮ ತಂಡ ತೆರಳಿ ಯಾವುದಾದರೂ ಕೃಷಿಗೆ ಸಂಬಂಧಿಸಿದಂತೆ ಅಕ್ರಮ ನಡೆಯುತ್ತಿದೆಯೇ ಎಂದು ಪರಿಶೀಲನೆ ನಡೆಸುತ್ತಿರುತ್ತಾರೆ. ಹಾಗೇ ಈ ಸ್ಥಳದಲ್ಲಿ ನಕಲಿ ರಸಗೊಬ್ಬರ ತಯಾರಿಸಲಾಗುತ್ತಿರುವ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ದಾಳಿ ಮಾಡಿದ್ದಾಗ ಇಲ್ಲಿ ಮ್ಯೂರಿಯೇಟ್ ಆಫ್ ಪೊಟಾಷ್ ಅನ್ನು ನಕಲಿ ಮಾಡುತ್ತಿರುವುದು ಕಂಡು ಬಂದಿತು ಎಂದು ಅವರು ಹೇಳಿದರು.

ದಾಳಿಯ ವಿಚಾರ ತಿಳಿದು ಆರೋಪಿಗಳು ಪರಾರಿಯಾಗಿದ್ದು, ಅವರನ್ನು ಬಂಧಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಮೇಟಗಳ್ಳಿ ಪೊಲೀಸರು ತಿಳಿಸಿದ್ದಾರೆ. ನಕಲಿ ಮ್ಯೂರಿಯೇಟ್ ಆಫ್ ಪೊಟಾಷ್‌ನ್ನು ಮೈಸೂರಿನಲ್ಲಿ ತಯಾರಿಸಿ, ಕೊಡಗು, ಸಕಲೇಶಪುರ ಸೇರಿದಂತೆ ಇತರ ಜಿಲ್ಲೆಗಳಲ್ಲಿ ಮಾರಾಟ ಮಾಡುವ ಉದ್ದೇಶವನ್ನು ಈ ತಂಡ ಹೊಂದಿತ್ತು. ಈ ಅಕ್ರಮದಲ್ಲಿ ತೊಡಗಿದ್ದ ವ್ಯಕ್ತಿ ಮೇಲೆ ನಕಲಿ ರಸಗೊಬ್ಬರ ತಯಾರಿಕೆ ಕುರಿತು ಮೂರು ಎಫ್‌ಐಆರ್‌ಗಳು ದಾಖಲಾಗಿದೆ. ಈತನ ಮೇಲೆ ಸೂಕ್ತ ಕ್ರಮ ವಹಿಸುವಂತೆ ಈಗಾಗಲೇ ನಗರ ಪೊಲೀಸ್ ಆಯುಕ್ತರಿಗೆ ಮನವಿ ಮಾಡಿದ್ದೇನೆ. ನಗರದಲ್ಲಿ ನಕಲಿ ರಸಗೊಬ್ಬರ ತಯಾರಿಕೆ ವಿಚಾರವಾಗಿ 9 ಪ್ರಕರಣಗಳು ಬೆಳಕಿಗೆ ಬಂದಿದ್ದು, ಅದರಲ್ಲಿ 7 ಪ್ರಕರಣಗಳಲ್ಲಿ ಎಫ್‌ಐಆರ್ ಆಗಿದೆ. ಎರಡು ಪ್ರಕರಣಗಳ ಸ್ಯಾಂಪಲ್‌ಗಳನ್ನು ಲ್ಯಾಬ್‌ಗೆ ಕಳುಹಿಸಲಾಗಿದೆ ಎಂದರು. ಕಾರ್ಯಾಚರಣೆಯಲ್ಲಿ ಉಪ ಕೃಷಿ ನಿರ್ದೇಶಕ ಧನಂಜಯ್, ಸಹಾಯಕ ಕೃಷಿ ನಿರ್ದೇಶಕ ಜಾರಿ ದಳದ ಕೃಷ್ಣ, ಸಹಾಯಕ ಕೃಷಿ ನಿರ್ದೇಶಕಿ ಮಧು ಲತಾ ಹಾಗೂ ಕೃಷಿ ಅಧಿಕಾರಿಗಳಾದ ಜೀವನ್ ಮತ್ತು ಕಾರ್ತಿಕ್ ಪಾಲ್ಗೊಂಡಿದ್ದರು.

ನಾಳೆ ಹೊಸ ಸರ್ಕಾರ ರಚನೆ

ಪ್ರಿಯಾಂಕಾಗಾಂಧಿ ಸೇರಿದಂತೆ ಪ್ರಮುಖ ಧುರೀಣರು ಭಾಗವಹಿಸಲಿದ್ದಾರೆ. ವಿಧಾನಸೌಧದ ಮೆಟ್ಟಿಲುಗಳ ಮೇಲೆ ನಡೆಯುವ ಪ್ರಮಾಣವಚನ ಸಮಾರಂಭ ಮುಂಬರುವ ಲೋಕಸಭಾ ಚುನಾವಣೆಯ ದಿಕ್ಸೂಚಿಯಾಗಿ ಮಾರ್ಪಡಿಸುವ ಉದ್ದೇಶವೂ ಕಾಂಗ್ರೆಸ್‌ದ್ದಾಗಿದೆ. ಸಮಾರಂಭವನ್ನು ಯಶಸ್ವಿಯಾಗಿ ನಡೆಸುವ ಹೊಣೆಯನ್ನು ರಾಜ್ಯ ಉಸ್ತುವಾರಿ ಹೊಣೆ ಹೊತ್ತಿದ್ದ, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರಿಗೆ ಖರ್ಗೆ ವಹಿಸಿಕೊಟ್ಟಿದ್ದಾರೆ.

ಗ್ಯಾರಂಟಿಗಳ ಬಗ್ಗೆ ವರಸೆ ಬದಲಿಸಿದ ಕಾಂಗ್ರೆಸ್

ಮಾಧ್ಯಮಗಳ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಆಯಾ ಇಲಾಖೆಯ ಸಚಿವರು ಕೂತು ಗ್ಯಾರಂಟಿ ಜಾರಿ ಮಾಡುವ ಬಗ್ಗೆ ಕೆಲಸ ಮಾಡುತ್ತೇವೆ. ಹಾಗೆಯೇ ನೀಡಿದರೆ ಸುಮ್ಮನೆ ಎಲ್ಲರೂ ತೆಗೆದುಕೊಳ್ಳುತ್ತಾರೆ. ಗ್ಯಾರಂಟಿಗಳಿಗೆ ಮಾನದಂಡ ನಿಗದಿ ಮಾಡಲಾಗುವುದು ಎಂದು ವಿವರಿಸಿದರು. ಸಿಎಂ ಆಯ್ಕೆ ವಿಚಾರವಾಗಿ ಮಾತನಾಡಿ, ಎಲ್ಲವೂ ಸುಸೂತ್ರವಾಗಿ ನಡೆಯುತ್ತದೆ. ಹೈಕಮಾಂಡ್ ಪ್ರಕ್ರಿಯೆ ನಡೆಸುತ್ತಿದೆ. ಈಗಾಗಲೇ ಶಾಸಕರ ಅಭಿಪ್ರಾಯ ಪಡೆದಿದ್ದಾರೆ. ದೆಹಲಿಯಲ್ಲಿ ಸೋನಿಯಾ, ರಾಹುಲ್ ಹಾಗೂ ಅಧ್ಯಕ್ಷರಾದ ಖರ್ಗೆ ಅವರು ಕೂತು ಚರ್ಚೆ ಮಾಡಿ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತಾರೆ.

ನೆಪ ಹೇಳದೆ ತಕ್ಷಣ 5 ಗ್ಯಾರಂಟಿಗಳನ್ನು ಈಡೇರಿಸಿ: ಚುನಾವಣಾ ಪೂರ್ವ ಭರವಸೆ ನೀಡಿದ್ದ 5 ಗ್ಯಾರಂಟಿಗಳನ್ನು ಈಡೇರಿಸಬೇಕೆಂದು ರಾಜ್ಯಾದ್ಯಂತ ಜನಸಾಮಾನ್ಯರ ಕೂಗು ಜೋರಾಗುತ್ತಿದೆ. ಪರಮೇಶ್ವರ್ ಅವರ ಷರತ್ತಿನ ಹೇಳಿಕೆ ಹೊರಬಂದ ತಕ್ಷಣವೇ ಸಾರ್ವಜನಿಕರು ಸೋಷಿಯಲ್ ಮೀಡಿಯಾಗಳಲ್ಲಿ ತರಹೇವಾರಿ ಕಮೆಂಟ್ ಮಾಡುತ್ತಿದ್ದಾರೆ. ಕಾಂಗ್ರೆಸ್ ಪಕ್ಷ ಯಾವುದೇ ಷರತ್ತುಗಳನ್ನು ಹೇರದೆ ಗ್ಯಾರಂಟಿಗಳನ್ನು ಜಾರಿಗೆ ತರಬೇಕು ಎಂದಿದ್ದಾರೆ. ಪಕ್ಷ ಚುನಾವಣಾ ಪ್ರಚಾರ ಸಂದರ್ಭದಲ್ಲಿಯೇ ಪಾರದರ್ಶಕವಾಗಿರಬೇಕಿತ್ತು ಎಂದು ಹೇಳಿದೆ. ಚುನಾವಣೆಯಲ್ಲಿ ಗೆದ್ದ ಮೇಲೆ ಕಾಂಗ್ರೆಸ್ ಜನರಿಗೆ ಮೋಸ ಮಾಡುತ್ತಿದೆ ಎಂದು ಕೆಲವರು ಹೇಳುತ್ತಿದ್ದರೆ ಇನ್ನು ಕೆಲವರು ಇದರ ಪರಿಣಾಮ ಮುಂದಿನ ಲೋಕಸಭೆ ಚುನಾವಣೆಯಲ್ಲಿ ಎದುರಿಸಬೇಕಾಗುತ್ತದೆ ಎಂದಿದ್ದಾರೆ. ಕಾಂಗ್ರೆಸ್ ಪಕ್ಷ ಚುನಾವಣಾ ಪೂರ್ವ ಗೃಹ ಲಕ್ಷ್ಮಿ ಯೋಜನೆ, ಯುವ ನಿಧಿ ಯೋಜನೆ, ಅನ್ನ ಭಾಗ್ಯ, ಸಖಿ ಕಾರ್ಯಕ್ರಮ ಮತ್ತು ಗೃಹ ಜ್ಯೋತಿ ಐದು ಗ್ಯಾರಂಟಿ ಯೋಜನೆಗಳನ್ನು ರಾಜ್ಯದ ಜನತೆ ಮುಂದಿಟ್ಟಿತ್ತು.

ಸಿದ್ದರಾಮಯ್ಯ ವಾದ

ತನಿಖಾ ಸಂಸ್ಥೆಗಳು ಅವರ ವಿರುದ್ಧ ಮುಗಿಬಿದ್ದರೆ ರಾಷ್ಟ್ರಮಟ್ಟದಲ್ಲಿ ಕಾಂಗ್ರೆಸ್ ವರ್ಚಸ್ಸಿಗೆ ಹೊಡೆತ ಬೀಳಲಿದೆ. 40 ಪರ್ಸೆಂಟ್ ಕಮಿಷನ್ನಿನ ಸರ್ಕಾರ ಎಂದು ಬಿಜೆಪಿಯವರ ವಿರುದ್ಧ ಆರೋಪ ಹೊರಿಸಿದ ನಮ್ಮ ಪಕ್ಷದ ಮುಖ್ಯಮಂತ್ರಿಯೇ ಭ್ರಷ್ಟಾಚಾರದ ಆರೋಪಕ್ಕೆ ಸಿಲುಕಿ ವಿಚಾರಣೆಗೆ ಗುರಿಯಾದರೆ ಅದು ಲೋಕಸಭೆ ಚುನಾವಣೆಯಲ್ಲಿ ನಮಗೆ ಪ್ರತಿಕೂಲ ಪರಿಣಾಮ ಉಂಟು ಮಾಡುತ್ತದೆ. ಎಲ್ಲಕ್ಕಿಂತ ಮುಖ್ಯವಾಗಿ ಜನಪರ ಸರ್ಕಾರ ನೀಡುವುದು ನಮ್ಮ ಮುಂದಿರುವ ಗುರುತರ ಸವಾಲು. ಈ ಕೆಲಸವನ್ನು ಆರೋಪಗಳ ಸುಳಿಗೆ ಸಿಲುಕಿರುವವರು ನೀಡಲು ಸಾಧ್ಯವಿಲ್ಲ. ಹೀಗಾಗಿ ಶಾಸಕಾಂಗದಲ್ಲಿ ಯಾರಿಗೆ ಬಲವಿದೆಯೋ ಅವರನ್ನು ಮುಖ್ಯಮಂತ್ರಿ ಹುದ್ದೆಯ ಮೇಲೆ ಕೂರಿಸುವುದು ಸಹಜ ನ್ಯಾಯ ಎಂದು ಸಿದ್ದರಾಮಯ್ಯ ವಾದ ಮಂಡಿಸಿದ್ದಾರೆ.

ಡಿಕೆಶಿ ವಾದ

ಅಷ್ಟೇ ಅಲ್ಲ ಅವರನ್ನು ಬೆಂಬಲಿಸುತ್ತಿರುವವರೂ ವಲಸಿಗರೇ ಆಗಿದ್ದಾರೆ. ನಾನು ಪಕ್ಷಕ್ಕಾಗಿ ತ್ಯಾಗ ಮಾಡಿದ್ದೇನೆ. ಅಧಿಕಾರವಿಲ್ಲದೆ ಹೀನ ಸ್ಥಿತಿಯಲ್ಲಿದ್ದ ಪಕ್ಷವನ್ನು ಸಂಘಟಿಸಿ ರಾಜ್ಯದಲ್ಲಿ ಅದು ಬಹುಮತ ಪಡೆದು ಅಧಿಕಾರಕ್ಕೆ ಬರುವಂತೆ ಮಾಡಿದ್ದೇನೆ. ಪಕ್ಷದ ನಾಯಕತ್ವ ನನ್ನ ಕೈಲಿರುವಾಗ ಕಾಂಗ್ರೆಸ್ ಪಕ್ಷಕ್ಕೆ ಜನ 135 ಸ್ಥಾನಗಳನ್ನು ಕೊಟ್ಟಿದ್ದಾರೆ.

ಪಕ್ಷ ಸಂಕಷ್ಟದಲ್ಲಿದ್ದಾಗ ರಾಹುಲ್ ಗಾಂಧಿಯವರು ಕರ್ನಾಟಕದಲ್ಲಿ ನಡೆಸಿದ ಭಾರತ್ ಜೋಡೋ ಯಾತ್ರೆಗಾಗಿ ಶ್ರಮಿಸಿದವನು ನಾನು. ಪಕ್ಷ ಸಂಘಟನೆಗಾಗಿ ಅಪಾರ ಪ್ರಮಾಣದ ಬಂಡವಾಳ ಹೂಡಿದವನು ನಾನು.ಆತ್ಮವಿಶ್ವಾಸ ಕಳೆದುಕೊಂಡಿದ್ದ ಕಾರ್ಯಕರ್ತರಲ್ಲಿ ಆತ್ಮವಿಶ್ವಾಸ ಮೂಡಿಸಿದವನು ನಾನು. ಹೀಗಾಗಿ ಸಹಜವಾಗಿಯೇ ಮುಖ್ಯಮಂತ್ರಿ ಹುದ್ದೆಗೆ ನನ್ನನ್ನು ಆಯ್ಕೆ ಮಾಡಬೇಕು.ಇವತ್ತು ಪಕ್ಷಕ್ಕೆ ಯಾರ ಕೈಲಿ ಶಕ್ತಿ ಇರುತ್ತದೆ ಎಂಬುದನ್ನು ಗಮನಿಸಬೇಕು. ಒಂದು ವೇಳೆ ನಾನು ಸಹಜವಾಗಿ ಆಯ್ಕೆಯಾಗದೆ ಇದ್ದರೆ ನನಗೆ ಯಾವ ಸ್ಥಾನವೂ ಬೇಡ. ನಾನು ಸಾಮಾನ್ಯ ಕಾರ್ಯಕರ್ತನಾಗಿ ನನ್ನ ಉದ್ಯೋಗ ನೋಡಿಕೊಂಡಿರುತ್ತೇನೆ ಎಂಬುದಾಗಿ ತಿಳಿಸಿದ್ದಾರೆ.

ಜೂ.4ರಂದು ಕೇರಳಕ್ಕೆ ಅಪ್ಪಳಿಸಲಿದೆ ಮುಂಗಾರು

ಇರುತ್ತದೆ. "ಈ ವರ್ಷ ಕೇರಳದ ಮೇಲೆ ನೈರುತ್ಯ ಮುಂಗಾರು ಪ್ರಾರಂಭವಾಗುವುದು ಸ್ವಲ್ಪ ವಿಳಂಬವಾಗುವ ಸಾಧ್ಯತೆಯಿದೆ. ಈ ಬಾರಿ 4 ದಿನ ವಿಳಂಬವಾಗಿ ಜೂನ್ 4ರಂದು ಕೇರಳ ಪ್ರವೇಶಿಸುವ ಸಾಧ್ಯತೆಯಿದೆ" ಎಂದು ಹವಾಮಾನ ಇಲಾಖೆ ತಿಳಿಸಿದೆ. ಮಾನ್ಸೂನ್ ಕಳೆದ ವರ್ಷ ಮೇ 29ರಂದು, 2021ರಲ್ಲಿ ಜೂನ್ 3 ಮತ್ತು 2020ರಲ್ಲಿ ಜೂನ್ 1ರಂದು ದೇವರ ನಾಡು ದಕ್ಷಿಣ ರಾಜ್ಯ ಪ್ರವೇಶಿಸಿತ್ತು. ವಿಕಸನಗೊಳ್ಳುತ್ತಿರುವ ಎಲ್ ನಿನೋ ಪರಿಸ್ಥಿತಿಗಳ ಹೊರತಾಗಿಯೂ ನೈಋತ್ಯ ಮುಂಗಾರು ಅವಧಿಯಲ್ಲಿ ದೇಶದಲ್ಲಿ ಸಾಮಾನ್ಯ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಕಳೆದ ತಿಂಗಳು ಹೇಳಿತ್ತು.

ಮುಖ್ಯಮಂತ್ರಿ ಘೋಷಣೆ

ಬುಧವಾರ ರಾಹುಲ್, ಸೋನಿಯಾ ಗಾಂಧಿ ಅವರೊಂದಿಗೆ ಸಮಾಲೋಚಿಸಿ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ದೆಹಲಿಯಲ್ಲಿ ನಾಯಕನ ಆಯ್ಕೆ ಕುರಿತಂತೆ ಸುದೀರ್ಘ ಸಭೆ ನಡೆಸುತ್ತಿದ್ದು, ಸಿದ್ದರಾಮಯ್ಯ ಮತ್ತು ಶಿವಕುಮಾರ್ ಅವರನ್ನು ದೆಹಲಿಗೆ ಕರೆಸಿಕೊಂಡು ಸಮಾಲೋಚನೆ ಮಾಡಿದ್ದಾರೆ.

ನಾಯಕನ ಆಯ್ಕೆ ಕಗ್ಗಂಟನ್ನು ಬಿಡಿಸಲು ಖರ್ಗೆ, ಪಕ್ಷದ ಅಧಿನಾಯಕ ರಾಹುಲ್ ಗಾಂಧಿ ಅವರ ಜೊತೆ ಈಗಾಗಲೇ ಎರಡು ಸುತ್ತಿನ ಮಾತುಕತೆ ನಡೆಸಿದ್ದಾರೆ. ಕಸರತ್ತುಗಳ ನಂತರ ಅಂತಿಮ ನಿರ್ಧಾರಗಳನ್ನು ಸೋನಿಯಾಗಾಂಧಿ ಅವರ ಅಂಗಳಕ್ಕೆ ಹಾಕಿದ್ದು, ಅವರು ಯಾವುದೇ ಸಂದರ್ಭದಲ್ಲಿ ತಮ್ಮ ನಿರ್ಧಾರವನ್ನು ತಿಳಿಸಲಿದ್ದಾರೆ. ಮೇ ಹದಿನೇಳರ ಬುಧವಾರ ಸರ್ಕಾರ ರಚನೆ ಸಂಬಂಧ ಹಕ್ಕನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ಸಮ್ಮುಖದಲ್ಲಿ ಮಂಡಿಸಲಿರುವ ಕಾಂಗ್ರೆಸ್ ನಿಯೋಗ ನೂತನ ಮುಖ್ಯಮಂತ್ರಿಗಳ ಪ್ರತಿಜ್ಞಾ ವಿಧಿ ಸಮಾರಂಭ ನಡೆಸಲು ಪತ್ರ ನೀಡಲಿದೆ. ಸಿಎಲ್‌ಪಿ ನಾಯಕ ಸ್ಥಾನಕ್ಕೆ ಪೈಪೋಟಿ ನಡೆಸಿರುವ ಶಿವಕುಮಾರ್ ಮತ್ತು ಸಿದ್ದರಾಮಯ್ಯ ಇಂದು ದೆಹಲಿಯಲ್ಲಿ ವರಿಷ್ಠರನ್ನು ಭೇಟಿ ಮಾಡಿದ ಸಂದರ್ಭದಲ್ಲಿ ತಮ್ಮನ್ನು ಏತಕ್ಕೆ ಮುಖ್ಯಮಂತ್ರಿ ಸ್ಥಾನಕ್ಕೆ ಆಯ್ಕೆ ಮಾಡಬೇಕೆಂದು ಸಮರ್ಥನೆ ಮಾಡಿಕೊಂಡಿದ್ದಾರೆ.

ಮೈಸೂರಲ್ಲಿ 'ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ'

ಸೊಳ್ಳೆಗಳಿಂದ ಹರಡುವ ಕಾಯಿಲೆ ನಿಯಂತ್ರಣದಲ್ಲಿ ಮೈಸೂರು ಮಾದರಿ

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕೆ.ಹೆಚ್.ಪ್ರಸಾದ್

ಮೈಸೂರು,ಮೇ 16 (ಪಿಎಂ)– ಸೊಳ್ಳೆಗಳಿಂದ ಹರಡುವ ಕಾಯಿಲೆಗಳನ್ನು ನಿಯಂತ್ರಿಸುವಲ್ಲಿ ಮೈಸೂರು ಮಾದರಿ ಜಿಲ್ಲೆಯಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕೆ.ಹೆಚ್.ಪ್ರಸಾದ್ ತಿಳಿಸಿದರು.

ಮೈಸೂರಿನ ನಜರ್‌ಬಾದಿನ ಜಿಲ್ಲಾ ಆರೋಗ್ಯಾಧಿಕಾರಿ ಕಚೇರಿ ಆವರಣದಲ್ಲಿರುವ ವೈದ್ಯರ ಭವನದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಆರೋಗ್ಯ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ 'ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಾನು ಅವಲೋಕಿಸಿದಂತೆ ಸೊಳ್ಳೆಗಳಿಂದ ಉಂಟಾಗುವ ಅನಾರೋಗ್ಯ ನಿಯಂತ್ರಣದಲ್ಲಿ ಮೈಸೂರು ಇತರೆ ಜಿಲ್ಲೆಗಳಿಗೆ ಮಾದರಿಯಾಗಿದೆ. ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿ ಪರಿಶ್ರಮದಿಂದ ಕಳೆದ 5 ವರ್ಷಗಳಿಂದ ಜಿಲ್ಲೆ ಮಲೇರಿಯಾ ಮುಕ್ತವಾಗಿದೆ. ಕಳೆದ 3 ವರ್ಷಗಳಿಂದ ಜಿಲ್ಲೆಯಲ್ಲಿ ಡೆಂಗ್ಯೂ ಪ್ರಕರಣಗಳು ಇದ್ದಾಗ್ಯೂ ಸಾವು ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ ಎಂದು ಹೇಳಿದರು.

ಡೆಂಗ್ಯೂ ಸಾಮಾನ್ಯ ಜ್ವರ ಎಂದು ನಿರ್ಲಕ್ಷ್ಯ ಮಾಡಬಾರದು. ಇದರಿಂದ ರಕ್ತದ ಪ್ಲೇಟ್ಲೆಟ್ ಇಳಿಕೆಯಾದಲ್ಲಿ ಅದಕ್ಕಾಗಿ ದುಬಾರಿ ಹಣ ವೆಚ್ಚ ಮಾಡಬೇಕಾಗುತ್ತದೆ. ಡೆಂಗ್ಯೂ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಜೊತೆಗೆ ಸಾರ್ವಜನಿಕರ ಸಹಕಾರವೂ ಅಗತ್ಯ. ಹಾಗಾಗಿ ಆರೋಗ್ಯ ಇಲಾಖೆ ನೀಡುವ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಲು ಸಾರ್ವಜನಿಕರು ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು.

ಈ ರೀತಿಯ ಅನಾರೋಗ್ಯ ಸಮಸ್ಯೆಗಳಿಗೆ ತುತ್ತಾಗುವುದಕ್ಕೆ ಆಸ್ಪದ ನೀಡದೇ ಮುನ್ನೆಚ್ಚರಿಕೆ ವಹಿಸಲು ಸಾರ್ವಜನಿಕರು ಮುಂದಾಗಬೇಕು. ಡೆಂಗ್ಯೂ ಹರಡುವ ಈಡಿಸ್ ಈಜಿಪ್ಟೈ ಸೊಳ್ಳೆಗಳು ಸಣ್ಣ ಪ್ರಮಾಣದಲ್ಲಿ ನಿಲ್ಲುವ ನೀರಿನಲ್ಲಿ ಉತ್ಪತ್ತಿಯಾಗುತ್ತವೆ. ಈ ಸೊಳ್ಳೆಗಳನ್ನು ನಿರ್ಮೂಲನೆ ಮಾಡಬೇಕು. ಇಲ್ಲವೇ ಅವುಗಳ ಕಚ್ಚುವಿಕೆಯಿಂದ ತಪ್ಪಿಸಿಕೊಳ್ಳಬೇಕು. ಈ ಸಂದೇಶವನ್ನು ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ರವಾನಿಸುವ ಮೂಲಕ ಡೆಂಗ್ಯೂ ನಿಯಂತ್ರಣ ಕಾರ್ಯಾಚರಣೆ ಮುಂದುವರೆಸಬೇಕು ಎಂದು ಇಲಾಖೆ ಸಿಬ್ಬಂದಿಗೆ ಸಲಹೆ ನೀಡಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಎಸ್.ಚಿದಂಬರ ಮಾತನಾಡಿ, ಡೆಂಗ್ಯೂ ಜ್ವರ ನಿಯಂತ್ರಣದ ಬಗ್ಗೆ ಜಾಗೃತಿಗಾಗಿ ದೇಶದಲ್ಲಿ 'ಮೇ 16' ಅನ್ನು 'ರಾಷ್ಟ್ರೀಯ ಡೆಂಗ್ಯೂ ದಿನ'ವಾಗಿ ಆಚರಿಸಲಾಗುತ್ತಿದೆ. ಡೆಂಗ್ಯೂ ಹರಡುವ ಈಡಿಸ್ ಈಜಿಪ್ಟೈ ಸೊಳ್ಳೆಗಳನ್ನು ಜಿಲ್ಲೆಯಲ್ಲಿ ತೊಡೆದು ಹಾಕುವ ನಿಟ್ಟಿನಲ್ಲಿ ನಾವು ಕೆಲಸ ಮಾಡಬೇಕಿದೆ. ಈ ವರ್ಷ ಮೈಸೂರು ಜಿಲ್ಲೆಯಲ್ಲಿ 10 ಸಾವಿರಕ್ಕೂ ಅಧಿಕ ಮಂದಿಯ ರಕ್ತದ ಮಾದರಿ ಪರೀಕ್ಷಿಸಬೇಕೆಂಬ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಡೆಂಗ್ಯೂ ಜ್ವರ ವೈರಾಣುವಿನಿಂದ ಬರುತ್ತದೆ. ನಮ್ಮ ವಾತಾವರಣದಲ್ಲಿ ಲೆಕ್ಕಕ್ಕೆ ಸಿಗದಷ್ಟು ಸಂಖ್ಯೆಯಲ್ಲಿ ವೈರಾಣುಗಳಿವೆ. ಮನುಷ್ಯನಿಗೆ ತೊಂದರೆ ಉಂಟು ಮಾಡುವ ವೈರಾಣುಗಳಲ್ಲಿ ಕೆಲವನ್ನು ಮಾತ್ರವೇ ಕಂಡುಕೊಳ್ಳಲು ಸಾಧ್ಯವಾಗಿದೆ. ಡೆಂಗ್ಯೂ ವೈರಾಣುವಿನಲ್ಲಿ ನಾಲ್ಕು ಸಿರೋಟೈಪ್‌ಗಳನ್ನು ಕಾಣಬಹುದು. ಐದನೇಯದ್ದೂ ಇದೆ ಎಂದು ಹೇಳಲಾಗುತ್ತಿದೆಯಾದರೂ ಅಧಿಕೃತವಾಗಿ ಅದನ್ನು ಘೋಷಣೆ ಮಾಡಿಲ್ಲ. ಈ ನಾಲ್ಕು ಸಿರೋಟೈಪ್‌ಗಳು ಎಲ್ಲವೂ ಒಂದೇ. ಆದರೂ ಇವುಗಳ ಪರಿಣಾಮ ಒಂದಕ್ಕಿಂತ ಒಂದು ವಿಭಿನ್ನವಾಗಿರುತ್ತವೆ. ಈ ವೈರಾಣುವಿನ ತೀವ್ರತೆ ವ್ಯಾಪಕವಾಗಿರುತ್ತದೆ ಎಂದು ತಿಳಿಸಿದರು.

ಈಡಿಸ್ ಈಜಿಪ್ಟೈ ಸೊಳ್ಳೆ ಕಚ್ಚುವಿಕೆಯಿಂದ ಮಾತ್ರವೇ ಡೆಂಗ್ಯೂ ವೈರಾಣು ಮನುಷ್ಯನ ದೇಹಕ್ಕೆ ಬರಲಿದ್ದು, ಇದರ ಹೊರತಾಗಿ ಬೇರೆ ಯಾವುದೇ ವಿಧದಲ್ಲಿ ಬರುವುದಿಲ್ಲ. ಈ ಸೊಳ್ಳೆಯಲ್ಲಿಯೂ ವೈರಾಣು ಇದ್ದರೆ ಮಾತ್ರವೇ ನಮ್ಮ ದೇಹಕ್ಕೆ ವೈರಾಣು ಬರುತ್ತದೆ. ವಿವಿಧ ಸೋಂಕಿನಿಂದ ಕಾಯಿಲೆಗೆ ತುತ್ತಾಗಿರುವವರನ್ನು ಕಚ್ಚಿದ ಈ ವಿಧದ ಸೊಳ್ಳೆಯೂ ಸೋಂಕಿಗೆ ಒಳಗಾಗಿ ಬಳಿಕ ಕಚ್ಚುವಿಕೆ ಮೂಲಕ ಒಬ್ಬರಿಂದ ಒಬ್ಬರಿಗೆ ಹರಡಲು ಕಾರಣವಾಗುತ್ತದೆ ಎಂದರು.

ತಳದಲ್ಲಿ ಸ್ವಲ್ಪ ಅಶುಚಿತ್ವ ಇದ್ದು ಮೇಲ್ಭಾಗದಲ್ಲಿ ಶುಚಿಯಾಗಿ ನಿಂತಿರುವ ನೀರಿನಲ್ಲಿ ಈಡಿಸ್ ಈಜಿಪ್ಟೈ ಸೊಳ್ಳೆ ಉತ್ಪತ್ತಿಯಾಗುತ್ತವೆ. 3ರಿಂದ 5 ಎಂಎಲ್ ಪ್ರಮಾಣದಲ್ಲಿ ಶೇಖರಣೆಯಾಗಿರುವ ನೀರಿನಲ್ಲಿಯೂ ಈ ಸೊಳ್ಳೆಗಳು ಬೆಳವಣಿಗೆ ಕಾಣುವುದರಿಂದ ಇವುಗಳ ನಿಯಂತ್ರಣ ಅಷ್ಟು ಸುಲಭ ಸಾಧ್ಯವಲ್ಲ. ಜೊತೆಗೆ ಈ ನೀರಿನ ಮೂಲದಲ್ಲಿ ತಳ ಗಟ್ಟಿ ಇದ್ದರೆ ಮಾತ್ರ ಈ ಸೊಳ್ಳೆಗಳು ಇರುತ್ತವೆ. ಎಳನೀರು ಬುರಡೆ, ಬಾಟಲಿಗಳ ಮುಚ್ಚಳಗಳು ಮೊದಲಾದ ತ್ಯಾಜ್ಯಗಳಲ್ಲಿ ನಿಂತ ನೀರಿನಲ್ಲಿ ಇವು ಬೆಳವಣಿಗೆಯಾಗುತ್ತವೆ ಎಂದು ವಿವರಿಸಿದರು.

ಮೈಸೂರು ಜಿಲ್ಲೆಯಲ್ಲಿ ಹಿಂದೆ ತಪಾಸಣೆ ಮತ್ತು ಪರೀಕ್ಷಿಸುವುದು ಕಡಿಮೆ ಪ್ರಮಾಣದಲ್ಲಿತ್ತು. 2015ರಿಂದ ತಪಾಸಣೆ ಮತ್ತು ಪರೀಕ್ಷೆ ಪ್ರಮಾಣ ಹೆಚ್ಚಿಸಲಾಗಿದೆ. 2013ರಲ್ಲಿ ಮೈಸೂರು ಜಿಲ್ಲೆಯಲ್ಲಿ ಡೆಂಗ್ಯೂ ಉಲ್ಬಣಗೊಂಡಿತ್ತು. ಹೀಗೆ ಉಲ್ಬಣಗೊಂಡ ಮಾರನೇ ವರ್ಷದಲ್ಲಿ ಸಾಮಾನ್ಯವಾಗಿ ಡೆಂಗ್ಯೂ ಕಾಣಿಸಿಕೊಳ್ಳುವುದು ಕಡಿಮೆ ಇರುತ್ತದೆ. ಅಂತೆಯೇ 2014ರಲ್ಲಿ ಡೆಂಗ್ಯೂ ಪ್ರಮಾಣ ಕಡಿಮೆ ಇತ್ತು. ಇದಕ್ಕೆ ಕಾರಣ ರೋಗ ನಿರೋಧಕ ಶಕ್ತಿ ವೃದ್ಧಿಯಾಗಿರುವುದಾಗಿದೆ. ಈ ವೈರಾಣು ಪ್ರತಿ 4 ರಿಂದ 5 ವರ್ಷಗಳಿಗೊಮ್ಮೆ ಉಲ್ಬಣಗೊಳ್ಳುತ್ತದೆ. ಕೋವಿಡ್ ಸಂದರ್ಭದಲ್ಲಿ ಈ ವೈರಾಣು ಇಳಿಕೆಯಾಗಿತ್ತು ಕಳೆದ ವರ್ಷ ಹೆಚ್ಚಳವಾಗಿತ್ತು ಈ ವರ್ಷ ಯಾವ ರೀತಿಯಲ್ಲಿ ಈ ವೈರಾಣು ಪರಿಣಾಮ ಉಂಟು ಮಾಡಲಿದೆ ಎಂಬ ಬಗ್ಗೆ ನಿಗಾ ವಹಿಸಬೇಕಿದೆ ಎಂದು ಹೇಳಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮಹದೇವ ಪ್ರಸಾದ್, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ರವಿ, ನಜರ್‌ಬಾದಿನ ಯುಪಿಹೆಚ್‌ಸಿ ವೈದ್ಯಾಧಿಕಾರಿ ಡಾ.ಜಗದೀಶ್, ಚಾಮುಂಡಿ ಬೆಟ್ಟ ರಸ್ತೆಯ ಪಿಹೆಚ್‌ಸಿ ವೈದ್ಯಾಧಿಕಾರಿ ಡಾ.ನವೀನ್ ವೇದಿಕೆಯಲ್ಲಿದ್ದರು. ಆರೋಗ್ಯ ಇಲಾಖೆಯ ಪ್ರಯೋಗಾಲಯದ ತಂತ್ರಜ್ಞರು, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ಸಿಬ್ಬಂದಿ ಪಾಲ್ಗೊಂಡಿದ್ದರು.



ಮೈಸೂರಿನ ನಜರ್‌ಬಾದಿನ ಡಿಹೆಚ್‌ಓ ಕಚೇರಿ ಆವರಣದ ವೈದ್ಯರ ಭವನದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಕಾರ್ಯಕ್ರಮವನ್ನು ಡಿಹೆಚ್‌ಓ ಡಾ.ಕೆ.ಹೆಚ್.ಪ್ರಸಾದ್ ಉದ್ಘಾಟಿಸಿದರು. ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಎಸ್.ಚಿದಂಬರ ಮತ್ತಿತರರು ಚಿತ್ರದಲ್ಲಿದ್ದಾರೆ.

ಮನಿ ಪ್ಲಾಂಟ್; ಲಕ್ಷ್ಮಿ ಬರದಿದ್ದರೂ ಡೆಂಗ್ಯೂ ತರುತ್ತದೆ! ಎಚ್ಚರ!!

ಹಣ ಹರಿದು ಬರುತ್ತದೆ ಎಂಬ ನಂಬಿಕೆಯಲ್ಲಿ ಮನೆಯಲ್ಲಿ ಮನಿ ಪ್ಲಾಂಟ್ ಬೆಳೆಸುವುದು ರೂಢಿಯಲ್ಲಿದೆ. ಪ್ಲಾಸ್ಟಿಕ್ ಬಾಟಲಿ ಕಟ್ ಮಾಡಿ ಅರ್ಧದವರೆಗೆ ನೀರು ತುಂಬಿ ಅದರಲ್ಲಿ ಈ ಮನಿ ಪ್ಲಾಂಟ್ ಬೆಳೆಸುವುದಿದೆ. ನೀರನ್ನು ಆಗಾಗ್ಗೆ ಬದಲಾವಣೆ ಮಾಡಿ, ಸೊಳ್ಳೆ ಬೆಳವಣಿಗೆ ಆಗದಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಇಲ್ಲವಾದರೆ ಲಕ್ಷ್ಮಿ ಬರುತ್ತಾಳೋ ಇಲ್ಲವೋ, ಗೊತ್ತಿಲ್ಲ. ಆದರೆ ಡೆಂಗ್ಯೂ ಬರುವುದನ್ನು ತಳ್ಳಿ ಹಾಕಲಾಗದು ಎಂದು ಮಾರ್ಮಿಕವಾಗಿ ಹೇಳುವ ಮೂಲಕ ಡಾ.ಎಸ್.ಚಿದಂಬರ ಜಾಗೃತಿ ಸಂದೇಶ ನೀಡಿದರು.

ಸಕ್ಕರೆ ಕಾರ್ಖಾನೆ ಮಾಲೀಕರಾಗಿರುವ ಶಾಸಕರಿಗೆ ಸಚಿವ ಸ್ಥಾನ ನೀಡಬೇಡಿ

ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ರಾಜ್ಯಪಾಲರಿಗೆ ರೈತರ ಆಗ್ರಹ



ಮೈಸೂರು,ಮೇ 16(ಜಿಎ)–ನೂತನವಾಗಿ ಶಾಸಕರಾಗಿ ಆಯ್ಕೆಯಾಗಿರುವ ಸಕ್ಕರೆ ಕಾರ್ಖಾನೆ ಮಾಲೀಕರನ್ನು ಸಂಪುಟಕ್ಕೆ ಸೇರಿಸಿಕೊಳ್ಳದಂತೆ ಸರ್ಕಾರಕ್ಕೆ ಸೂಚನೆ ನೀಡುವ ಮೂಲಕ ರಾಜ್ಯದ 30 ಲಕ್ಷ ರೈತರ ಬದುಕು ಸಂರಕ್ಷಿಸಿ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಒತ್ತಾಯಿಸಿದರು.

ಬೆಂಗಳೂರಿನ ರಾಜಭವನದಲ್ಲಿ ಮಂಗಳವಾರ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರನ್ನು ರಾಜ್ಯ ರೈತ ಸಂಘಟನೆಗಳ ಒಕ್ಕೂಟವು ಭೇಟಿ ಮಾಡಿ, ಮನವಿ ಸಲ್ಲಿಸಿತು.

ಈ ವೇಳೆ ರಾಜ್ಯಪಾಲರು ರೈತ ಮುಖಂಡರ ಎಲ್ಲಾ ಸಮಸ್ಯೆಗಳ ಬಗ್ಗೆ ಕಾನೂನು ರೀತಿಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಮನವಿ ಪತ್ರ ಸಲ್ಲಿಸಿದ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ರೈತರ ಸಮಸ್ಯೆಗಳನ್ನು ವಿವರಿಸಿದರು.

ರಾಜ್ಯದಲ್ಲಿರುವ 78 ಸಕ್ಕರೆ ಕಾರ್ಖಾನೆಗಳಲ್ಲಿ ಎಲ್ಲ ರಾಜಕೀಯ ಪಕ್ಷಗಳ ಶಾಸಕರು ಮಾಲೀಕರು ಇರುವ ಕಾರಣ ಯಾವುದೇ ಸರ್ಕಾರ ಬಂದರೂ ಸಚಿವ ಸಂಪುಟದಲ್ಲಿ ಸೇರುವುದರಿಂದ 30 ಲಕ್ಷ ಕಬ್ಬು ಬೆಳೆಗಾರರು ಸಂಕಷ್ಟ ಅನುಭವಿಸುವಂತಾಗಿದೆ. ಹಿಂದಿನ ಸರ್ಕಾರ ಕಬ್ಬಿನ ಎಫ್‌ಆರ್‌ಪಿ ದರವನ್ನು 150 ರೂ.ಗೆ ಏರಿಕೆ ಮಾಡಿ ಆದೇಶ ಹೊರಡಿಸಿತು. ಆದರೆ, ಇದಕ್ಕೆ ನ್ಯಾಯಾಲಯದಲ್ಲಿ ತಡೆ ತಂದು ಹೆಚ್ಚುವರಿ ಹಣ ಪಾವತಿಸದೆ ರೈತರನ್ನ ಸಂಕಷ್ಟಕ್ಕೆ ತಳ್ಳಿದ್ದಾರೆ. ದೇಶದ ಬೇರೆ ರಾಜ್ಯಗಳಲ್ಲಿ ಕಬ್ಬಿನ ದರವನ್ನು 3800 ರಿಂದ 4500 ತನಕ ನೀಡುತ್ತಿದ್ದಾರೆ. ಸರ್ಕಾರ ಜಿಲ್ಲಾಡಳಿತಕ್ಕೆ ಕಠಿಣ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರೂ ಆ ಜಿಲ್ಲೆಯ ಉಸ್ತುವಾರಿ ಸಚಿವರು ಬಹಳಷ್ಟು ಬಾರಿ ಸಕ್ಕರೆ ಕಾರ್ಖಾನೆ ಮಾಲೀಕರು ಸಚಿವರಾಗಿರುವ ಕಾರಣ ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷಿಸುತ್ತಿದ್ದಾರೆ ಎಂದು ತಿಳಿಸಿದರು.

ಬ್ಯಾಂಕುಗಳಲ್ಲಿ ರೈತರು ಸಾಲ ಪಡೆಯಲು ಸಿಬಿಲ್ ಸ್ಕೋರ್ ಮಾನದಂಡವನ್ನು ಅನುಸರಿಸುತ್ತಿರುವ ಕಾರಣ ರೈತರಿಗೆ ಕೃಷಿ ಸಾಲ ಸಿಗುತ್ತಿಲ್ಲ. ಇದರಿಂದ ಸಂಕಷ್ಟ ಅನುಭವಿಸುವಂತಾಗಿದ್ದು, ರೈತರಿಗೆ ಕೃಷಿ ಸಾಲಕ್ಕೆ ಸಿಬಿಲ್ ಸ್ಕೋರ್ ಮಾನದಂಡವನ್ನು ಕೈ ಬಿಡಲು ಸೂಚನೆ ನೀಡಬೇಕು. ಹಾಗೇ ಹಿಂದಿನ ಸರ್ಕಾರ ಜಾರಿಗೆ ತಂದಿದ್ದ ಎಪಿಎಂಸಿ ತಿದ್ದುಪಡಿ ಕಾಯ್ದೆ, ಭೂ ಸುಧಾರಣಾ ತಿದ್ದುಪಡಿ ಕಾಯ್ದೆಯನ್ನು ರದ್ದು ಮಾಡಬೇಕು. ಈ ಬಗ್ಗೆ ನೂತನ ಸರ್ಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಈ ವೇಳೆ ರಾಜ್ಯ ಕಬ್ಬು ಬೆಳೆಗಾರರ ಸಂಘದ ಉಪಾಧ್ಯಕ್ಷ ದೇವಕುಮಾರ, ಕಿಸಾನ್ ಸಂಘಟನಾ ಕಾರ್ಯದರ್ಶಿ ಅತ್ತಳ್ಳಿದೇವರಾಜ್, ರಾಜ್ಯ ರೈತ ಸಂಘದ ನಾರಾಯಣರೆಡ್ಡಿ ಪ್ರಸನ್ನ ಕುಮಾರ್, ಶಿವಕುಮಾರ್ ಮತ್ತು ಬರಡನಪುರ ನಾಗರಾಜ್ ಮತ್ತಿತರರು ಉಪಸ್ಥಿತರಿದ್ದರು.

ತನ್ವೀರ್ ಸೇಠ್‌ಗೆ ಡಿಸಿಎಂ, ಸಲೀಂ ಅಹ್ಮದ್‌ಗೆ ಸಚಿವ ಸ್ಥಾನ ನೀಡಲು ಆಗ್ರಹ

ಮೈಸೂರು,ಮೇ 16(ಜಿಎ)–ನೂತನ ಸಚಿವ ಸಂಪುಟದಲ್ಲಿ ನರಸಿಂಹರಾಜ ಕ್ಷೇತ್ರದ ಶಾಸಕ ತನ್ವೀರ್ ಸೇಠ್ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಸಲೀಂ ಅಹ್ಮದ್ ಅವರಿಗೆ ಕ್ಯಾಬಿನೆಟ್ ದರ್ಜೆಯ ಮಂತ್ರಿ ಸ್ಥಾನ ನೀಡುವಂತೆ ಕೆಪಿಸಿಸಿ ಕಾರ್ಯದರ್ಶಿ ಕೆ.ಎಂ.ಅಕ್ಬರ್ ಅಲೀಂ ಅವರು ಒತ್ತಾಯಿಸಿದ್ದಾರೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿರಿಯ ರಾಜಕಾರಣಿ ಮಾಜಿ ಸಚಿವರಾಗಿದ್ದ ಅಜೀಜ್ ಸೇಠ್ ಅವರ ಪುತ್ರನಾದ ತನ್ವೀರ್ ಸೇಠ್ ಅವರು ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಜಯಗಳಿಸುವ ಮೂಲಕ ಕರ್ನಾಟಕದಲ್ಲಿ ದಾಖಲೆಯನ್ನು ಸೃಷ್ಟಿಸಿದ್ದಾರೆ. ಅವರಿಗೆ ಅಲ್ಪಸಂಖ್ಯಾತರ ಕೋಟಾದಡಿ ಉಪ ಮುಖ್ಯಮಂತ್ರಿ ಸ್ಥಾನವನ್ನು ನೀಡಬೇಕೆಂದು ಮೈಸೂರು ಜಿಲ್ಲೆಯ ಮುಸ್ಲಿಂ ಸಮುದಾಯದವರ ಒತ್ತಾಯವಾಗಿದೆ ಎಂದರು.

ರಾಜ್ಯದ 224 ಕ್ಷೇತ್ರಗಳಲ್ಲಿ ಮುಸ್ಲಿಂ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಪಕ್ಷದ ಪರವಾಗಿ ಮತ ಚಲಾಯಿಸಿ 135 ಸ್ಥಾನ ಗಳಿಸಲು ಕಾರಣೀಭೂತರಾಗಿದ್ದು, ನಿಗಮ ಮಂಡಳಿಗೆ ನೇಮಕಾತಿ ಮಾಡುವ ಸಂದರ್ಭದಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ವಾಸಿಸುತ್ತಿರುವ ಮುಸ್ಲಿಂ ಸಮುದಾಯದವರನ್ನು ಪರಿಗಣಿಸಿ ಸೂಕ್ತ ಸ್ಥಾನಮಾನ ನೀಡುವಂತೆ ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಹೆಚ್.ಡಿ. ಕೋಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಏಜಾಸ್ ಪಾಷ, ಪಿರಿಯಾಪಟ್ಟಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರೆಹಮತ್ ಜಾನ್ ಬಾಬು, ಚಾಮರಾಜನಗರ ಜಿಲ್ಲಾ ವಕ್ಫ್ ಅಧ್ಯಕ್ಷ ಸೈಯದ್ ಕಲೀಂ ಉಲ್ಲ ಹಾಗೂ ನಂಜನಗೂಡು ಪುರಸಭೆ ಸದಸ್ಯ ಸಿದ್ದಿಕ್ ಅಹಮ್ಮದ್ ಉಪಸ್ಥಿತರಿದ್ದರು.



ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

ಮೈಸೂರು, ಮೇ 16– 2022–23ನೇ ಸಾಲಿಗೆ ಮೈಸೂರು ತಾಲೂಕಿನ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ssp.postmatric.karnataka.gov.in ನಲ್ಲಿ ಅರ್ಜಿ ಸಲ್ಲಿಸಲು ಮೇ 31 ಅಂತಿಮ ದಿನಾಂಕವಾಗಿದ್ದು, ಪಿಯುಸಿ ಮತ್ತು ಐಟಿಐ ಹೊರತುಪಡಿಸಿ, ಪೋಷಕರ ವಾರ್ಷಿಕ ವರಮಾನ 2.5 ಲಕ್ಷದೊಳಗಿರುವ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ನಿಗದಿತ ಸಮಯದೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ವಿದ್ಯಾರ್ಥಿಗಳು ಅವರ ಆಧಾರ್ ಸಂಖ್ಯೆಯನ್ನು NPCI (National Payment Corporation of India) ರಲ್ಲಿ ಕಡ್ಡಾಯವಾಗಿ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಮಾಡಿಸುವುದು. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರನ್ನು ಅಥವಾ ದೂ.ಸಂ: 0821–2520910 ಅನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶ್ರೀ ಲಕ್ಷ್ಮೀನಾರಾಯಣ ಸ್ವಾಮಿ ವಾರ್ಷಿಕೋತ್ಸವ

ಮೈಸೂರು, ಮೇ 16–ಮೈಸೂರಿನ ರಾಮಕೃಷ್ಣನಗರ 'ಇ' ಅಂಡ್ 'ಎಫ್' ಬ್ಲಾಕ್‌ನ ಶ್ರೀ ಪ್ರಸನ್ನ ಗಣಪತಿ ಮತ್ತು ಶ್ರೀ ಶಿರಡಿ ಸಾಯಿ ಶಕ್ತಿ ಸನ್ನಿಧಿ ಮಂದಿರದ ಆವರಣದಲ್ಲಿರುವ ಶ್ರೀ ಲಕ್ಷ್ಮೀನಾರಾಯಣ ಸ್ವಾಮಿಯ ವಾರ್ಷಿಕೋತ್ಸವವನ್ನು ಮೇ 29ರಂದು ಬೆಳಗ್ಗೆ 9 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಅಂದು ಬೆಳಗ್ಗೆ ಪುರುಷಸೂಕ್ತ ಹವನ, ಶ್ರೀಸೂಕ್ತ ಹವನ ಹಾಗೂ ವಿಷ್ಣು ಸಹಸ್ರನಾಮ ಹವನ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳನ್ನು ಆಚರಿಸಲಾಗುವುದು ಎಂದು ದೇವಸ್ಥಾನದ ಪ್ರಕಟಣೆ ತಿಳಿಸಿದೆ.

ಮೈಸೂರಿನಲ್ಲಿ ರಕ್ತದಾನಿಗಳ ಪ್ರಮಾಣ ಇಳಿಮುಖ

ಮೈಸೂರು ಮೇ 16(ಸಿಎನ್)– ಸ್ಪರ್ಧಾತ್ಮಕ ಪರೀಕ್ಷೆ, ಕಾಲೇಜು ವಿದ್ಯಾರ್ಥಿಗಳಿಗೆ ಜೂನ್‌ವರೆಗೂ ರಜೆ ನೀಡಿರುವುದರಿಂದ ರಕ್ತದಾನ ಶಿಬಿರಗಳು ನಡೆಯದೇ, ಜಿಲ್ಲೆಯಲ್ಲಿ ರಕ್ತದಾನಿಗಳ ಸಂಖ್ಯೆ ಇಳಿಮುಖವಾಗಿ, ರಕ್ತ ಸಂಗ್ರಹ ಪ್ರಮಾಣದಲ್ಲಿ ಭಾರೀ ಕುಸಿತವಾಗಿದೆ.

ಜಿಲ್ಲೆಯಲ್ಲಿ ಸುಮಾರು 8 ರಕ್ತನಿಧಿ ಸಂಗ್ರಹ ಘಟಕಗಳಿದ್ದು, ಕಳೆದ ಬಾರಿಗೆ ಹೋಲಿಸಿದರೆ ರಕ್ತಸಂಗ್ರಹ ಪ್ರಮಾಣ ಶೇ.40ರಷ್ಟು ಕಡಿಮೆಯಾಗಿದೆ. ನಗರದ ಪ್ರಮುಖ ರಕ್ತನಿಧಿ ಘಟಕವಾಗಿರುವ ಕೆ.ಆರ್.ಆಸ್ಪತ್ರೆಯಲ್ಲಿ ಪ್ರತಿ ತಿಂಗಳು ಸುಮಾರು 6 ಶಿಬಿರಗಳನ್ನು ಆಯೋಜನೆ ಮಾಡಲಾಗುತ್ತಿತ್ತು ಆದರೆ ಈಗ 2 ರಿಂದ 3 ಶಿಬಿರಗಳನ್ನು ನಡೆಸುವುದು ಕಷ್ಟಕರವಾಗಿದೆ. ಈ ಹಿಂದೆ 250 ರಿಂದ 300 ಯೂನಿಟ್ ರಕ್ತಸಂಗ್ರಹವಾಗಿತ್ತು. ಅದೀಗ 130 ರಿಂದ 150ಕ್ಕೆ ಇಳಿದಿದೆ.

'ಮೈಸೂರು ಮಿತ್ರ'ನೊಂದಿಗೆ ರೆಡ್‌ಕ್ರಾಸ್ ಸೊಸೈಟಿ ಜಿಲ್ಲಾ ಕಾರ್ಯದರ್ಶಿ ಎಸ್.ಎಸ್.ವೈದ್ಯನಾಥ್ ಮಾತನಾಡಿ, ಸುಮಾರು ಎರಡು ತಿಂಗಳಿನಿಂದ ನಿರೀಕ್ಷೆಯಂತೆ ಶಿಬಿರಗಳು ನಡೆಯದೇ, ಶೇ.40ರಷ್ಟು ರಕ್ತಸಂಗ್ರಹ ಪ್ರಮಾಣ ಇಳಿಕೆಯಾಗಿದೆ. ದಾನಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕರೆತರುವಂತೆ ರಕ್ತದ ಅಗತ್ಯವಿರುವ ರೋಗಿಗಳು ಅಥವಾ ಅವರ ಕುಟುಂಬಸ್ಥರಿಗೆ ಮನವಿ ಮಾಡಲಾಗುತ್ತಿದೆ ಎಂದರು.

ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಲು ಬರುವವರ ಸಂಖ್ಯೆ ಇಳಿಮುಖವಾದ ಕಾರಣ ರಕ್ತಸಂಗ್ರಹ ಪ್ರಮಾಣ ಗಣನೀಯವಾಗಿ ಕುಸಿದಿದೆ. ಬೇಸಿಗೆ ರಜೆಗಳಲ್ಲಿ ಅನೇಕ ಸಂಘ–ಸಂಸ್ಥೆಗಳು ರಕ್ತದಾನ ಶಿಬಿರ ಗಳನ್ನು ನಡೆಸುತ್ತಿದ್ದವು. ಅಲ್ಲದೇ ಸಿನಿಮಾ ತಾರೆಯರು, ರಾಜಕಾರಣಿಗಳು ವಿವಿಧ ಕ್ಷೇತ್ರದ ಗಣ್ಯರು ಸಹ ಶಿಬಿರಗಳನ್ನು ಆಯೋಜಿಸುತ್ತಿದ್ದರು. ಆದರೆ ರಾಜ್ಯದಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಾಗಿದ್ದ ಹಿನ್ನೆಲೆ ಹೆಚ್ಚು ಶಿಬಿರಗಳು ನಡೆಯದೆ ರಕ್ತಸಂಗ್ರಹ ಪ್ರಮಾಣ ಕಡಿಮೆಯಾಗಿದೆ. ಅಪಘಾತ ಹಾಗೂ ತುರ್ತುಸ್ಥಿತಿ, ಶಸ್ತ್ರಚಿಕಿತ್ಸೆಯ ಸಂದರ್ಭದಲ್ಲಿ ರಕ್ತದ ಅಗತ್ಯ ಹೆಚ್ಚಾಗಿದ್ದು, ಆದ್ದರಿಂದ ಸಾರ್ವಜನಿಕರು ಸ್ವಯಂಪ್ರೇರಿತರಾಗಿ ನಿಮ್ಮ ಹತ್ತಿರದ ರಕ್ತನಿಧಿಗಳಿಗೆ ಬಂದು ರಕ್ತದಾನ ಮಾಡಬೇಕು ಎಂದು ವೈದ್ಯನಾಥ್ ಮನವಿ ಮಾಡಿದರು.



ಜೂನ್ ಬಳಿಕ ಸುಧಾರಣೆ



ಕಾಲೇಜು ವಿದ್ಯಾರ್ಥಿಗಳಿಗೆ ಜೂನ್‌ವರೆಗೂ ರಜೆ ಇರುವುದರಿಂದ ರಕ್ತದಾನ ಶಿಬಿರಗಳ ಆಯೋಜನೆ ಕಡಿಮೆಯಾಗಿದೆ. ಆದರೆ ಆಸ್ಪತ್ರೆಯ ಒಳರೋಗಿಗಳಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ವ್ಯವಸ್ಥೆ ಮಾಡಲಾಗಿದೆ. ಆಸ್ಪತ್ರೆಗೆ ದಿನಕ್ಕೆ ಸುಮಾರು 50 ರಿಂದ 60 ಯೂನಿಟ್ ರಕ್ತದ ಅಗತ್ಯವಿದೆ. ಅದನ್ನು ಸರಿದೂಗಿಸಲು ನಾವು ನೋಂದಾಯಿತ ಹಾಗೂ ಸ್ವಯಂಪ್ರೇರಿತ ದಾನಿಗಳಿಂದ ಪಡೆಯುತ್ತಿದ್ದೇವೆ. ಬೇಸಿಗೆ ರಜೆ ಬಳಿಕ ಎನ್‌ಸಿಸಿ, ಎನ್‌ಎಸ್‌ಎಸ್ ಸೇರಿದಂತೆ ಅನೇಕ ಶಿಬಿರಗಳು ನಡೆಯಲಿದ್ದು, ಜೂನ್ ಬಳಿಕ ರಕ್ತಸಂಗ್ರಹ ಪ್ರಮಾಣ ಸುಧಾರಿಸಲಿದೆ.

–ಡಾ.ಬಿ.ಎಸ್.ಮಂಜುನಾಥ್, ಕೆ.ಆರ್.ಆಸ್ಪತ್ರೆ ರಕ್ತನಿಧಿ ಘಟಕದ ಅಧಿಕಾರಿ

ಮುಂಬರುವ ಜೂನ್ 14 ರಂದು ವಿಶ್ವ ರಕ್ತದಾನಿಗಳ ದಿನಾಚರಣೆ ಇದೆ. ಅಂದು ಎಲ್ಲೆಡೆ ರಕ್ತದಾನ ಶಿಬಿರ ಆಯೋಜಿಸಿ, ರಕ್ತದಾನ ಮಹತ್ವದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲಿದ್ದೇವೆ. ಈ ಮೂಲಕ ಜಿಲ್ಲೆಯಲ್ಲಿನ ರಕ್ತಸಂಗ್ರಹ ಪ್ರಮಾಣ ಸುಧಾರಿಸುವ ಸಾಧ್ಯತೆಯಿದೆ.

–ಎಸ್.ಎಸ್.ವೈದ್ಯನಾಥ್, ರೆಡ್‌ಕ್ರಾಸ್ ಸೊಸೈಟಿ ಜಿಲ್ಲಾ ಕಾರ್ಯದರ್ಶಿ

ಸಂಪುಟ ರಚನೆ ವೇಳೆ ಹೈಕಮಾಂಡ್ ನನ್ನನ್ನು ಪರಿಗಣಿಸಲಿದೆ

ಶಾಸಕ ಎ.ಆರ್.ಕೃಷ್ಣಮೂರ್ತಿ ವಿಶ್ವಾಸ

ತಿ.ನರಸೀಪುರ, ಮೇ 16– ಸಂಪುಟ ರಚನೆ ವೇಳೆ ಪಕ್ಷದ ಹೈಕಮಾಂಡ್ ನನ್ನ ಹೆಸರನ್ನು ಪರಿಗಣಿಸಲಿದೆ ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ವಿಶ್ವಾಸ ವ್ಯಕ್ತಪಡಿಸಿದರು.

ತಾಲೂಕಿನ ವಾಟಾಳು ಸೂರ್ಯ ಸಿಂಹಾಸನ ಮಠಕ್ಕೆ ಭೇಟಿ ನೀಡಿ ಶ್ರೀ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿಗಳ ಆಶೀರ್ವಾದ ಪಡೆದು ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

1979ರಿಂದಲೂ ಸಕ್ರಿಯ ರಾಜಕಾರಣದಲ್ಲಿದ್ದೇನೆ. 1994 ಹಾಗೂ 99ರಲ್ಲಿ ಶಾಸಕನಾಗಿ ಸೇವೆ ಸಲ್ಲಿಸಿದ್ದೇನೆ. 2004ರಲ್ಲಿ ನಡೆದ ಚುನಾವಣೆಯಲ್ಲಿ ಒಂದೇ ಒಂದು ಮತಗಳಿಂದ ಪರಾಭವಗೊಂಡಿದ್ದ ನಾನು 19 ವರ್ಷಗಳ ನಂತರ ಜನತೆಯ ಆಶೀರ್ವಾದದಿಂದ ಶಾಸಕನಾಗಿ ಆಯ್ಕೆಯಾಗಿದ್ದೇನೆ. ಪ್ರಸಕ್ತ ಚುನಾವಣೆಯಲ್ಲಿ ಹಣ, ಜನ ಬಲದ ನಡುವಿನ ಪೈಪೋಟಿಯಲ್ಲಿ ಕೊಳ್ಳೇಗಾಲ ಕ್ಷೇತ್ರದ ಮತದಾರರು ಜನಬಲಕ್ಕೆ ಶಕ್ತಿ ಇದೆ ಎಂಬುದನ್ನು ಫಲಿತಾಂಶದ ಮೂಲಕ ಇಡೀ ಜಗತ್ತಿಗೆ ತೋರಿಸಿಕೊಟ್ಟಿದ್ದಾರೆ. ಹಾಗಾಗಿ ಕಾಂಗ್ರೆಸ್ ಹೈಕಮಾಂಡ್ ನೂತನ ಸರ್ಕಾರದಲ್ಲಿ ನನ್ನ ಹೆಸರನ್ನು ಸಚಿವ ಸ್ಥಾನಕ್ಕೆ ಪರಿಗಣನೆ ಮಾಡುತ್ತದೆ ಎಂಬ ನಂಬಿಕೆ ಇದೆ ಎಂದರು.

ಶ್ರೀಗಳ ಆಶೀರ್ವಾದದಿಂದ ಶಾಸಕ ಸ್ಥಾನ!: ಈ ಹಿಂದೆ ನಮ್ಮ ತಂದೆ ಬಿ.ರಾಚಯ್ಯನವರ ಹೆಸರಲ್ಲಿ ಉದ್ಯೋಗ ಮೇಳ ಹಮ್ಮಿಕೊಂಡಿದ್ದ ಸಂದರ್ಭ ಶ್ರೀಗಳು ಒಂದು ಓಟಿನಿಂದ ಸೋತಿರುವ ನೀನು ಒಂದು ಲಕ್ಷ ಮತಗಳಿಂದ ಜಯಶೀಲನಾಗುತ್ತೀಯಾ ಎಂದು ಆಶೀರ್ವಾದ ಮಾಡಿದ್ದರು. ಅವರ ಆಶೀರ್ವಾದದಿಂದ ಈ ಚುನಾವಣೆಯಲ್ಲಿ ಲಕ್ಷಕ್ಕೂ ಹೆಚ್ಚು ಮತಗಳು ಬಂದಿದ್ದು, 60 ಸಾವಿರ ಮತಗಳ ಅಂತರದಿಂದ ಜಯ ಶಾಲಿಯಾಗಿದ್ದೇನೆ ಎಂದ ಅವರು ಮುಂದೆಯೂ ಒಳ್ಳೆಯದಾಗಲಿ ಎಂದು ಆಶೀರ್ವಾದ ಪಡೆದಿದ್ದೇನೆ ಎಂದರು.



> ವಾಟಾಳು ಶ್ರೀಗಳು ಒಂದು ಓಟಿನಿಂದ ಸೋತಿರುವ ನೀನು ಒಂದು ಲಕ್ಷ ಮತಗಳಿಂದ ಜಯಶೀಲನಾಗುತ್ತೀಯಾ ಎಂದು ಆಶೀರ್ವಾದ ಮಾಡಿದ್ದರು. ಅವರ ಆಶೀರ್ವಾದದಿಂದ ಈ ಚುನಾವಣೆಯಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಮತಗಳು ಬಂದಿದ್ದು, 60 ಸಾವಿರ ಮತಗಳ ಅಂತರದಿಂದ ಜಯಶಾಲಿಯಾಗಿದ್ದೇನೆ.
>
> – ಎ.ಆರ್.ಕೃಷ್ಣಮೂರ್ತಿ, ಶಾಸಕ.

ಇದೇ ವೇಳೆ ಶಾಸಕ ಎ.ಆರ್.ಕೃಷ್ಣಮೂರ್ತಿ ವಾಟಾಳು ಶ್ರೀಗಳಿಗೆ ಫಲ ತಾಂಬೂಲ ನೀಡಿ ಸನ್ಮಾನಿಸಿ, ಆಶೀರ್ವಾದ ಪಡೆದರು. ಎಪಿಎಂಸಿ ಮಾಜಿ ಅಧ್ಯಕ್ಷ ಆಲ್ದೂರು ರಾಜಶೇಖರ್, ಮೈಮೂಲ್ ನಿರ್ದೇಶಕ ನಂಜುಂಡಸ್ವಾಮಿ, ಜಿಪಂ ಮಾಜಿ ಸದಸ್ಯರಾದ ನಂಜುಂಡಸ್ವಾಮಿ, ಶಿವಕುಮಾರ್, ಲಕ್ಷ್ಮಿ ಪುಟ್ಟಸ್ವಾಮಿ, ನಿತ್ಯ ಪ್ರವೀಣ, ಮರಿಸ್ವಾಮಿ, ಶಂಕರ್, ಪ್ರವೀಣ್, ಚೇತನ್, ಕೃಷ್ಣಮೂರ್ತಿ, ತಾಪಂ ಅಧ್ಯಕ್ಷ ಹ್ಯಾಕನೂರು ಉಮೇಶ್, ಸುರೇಶ, ಬಸವರಾಜು, ಯೋಗೇಶ್, ಗ್ರಾಪಂ ಮಾಜಿ ಅಧ್ಯಕ್ಷ ಬಿ.ಎಂ.ಕೆ.ಹುಂಡಿ ಮಹದೇವ್ ಹಲವರಿದ್ದರು.

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಗಾರ್ಡಿಯನ್ಸ್ ಆಫ್ ಗ್ಯಾಲಕ್ಸಿ ವಾಲ್ಯೂಂ 3 (3ಡಿ)(ಇಂ): ಬೆ.10.10ಕ್ಕೆ, ಮ.1.10ಕ್ಕೆ, ಸಂ.4.05ಕ್ಕೆ, ರಾ.7ಕ್ಕೆ, ರಾ.9.55ಕ್ಕೆ.
ಸ್ಕ್ರೀನ್ 2	ರಾಘವೇಂದ್ರ ಸ್ಟೋರ್ಸ್ (ಕ): ಬೆ.11.05ಕ್ಕೆ, ರಾ.7.35ಕ್ಕೆ, ಪೊನ್ನಿಯಿನ್ ಸೆಲ್ವನ್ –2 (ತ): ಮ.1.15ಕ್ಕೆ, ಸಂ.4.25ಕ್ಕೆ, ಪಚುವುಮ್ ಅತ್ಭುತ ವಿಲಕ್ಕುಮ್ (ಮ): ರಾ.9.55ಕ್ಕೆ.
ಸ್ಕ್ರೀನ್ 3	ಇವಿಲ್ ಡೆಡ್ ರೈಸ್ (ಇಂ): ಬೆ.11.20ಕ್ಕೆ, ರಾಮಬಾಣಂ (ತೆ): ಮ.1.30ಕ್ಕೆ, ರಾ.9.55ಕ್ಕೆ, ಉಗ್ರಂ (ತೆ): ಸಂ.4.20ಕ್ಕೆ, ಪೊನ್ನಿಯಿನ್ ಸೆಲ್ವನ್ –2(ತ): ಸಂ.6.45ಕ್ಕೆ.
ಸ್ಕ್ರೀನ್ 4	2018 ಎವರಿವೊನ್ ಇಸ್ ಎ ಹೀರೋ (ಮ): ಬೆ.11ಕ್ಕೆ, ರಾಘವೇಂದ್ರ ಸ್ಟೋರ್ಸ್ (ಕ): ಮ.1.55ಕ್ಕೆ, ರಾ.10ಕ್ಕೆ, ದಿ ಕೇರಳ ಸ್ಟೋರಿ (ಹಿಂ): ಸಂ.4.15ಕ್ಕೆ, ರಾ.7.15ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಗುರುದೇವ್ ಹೊಯ್ಸಳ (ಕ): ಬೆ.10.20ಕ್ಕೆ, ವೀರಂ (ಕ): ಮ.1.05ಕ್ಕೆ, ರಾ.7.15ಕ್ಕೆ, ರಾವಣಾಸುರ (ತೆ): ಸಂ.4.20ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಬೆ.10.25ಕ್ಕೆ, ದಿ ಸೂಪರ್ ಮಾರಿಯೋ ಬ್ರದರ್ಸ್ ಮೂವಿ (3ಡಿ)(ಇಂ): ಮ.12.45ಕ್ಕೆ, ಸಂ.5.40ಕ್ಕೆ, ರಾ.7.50ಕ್ಕೆ, ರಾಮಾಚಾರಿ 2.0(ಕ): ಮ.2.55ಕ್ಕೆ, ದಸರಾ (ತೆ): ರಾ.10ಕ್ಕೆ.
ಸ್ಕ್ರೀನ್ 3	ವೀರಂ (ಕ): ಬೆ.10.10ಕ್ಕೆ, ರಾವಣಾಸುರ (ತೆ): ಮ.1.25ಕ್ಕೆ, ಗುರುದೇವ ಹೊಯ್ಸಳ (ಕ): ಸಂ.4.20ಕ್ಕೆ, ರಾ.9.50ಕ್ಕೆ, ನಮ್ ನಾಣಿ ಮದುವೆ ಪ್ರಸಂಗ (ಕ): ರಾ.7.05ಕ್ಕೆ.
ಸ್ಕ್ರೀನ್ 4	ಪ್ರವೀಣ (ಕ): ಬೆ.11.10ಕ್ಕೆ, ಗುರುದೇವ ಹೊಯ್ಸಳ (ಕ): ಮ.1.45ಕ್ಕೆ, ದಿ ಪೋಪ್ಸ್ ಎಕ್ಸಾರ್ಸಿಸ್ಟ್ (ಇಂ): ಸಂ.4.30ಕ್ಕೆ, ರಾ.10.20ಕ್ಕೆ, ಪೆಂಟಗನ್ (ಕ): ಸಂ.6.50ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, 1 ರಾಬರಿ ಕಥೆ (ಕ): ಸಂ.4.50ಕ್ಕೆ, ಚೌಕಾಬಾರ (ಕ): ರಾ.7.50ಕ್ಕೆ, ಕ್ರಿಡ್ 3 (ಇಂ): ಬೆ.11.35ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, ತು ಜೂಥಿ ಮೇನ್ ಮಕ್ಕರ್ (ಹಿಂ): ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, ತುರಮುಖಂ (ಮ): ರಾ.10.30ಕ್ಕೆ, ಅಜಿಲನ್ ಕಿಂಗ್ ಆಫ್ ದಿ ಓಷನ್ (ತ): ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, ಸ್ಕ್ರೀಮ್ 6 (ಇಂ): ಮ.2.45ಕ್ಕೆ, ರಾ.7.45ಕ್ಕೆ, 65 (ಇಂ): ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಚಿತ್ರಮಂದಿರ / ಚಿತ್ರ	ದೂರವಾಣಿ / ಪ್ರದರ್ಶನ
ಪದ್ಮ ಚಿತ್ರಮಂದಿರ	(ದೂ: 2521923)
ಚಾಂದಿನಿ ಬಾರ್ (ಕ) 2 ಪ್ರದರ್ಶನಗಳು, ವಿರೂಪಾಕ್ಷ (ತೆ)	2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಘವೇಂದ್ರ ಸ್ಟೋರ್ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಛತ್ರಪತಿ (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ವಿರೂಪಾಕ್ಷ (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಕಸ್ಟಡಿ (ತೆ)	4 ಪ್ರದರ್ಶನಗಳು
ರಾಜ್‌ಕಮಲ್	
ಕೇರಳ ಸ್ಟೋರಿ (ಹಿ)	4 ಪ್ರದರ್ಶನಗಳು
ಸಂಗಂ	
ರಾಮಬಾಣಂ (ತೆ)	4 ಪ್ರದರ್ಶನಗಳು
ಲಿಡೋ	
ಪಿಎಸ್–2 (ತ)	4 ಪ್ರದರ್ಶನಗಳು
ತಿಬ್ಬಾದೇವಿ	
ವಿರೂಪಾಕ್ಷ (ತೆ)	4 ಪ್ರದರ್ಶನಗಳು
ಪ್ರಭಾ	
ಹೊಯ್ಸಳ(ಕ)	4 ಪ್ರದರ್ಶನಗಳು

ಚಪ್ಪರದಹಳ್ಳಿಯಲ್ಲಿ ಅದ್ಧೂರಿ ಓಕುಳಿ ಹಬ್ಬ

ಬೆಟ್ಟದಪುರ, ಮೇ 16– ಇಲ್ಲಿನ ಚಪ್ಪರದಹಳ್ಳಿಯಲ್ಲಿ ಮಂಗಳವಾರ ಓಕುಳಿ ಹಬ್ಬ 8 ವರ್ಷದ ಬಳಿಕ ಅದ್ಧೂರಿಯಾಗಿ ನಡೆಯಿತು.

ಓಕುಳಿ ಹಬ್ಬದ ಹಿನ್ನಲೆಯಲ್ಲಿ ಶ್ರೀ ದೊಡ್ಡಮ್ಮ ಚಿಕ್ಕಮ್ಮ ತಾಯಿ ತೇರು ನೂರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು. ಮಂಗಳವಾರ ಮುಂಜಾನೆ ಶ್ರೀ ದೊಡ್ಡಮ್ಮ ಮತ್ತು ಚಿಕ್ಕಮ್ಮ ತಾಯಿ ಉತ್ಸವ ಮೂರ್ತಿಗಳನ್ನು ವಿಶೇಷವಾಗಿ ಅಲಂಕರಿಸಿ ಪೂಜೆ ಸಲ್ಲಿಸಿ, ನಂತರ ಗ್ರಾಮದ ಕುರ್ಜು ಸುತ್ತ ಪ್ರದಕ್ಷಣೆ ಹಾಕಿ ಬಳಿಕ ವಿವಿಧ ಪುಷ್ಪಗಳಿಂದ ಅಲಂಕರಿಸಿದ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ನಂತರ ಭಕ್ತರು ಮತ್ತು ಗ್ರಾಮಸ್ಥರು ರಥ ಎಳೆದರು.

ಹಬ್ಬದ ಅಂಗವಾಗಿ ನಡೆದ ನೀರಿನ ಓಕುಳಿಯಲ್ಲಿ ಗ್ರಾಮದ ಯುವಕರು, ಮುಖಂಡರು ಪರಸ್ಪರ ಬಣ್ಣದ ನೀರನ್ನು ಎರಚಿ, ತಮಟೆ ಶಬ್ದ ಹಾಗೂ ಚಿತ್ರದ ಹಾಡುಗಳಿಗೆ ಕುಣಿಯುವ ಮೂಲಕ ಸಂಭ್ರಮಿಸಿದರು. ಗ್ರಾಮದ ಪ್ರಮುಖ ವೃತ್ತಗಳಿಗೆ ವಿಶೇಷ ದೀಪಾಲಂಕಾರ ಮಾಡಲಾಗಿತ್ತು. ಇದೇ ವೇಳೆ ವ್ಯಾಪಾರಿಗಳು ಭರ್ಜರಿ ವ್ಯಾಪಾರ ನಡೆಸಿದರು.



ಚಪ್ಪರದ ಹಳ್ಳಿಯಲ್ಲಿ ಮಂಗಳವಾರ ಓಕುಳಿ ಹಬ್ಬ ಅದ್ಧೂರಿಯಾಗಿ ನಡೆಯಿತು.

ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಪ್ರತಿಭಟನೆ



ಹೆಚ್.ಡಿ.ಕೋಟೆ, ಮೇ 16– ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಅಖಿಲ ಭಾರತ ಜನಾಧಿಕಾರ ಸುರಕ್ಷಾ ಸಮಿತಿ ನೇತೃತ್ವದಲ್ಲಿ ತಾಲೂಕಿನ ಆದಿವಾಸಿಗಳು ಮಂಗಳವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ತಾಲೂಕು ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಮೈಸೂರು ಜಿಲ್ಲೆಯ ಹೆಚ್.ಡಿ. ಕೋಟೆ, ಸರಗೂರು, ಪಿರಿಯಾಪಟ್ಟಣ ತಾಲೂಕುಗಳಲ್ಲಿ ದೊಡ್ಡ ಸಂಖ್ಯೆಯಲ್ಲಿ ಆದಿವಾಸಿಗಳು ವಾಸಿಸು ತ್ತಿದ್ದಾರೆ. ಇವರಲ್ಲಿ ಬಹುತೇಕರು ಅರಣ್ಯ ಉತ್ಪನ್ನ ಸಂಗ್ರಹಣೆ ಮೂಲಕ ಜೀವನ ಸಾಗಿಸುತ್ತಿದ್ದು, ವಸತಿ, ಕುಡಿಯುವ ನೀರು, ರಸ್ತೆ, ಸಾರಿಗೆ ಸೇರಿದಂತೆ ಮೂಲ ಸೌಕರ್ಯದಿಂದ ವಂಚಿತವಾಗಿ ಕಾಡು ಪ್ರಾಣಿಗಳಂತೆ ಬದುಕುತ್ತಿದ್ದೇವೆ. ಹೀಗಾಗಿ ನಮಗೆ ಸರ್ಕಾರ ಮೂಲ ಸೌಕರ್ಯ ಕಲ್ಪಿಸುವ ಜೊತೆಗೆ ಬದುಕಲು ಆರ್ಥಿಕ ಸಹಕಾರ ನೀಡಬೇಕು ಎಂದು ಒತ್ತಾಯಿಸಿದರು.

ಆದಿವಾಸಿ ಮಹಿಳೆ ಮಾದಮ್ಮ ಮಾತನಾಡಿ, ಅರಣ್ಯದಲ್ಲಿ ವಾಸಿಸುವ ನಮಗೆ ಒಂದು ಕಡೆ ಕಾಡುಪ್ರಾಣಿಗಳಿಂದ ತೊಂದರೆಯಾದರೆ, ಮತ್ತೊಂದು ಕಡೆ ಅರಣ್ಯ ಇಲಾಖೆಯಿಂದ ತೊಂದರೆಗೊಳಗಾಗಿದ್ದೇವೆ. ಆದಿವಾಸಿ ಸಮುದಾಯ ಸಂಪೂರ್ಣವಾಗಿ ಹಿಂದುಳಿದಿರುವುದರಿಂದ ಆಧುನಿಕ ಜಗತ್ತಿನಲ್ಲಿ ಬದುಕಲು ದುಸ್ತರವಾಗಿದ್ದು, ಜೀವನೋಪಾಯಕ್ಕಾಗಿ ವಿವಿಧೆಡೆ ಭೂಮಾಲೀಕರ ಬಳಿ ಕಾರ್ಮಿಕರಾಗಿ ದುಡಿದು ಜೀವನ ಸಾಗಿಸುವಂತಾಗಿದೆ. ಆದಿವಾಸಿ ಕುಟುಂಬಗಳಲ್ಲಿ ಅಪೌಷ್ಟಿಕತೆ ಸರ್ವೇ ಸಾಮಾನ್ಯವಾಗಿದೆ. ಗಿರಿಜನ ಸಮಗ್ರ ಅಭಿವೃದ್ಧಿ ಯೋಜನೆ (ಐಟಿಡಿಪಿ) ಇಲಾಖೆ ಆದಿವಾಸಿಗಳಿಗೆ ವರ್ಷದಲ್ಲಿ 6 ಬಾರಿ ಪೌಷ್ಟಿಕ ಆಹಾರ ನೀಡಲಾಗುತ್ತಿದೆ. ಹೀಗಾಗಿ ಕೂಲಿ ಇಲ್ಲದೇ, ಪಡಿತರ ಸಾಮಾಗ್ರಿ ಇಲ್ಲದೇ ಆದಿವಾಸಿಗಳು ಕಂಗಾಲಾಗಿದ್ದಾರೆ. ಕಾಡಿಗೂ ಸಲ್ಲದ ನಾಡಿಗೂ ಸಲ್ಲದ ನಮ್ಮ ಬದುಕು ಅತಂತ್ರವಾಗಿದೆ. ಆದ್ದರಿಂದ ಆದಿವಾಸಿಗಳಿಗೆ ಸರ್ಕಾರ ಈ ವರ್ಷದಿಂದಲೇ ಪ್ರತಿ ತಿಂಗಳು ಪೌಷ್ಟಿಕ ಆಹಾರ ವಿತರಿಸಲು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಬಳಿಕ ತಹಸೀಲ್ದಾರ್ ಪಿ.ಎಸ್. ಮಹೇಶ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಸುನೀಲ್, ಪುಷ್ಪ, ಬೇಬಿ, ಬಸಮ್ಮ, ಮಾದಮ್ಮ, ಶಿವಮಾದಮ್ಮ, ರತ್ನಮ್ಮ, ನಂದಿನಿ, ನಂಜುಂಡ ಸೇರಿದಂತೆ ನೂರಕ್ಕೂ ಹೆಚ್ಚು ಆದಿವಾಸಿಗಳು ಇದ್ದರು.

ನಂ.ಗೂಡಿಗೆ ರಾಜೀವ್ ಗಾಂಧಿ ಜ್ಯೋತಿ ಯಾತ್ರೆ



ನಂಜನಗೂಡು, ಮೇ 16– ನಗರಕ್ಕೆ ಆಗಮಿಸಿದ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ 32ನೇ ಜ್ಯೋತಿ ಯಾತ್ರೆಯನ್ನು ಕಾಂಗ್ರೆಸ್ ಕಚೇರಿ ಎದುರು ಅದ್ಧೂರಿಯಾಗಿ ಬರಮಾಡಿಕೊಳ್ಳಲಾಯಿತು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಂಕರ್ ಮಾತನಾಡಿ, ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರು ಭಾರತವನ್ನು ಪ್ರಗತಿಯ ಪಥದತ್ತ ಕೊಂಡೊಯ್ಯುವ ಗುರಿ ಹೊಂದಿದ್ದರು. ಅವರ ಮುಂದಾಲೋಚನೆ ಫಲದಿಂದಾಗಿ ಇಂದು ಭಾರತ ವಿಜ್ಞಾನ, ತಂತ್ರಜ್ಞಾನದಲ್ಲಿ ಮುಂದುವರೆದಿದೆ. ಪ್ರಧಾನಿಯಾಗಿ ದೇಶಕ್ಕೆ ಅವರ ಕೊಡುಗೆ ಅಪಾರ. ಅವರನ್ನು ಸ್ಮರಿಸುವ ಸಲುವಾಗಿ ಬೆಂಗಳೂರಿನಿಂದ ಪೆರಂಬದೂರಿಗೆ ಅವರ ಜ್ಯೋತಿ ಯಾತ್ರೆ ಪ್ರತಿವರ್ಷ ತೆರಳಲಿದ್ದು, ಮಾರ್ಗ ಮಧ್ಯೆ ನಂಜನಗೂಡಿನಲ್ಲಿ ಯಾತ್ರೆಯನ್ನು ಅದ್ಧೂರಿಯಾಗಿ ಬರಮಾಡಿಕೊಳ್ಳಲಾಗಿದೆ ಎಂದರು.

ಈ ವೇಳೆ ನಗರಸಭಾ ಸದಸ್ಯರಾದ ಪ್ರದೀಪ್, ಗಂಗಾಧರ್, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ನಾಗೇಶ್‌ರಾಜ್, ಮುಖಂಡರಾದ ಸತೀಶ್‌ಗೌಡ, ಶಿವಣ್ಣ, ಕಮಲೇಶ್ ಸೇರಿದಂತೆ ಹಲವರಿದ್ದರು.

ಸಿದ್ದರಾಮಯ್ಯ ಮುಖ್ಯಮಂತ್ರಿ ಮಾಡಲು ಒತ್ತಾಯ



ವರುಣ, ಮೇ 16– ಬಡವರು, ದೀನ ದಲಿತರ ಉದ್ಧಾರಕ್ಕಾಗಿ ಕಾಂಗ್ರೆಸ್ ನೀಡಿರುವ ಗ್ಯಾರಂಟಿಗಳನ್ನು ಈಡೇರಿಸಲು ಕಾಂಗ್ರೆಸ್ ಹೈಕಮಾಂಡ್ ಸಿದ್ದರಾಮಯ್ಯ ಅವರನ್ನು ಮತ್ತೊಮ್ಮೆ ಮುಖ್ಯಮಂತ್ರಿ ಮಾಡಬೇಕು ಎಂದು ಕೆಪಿಸಿಸಿ ಕಾರ್ಯದರ್ಶಿ ವರುಣ ಮಹೇಶ್ ಒತ್ತಾಯಿಸಿದರು.

ಶಾಸಕರಾಗಿ ಆಯ್ಕೆಯಾದ ಮಾಜಿ ಸಚಿವ ಹೆಚ್.ಸಿ.ಮಹದೇವಪ್ಪ ಅವರನ್ನು ಅಭಿನಂದಿಸಿ ಮಾತನಾಡಿದ ಅವರು, ಮಾಜಿ ಸಿಎಂ ಸಿದ್ದರಾಮಯ್ಯ ಅವರು ಈ ಹಿಂದೆ ತಮ್ಮ ಅಧಿಕಾರವಧಿಯಲ್ಲಿ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ಹೀಗಾಗಿ ಅವರು ಮತ್ತೊಮ್ಮೆ ಮುಖ್ಯಮಂತ್ರಿಯಾಗಬೇಕು. ಕಾಂಗ್ರೆಸ್ ಹೈಕಮಾಂಡ್‌ನ ಎಲ್ಲಾ ಮುಖಂಡರು ಈಗಾಗಲೇ ಹೇಳಿರುವಂತೆ ಗ್ಯಾರಂಟಿಯನ್ನು ನೀಡಿರುವುದು ಸರಿ ಅಷ್ಟೇ. ಅವುಗಳನ್ನು ಜಾರಿಗೆ ತರಬೇಕಾದರೆ ಬೊಕ್ಕಸದ ಹಣ ತುಂಬಬೇಕು. ಜನರಿಗೆ ಕೊಟ್ಟ ಭರವಸೆ ಈಡೇರಿಸಬೇಕು. ಹೀಗಾಗಿ ಮತ್ತೊಮ್ಮೆ ಸಿದ್ಧರಾಮಯ್ಯ ಅವರನ್ನೇ ಮುಖ್ಯಮಂತ್ರಿಗಳನ್ನಾಗಿ ಮಾಡಬೇಕು. ಆ ಮೂಲಕ ದೀನ ದಲಿತರ, ಬಡವರ ಉದ್ದಾರ ಮತ್ತು ಪಕ್ಷದ ಪ್ರಣಾಳಿಕೆ ಜಾರಿಗೊಳಿಸಲು ಸಹಕರಿಸಬೇಕು ಎಂದು ಆಗ್ರಹಿಸಿದರು. ಈ ವೇಳೆ ಹಲವು ಮುಖಂಡರು ಹಾಜರಿದ್ದರು.

ವಿಜೃಂಭಣೆಯ ಬಸವೇಶ್ವರ, ಆಂಜನೇಯಸ್ವಾಮಿ ರಥೋತ್ಸವ



ಬೆಟ್ಟದಪುರ, ಮೇ 16– ಇಲ್ಲಿಗೆ ಸಮೀಪದ ಮೇಲೂರು ಗ್ರಾಮದಲ್ಲಿ ಬಸವೇಶ್ವರ ಮತ್ತು ಆಂಜನೇಯಸ್ವಾಮಿಯವರ ರಥೋತ್ಸವ ವಿಜೃಂಭಣೆಯಿಂದ ನೆರವೇರಿತು.

ರಥೋತ್ಸವ ಅಂಗವಾಗಿ ಗ್ರಾಮಸ್ಥರು ಮುಂಜಾನೆಯಿಂದಲೇ ದೇವರಿಗೆ ವಿಶೇಷ ಪೂಜೆ ನೆರವೇರಿಸಿದರು. ಬಳಿಕ ಗ್ರಾಮದ ಮಧ್ಯದಲ್ಲಿರುವ ರಥವನ್ನು ದೇವಾಲಯದ ಮುಂಭಾಗ ತಂದು ಶೃಂಗರಿಸಿ, ದೇವರನ್ನು ಪ್ರತಿಷ್ಠಾಪಿಸಿ ಪೂಜೆ ನೆರವೇರಿಸಿ ರಥೋತ್ಸವಕ್ಕೆ ಚಾಲನೆ ನೀಡಿದರು. ಈ ವೇಳೆ ಗ್ರಾಮಸ್ಥರು ಹಾಗೂ ಅಕ್ಕಪಕ್ಕದ ಗ್ರಾಮಗಳ ಭಕ್ತರು ಹಣ್ಣು ಜವನ ಎಸೆದು ನಮಿಸಿದರು. ಈ ವೇಳೆ ವಿವಿಧೆಡೆಗಳಿಂದ ಆಗಮಿಸಿದ ಗ್ರಾಮದ ಹೆಣ್ಣು ಮಕ್ಕಳು ರಥೋತ್ಸವದಲ್ಲಿ ಪಾಲ್ಗೊಂಡು ತಮ್ಮ ಸಂಬಂಧಿಕರಿಗೆ ಶುಭಾಶಯ ವಿನಿಮಯ ಮಾಡಿಕೊಂಡರು. ರಥೋತ್ಸವ ವೇಳೆ ಗ್ರಾಮಸ್ಥರು ಭಕ್ತರಿಗೆ ಮಜ್ಜಿಗೆ, ಪಾನಕ ವಿತರಿಸಿದರು. ಈ ವೇಳೆ ಗ್ರಾಮದ ಯಜಮಾನರಾದ ಪುರುಷೋತ್ತಮಯ್ಯ, ಶಿವಣ್ಣ, ಬಾಲಕೃಷ್ಣ, ಎಪಿಎಂಸಿ ಮಾಜಿ ಅಧ್ಯಕ್ಷ ಜಯಚಂದ್ರ, ಗ್ರಾಪಂ ಸದಸ್ಯರಾದ ಗಣೇಶ್, ಮಂಜುನಾಥ್, ಪಾಲಾಕ್ಷ, ಅತ್ತಿಗೋಡು ಗ್ರಾಪಂ ನೌಕರ ಶಿವಣ್ಣ, ಮೈಸೂರಿನ ಕೆ.ಆರ್. ಆಸ್ಪತ್ರೆ ವೈದ್ಯ ಬಸವರಾಜ್, ಶಿಕ್ಷಕರಾದ ಮಧುಕೇಶ್ವರ್, ಪ್ರಸನ್ನ, ಗ್ರಾಮ ಲೆಕ್ಕಾಧಿಕಾರಿ ಮಹದೇವಪ್ಪ ಸೇರಿದಂತೆ ಇತರರಿದ್ದರು.

ರಾಜ್ಯದಲ್ಲಿ ಇನ್ನೆರಡು ದಿನ ಮಳೆ ಮುನ್ಸೂಚನೆ

ಬೆಂಗಳೂರು, ಮೇ 16– ರಾಜ್ಯದಲ್ಲಿ ಇನ್ನೆರಡು ದಿನ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಮುಂದಿನ 2 ದಿನ ಮಳೆಯಾಗುವ ಸಾಧ್ಯತೆಯಿದೆ. ದಕ್ಷಿಣ ಕನ್ನಡ, ಉಡುಪಿ, ಬೆಂಗಳೂರು ನಗರ, ಚಾಮರಾಜನಗರ, ಕೊಡಗು, ಮಂಡ್ಯ, ಮೈಸೂರು, ರಾಮನಗರದಲ್ಲಿ ಮುಂದಿನ 2 ದಿನ ಗುಡುಗು ಸಹಿತ ಮಳೆಯಾಗುವ ಸಂಭವವಿದೆ. ಬೆಂಗಳೂರಿನಲ್ಲಿ ಮಧ್ಯಾಹ್ನದ ಬಳಿಕ ಮೋಡ ಕವಿದ ವಾತಾವರಣ ನಿರ್ಮಾಣವಾಗಲಿದ್ದು, ಸಂಜೆ ವೇಳೆಗೆ ಮಳೆ ನಿರೀಕ್ಷಿಸಲಾಗಿದೆ.



ದೇವೀರಮ್ಮನಹಳ್ಳಿ ಕೆರೆಯಲ್ಲಿ ಸಾವಿರಾರು ಮೀನುಗಳ ಸಾವು

ನಂಜನಗೂಡು, ಮೇ 16– ಕೆರೆ ನೀರು ಕಲುಷಿತಗೊಂಡು ಸಾವಿರಾರು ಮೀನುಗಳು ಸಾವನ್ನಪ್ಪಿರುವ ಘಟನೆ ತಾಲೂಕಿನ ದೇವೀರಮ್ಮನಹಳ್ಳಿಯಲ್ಲಿ ನಡೆದಿದೆ.



ಇಲ್ಲಿನ ಸುತ್ತಮುತ್ತಲಿನ ಬಡಾವಣೆಗಳ ಚರಂಡಿ ನೀರು ಕೆರೆ ಸೇರುತ್ತಿದ್ದು, ನೀರು ಕಲುಷಿತಗೊಂಡು ಸಾವಿರಾರು ಮೀನುಗಳು ಸಾವನ್ನಪ್ಪಿ ನೀರಿನಲ್ಲಿ ತೇಲುತ್ತಿವೆ. ಇದೇ ನೀರನ್ನು ಜಾನುವಾರುಗಳು ಕುಡಿಯುತ್ತಿದ್ದು, ಅವುಗಳು ರೋಗ ರುಜಿನಗಳಿಗೆ ತುತ್ತಾಗುವ ಆತಂಕ ರೈತರಲ್ಲಿ ಮನೆ ಮಾಡಿದೆ.

ಕೆರೆಯಲ್ಲಿ ಮೀನುಗಾರಿಕೆ ನಡೆಸಲು ವ್ಯಕ್ತಿಯೊಬ್ಬರು ಟೆಂಡರ್ ತೆಗೆದುಕೊಂಡು ಮೀನು ಸಾಕಾಣಿಕೆಯಲ್ಲಿ ತೊಡಗಿದ್ದಾರೆ. ಇದನ್ನು ಸಹಿಸದ ಕಿಡಿಗೇಡಿಗಳು ವಿಷಪ್ರಾಶನ ಮಾಡಿದ್ದಾರೆಯೇ ಎಂಬ ಅನುಮಾನ ವ್ಯಕ್ತವಾಗಿದೆ. ಒಟ್ಟಾರೆ ಕೆರೆಗೆ ಕಲುಷಿತ ನೀರು ಸೇರುತ್ತಿದ್ದು, ದೇವೀರಮ್ಮನಹಳ್ಳಿ ಕೆರೆಯಲ್ಲಿ ವಾಸಿಸುವ ಪಕ್ಷಿಗಳಿಗೂ ಕಂಟಕವಾಗಿದೆ ಎಂದು ಪಕ್ಷಿಪ್ರಿಯರು ಆತಂಕ ವ್ಯಕ್ತಪಡಿಸಿದ್ದಾರೆ. ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಗಮನ ಹರಿಸಿ ಕಲುಷಿತ ತ್ಯಾಜ್ಯ ನೀರು ಕೆರೆಗೆ ಸೇರಿದಂತೆ ಕಟ್ಟುನಿಟ್ಟಿನ ಕ್ರಮವಹಿಸುವಂತೆ ಸ್ಥಳೀಯರು ಆಗ್ರಹಿಸಿದ್ದಾರೆ.

ಸಿದ್ದು ಸಿಎಂ ಆಗಲೆಂದು ವಿಶೇಷ ಪೂಜೆ

ಸುತ್ತೂರು, ಮೇ 16– ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಲೆಂದು ವರುಣ ಕ್ಷೇತ್ರದ ತುಮ್ಮನೇರಳೆ ಗ್ರಾಪಂ ವ್ಯಾಪ್ತಿಯ ಮರಡಿಹುಂಡಿ ಗ್ರಾಮದೇವತೆ ಶ್ರೀದಾಳಿಕೇಶ್ವರಸ್ವಾಮಿ ಮತ್ತು ಕಾಳಮ್ಮ ದೇವಾಲಯದಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಸೇರಿದಂತೆ ವಿವಿಧ ಗ್ರಾಮಗಳ ಗ್ರಾಮಸ್ಥರು ವಿಶೇಷ ಪೂಜೆ ಸಲ್ಲಿಸಿದರು.

ಕಾಂಗ್ರೆಸ್ ಮುಖಂಡರಾದ ಬುಲೆಟ್ ಮಹದೇವಪ್ಪ ಹಾಗೂ ಮರಡಿಹುಂಡಿ ಪುಟ್ಟಸ್ವಾಮಿ ನೇತೃತ್ವದಲ್ಲಿ ಹೊಸಕೋಟೆ, ಆಲತ್ತೂರು, ನಂದಿಗುಂದಪುರ, ತುಮ್ಮನೇರಳೆ, ಮರಡಿಹುಂಡಿ ಗ್ರಾಮಸ್ಥರು ಹಾಗೂ ಮುಖಂಡರು ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಲೆಂದು ಹರಕೆ ಹೊತ್ತು ವಿಶೇಷ ಪೂಜೆ ನೆರವೇರಿಸಿದರು.

ಬುಲೆಟ್ ಮಹದೇವಪ್ಪ ಹಾಗೂ ಪುಟ್ಟಸ್ವಾಮಿ ಮಾತನಾಡಿ, ವರುಣಾ ಕ್ಷೇತ್ರದ ಶಾಸಕರಾಗಿರುವ ಸಿದ್ದರಾಮಯ್ಯನವರು ರಾಜ್ಯದ ಎಲ್ಲಾ ವರ್ಗದ ಸಮಗ್ರ ಅಭಿವೃದ್ಧಿಗಾಗಿ ಈ ಹಿಂದೆ ಹಲವು ಯೋಜನೆಗಳನ್ನು ಜಾರಿಗೆ ತಂದು ರಾಜ್ಯವನ್ನು ಮಾದರಿ ರಾಜ್ಯವನ್ನಾಗಿ ಮಾಡಿದ್ದರು. ಆದ್ದರಿಂದ ಆ ಎಲ್ಲಾ ಯೋಜನೆಗಳನ್ನು ಮುಂದುವರೆಸಲು ಸಿದ್ದರಾಮಯ್ಯರವರೇ ಮುಖ್ಯಮಂತ್ರಿಯಾಗಬೇಕೆಂದು ಒತ್ತಾಯಿಸಿದರು.

ಈ ಸಂದರ್ಭ ಹೊಸಕೋಟೆ ರಮೇಶ, ಆಲತ್ತೂರು ಚಿಕ್ಕೂಸಯ್ಯ, ನಂದಿಗುಂದಪುರ ಮಹೇಶ್, ತುಂಬನೇರಳೆ ನಾಗೇಂದ್ರ, ಮರಡಿಹುಂಡಿ ಪುಟ್ಟಚನ್ನೇಗೌಡ, ಶಿವರಾಂ, ರಂಗಸ್ವಾಮಿ, ಸೋಮಣ್ಣ, ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಮುಖಂಡರು, ಸದಸ್ಯರು ಹಾಜರಿದ್ದರು.



ಸೋತಿದ್ದೇವೆಂದು ಕುಗ್ಗದೇ ಪಕ್ಷ ಸಧೃಡಗೊಳಿಸಿ

ಕಾರ್ಯಕರ್ತರಿಗೆ ಮಾಜಿ ಶಾಸಕ ಎಂ. ಅಶ್ವಿನ್ ಕುಮಾರ್ ಕರೆ

ತಿ.ನರಸೀಪುರ, ಮೇ 16– ಚುನಾವಣೆಯಲ್ಲಿ ಸೋತಿದ್ದೇವೆಂದು ಕುಗ್ಗದೇ ಪಕ್ಷ ಸಧೃಡಗೊಳಿಸುವ ಕಾರ್ಯಕ್ಕೆ ಕಾರ್ಯಕರ್ತರು ಮುಂದಾಗಬೇಕೆಂದು ಮಾಜಿ ಶಾಸಕ ಎಂ.ಅಶ್ವಿನ್ ಕುಮಾರ್ ಕರೆ ನೀಡಿದರು.

ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆಯಲ್ಲಿ ನಮ್ಮ ಸೋಲಿಗೆ ಕಾರಣ ಏನೆಂಬುದನ್ನು ತಿಳಿದು ಆಗಿರುವ ತಪ್ಪುಗಳನ್ನು ಸರಿಪಡಿಸಿಕೊಂಡು ಮುಂದಿನ ಚುನಾವಣೆಗೆ ಮತ್ತೊಮ್ಮೆ ಪುಟಿದೇಳಲು ಈಗಿನಿಂದಲೇ ಕಾರ್ಯ ಪ್ರವೃತ್ತರಾಗಬೇಕಿದೆ. ಸೋಲಿಗೆ ಯಾರೂ ಧೃತಿಗೆಡಬೇಕಿಲ್ಲ. ಶಾಸಕನಾಗಿದ್ದ ವೇಳೆ ಯಾವ ರೀತಿ ನಿಮ್ಮ ಮನೆ ಮಗನಂತೆ ಕಷ್ಟಕ್ಕೆ ಸ್ಪಂದಿಸುತ್ತಿದ್ದೆನೋ ಅದೇ ರೀತಿ ಅಧಿಕಾರ ಇಲ್ಲದಿದ್ದರೂ, ಸ್ಪಂದಿಸುತ್ತೇನೆ ಎಂದರು.

ಕಾಂಗ್ರೆಸ್ ಚುನಾವಣಾ ಪೂರ್ವದಲ್ಲಿ ಜನರಿಗೆ ನೀಡಿದ್ದ ಗ್ಯಾರಂಟಿಗಳನ್ನು ಈಡೇರಿಸಬೇಕು. ಕಾಂಗ್ರೆಸ್ ನೀಡಿರುವ ಗ್ಯಾರಂಟಿಗಳು, ಹಿಂದಿನ ಸರ್ಕಾರದ ಆಡಳಿತ ವಿರೋಧಿ ಅಲೆ ಪ್ರಭಾವ ನಮಗೆ ಸೋಲಾಗಿದೆ. ಕ್ಷೇತ್ರದಲ್ಲಿ ಜೆಡಿಎಸ್ ಗೆಲ್ಲುವ ವಾತಾವರಣವಿತ್ತು ನಮ್ಮ ಬಗ್ಗೆ ಜನರಲ್ಲಿ ಯಾವುದೇ ವಿರೋಧವಿರಲಿಲ್ಲ. ಮುಖಂಡರು, ಕಾರ್ಯಕರ್ತರು ಕೂಡ ಸೈನಿಕರಂತೆ ಕೆಲಸ ಮಾಡಿದ್ದರು. ಆದರೆ ರಾಜ್ಯದಲ್ಲಿ ಕಾಂಗ್ರೆಸ್ ಅಲೆ ಹಾಗೂ ಕಳೆದ ಸರ್ಕಾರದ ಭ್ರಷ್ಟಾಚಾರ ಮತ್ತು ಕಾಂಗ್ರೆಸ್ ನೀಡಿದ ಗ್ಯಾರಂಟಿ ಭರವಸೆಗಳು ಕೊನೆ ಹಂತದಲ್ಲಿ ಜನರ ಮನಸ್ಸಿಗೆ ತಲುಪಿದ ಕಾರಣ ನಮಗೆ ಗೆಲುವು ದೊರಕಲಿಲ್ಲ. ಆದರೂ ಜನರು ನಮಗೆ 60 ಸಾವಿರ ಮತ ನೀಡಿದ್ದಾರೆ. ನಾನು ಕೂಡ ಕಳೆದ ಬಾರಿ ಜನರು ಕೊಟ್ಟ ಆಶೀರ್ವಾದದಿಂದ ಕ್ಷೇತ್ರದ ಅಭಿವೃದ್ಧಿ ಮಾಡಿದ್ದೇನೆ. ಕ್ಷೇತ್ರದ ಜನತೆ, ಅಧಿಕಾರಿಗಳು, ಮಾಧ್ಯಮದವರು, ಸಂಘ ಸಂಸ್ಥೆಗಳು ಸೇರಿದಂತೆ ಎಲ್ಲರೂ ನನಗೆ ಸಹಕಾರ ನೀಡಿದ್ದಾರೆ. ಈ ಸಂದರ್ಭ ಅವರಿಗೆ ಕೃತಜ್ಞತೆ ಅರ್ಪಿಸುತ್ತೇನೆ ಎಂದರು.



ಅಪೂರ್ಣ ಕಾಮಗಾರಿ ಮುಂದುವರೆಸಲಿ!: ಈ ಬಾರಿ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಜನತೆ ಆಶೀರ್ವಾದ ಮಾಡಿದ್ದು, ಅವರನ್ನು ಈ ಸಂದರ್ಭ ಅಭಿನಂದಿಸುತ್ತೇನೆ. ಚುನಾವಣೆ ಮುಗಿದಿದೆ. ಈಗ ಜನರ ಹಿತ ಕಾಪಾಡಬೇಕಿದೆ. ಅವರು ಪಕ್ಷಬೇಧ ಮರೆತು ಕಾರ್ಯ ನಿರ್ವಹಿಸುವ ನಂಬಿಕೆ ಇದೆ. ಮುಂದಿನ ದಿನಗಳಲ್ಲಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಬೇಕು. ನಮ್ಮ ಅವಧಿಯಲ್ಲಿ ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಮುಂದುವರಿಸಬೇಕು. ರಾಜ್ಯದ ಜನತೆಗೆ ನೀಡಿರುವಂತಹ ಗ್ಯಾರಂಟಿಗಳನ್ನು ಈಡೇರಿಸುವಂತಾಗಲಿ. ಕ್ಷೇತ್ರದಲ್ಲಿ ಯಾವುದೇ ಸಮಸ್ಯೆ ಅಥವಾ ಅಭಿವೃದ್ಧಿ ಕಾಮಗಾರಿಗಳಿಗೆ ಹಿನ್ನಡೆ ಕಂಡು ಬಂದಲ್ಲಿ ನಾವು ನಮ್ಮ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದ ಅವರು ಅಭಿವೃದ್ಧಿ ವಿಚಾರದಲ್ಲಿ ಕ್ಷೇತ್ರದ ಶಾಸಕರಿಗೆ ನಮ್ಮ ಸಂಪೂರ್ಣ ಸಹಕಾರವಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಪಂ ಮಾಜಿ ಅಧ್ಯಕ್ಷ ಎಸ್.ಎನ್. ಸಿದ್ದಾರ್ಥ, ಸದಸ್ಯ ಜೈಪಾಲ್ ಭರಣಿ, ಕ್ಷೇತ್ರಾಧ್ಯಕ್ಷ ಸಿ.ಬಿ.ಹುಂಡಿ ಚಿನ್ನಸ್ವಾಮಿ, ಪಪಂ ಮಾಜಿ ಅಧ್ಯಕ್ಷ ವೀರೇಶ್, ಸೋಸಲೆ ಶಿವಕುಮಾರ್ ಮತ್ತಿತರರಿದ್ದರು.

ನನ್ನ ಮುಖ್ಯಮಂತ್ರಿ ಮಾಡಿ, ಇಲ್ಲಾ ನೀವೇ ಮುಖ್ಯಮಂತ್ರಿಯಾಗಿ

ಮಲ್ಲಿಕಾರ್ಜುನ ಖರ್ಗೆಗೆ ಎರಡು ಆಯ್ಕೆ ನೀಡಿದ ಡಿಕೆಶಿ



ನವದೆಹಲಿ, ಮೇ 16– ಕರ್ನಾಟಕದಲ್ಲಿ ಗೆಲುವು ಸಾಧಿಸಿದ ಕಾಂಗ್ರೆಸ್ ಇದೀಗ ದೇಶದಲ್ಲಿ ಸಿಎಂ ಆಯ್ಕೆ ವಿಚಾರದಲ್ಲಿ ಸದ್ದು ಮಾಡುತ್ತಿದೆ. ಫಲಿತಾಂಶ ಘೋಷಣೆಯಾಗಿ 3 ದಿನಗಳೇ ಕಳೆದರೂ ಸಿಎಂ ಆಯ್ಕೆ ಮಾತ್ರ ಕಗ್ಗಂಟಾಗುತ್ತಿದೆ. ಇದೀಗ ದೆಹಲಿಯಲ್ಲಿ ಹಲವು ಸುತ್ತಿನ ಮಾತುಕತೆಗಳು ನಡೆದಿವೆ. ಕೊನೆಯದಾಗಿ ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯ ಅವರ ಜೊತೆ ಪ್ರತ್ಯೇಕ ಸಭೆ ನಡೆಸಲಾಗಿದೆ. ಡಿ.ಕೆ.ಶಿವಕುಮಾರ್ ಜೊತೆ ಸುಮಾರು 50 ನಿಮಿಷಗಳ ಕಾಲ ಮಲ್ಲಿಕಾರ್ಜುನ ಖರ್ಗೆ ಸಭೆ ನಡೆಸಿದ್ದಾರೆ. ಈ ವೇಳೆ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಸ್ಥಾನಕ್ಕೆ ಪಟ್ಟು ಹಿಡಿದಿದ್ದಾರೆ. ಕೊಡುವುದಾದರೆ ಮುಖ್ಯಮಂತ್ರಿ ಸ್ಥಾನ ಕೊಡಿ. ಇಲ್ಲದಿದ್ದರೆ ನಾನು ಶಾಸಕನಾಗಿಯೇ ಇರುತ್ತೇನೆ. ಯಾವುದೇ ಸ್ಥಾನ ಬೇಡ. ಪಕ್ಷಕ್ಕಾಗಿ ನೀವೂ ಕೂಡ ಕೆಲಸ ಮಾಡಿದ್ದೀರಿ. ನೀವೇ ಮುಖ್ಯಮಂತ್ರಿ ಜವಾಬ್ದಾರಿ ವಹಿಸಿಕೊಳ್ಳಿ ಎಂದು ಡಿ.ಕೆ.ಶಿವಕುಮಾರ್ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷವನ್ನು ತಳಮಟ್ಟದಿಂದ ಕಟ್ಟಿದ್ದೇನೆ. ಪ್ರತಿ ಜಿಲ್ಲೆಯಲ್ಲಿ ಕಾರ್ಯಕರ್ತರನ್ನು ಸಂಘಟಿಸಿದ್ದೇನೆ. ಹಗಲು ರಾತ್ರಿ ಕೆಲಸ ಮಾಡಿದ್ದೇನೆ. ಇದರ ಫಲವಾಗಿ ಕಾಂಗ್ರೆಸ್ ಇಂದು ಅಭೂತಪೂರ್ವ ಗೆಲುವಿನೊಂದಿಗೆ ಅಧಿಕಾರಕ್ಕೆ ಬಂದಿದೆ. ಸಿದ್ದಾರಾಮಯ್ಯ ಪಕ್ಷಕ್ಕೆ ಬಂದ ಬಳಿಕ ಪಕ್ಷ ಸಂಘಟನೆ ಮಾಡಿಲ್ಲ. ಕಾಂಗ್ರೆಸ್ ಪಕ್ಷ ಸೇರಿಕೊಂಡ ಬಳಿಕ ಸಿದ್ದರಾಮಯ್ಯ ಅಧಿಕಾರ ಅನುಭವಿಸುತ್ತಿದ್ದಾರೆ. ಆದರೆ ಇದುವರೆಗೂ ನಾನು ಯಾವುದೇ ಆಕ್ಷೇಪ ಎತ್ತಿಲ್ಲ. ಮುಖ್ಯಮಂತ್ರಿಯಾಗಿ ಕೆಲಸ ಮಾಡಿದ್ದಾರೆ. ವಿಪಕ್ಷ ನಾಯಕನಾಗಿಯೂ ಕೆಲಸ ಮಾಡಿದ್ದಾರೆ. ಈ ಬಾರಿ ಸಿದ್ದರಾಮಯ್ಯಗೆ ಪಕ್ಷ ಸಂಘಟನೆಯ ಜವಾಬ್ದಾರಿ ನೀಡಿ ಎಂದು ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಚುನಾವಣಾ ರಾಜಕೀಯದಿಂದ ಹಿಂದೆ ಸರಿದ ಮಾಜಿ ಸಚಿವ ರಮಾನಾಥ್ ರೈ



ಮಂಗಳೂರು, ಮೇ 16– ಬಂಟ್ವಾಳದಲ್ಲಿ ನನಗೆ ಸಣ್ಣ ಅಂತರದ ಸೋಲಾಗಿದೆ. ನನಗಿಂತಲೂ ಪಕ್ಷದಲ್ಲಿ ಹಿರಿಯರಿದ್ದಾರೆ. ಆದರೆ ನನಗೆ ವಯಸ್ಸಾಯಿತೆಂದು ನನ್ನ ಸ್ಪರ್ಧೆಗೆ ನಮ್ಮಲ್ಲಿ ಅಪಸ್ವರ ಬಂತು. ಹಾಗಾಗಿ ಚುನಾವಣಾ ರಾಜಕೀಯದಿಂದ ಹಿಂದೆ ಸರಿಯೋ ನಿರ್ಧಾರಕ್ಕೆ ಬಂದಿದ್ದೇನೆ ಎಂದು ಮಾಜಿ ಸಚಿವ ರಮಾನಾಥ್ ರೈ ಹೇಳಿದ್ದಾರೆ.

ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್‌ಗೆ ದ.ಕ ಜಿಲ್ಲೆಯಲ್ಲಿ ಹಿನ್ನಡೆಯಾಗಿದೆ. ಗೆದ್ದ ಎಲ್ಲರಿಗೂ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಕಾಂಗ್ರೆಸ್ ಮೇಲೆ ವಿಶ್ವಾಸವನ್ನಿಟ್ಟು ಜನ ಮತ ನೀಡಿದ್ದಾರೆ. ಜಿಲ್ಲೆಯಲ್ಲಿ ಸೋತರೂ ರಾಜ್ಯದಲ್ಲಿ ಸರ್ಕಾರ ನಮ್ಮದೇ ಇದೆ. ಜಿಲ್ಲೆಯಲ್ಲಿ ಕಾರ್ಯಕರ್ತರು ಎದೆಗುಂದಬಾರದು. ನಾನು ಕಡೆಯ ಬಾರಿ ಚುನಾವಣೆ ಸ್ಪರ್ಧೆ ಮಾಡೋದಾಗಿ ಹೇಳಿದ್ದೆ. ಚುನಾವಣಾ ರಾಜಕೀಯದಿಂದ ದೂರವಿದ್ದರೂ ಪಕ್ಷದ ಕಾರ್ಯಕ್ರಮದಲ್ಲಿ ಮುಂಚೂಣಿಯಲ್ಲಿರುತ್ತೇನೆ ಎಂದು ಹೇಳಿದರು.ಬಿಜೆಪಿ ರಾಜ್ಯದಲ್ಲಿ ಸ್ಪಷ್ಟ ಬಹುಮತವನ್ನು ಯಾವತ್ತೂ ಪಡೆದಿಲ್ಲ. ಜನಸಂಘ ಇರುವಾಗಲೂ ಬಾಹ್ಯ ಬೆಂಬಲದಿಂದಲೇ ಗೆದ್ದಿದ್ದರು. ಜಿಲ್ಲೆಯಲ್ಲಿ ಸೋತರೂ ಗೆದ್ದರೂ ಪಕ್ಷವನ್ನು ಪ್ರಬಲವಾಗಿ ಕಟ್ಟಿದ್ದೇವೆ. ರಾಜ್ಯದ ಜನ ಯಾವತ್ತೂ ಬಿಜೆಪಿಗೆ ಬೆಂಬಲ ನೀಡಿಲ್ಲ. ಇದು ಬಸವಣ್ಣ ಹುಟ್ಟಿದ ನಾಡು, ಇಲ್ಲಿ ಜ್ಯಾತ್ಯಾತೀತ ನಿಲುವಿನ ಜನರಿಗೆ ಜನ ಮಣೆ ಹಾಕುತ್ತಾರೆ ಎಂದರು.

ಮಾದರಿ ಶಾಲೆಗಳಿಗೆ ಅತಿಥಿ ಶಿಕ್ಷಕರಿಂದ ಅರ್ಜಿ ಆಹ್ವಾನ

ಮೈಸೂರು, ಮೇ 16– 2023–24ನೇ ಸಾಲಿನ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೌಲಾನ ಆಜಾದ್ ಮಾದರಿ ಶಾಲೆ, ಲಷ್ಕರ್‌ಮೊಹಲ್ಲಾ ಶಾಲೆಗೆ ಹಿಂದಿ, ದೈಹಿಕ ಶಿಕ್ಷಣ, ಗಣಿತ ಬೋಧನೆಗಾಗಿ, ರಾಜೇಂದ್ರ ನಗರದ ಮೌಲಾನ ಆಜಾದ್ ಮಾದರಿ ಶಾಲೆಗೆ ಹಿಂದಿ, ದೈಹಿಕ ಶಿಕ್ಷಣ, ಆಂಗ್ಲ ಭಾಷಾ ಬೋಧನೆಗಾಗಿ, ಹುಣಸೂರು ಟೌನ್‌ನ ಮೌಲಾನ ಆಜಾದ್ ಮಾದರಿ ಶಾಲೆಗೆ ಹಿಂದಿ, ದೈಹಿಕ ಶಿಕ್ಷಣ ಬೋಧನೆಗಾಗಿ, ಪಿರಿಯಾಪಟ್ಟಣ ತಾಲೂಕಿನ ಹಲಗನಹಳ್ಳಿ ಮೌಲಾನ ಆಜಾದ್ ಮಾದರಿ ಶಾಲೆಗೆ ಕನ್ನಡ, ಇಂಗ್ಲೀಷ್, ಗಣಿತ, ಹಿಂದಿ ಭಾಷಾ ಬೋಧನೆಗಾಗಿ ಹಾಗೂ ಭರತ್‌ನಗರದ ಮೌಲಾನ ಆಜಾದ್ ಮಾದರಿ ಶಾಲೆಗೆ ಕನ್ನಡ, ಇಂಗ್ಲೀಷ್, ಗಣಿತ, ಸಮಾಜ ವಿಜ್ಞಾನ, ವಿಜ್ಞಾನ, ಹಿಂದಿ ಬೋಧನೆಗಾಗಿ ಅತಿಥಿ ಶಿಕ್ಷಕರಿಗಾಗಿ ಜಿಲ್ಲಾ ಕಛೇರಿ ವತಿಯಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಮೇ 26 ಕೊನೆಯ ದಿನಾಂಕವಾಗಿದ್ದು, ಆಸಕ್ತ ಬಿಎ, ಬಿಎಡ್ ಅಥವಾ ಎಂಎ, ಬಿಎಡ್ ಅಭ್ಯರ್ಥಿಗಳು ತಮ್ಮ ವಿವರದೊಂದಿಗೆ ಕಚೇರಿಗೆ ಬಂದು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಛೇರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನ ಆಜಾದ್ ಭವನ, ಸಿ.ಎ ನಂ.01, ಶೋಭ ಗಾರ್ಡನ್ ಪಕ್ಕ, ದಂಡಿನಮಾರಮ್ಮನ ದೇವಸ್ಥಾನದ ಎದುರು, ಬೆಂಗಳೂರು ಮತ್ತು ಮೈಸೂರು ರಸ್ತೆ, ಮೈಸೂರು ಅಥವಾ ದೂ.ಸಂ: 0821–2422088, ಮೊ.9620925247, 8951087207 ಅನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ 'ಮ್ಯೂಸಿಯಮ್ಸ್ ಆನ್ ವೀಲ್ಸ್'

ಮೈಸೂರು, ಮೇ 16– ಪುರಾತತ್ತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ವತಿಯಿಂದ 2023–24ನೇ ಸಾಲಿನ ಅಂತಾರಾಷ್ಟ್ರೀಯ ವಸ್ತುಸಂಗ್ರಹಾಲಯ ದಿನಾಚರಣೆಯ ಅಂಗವಾಗಿ ವಸ್ತುಸಂಗ್ರಹಾಲಯಗಳು, ಸುಸ್ಥಿರತೆ ಮತ್ತು ಯೋಗಕ್ಷೇಮ ಘೋಷವಾಕ್ಯದ ಅನ್ವಯ 'ಮ್ಯೂಸಿಯಮ್ಸ್ ಆನ್ ವೀಲ್ಸ್' ಶೀರ್ಷಿಕೆಯಡಿ ಮೈಸೂರಿನ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ, ಪ್ರವಾಸಿಗರಿಗೆ ಹಾಗೂ ಆಸಕ್ತರಿಗೆ ಮೈಸೂರಿನಲ್ಲಿರುವ ವಸ್ತುಸಂಗ್ರಹಾಲಯಗಳನ್ನು ವೀಕ್ಷಣೆ ಮಾಡುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಸದರಿ ಕಾರ್ಯಕ್ರಮವು ಮೇ 18 ರಂದು ಬೆಳಗ್ಗೆ 9 ಗಂಟೆಗೆ ಪುರಾತತ್ತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಕರ್ನಾಟಕ ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣ, ಇಂದಿರಾನಗರ, ಮೈಸೂರು ಇಲ್ಲಿನ ವಸ್ತುಸಂಗ್ರಹಾಲಯದಿಂದ ಪ್ರಾರಂಭವಾಗಿ, ಪ್ರಾಕೃತಿಕ ಪ್ರಾದೇಶಿಕ ವಸ್ತು ಸಂಗ್ರಹಾಲಯ, ಮೈಸೂರು ವಿಶ್ವವಿದ್ಯಾನಿಲಯದ ಜಾನಪದ ವಸ್ತು ಸಂಗ್ರಹಾಲಯ ಹಾಗೂ ರೈಲ್ವೆ ಮ್ಯೂಸಿಯಂ ಬಳಿ ಮುಕ್ತಾಯಗೊಳ್ಳಲಿದೆ.

ಆಸಕ್ತ 16 ರಿಂದ 50 ವರ್ಷದ ವಯೋಮಿತಿಯೊಳಗಿನವರು ಮೇ 15 ರಂದು ಸಂಜೆ 5 ಘಂಟೆಯೊಳಗೆ ಆಯುಕ್ತರು, ಪುರಾತತ್ತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣ, ಇಂದಿರಾನಗರ, ಮೈಸೂರು ಇಲ್ಲಿ ನೇರವಾಗಿ ಅಥವಾ ದೂರವಾಣಿ ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವುದು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821–2424671/2424673/2422671 ಮತ್ತು ಡಾ.ಮಂಜುಳ ಸಿ.ಎನ್, ಉಪ ನಿರ್ದೇಶಕರು (ಪರಂಪರೆ) (ಮೊ.ನಂ, 9964617939) ಅನ್ನು ಕಚೇರಿ ಸಮಯ ಬೆಳಿಗ್ಗೆ 10.30 ರಿಂದ 5 ಗಂಟೆಯೊಳಗೆ ಸಂಪರ್ಕಿಸುವುದು ಅಥವಾ ddheritagemysore@gmail.com ಮತ್ತು commramh@yahoo.in ಇ–ಮೇಲ್ ವಿಳಾಸಗಳ ಮೂಲಕ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು ಎಂದು ಪುರಾತತ್ತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶ್ರವಣದೋಷ ಮಕ್ಕಳ ಪ್ರವೇಶಾತಿ ಆರಂಭ

ಮೈಸೂರು, ಮೇ 16– ಮೈಸೂರಿನ ತಿಲಕನಗರದ ಕಿವುಡ ಮಕ್ಕಳ ಸರ್ಕಾರಿ ಪಾಠಶಾಲೆ ಸಂಸ್ಥೆಯು ಕಿವುಡ ಬಾಲಕರಿಗೆ ಉಚಿತ ವಸತಿ ವಿದ್ಯಾಭ್ಯಾಸವನ್ನು ನೀಡುತ್ತಿದ್ದು, 2023–24 ನೇ ಸಾಲಿನ ಶ್ರವಣದೋಷವುಳ್ಳ ಬಾಲಕ–ಬಾಲಕಿಯರ ಪ್ರವೇಶಾತಿ ಆರಂಭವಾಗಿದೆ.

2023–24ನೇ ಶೈಕ್ಷಣಿಕ ಸಾಲಿಗೆ ಒಂದನೇ ತರಗತಿಗೆ 06 ವರ್ಷದಿಂದ 09 ವರ್ಷದೊಳಗಿನ ಕಿವುಡ ಬಾಲಕ, ಬಾಲಕಿಯರು, ವಿಕಲಚೇತನ ಕಾರಣದಿಂದಾಗಿ ಇದುವರೆಗೂ ಶಾಲೆಗೆ ದಾಖಲಾಗದವರನ್ನು ಹಾಗೂ ಈಗಾಗಲೇ ಇತರೆ ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಣ ಪಡೆಯುತ್ತಿರುವ ಕಿವುಡ ಗಂಡು ಮಕ್ಕಳು ಬಯಸಿದಲ್ಲಿ ಅವರನ್ನೂ ದಾಖಲು ಮಾಡಿಕೊಳ್ಳಲಾಗುತ್ತದೆ. ಶೈಕ್ಷಣಿಕ ಅವಧಿಯಲ್ಲಿ ಸರ್ಕಾರದ ವತಿಯಿಂದ ಕಿವುಡ ಬಾಲಕರಿಗೆ ಉಚಿತ ಊಟ, ವಸತಿ, ಹಾಸಿಗೆ, ಹೊದಿಕೆ, ಪಠ್ಯ ಪುಸ್ತಕಗಳು ಹಾಗೂ ವೈದ್ಯಕೀಯ ಮತ್ತಿತರ ಸೌಲಭ್ಯವನ್ನು ನೀಡಲಾಗುವುದು. 1ನೇ ತರಗತಿಯಿಂದ 10ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ವಿಶೇಷ ಶಿಕ್ಷಣದಲ್ಲಿ ತರಬೇತಿಯನ್ನು ಪಡೆದಂತಹ ನುರಿತ ಶಿಕ್ಷಕರಿಂದ ಪಠ್ಯ ಬೋಧನೆ ಮಾಡಲಾಗುವುದು. ಸಂಸ್ಥೆಯಲ್ಲಿ ವಿಶಾಲವಾದ ಆಟದ ಮೈದಾನವಿದ್ದು, ಎಲ್ಲಾ ವಿಧವಾದ ಆಟೋಪಕರಣಗಳನ್ನು ನೀಡಲಾಗುತ್ತದೆ. ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿ ಕೆಲಸದ ದಿನಗಳಲ್ಲಿ ಕಛೇರಿ ಅಧೀಕ್ಷಕರು (ದೂ. ಸಂ:9845847891, 9731467257) ಕಿವುಡ ಮಕ್ಕಳ ಸರ್ಕಾರಿ ಪಾಠಶಾಲೆ, ತಿಲಕನಗರ, ಮೈಸೂರು, ಅಥವಾ ಕಛೇರಿ ದೂ.ಸಂ:0821–2494104 ಅನ್ನು ಸಂಪರ್ಕಿಸಬಹುದು ಎಂದು ತಿಲಕ ನಗರದ ಕಿವುಡ ಮಕ್ಕಳ ಸರ್ಕಾರಿ ಪಾಠ ಶಾಲೆಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚುನಾವಣಾ ರಾಜಕಾರಣದಿಂದ ದತ್ತ ನಿವೃತ್ತಿ: ಜೂ.24ರಿಂದ ಪಶ್ಚಾತ್ತಾಪ ಪಾದಯಾತ್ರೆ



ಚಿಕ್ಕಮಗಳೂರು: ವಿಧಾನಸಭೆ ಚುನಾವಣೆಯಲ್ಲಿ ಕಡೂರು ಕ್ಷೇತ್ರದಲ್ಲಿ ಜೆಡಿಎಸ್‌ನಿಂದ ಸ್ಪರ್ಧಿಸಿ ಪರಾಜಿತರಾದ ಮಾಜಿ ಶಾಸಕ ವೈ.ಎಸ್.ವಿ.ದತ್ತ ಅವರು ಕ್ಷೇತ್ರದ ಮತದಾರರಿಗೆ ಮಂಗಳವಾರ ಸುದೀರ್ಘ ಬಹಿರಂಗ ಪತ್ರ ಬರೆದಿದ್ದಾರೆ. ಚುನಾವಣಾ ರಾಜಕಾರಣದಿಂದ ಹೊರನಡೆಯಲು ತೀರ್ಮಾನಿಸಿದ್ದಾರೆ. ಜೂ.24ರಿಂದ ಪಶ್ಚಾತ್ತಾಪ ಪಾದಯಾತ್ರೆಗೆ ನಿರ್ಧರಿಸಿದ್ದಾರೆ.

ಬೇಕಾಗಿದ್ದಾರೆ

ಆಸಕ್ತಿವುಳ್ಳವರು ಸಂಪರ್ಕಿಸಿ: 9606222435

MATRIMONIAL

Alliance invited from a well settled city dwelling young groom for a smart homely 21 year old girl, grown up in a childrens Home, working as an O.T. Technician in a Corporate Hospital in Mysore.

Family please contact : Mob: 99453-73076

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

WANTED TEACHERS FOR CBSE SCHOOL

- Mathematics - 1 No
- English - 2 Nos
- Physics - 1 No
- Dance - 1 No
- Art and Craft - 1 No
- PT - 1 No
- Computer - 1 No
- Sanskrit - 1 No
- Social Science - 1 No

Note: Minimum of 2-3 years of experience is expected, preferably in CBSE English medium school

Place : Nanjangud

8150857937 / 7676110063

ಬೇಕಾಗಿದ್ದಾರೆ

HP ಪೆಟ್ರೋಲ್ ಬಂಕ್‌ನಲ್ಲಿ ... PUC ...

9606222435

ಹಸಿರು ನಮ್ಮ ಉಸಿರು

ಉಬ್ಬಿರುವ ರಕ್ತನಾಳಗಳಿಗೆ ಶಾಶ್ವತ ವಿದಾಯ ಹೇಳಿ ಆಧುನಿಕ ಎಂಡೊ ವೀನಸ್ ಲೇಸರ್ ಅಬಲೇಶನ್ ಮುಖಾಂತರ

18.05.2023 ಗುರುವಾರ

ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ

ಡಾ. ವಿನಯ್ ಸ್ವಾಮಿ

808 883 7000

Avis Vascular Centre

www.avisvascularcentre.com

ನಿಮ್ಮ ಹಳೆಯ ಕನ್ನಡಕಗಳನ್ನು ಹೊಸ ಕನ್ನಡಕಗಳಿಗೆ ಬದಲಾಯಿಸಿ

ನಿಮ್ಮ ಕನ್ನಡಕಗಳನ್ನು ಬಡವರಿಗೆ ಮತ್ತು ಅವಶ್ಯಕತೆ ಇರುವವರಿಗೆ ನೀಡಲಾಗುವುದು

Visit : Ismail Optical Co., Sayyaji Rao Road, Mysore. Ph : 0821-4260786 / 9845026027

WE ARE HIRING

A leading Manufacturing Unit is looking for the following qualified professionals for its corporate office:

MARKETING MANAGER (Srirangapatna)

- A qualified professional with in-depth exposure and expertise in digital era marketing.
- Having managed a large budget on marketing spends which includes ATL & BTL.
- Measuring ROI is highly desired.
- Hands on expertise in driving ecommerce portfolios
- Minimum experience of 15 years

ECOMMERCE SPECIALIST (Srirangapatna)

- An IT savvy functional specialist in marketing, aggregator listing with flare for technology.
- Exhausting exposure to DM, SEO, Multi-portal comparative studies with creativity and passion to drive Ecom sales.
- Minimum experience of 5 to 8 years

HR RECRUITER (Srirangapatna)

- Qualified female with pleasant communication skills along with excellent interpersonal skills and etiquettes.
- Passion to Hire in large quantities.
- Minimum experience of 1 to 3 years.

HR HEAD (Srirangapatna)

- Qualified Professional with Minimum 15-18 years of experience and significant background as an HR in FMCG Companies.
- Expertise in managing end to end HR Activities.

Send your CV to: fmcgmys@workmail.com

Mob: +91-7411599797

VIDYAVARDHAKA SANGHA (R), Mysuru

SRI K. PUTTASWAMY FIRST GRADE COLLEGE

(Affiliated to University of Mysore)

Vidyavardhaka College of Engineering Campus, Gokulam, Mysuru-02 | Ph : 0821-2415030

WANTED

Sl.No	Name of the post	Education Qualification
1	Associate Professor	MCA or MSc (CS)
2	Computer Lab Instructors	Diploma in CS / BCA

VIDYAVARDHAKA LAW COLLEGE

Sheshadri Iyer Road, Mysuru - 570 001 | Ph : 0821-2426220, 2423231

Sl.No	Name of the post	Education Qualification
1	Asst. Prof. in Kannada	MA in Kannada
2	Asst. Prof. in Law (Part time)	LLM

Sri K. PUTTASWAMY SCHOOL (K.P. CONVENT)

Vidyavardhaka College of Engineering Campus

Gokulam III Stage, Mysuru – 02. Ph: 2419193

Sl.No	Name of the post	Education Qualification
1	Asst. Masters in Biology	BSc / MSc, BEd

VIDYAVARDHAKA COMPOSITE PU COLLEGE (High School Section)

Sheshadri Iyer Road, Mysuru-01 | Ph : 0821-4264886

FOR HIGH SCHOOL SECTION

Sl.No	Name of the post	Education Qualification
1	Asst. Masters in English	MA (English) BEd
2	Asst. Masters in Kannada	MA (Kannada) BEd

FOR PU COLLEGE SECTION

Sl.No	Name of the post	Education Qualification
1	Lecturers in Computer Science	MSc CS/ MCA BEd
2	Lecturers in Mathematics	MSc (Maths) BEd
3	Lecturers in English	MA (English) BEd

Candidate with experience will be preferred.

Please submit the applications within 7 days along with copies of Certificates, Bio-Data & Passport Size photo to the respective college offices.

Hon.President Hon. Secretary

Kumuda Spa

Best price guaranteed in Hair & Salon services. SPA & Massage packages available in most reasonable price.

10% Discount on all Package

0821-4193567/9632769550

EXCEL NATIONAL SCHOOL

H.D.Kote Town, H.D.Kote 571 114

REQUIRED TEACHERS

Any Degree with B.Ed or D.Ed

Should have Good Communication Skill

Salary Negotiable

Contact immediately:

9538524095

9880917953

2ನೇ ವರ್ಷದ ಸವಿನೆನಪು

ನೀವು ನಮ್ಮನ್ನಗಲಿ ಇಂದಿಗೆ 2 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ

ದುಃಖತಪ್ತರು: ಕುಟುಂಬ ವರ್ಗದವರು, ಒಂಟಿಕೊಪ್ಪಲ್, ಮೈಸೂರು

ಶಕುಂತಲ.ಪಿ

ಹೋಟೆಲ್ ಕೆಲಸಕ್ಕೆ ಬೇಕಾಗಿದ್ದಾರೆ

(ಅನುಭವವುಳ್ಳವರು ಮಾತ್ರ ಕರೆ ಮಾಡಿ)

1. ದೋಸೆ ಭಟ್ಟರು – 20,000
2. ಕಾಫಿ/ ಟೀ ಮಾಡುವವರು– 15,000
3. ಇಡ್ಲಿ । ವಡೆ । ಪೂರಿ ಹಾಕುವವರು – 15,000
4. ರುಬ್ಬುವವರು – 15000
5. ಪಾರ್ಸೆಲ್ । ಕೌಂಟರ್ – 11000
6. ಹೌಸ್ ಕೀಪಿಂಗ್ – 9000

ತಿಂಗಳಿಗೆ 3 ರಜಾ ಇರುತ್ತದೆ. ಊಟ ಮತ್ತು ವಸತಿ ಸೌಲಭ್ಯವಿದೆ. ESI ಮತ್ತು PF ಸೌಲಭ್ಯವಿದೆ.

9845742442

ನಾಡಿನ ಸಮಗ್ರ ಅಭಿವೃದ್ಧಿಗಾಗಿ ಶ್ರೀ ಸಿದ್ದರಾಮಯ್ಯ ರವರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಮನವಿ

ಬುಲೆಟ್ ಮಹದೇವು

ಮಾಜಿ ಅಧ್ಯಕ್ಷರು, ಶ್ರೀರಾಂಪುರ ಗ್ರಾಮ ಪಂಚಾಯಿತಿ

ಬೇಕಾಗಿದ್ದಾರೆ

ಕ್ಷೇತ್ರ ಸಹಾಯಕ (Field Assistant)

ಅರ್ಹತೆ: ಎಸ್.ಎಸ್.ಎಲ್.ಸಿ

ಸಂಪರ್ಕಿಸಿ: 79969 96665

abcvanijya@gmail.com

WANTED TEACHERS

(Fluency in English is Must)

Eurokids Hootagalli

#12, HIG 1, Group 1, KHB Colony, Hootagalli, Mysore-570018

733 83 63 999

ಕೈಲಾಸ ಶಿವಗಣಾರಾಧನೆ

ಶ್ರೀ ಎಂ.ಬಿ. ಶ್ರೀಕಂಠಸ್ವಾಮಿರವರು

ನಿಧನ: 07–05–2023ನೇ ಭಾನುವಾರ

ಶ್ರೀಮತಿ ಸುಶೀಲಮ್ಮರವರು ಮಾಡುವ ವಿಜ್ಞಾಪನೆಗಳು

ದಿನಾಂಕ: 7–5–2023 ನೇ ಭಾನುವಾರ ... ಶ್ರೀ ಎಂ.ಬಿ. ಶ್ರೀಕಂಠಸ್ವಾಮಿರವರು ... ದಿನಾಂಕ 17–5–2023ನೇ ಬುಧವಾರ ಬೆಳಗ್ಗೆ 7.30 ಗಂಟೆಗೆ ... ಶ್ರೀ ಶ್ರೀ ಶ್ರೀ ಮುಮ್ಮಡಿ ಶಿವರುದ್ರ ಮಹಾಸ್ವಾಮಿಗಳವರ ... ಕೈಲಾಸ ಶಿವಗಣಾರಾಧನೆಯನ್ನು ...

ಆಹ್ವಾನಪತ್ರಿಕೆ ತಲುಪದಿದ್ದವರು ಇದನ್ನೇ ಆಹ್ವಾನವೆಂದು ತಿಳಿದು ಆಗಮಿಸಬೇಕಾಗಿ ವಿನಂತಿ.

SREE CAUVERY EDUCATIONAL INSTITUTIONS, MYSORE

Adichunchanagiri Road, K-Block, Kuvempunagar, Mysore- 570 023

Phone: 08212566942

EMPLOYMENT NOTICE

Applications are invited from qualified and experienced Persons for the post of

HEAD MASTER / HEAD MISTRESS

for Our High School Section. Salary and allowances will commensurate with qualification and experience .

Recently Retired Persons may also apply

Sd/- Hon. Secreatary

WE ARE HIRING

A leading Real Estate Player is looking to HIRE for its corporate office:

Estimation Engineer / Cost Control Engineer

- Qualified civil engineer with Minimum 5 years of experience and significant background in construction of various types like high rise apartments, gated community, villaments and commercial complexes.
- Expertise in Estimation for Projects, Calculation of master quantity, control of cost and preparation & tracking of MIS and P&L is highly desired.
- Budget Control of Projects.

Interested candidates may apply to :

Send your CV to: inframys@engineer.com

Mob: +91-7411599797

ಜನ್ಮದಿನದ ಶುಭಾಷಯಗಳು

ವರ್ಷದ 365 ದಿನಗಳು ಯಾವ ರಜೆಯನ್ನು ತೆಗೆದುಕೊಳ್ಳದೆ 7 ವರ್ಷಗಳಿಂದ ಅವಿರತವಾಗಿ ಶ್ರಮಿಸುತ್ತಿರುವ

ಶ್ರೀ ಸ್ವಾಮಿ ವೈ.ಎನ್. ಮ್ಯಾನೇಜರ್

ರವರಿಗೆ 50ನೇ ವರ್ಷದ ಜನ್ಮದಿನದ ಶುಭಾಷಯಗಳು

ಶುಭಕೋರುವವರು

ಗಣೇಶ್.ಸರ್. (ಗಣೇಶ ಅಸೋಸಿಯೇಟ್ಸ್) ಹಾಗೂ ಲಾಸ್ಟ್ ಅಂಡ್ ಫೌಂಡ್ ಪಬ್ ಸಿಬ್ಬಂದಿ ವರ್ಗದವರು

ಮೋ : 888 420 4747